24 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 24 | ಸಂಚಿಕೆ 71 | ನವದೆಹಲಿ | ಬೆಲೆ ₹10 | ಸೆಪ್ಟಂಬರ್ 6 2026 ಭಾನುವಾರ

## ಒಳಪುಟಗಳಲ್ಲಿ

ಬರೇಲಿಯ ವ್ಯಾಪಾರಕ್ಕೆ ಬರೆ ಎಳೆದ ನೇಪಾಳ ಪ್ರವಾಹ: 3ಿಂಗಳಿಗೆ 10 ಕೋಟಿ ರೂ. ರಪ್ತು ಸ್ಥಗಿತ - ಪು.4

ಶಾಲೆಗಳ ಕೊರತೆ ಜತೆಗೆ ಸಾಧನೆ, ಸೌಕರ್ಯಗಳನ್ನೂ ಜನರಿಗೆ ತೋರಿಸಿ - ಪು5


ಗಡಿಪಾರು ಬೆದರಿಕೆ ಹಾಕಿ, ಲಂಚ: ಪೇದೆಗಳು ಲೋಕಾಯುಕ್ತ ಬಲೆಗೆ - ಪು.6

## ನೇಪಾಳ ಪ್ರವಾಹದಲ್ಲಿ ಮೃತಪಟ್ಟ ಕರ್ನಾಟಕದವರ ಗುರುತು ಪತ್ತೆಗೆ ಡಿಎನ್‌ಎ ಸಂಗ್ರಹ

**ಬೆಂಗಳೂರು, ಸೆ.5:** ನೇಪಾಳ-ಟಿಬೆಟ್ ಗಡಿಭಾಗದಲ್ಲಿ ಸಂಭವಿಸಿದ ಭೀಕರ ಪ್ರವಾಹದಲ್ಲಿ ಸಿಲುಕಿ ನಾಪತ್ತೆಯಾಗಿರುವ ಕರ್ನಾಟಕದ ನಿವಾಸಿಗಳ ಗುರುತು ಪತ್ತೆಹಚ್ಚಲು ಸರ್ಕಾರ ಮಹತ್ವದ ಕ್ರಮ ಕೈಗೊಂಡಿದೆ. ನಾಪತ್ತೆಯಾದವರ ಹತ್ತಿರದ ಸಂಬಂಧಿಕರ ಡಿಎನ್‌ಎ ಮಾದರಿ ಸಂಗ್ರಹಣೆ ಮತ್ತು ಪರಿಶೀಲನೆಗಾಗಿ ನಗರದ ಬೌರಿಂಗ್ ಮತ್ತು ಲೇಡಿ ಕರ್ಜನ್ ಆಸ್ಪತ್ರೆಯನ್ನು ಅಧಿಕೃತ ನೋಡಲ್ ಕೇಂದ್ರವನ್ನಾಗಿ ಕರ್ನಾಟಕ ರಾಜ್ಯ ವಿಪತ್ತು ನಿರ್ವಹಣಾ ಪ್ರಾಧಿಕಾರ ಘೋಷಿಸಿದೆ. ನೇಪಾಳದಲ್ಲಿ ಪತ್ತೆಯಾಗಿರುವ ಮೃತದೇಹಗಳನ್ನು ಗುರುತಿಸಿ ಕುಟುಂಬಸ್ಥರಿಗೆ ಹಸ್ತಾಂತರಿಸುವಂತೆ ನೇಪಾಳ ಸರ್ಕಾರ ಹಾಗೂ ಕಠ್ಮಂಡುವಿನಲ್ಲಿರುವ ಭಾರತೀಯ ರಾಯಭಾರ ಕಚೇರಿ ಸೂಚನೆ ನೀಡಿದ ಹಿನ್ನೆಲೆಯಲ್ಲಿ ಈ ಕ್ರಮ ಕೈಗೊಳ್ಳಲಾಗಿದೆ. ಗುರುತಿಸಲಾಗದ ಮೃತದೇಹಗಳ ಡಿಎನ್‌ಎ ಪ್ರೊಫೈಲ್‌ಗಳನ್ನು ನೇಪಾಳದಲ್ಲಿ ಸಿದ್ಧಪಡಿಸಲಾಗುತ್ತಿದ್ದು, ಅದನ್ನು ಪರಿಶೀಲಿಸಲು ಸಂತ್ರಸ್ತರ ರಕ್ತ ಸಂಬಂಧಿಕರ ಡಿಎನ್‌ಎ ಮಾದರಿಗಳ ಅಗತ್ಯವಿದೆ. ಸಂಬಂಧದ ಪರಿಶೀಲನೆ ಪೂರ್ಣಗೊಂಡ ಬಳಿಕ ಡಿಎನ್‌ಎ ಮಾದರಿಗಳನ್ನು ವಿಧಿವಿಜ್ಞಾನ ಪ್ರಯೋಗಾಲಯಕ್ಕೆ (ಎಫ್‌ಎಸ್‌ಎಲ್) ಕಳುಹಿಸಲಾಗುತ್ತದೆ. ಅಲ್ಲಿಂದ ಡಿಎನ್‌ಎ ಪ್ರೊಫೈಲ್‌ಗಳನ್ನು ನೇಪಾಳದ ಅಧಿಕಾರಿಗಳೊಂದಿಗೆ ಹಂಚಿಕೊಳ್ಳಲಾಗುತ್ತದೆ. ಈ ಮೂಲಕ ಗುರುತಿಸಲಾಗದ ಮೃತದೇಹಗಳ ಪೈಕಿ ಕರ್ನಾಟಕದ ಸಂತ್ರಸ್ತರನ್ನು ಪತ್ತೆಹಚ್ಚಿ ಅವರ ಕುಟುಂಬಗಳಿಗೆ ಹಸ್ತಾಂತರಿಸಲು ನೆರವಾಗಲಿದೆ.

# ಪ್ರಜಾಸೇವೆ ಅಭಿಯಾನಕ್ಕೆ ಸಿಎಂ ಡಿ.ಕೆ.ಶಿವಕುಮಾರ್ ಚಾಲನೆ

## ಸಮಸ್ಯೆ ಬಗೆಹರಿಸಿ ಜನರಲ್ಲಿ ಹರ್ಷ ತರುವುದೇ ಸರ್ಕಾರದ ಯಶಸ್ಸಿನ ಮಾನದಂಡ



**ಕೂಡ್ಲಿಗಿ, ಸೆ.5: ಸರ್ಕಾರದ ಯಶಸ್ಸು ಜಾಹಿರಾತಿನಲ್ಲಿ ಇರುವುದಿಲ್ಲ. ಜನರ ಮುಖದಲ್ಲಿ ನಗು ಮೂಡಿದೆ ಎಂಬುದೇ ಯಶಸ್ಸಿನ ಮಾನದಂಡ ಎಂದು ಸಿಎಂ ಡಿ.ಕೆ. ಶಿವಕುಮಾರ್ ಹೇಳಿದರು.**

ವಿಜಯನಗರ ಜಿಲ್ಲೆಯ ಕೂಡ್ಲಗಿಯಲ್ಲಿ ಸಿಎಂ ಡಿ ಕೆ ಶಿವಕುಮಾರ್ ಅವರು ಪ್ರಜಾಸೇವೆ ಅಭಿಯಾನಕ್ಕೆ ಶನಿವಾರ ಚಾಲನೆ ನೀಡಿ ಮಾತನಾಡಿ, ಜನಸೇವೆಯೇ ಜನಾರ್ದನ ಸೇವೆ ಎಂದು ಭಾವಿಸಿದ್ದೇವೆ. ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ನಿಮ್ಮ ಸೇವೆ ಮಾಡಲು 136 ಸೀಟು ನೀಡಿ ರಾಜ್ಯವನ್ನು ಹೊಸದಿಕ್ಕಿನಲ್ಲಿ ಮುನ್ನಡೆಸಲು ಅವಕಾಶ ಕೊಟ್ಟಿದ್ದೀರಿ. ಇದು ಕೇವಲ ಸರ್ಕಾರ ಕಾರ್ಯಕ್ರಮ ಅಲ್ಲ. ಜನ ಸರ್ಕಾರದ ಬಳಿ ಹೋಗುವ ಕಾಲ ಹೋಗಿ, ಸರ್ಕಾರ ಜನರ ಬಳಿಗೆ ಹೋಗುವ ಕಾಲ ಬಂದಿದೆ. ಜನರ ಮನೆ ಬಾಗಿಲಿಗೆ ಆಡಳಿತ ತಲುಪಿಸಲು ಈ ಕಾರ್ಯಕ್ರಮ ಮಾಡಲಾಗುತ್ತಿದೆ ಎಂದು ಹೇಳಿದರು. ಕೂಡ್ಲಿಗಿಯಲ್ಲಿರುವ ಮಹಾತ್ಮ ಗಾಂಧೀಜಿ ಅವರ ಚಿತಾಭಸ್ಮ ಇರುವ ಜಾಗಕ್ಕೆ ಹೋಗಿ ನಮಿಸಿದ್ದೇವೆ. ಅವರ ಚಿಂತನೆಯ ಹಾದಿಯಲ್ಲಿ ಮುನ್ನಡೆಯಲು ಶಕ್ತಿ ನೀಡುವಂತೆ ಮಹಾತ್ಮನಲ್ಲಿ ಪ್ರಾರ್ಥನೆ ಸಲ್ಲಿಸಿದ್ದೇವೆ. ಆಡಳಿತ ಸಮಾಜದ ಕೊನೆಯವ್ಯಕ್ತಿಯನ್ನು ತಲುಪಬೇಕು ಎಂಬುದು ಗಾಂಧೀಜಿ ಅವರ ಸಂದೇಶ. ನಾವು ಬಸವಣ್ಣನ ನಾಡಿನಲ್ಲಿ ಕೆಲಸ ಮಾಡುತ್ತಿದ್ದು, ಅವರ ಐಕ್ಯಸ್ಥಳಕ್ಕೆ ಹೋಗಿ ಪೂಜೆ ಸಲ್ಲಿಸಿ, ಬರ ಪ್ರದೇಶದ ರೈತರ ಸಮಸ್ಯೆ ನೋಡಿ ಇಲ್ಲಿಗೆ ಬಂದಿರುವೆ ಎಂದು ತಿಳಿಸಿದರು. ಇಡೀ ರಾಜ್ಯಕ್ಕೆ ವಿಜಯ ಸಿಗಬೇಕು ಎಂದು ಈ ಕಾರ್ಯಕ್ರಮವನ್ನು ಶ್ರೀ ಕೃಷ್ಣದೇವರಾಯನ ಭೂಮಿ ವಿಜಯನಗರ ಆಯ್ಕೆ ಮಾಡಿರುವೆ. ಇಲ್ಲಿ ಎಷ್ಟು ಜನ ಬಂದಿದ್ದಾರೆ, ಎಷ್ಟು ಸಮಸ್ಯೆ ಅರ್ಜಿ ಕೊಟ್ಟಿದ್ದಾರೆ ಎಂಬುದಕ್ಕಿಂತ, ಎಷ್ಟು ಜನರ ಸಮಸ್ಯೆ ಬಗೆಹರಿದಿದೆ ಎಂಬುದು ಈ ಕಾರ್ಯಕ್ರಮದ ಯಶಸ್ಸನ್ನು ತಿಳಿಸುತ್ತದೆ ಎಂದರು. ರಾಜ್ಯದ ಎಲ್ಲ ಜಿಲ್ಲೆಗಳಲ್ಲಿ ಉಸ್ತುವಾರಿ ಸಚಿವರು ಪ್ರಜಾಸೇವಾ ಅಭಿಯಾನಕ್ಕೆ ಚಾಲನೆ ನೀಡಿದರು.



### ದೊರೆ ಅಲ್ಲ, ಪ್ರಜಾಸೇವಕ

ಸಂಸದ ಜೆ.ಸಿ. ಚಂದ್ರಶೇಖರ ಅವರು ನನ್ನನ್ನು ನಾಡಿನ ದೊರೆ ಎಂದು ಸಂಬೋಧನೆ ಮಾಡಿದರು. ಆದರೆ, ನಾನು ನಾಡಿನ ದೊರೆ ಅಲ್ಲ, ಪ್ರಜಾಸೇವಕ. ನನಗೆ ಅದಕ್ಕಿಂತ ದೊಡ್ಡ ಸಂತೋಷ ಬೇರೆ ಇಲ್ಲ ಎಂದು ಮನವಿ ಮಾಡಿದರು. ದೊರೆಗಳ ಕಾಲ ಹೋಗಿ ಪ್ರಜಾಪ್ರಭುತ್ವ ಬಂದಿದೆ. ಪ್ರಜೆಗಳ ಬದುಕಿನಲ್ಲಿ ಬದಲಾವಣೆ ತರಲು ಇಲಾಖೆ ತರಲಾಗಿದೆ. ಇದು ಕೇವಲ ಇಲಾಖೆ ಮಾತ್ರವಲ್ಲ. ಜನರ ಸಮಸ್ಯೆ ಆಲಿಸಿ, ಸ್ಪಂದಿಸಿ ಪರಿಹಾರ ನೀಡಲು ಈ ತೀರ್ಮಾನ ಮಾಡಿದ್ದೇವೆ. ಎಲ್ಲರೂ ಡಿಸಿ ಕಚೇರಿ, ಮಂತ್ರಿ ಕಚೇರಿ, ವಿಧಾನಸೌಧಕ್ಕೆ ಬರಲು ಆಗುವುದಿಲ್ಲ. ನಮ್ಮ ಅವಧಿಯಲ್ಲಿ ಈ ಪರಿಸ್ಥಿತಿ ಬದಲಾಗಿ, ಅಧಿಕಾರಿಗಳು ಜನರನ್ನು ಹುಡುಕಿಕೊಂಡು ಹೋಗಬೇಕು ಎಂದು ಡಿ.ಕೆ. ಶಿವಕುಮಾರ್ ಕರೆ ನೀಡಿದರು.

## ಅದಾನಿ ಡಿಫೆನ್ಸ್ ಜತೆ ಎಕೆ-203 ರೈಫಲ್‌ಗೆ ಮದ್ದುಗುಂಡು ಪೂರೈಕೆ ಒಪ್ಪಂದ

**ನವದೆಹಲಿ, ಸೆ.5:** ಭಾರತದಲ್ಲಿ ತಯಾರಾಗುತ್ತಿರುವ ಎಕೆ-203 ಅಸಾಲ್ಟ್ ರೈಫಲ್‌ಗಳಿಗೆ ಸ್ಥಳೀಯವಾಗಿ ತಯಾರಿಸಿದ 7.62x39 mm ಮದ್ದುಗುಂಡುಗಳನ್ನು ಪೂರೈಸಲು ಅದಾನಿ ಡಿಫೆನ್ಸ್ ಮತ್ತು ಏರೋಸ್ಪೇಸ್ ಇಂಡೋ-ರಷ್ಯನ್ ರೈಫಲ್ಸ್ ಸಂಸ್ಥೆಯೊಂದಿಗೆ ಐದು ವರ್ಷಗಳ ಒಪ್ಪಂದಕ್ಕೆ ಸಹಿ ಹಾಕಿದೆ.

ಈ ಒಪ್ಪಂದದ ಅಡಿಯಲ್ಲಿ, AK-203 ಯೋಜನೆಗೆ ಅಗತ್ಯವಿರುವ ಸಣ್ಣ-ಕ್ಯಾಲಿಬರ್ ಮದ್ದುಗುಂಡುಗಳನ್ನು ಅದಾನಿ ಡಿಫೆನ್ಸ್ ಪೂರೈಸುತ್ತದೆ. ಇದು ಮದ್ದುಗುಂಡುಗಳ ಪೂರೈಕೆಗೆ ಭಾರತೀಯ ಮೂಲವನ್ನು ಒದಗಿಸುವುದಲ್ಲದೆ, ಒಪ್ಪಂದದ ಅವಧಿಯುದ್ದಕ್ಕೂ ನಿರಂತರ ಲಭ್ಯತೆಯನ್ನು ಖಚಿತಪಡಿಸಿಕೊಳ್ಳಲು ಸಹಾಯ ಮಾಡುತ್ತದೆ ಎಂದು ಕಂಪನಿ ತಿಳಿಸಿದೆ. ಈ ಒಪ್ಪಂದವು ಇಂಡೋ-ರಷ್ಯನ್ ರೈಫಲ್ಸ್‌ನಿಂದ ರೈಫಲ್ ತಯಾರಿಕೆ ಮತ್ತು ಅದಾನಿ ಡಿಫೆನ್ಸ್‌ನಿಂದ ಮದ್ದುಗುಂಡು ತಯಾರಿಕೆಯನ್ನು ಒಟ್ಟುಗೂಡಿಸುತ್ತದೆ, ಇದು ಎಕೆ-203 ಯೋಜನೆಯ



ಎರಡು ಪ್ರಮುಖ ಘಟಕಗಳನ್ನು ಭಾರತದ ರಕ್ಷಣಾ ತಯಾರಿಕಾ ವ್ಯವಸ್ಥೆಯೊಳಗೆ ಸಂಯೋಜಿಸುತ್ತದೆ.

ಇದರ ತಯಾರಿಕಾ ಘಟಕವು ಉತ್ತರ ಪ್ರದೇಶದ ಅಮೇಥಿ ಜಿಲ್ಲೆಯ ಕೊರ್ವಾದಲ್ಲಿದೆ. ರಕ್ಷಣಾ ಸಚಿವಾಲಯವು AK-203 ರ ದೇಶೀಯ ತಯಾರಿಕೆಯ ಜವಾಬ್ದಾರಿಯನ್ನು IRRPLಗೆ ವಹಿಸಿದೆ. ಈ ಒಪ್ಪಂದವು ಸ್ಥಳೀಯವಾಗಿ ತಯಾರಿಸಿದ ಮದ್ದುಗುಂಡುಗಳನ್ನು ಸ್ಥಳೀಯವಾಗಿ ತಯಾರಿಸಿದ ರೈಫಲ್‌ಗಳೊಂದಿಗೆ ಜೋಡಿಸುವ ಮೂಲಕ ಯೋಜನೆಯ ದೇಶೀಯ ತಯಾರಿಕಾ ವ್ಯಾಪ್ತಿಯನ್ನು ವಿಸ್ತರಿಸುತ್ತದೆ ಎಂದು ಕಂಪನಿ ಹೇಳಿದೆ. ಅದಾನಿ ಡಿಫೆನ್ಸ್ ಭಾರತದಲ್ಲಿ ಕಾನ್ಪುರದಲ್ಲಿ ಉತ್ಪಾದನಾ ಘಟಕದೊಂದಿಗೆ ಸಣ್ಣ ಪ್ರಮಾಣದ ಮದ್ದುಗುಂಡು ತಯಾರಿಕಾ ವ್ಯವಹಾರವನ್ನು ಸ್ಥಾಪಿಸಿದೆ. ಈ ಒಪ್ಪಂದವು ಸಣ್ಣ ಶಸ್ತ್ರಾಸ್ತ್ರ ಪೂರೈಕೆ ಸರಪಳಿಯಲ್ಲಿ ದೇಶೀಯ ಸಾಮರ್ಥ್ಯಗಳನ್ನು ಮತ್ತಷ್ಟು ಬಲಪಡಿಸುತ್ತದೆ. ರಕ್ಷಣಾ ತಯಾರಿಕೆಯಲ್ಲಿ ಹೆಚ್ಚಿನ ಸ್ವಾವಲಂಬನೆಗಾಗಿ ಸರ್ಕಾರದ 'ಆತ್ಮನಿರ್ಭರ ಭಾರತ್' ಉಪಕ್ರಮವನ್ನು ಇದು ಬೆಂಬಲಿಸುತ್ತದೆ.

## ಪಾರ್ಶ್ವವಾಯು ಸ್ಥಿತಿಗೆ ಜಾರಿದ ದೇಶದ ಶಿಕ್ಷಣ ವ್ಯವಸ್ಥೆ

**ನವದೆಹಲಿ, ಸೆ.5:** ಕಳೆದ ಹನ್ನೆರಡು ವರ್ಷಗಳಲ್ಲಿ ದೇಶದ ಶಿಕ್ಷಣ ವ್ಯವಸ್ಥೆಯನ್ನು ಕೇಂದ್ರ ಸರ್ಕಾರ ಪಾರ್ಶ್ವವಾಯು ಸ್ಥಿತಿಗೆ ತಳ್ಳಿಗೆ ಹಾಗೂ ವ್ಯವಸ್ಥಿತವಾಗಿ ಇಡೀ ವ್ಯವಸ್ಥೆಯನ್ನು ನಾಶಪಡಿಸಿದೆ ಎಂದು ರಾಜ್ಯಸಭೆ ಪ್ರತಿಪಕ್ಷ ನಾಯಕ ಮಲ್ಲಿಕಾರ್ಜುನ ಖರ್ಗೆ ವಾಗ್ದಾಳಿ ನಡೆಸಿದ್ದಾರೆ.

ಈ ಬಗ್ಗೆ ತಮ್ಮ ಎಕ್ಸ್‌ನಲ್ಲಿ ಮಾಹಿತಿ ಹಂಚಿಕೊಂಡಿರುವ ಅವರು, ಮಗಳ ಶಿಕ್ಷಣಕ್ಕೆ ಹಣ ಹೊಂದಿಸಲು ಮ್ಯಾರಥಾನ್ ಗೆದ್ದ 47 ವರ್ಷದ ರಮಾಬಾಯಿ ರಣವೀರ ಅವರ ವಿಡಿಯೊ ಒಂದನ್ನೂ ಖರ್ಗೆ ಹಂಚಿಕೊಂಡಿದ್ದಾರೆ. ರಮಾಬಾಯಿ ರಣವೀರ ಅವರಿಗೆ ಗೆಲುವಿನ ಗೆರೆ ಮುಟ್ಟುವುದು ಓಟವನ್ನು ಗೆಲ್ಲುವುದಷ್ಟೇ ಆಗಿರಲಿಲ್ಲ. ಬದಲಾಗಿ ತಮ್ಮ ಹೆಣ್ಣುಮಕ್ಕಳಿಗೆ ಪುಸ್ತಕ ಖರೀದಿಸಲು ಹಣವನ್ನು ತರುವುದಾಗಿತ್ತು. ಗೆದ್ದ ಹಣವನ್ನು ಹೆಣ್ಣುಮಕ್ಕಳ ಶಿಕ್ಷಣಕ್ಕಾಗಿ ವೆಚ್ಚ ಮಾಡುವುದಾಗಿ ಹೇಳಿದ್ದರು.



■ ಕೇಂದ್ರದ ವಿರುದ್ಧ ಮಲ್ಲಿಕಾರ್ಜುನ ಖರ್ಗೆ ವಾಗ್ದಾಳಿ

ಅಪಘಾತದಲ್ಲಿ ಪತಿ ನಿಧನರಾದ ನಂತರ ರಮಾಬಾಯಿಯವರೇ ಇಬ್ಬರು ಹೆಣ್ಣುಮಕ್ಕಳನ್ನು ಸಾಕಿ ಬೆಳೆಸುತ್ತಿದ್ದಾರೆ. ಕುಟುಂಬ ನಿರ್ವಹಣೆಗಾಗಿ ಅಂಬಾಜೋಗೈನ ಅಕಾಡೆಮಿಯೊಂದರಲ್ಲಿ ಅಡುಗೆ ಕೆಲಸಕ್ಕೆ ಸೇರಿಕೊಂಡರು. ಸ್ಥಳೀಯ ಸಂಸ್ಥೆಯೊಂದು 3,000 ರೂ. ಪ್ರಥಮ ಬಹುಮಾನ ಹೊಂದಿದ್ದ 'ಅಮೃತ ದೌಡ್' ಮ್ಯಾರಥಾನ್ ಘೋಷಿಸಿದಾಗ ರಮಾಬಾಯಿ ಭಾಗವಹಿಸಲು ನಿರ್ಧರಿಸಿದರು. ಟ್ರ್ಯಾಕ್‌ಸೂಟ್ ಧರಿಸಿದ್ದ ಕಿರಿಯ ವಯಸ್ಸಿನ ಸ್ಪರ್ಧಿಗಳ ನಡುವೆ ರಮಾಬಾಯಿ ಸರಳ ಸೀರೆಯನ್ನುಟ್ಟು ಸ್ಪರ್ಧಿಸಿ ಎಲ್ಲರ ಗಮನ ಸೆಳೆದರು. ಪ್ರಾರಂಭದಲ್ಲಿ ಅವರು ಚಪ್ಪಲಿ ಧರಿಸಿ ಓಡಲು ಪ್ರಾರಂಭಿಸಿದರು. ಆದರೆ, ಓಡುತ್ತಿದ್ದಂತೆ ಅವು ಜಾರಲು ಪ್ರಾರಂಭಿಸಿದ್ದರಿಂದ, ಅವುಗಳನ್ನು ಕಳಚಬೇಕಾಯಿತು. ಚಪ್ಪಲಿಗಳನ್ನು ಕೈಯಲ್ಲಿ ಹಿಡಿದುಕೊಂಡೇ ರಮಾಬಾಯಿ ಬರಿಗಾಲಿನಲ್ಲಿ, ತಂಪಾದ ರಸ್ತೆ ಮತ್ತು ಕಲ್ಲುಗಳ ಮೇಲೆ ತಮ್ಮ ಸೀರೆಯನ್ನು ಜಾಗರೂಕತೆಯಿಂದ ನಿಭಾಯಿಸುತ್ತಾ ಓಟವನ್ನು ಗೆದ್ದರು. ಕಠಿಣ ಪರಿಸ್ಥಿತಿಯ ಹೊರತಾಗಿಯೂ, ಅವರು ಇತರ ಓಟಗಾರರಿಗಿಂತ ಸತತವಾಗಿ ಮುನ್ನಡೆ ಸಾಧಿಸಿ ಅಂತಿಮವಾಗಿ ಮೊದಲನೆಯವರಾಗಿ ಗೆಲುವಿನ ಗೆರೆಯನ್ನು ಮುಟ್ಟಿದರು. ಅವರ ಈ ದೃಢ ಸಂಕಲ್ಪವನ್ನು ಕಣ್ಣಾರೆ ಕಂಡ ಪ್ರೇಕ್ಷಕರಿಂದ ತೀವ್ರ ಕರತಾಡನ ಮತ್ತು ಮೆಚ್ಚುಗೆ ವ್ಯಕ್ತವಾಯಿತು ಎಂದು ಖರ್ಗೆ ಬಣ್ಣಿಸಿದ್ದಾರೆ. ಒಟ್ಟಾರೆ ಭಾರತದ ಇಡೀ ಯುವಪೀಳಿಗೆಯ ಭವಿಷ್ಯ ಕೇಂದ್ರ ಸರ್ಕಾರದ ಬೇಜವಾಬ್ದಾರಿಯಿಂದ ನಾಶವಾಗುತ್ತಲಿದೆ ಎಂದಿದ್ದಾರೆ.

## ಉತ್ತರ ಭಾರತದ ರಾಜ್ಯಗಳಲ್ಲಿ ಮಳೆ ಅಬ್ಬರ, ದೆಹಲಿ ತತ್ತರ

**ನವದೆಹಲಿ, ಸೆ.5:** ರಾಷ್ಟ್ರ ರಾಜಧಾನಿ ದೆಹಲಿ ಸೇರಿದಂತೆ ಉತ್ತರ ಭಾರತದ ಹಲವು ಭಾಗಗಳಲ್ಲಿ ವರುಣನ ಆರ್ಭಟ ಮುಂದುವರಿದಿದ್ದು, ಭಾರೀ ಮಳೆ ಜನಜೀವನವನ್ನು ಅಸ್ತವ್ಯಸ್ತಗೊಳಿಸಿದೆ. ತಗ್ಗು ಪ್ರದೇಶಗಳ ಮನೆಗಳು, ರಸ್ತೆಗಳು ಜಲಾವೃತವಾಗಿದ್ದು, ವಾಹನ ಸವಾರರು ಹಾಗೂ ಸಾರ್ವಜನಿಕರು ಪರದಾಡುವಂತಾಗಿದೆ.

ದೆಹಲಿಯ ಇಂದಿರಾಗಾಂಧಿ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲೂ ಭಾರೀ ಮಳೆಯಿಂದ ನೀರು ನಿಂತು ಪ್ರಯಾಣಿಕರಿಗೆ ತೀವ್ರ ತೊಂದರೆಯಾಯಿತು. ಟರ್ಮಿನಲ್-2 ಮತ್ತು ಟರ್ಮಿನಲ್-3ರ ಸಮೀಪದ ಅಪ್ರೋಚ್ ರಸ್ತೆ ಹಾಗೂ ಫೋರ್‌ಕೋರ್ಟ್ ಪ್ರದೇಶಗಳಲ್ಲಿ ನೀರು ಸಂಗ್ರಹವಾಗಿತ್ತು. ಶುಕ್ರವಾರ ಮಳೆಯ ಪರಿಣಾಮ ದೆಹಲಿ ವಿಮಾನ ನಿಲ್ದಾಣಕ್ಕೆ ಆಗಮಿಸುತ್ತಿದ್ದ 9 ವಿಮಾನಗಳನ್ನು ಜೈಪುರ, ಲಖನೌ ಮತ್ತು ಅಹಮದಾಬಾದ್‌ಗೆ ತಿರುಗಿಸಲಾಗಿತ್ತು.

ದೆಹಲಿಯ ಪಾಲಂ ಪ್ರದೇಶದಲ್ಲಿ ಕೇವಲ ಮೂರು ಗಂಟೆಗಳಲ್ಲಿ 72.2 ಮಿ.ಮೀ. ಮಳೆ ದಾಖಲಾಗಿದ್ದು, ನಾರಾಯಣಾದಲ್ಲಿ 54 ಮಿ.ಮೀ., ಜನಕ್‌ಪುರಿಯಲ್ಲಿ 48.5 ಮಿ.ಮೀ., ಲೋಧಿ ರಸ್ತೆಯಲ್ಲಿ 34.6 ಮಿ.ಮೀ. ಹಾಗೂ ಸಫ್ದರ್‌ಜಂಗ್‌ನಲ್ಲಿ 32.6 ಮಿ.ಮೀ. ಮಳೆ



ದೆಹಲಿಯ ಮಹಿಪಾಲ್‌ಪುರದಲ್ಲಿ ಜಲಾವೃತ ರಸ್ತೆಯಲ್ಲಿ ಸಂಚರಿಸುತ್ತಿರುವ ವಾಹನಗಳು.

ದಾಖಲಾಗಿದೆ. ಪಾಲಂನಲ್ಲಿ ಗಾಳಿಯ ವೇಗ 76 ಕಿ.ಮೀ. ವೇಗದವರೆಗೂ ತಲುಪಿತ್ತು.

**ಉತ್ತರ ಪ್ರದೇಶದಲ್ಲೂ ಆತಂಕ:** ಉತ್ತರ ಪ್ರದೇಶದಲ್ಲಿ ಪ್ರವಾಹ ಪರಿಸ್ಥಿತಿ ಗಂಭೀರವಾಗಿದ್ದು, 26 ಜಿಲ್ಲೆಗಳು ಪ್ರವಾಹದಿಂದ ಬಾಧಿತವಾಗಿವೆ. 3.53 ಲಕ್ಷ ಜನರು ಪ್ರವಾಹದಿಂದ ಸಂಕಷ್ಟಕ್ಕೆ ಸಿಲುಕಿದ್ದಾರೆ. 17,544 ಮಂದಿಯನ್ನು ಸುರಕ್ಷಿತ ಸ್ಥಳಗಳಿಗೆ ಸ್ಥಳಾಂತರಿಸಲಾಗಿದೆ. 4,847 ಮಂದಿ ಪ್ರಸ್ತುತ ಪರಿಹಾರ ಶಿಬಿರಗಳಲ್ಲಿ ಆಶ್ರಯ ಪಡೆದಿದ್ದಾರೆ. ರಾಜ್ಯದಲ್ಲಿ 1,312 ಪ್ರವಾಹ ಪರಿಹಾರ ಶಿಬಿರಗಳು, 1,697 ದೋಣಿಗಳು ಹಾಗೂ 1,068 ವೈದ್ಯಕೀಯ ತಂಡಗಳನ್ನು ನಿಯೋಜಿಸಲಾಗಿದೆ.

ಅಮ್ರೋಹ, ಅಯೋಧ್ಯೆ, ಆಜಂಗಢ, ಬದಾಯೂಂ, ಬಲಿಯಾ, ಬಾರಾಬಂಕಿ, ಬಸ್ತಿ, ಚಂದೌಲಿ, ಫರೂಕಾಬಾದ್, ಗಾಜಿಯಾಬಾದ್, ಗೋಂಡಾ, ಗೋರಖ್‌ಪುರ, ಹರ್ದೋಯಿ, ಕಾಸ್ಗಂಜ್, ಕಾನ್ಪುರ, ಲಖಿಂಪುರ ಖೇರಿ, ಮಿರ್ಜಾಪುರ, ಮೊರಾದಾಬಾದ್, ಪಿಲಿಭಿತ್, ಪ್ರಯಾಗ್‌ರಾಜ್, ರಾಯ್‌ಬರೇಲಿ, ರಾಂಪುರ, ಸಂತ ಕಬೀರ್ ನಗರ, ಶಹಜಹಾನ್‌ಪುರ, ಉನ್ನಾವ್ ಮತ್ತು ವಾರಾಣಸಿ ಜಿಲ್ಲೆಗಳು ಪ್ರವಾಹ ಪೀಡಿತವಾಗಿವೆ.

**ಬಿಹಾರದಲ್ಲೂ ಐದು ಜಿಲ್ಲೆಗಳಲ್ಲಿ ಪ್ರವಾಹದ ಸ್ಥಿತಿ:** ಇತ್ತ ಬಿಹಾರದಲ್ಲಿ ಐದು ಜಿಲ್ಲೆಗಳಲ್ಲಿ ಪ್ರವಾಹದಂತಹ ಪರಿಸ್ಥಿತಿ ನಿರ್ಮಾಣವಾಗಿದೆ.

ನೇಪಾಳದ ಮೇಲ್ದಂಡೆ ಪ್ರದೇಶಗಳು ಮತ್ತು ನೆರೆಯ ಜಾರ್ಖಂಡ್‌ನಲ್ಲಿ ಸುರಿಯುತ್ತಿರುವ ನಿರಂತರ ಮಳೆಯಿಂದಾಗಿ ಗಂಗಾ, ಗಂಡಕ್, ಕೋಸಿ, ಬೂಢಿ ಗಂಡಕ್, ಬಾಗ್ಮತಿ, ಪುನ್ಪುನ್ ಮತ್ತು ಘಾಘ್ರಾ ನದಿಗಳ ನೀರಿನ ಮಟ್ಟ ಏರಿಕೆಯಾಗಿದೆ. ಹಲವು ನದಿಗಳು ಅಪಾಯದ ಮಟ್ಟ ಮೀರಿ ಹರಿಯುತ್ತಿವೆ.


## ನ್ಯಾಯಾಧೀಶರ ನಿವೃತ್ತಿ ವಯಸ್ಸು 62ಕ್ಕೆ ಏರಿಕೆ: ಸುಪ್ರೀಂ ಆದೇಶ

**ನವದೆಹಲಿ, ಸೆ.5:** ದೇಶದ ನ್ಯಾಯಾಂಗ ವ್ಯವಸ್ಥೆಯಲ್ಲಿ ದೀರ್ಘಕಾಲದಿಂದ ನನೆಗುದಿಗೆ ಬಿದ್ದಿದ್ದ ಬಹುಮುಖ್ಯ ಬೇಡಿಕೆಯೊಂದಕ್ಕೆ ಇದೀಗ ಹಸಿರು ನಿಶಾನೆ ಸಿಕ್ಕಿದೆ. ನ್ಯಾಯಾಲಯಗಳ ಕಟಕಟೆಯಲ್ಲಿ ನಿಲ್ಲುವ ಲಕ್ಷಾಂತರ ಜನರಿಗೆ ನ್ಯಾಯ ಒದಗಿಸುವ ನ್ಯಾಯಾಧೀಶರ ಸೇವಾವಧಿಗೆ ಸಂಬಂಧಿಸಿದಂತೆ ಸುಪ್ರೀಂ ಕೋರ್ಟ್ ಮಹತ್ವದ ಹೆಜ್ಜೆಯನ್ನಿಟ್ಟಿದ್ದು, ದೇಶದ ಎಲ್ಲಾ ನ್ಯಾಯಾಧೀಶರ ನಿವೃತ್ತಿ ವಯಸ್ಸನ್ನು 60ರಿಂದ 62ಕ್ಕೆ ಏರಿಸುವಂತೆ ಆದೇಶ ನೀಡಿದೆ.

ದೇಶದ ಜಿಲ್ಲಾ ನ್ಯಾಯಾಲಯಗಳಲ್ಲಿನ ನ್ಯಾಯಾಧೀಶರ ನಿವೃತ್ತಿ ವಯಸ್ಸನ್ನು 60ರಿಂದ 62ಕ್ಕೆ ಏರಿಸುವಂತೆ ಸುಪ್ರೀಂ ಕೋರ್ಟ್ ಮಹತ್ವದ ಆದೇಶ ನೀಡಿದೆ. ಮುಖ್ಯ ನ್ಯಾಯಮೂರ್ತಿ ಸೂರ್ಯ ಕಾಂತ್, ನ್ಯಾಯಮೂರ್ತಿ ಜಾಯ್‌ಮಾಲ್ಯ ಬಾಗ್ಚಿ ಮತ್ತು ನ್ಯಾಯಮೂರ್ತಿ ವಿ. ಮೋಹನಾ ಅವರನ್ನೊಳಗೊಂಡ ತ್ರಿಸದಸ್ಯ ಪೀಠವು ಈ ನಿರ್ಣಯವನ್ನು ಪ್ರಕಟಿಸಿದೆ. ದೇಶಾದ್ಯಂತ ಕೆಳಹಂತದ ನ್ಯಾಯಾಲಯಗಳಲ್ಲಿ 5 ಕೋಟಿಗೂ ಹೆಚ್ಚು ಪ್ರಕರಣಗಳು ಬಾಕಿ ಇರುವುದನ್ನು ಗಂಭೀರವಾಗಿ ಪರಿಗಣಿಸಿರುವ ಸುಪ್ರೀಂ ಕೋರ್ಟ್, ಅನುಭವಸ್ಥ ನ್ಯಾಯಾಧೀಶರ ಕೊರತೆಯನ್ನು ನೀಗಿಸಲು ಈ ಕ್ರಮಕ್ಕೆ ಮುಂದಾಗಿದೆ.

**ನ್ಯಾಯಾಧೀಶರನ್ನು ಸರ್ಕಾರಿ ನೌಕರರಂತೆ ಪರಿಗಣಿಸಲು ಸಾಧ್ಯವಿಲ್ಲ- ನಿರಾಕರಿಸಿದ ರಾಜ್ಯಗಳಿಗೆ ಎರಡು ವಾರ ಗಡುವು:** ಮತ್ತೊಂದೆಡೆ, ಉತ್ತರ ಪ್ರದೇಶ, ಬಿಹಾರ, ಪಂಜಾಬ್, ಹರಿಯಾಣ ಮತ್ತು ಕೇರಳ ಸೇರಿದಂತೆ ಇತರ ಹಲವು ರಾಜ್ಯಗಳು ಆರ್ಥಿಕ ಹೊರೆ ಹಾಗೂ ಇತರ ಸರ್ಕಾರಿ ನೌಕರರಿಂದಲೂ ಇಂತಹುದೇ

### ಕೆಳಹಂತದ ನ್ಯಾಯಾಲಯಗಳಲ್ಲಿ ಬಾಕಿ ಇರುವ 5 ಕೋಟಿಗೂ ಹೆಚ್ಚು ಪ್ರಕರಣಗಳ ವಿಲೇವಾರಿಗೆ ಕ್ರಮ



ಬೇಡಿಕೆ ಬರಬಹುದು ಎಂಬ ಕಾರಣ ನೀಡಿ ಈ ಪ್ರಸ್ತಾವನೆಯನ್ನು ವಿರೋಧಿಸಿದ್ದವು ಅಥವಾ ತಟಸ್ಥವಾಗಿದ್ದವು. ಆದರೆ ಸುಪ್ರೀಂ ಕೋರ್ಟ್ ಈ ವಾದವನ್ನು ತಳ್ಳಿಹಾಕಿದ್ದು, "ನ್ಯಾಯಾಂಗ ಅಧಿಕಾರಿಗಳನ್ನು ಸಾಮಾನ್ಯ ಸರ್ಕಾರಿ ನೌಕರರಂತೆ ಪರಿಗಣಿಸಲು ಸಾಧ್ಯವಿಲ್ಲ" ಎಂದು ಸ್ಪಷ್ಟಪಡಿಸಿದೆ. ಹಾಗಾಗಿ, ನಿರಾಕರಿಸಿದ ಎಲ್ಲಾ ರಾಜ್ಯಗಳು ಎರಡು ವಾರಗಳ ಒಳಗಾಗಿ ಈ ಬಗ್ಗೆ ಮರುಚಿಂತನೆ ನಡೆಸಿ ವರದಿ ಸಲ್ಲಿಸುವಂತೆ ಗಡುವು ನೀಡಿದೆ. ಏತನ್ಮಧ್ಯೆ, ಮಾರ್ಚ್ 31, 2026 ರ ನಂತರ ಅಥವಾ ಆ ದಿನದಂದು ನಿವೃತ್ತರಾಗಿರುವ ನ್ಯಾಯಾಧೀಶರಿಗೂ ಕೋರ್ಟ್ ಸೀಮಿತ ಅವಕಾಶ ನೀಡಿದೆ. ಅವರು ಬೇರೆ ಯಾವುದೇ ಸರ್ಕಾರಿ ಲಾಭದಾಯಕ ಹುದ್ದೆಯನ್ನು ಹೊಂದಿರದಿದ್ದರೆ, ಹೈಕೋರ್ಟ್‌ನ ಕಾರ್ಯಕ್ಷಮತೆ ಮೌಲ್ಯಮಾಪನಕ್ಕೆ ಒಳಪಟ್ಟು ಪುನಃ ನ್ಯಾಯಾಂಗ ಸೇವೆಗೆ ಮರಳಬಹುದು.

### ಅರ್ಹರಿಗೆ ಮಾತ್ರ ಸೇವೆ ಮುಂದುವರಿಸಲು ಅವಕಾಶ

ನ್ಯಾಯಾಧೀಶರ ನಿವೃತ್ತಿ ವಯಸ್ಸನ್ನು 62ಕ್ಕೆ ಏರಿಸಲು ಈಗಾಗಲೇ ಸಮ್ಮತಿ ಸೂಚಿಸಿರುವ ಕರ್ನಾಟಕ ಸೇರಿದಂತೆ ಛತ್ತೀಸ್‌ಗಢ, ಮಧ್ಯಪ್ರದೇಶ, ಮಹಾರಾಷ್ಟ್ರ, ಸಿಕ್ಕಿಂ, ತಮಿಳುನಾಡು ಮತ್ತು ಪಶ್ಚಿಮ ಬಂಗಾಳ ರಾಜ್ಯಗಳಿಗೆ ತನ್ನ ಸೇವಾ ನಿಯಮಾವಳಿಯನ್ನು ಎರಡು ತಿಂಗಳ ಒಳಗಾಗಿ ತಿದ್ದುಪಡಿ ಮಾಡುವಂತೆಯೂ ಸುಪ್ರೀಂ ಕೋರ್ಟ್ ಸೂಚಿಸಿದೆ. ಆದರೆ, ಈ ವಯೋಮಿತಿ ಹೆಚ್ಚಳವು ಎಲ್ಲರಿಗೂ ನೇರವಾಗಿ ಅನ್ವಯಿಸುವುದಿಲ್ಲ. ಅದರಂತೆ, ನ್ಯಾಯಾಧೀಶರು 60 ವರ್ಷ ತುಂಬಿದಾಗ ಸಂಬಂಧಪಟ್ಟ ಹೈಕೋರ್ಟ್ ಅವರ ಕಾರ್ಯಕ್ಷಮತೆ, ಪ್ರಾಮಾಣಿಕತೆ ಮತ್ತು ಸೂಕ್ತತೆಯನ್ನು ಪರಿಶೀಲಿಸುತ್ತದೆ. ಆ ಪರಿಶೀಲನೆಯಲ್ಲಿ ಅರ್ಹರಾದವರಿಗೆ ಮಾತ್ರ 62 ವರ್ಷದವರೆಗೆ ಸೇವೆಯಲ್ಲಿ ಮುಂದುವರಿಯಲು ಅವಕಾಶ ನೀಡಲಾಗುತ್ತದೆ.

## ಹೊಸ ವಿಶ್ವ ಭೂಪಟಕ್ಕೆ ವಿಶ್ವಸಂಸ್ಥೆ ಅಸ್ತು: ಆಫ್ರಿಕಾ ದೊಡ್ಡದು, ಉತ್ತರ ಅಮೆರಿಕ ಸಣ್ಣದು

**ನವದೆಹಲಿ, ಸೆ.5:** ವಿಶ್ವದ ಭೂಭಾಗಗಳ ನೈಜ ಗಾತ್ರವನ್ನು ಹೆಚ್ಚು ನಿಖರವಾಗಿ ತೋರಿಸುವ ಉದ್ದೇಶದಿಂದ ವಿಶ್ವಸಂಸ್ಥೆ ಹೊಸ ರೀತಿಯ ವಿಶ್ವ ಭೂಪಟವನ್ನು ಅಳವಡಿಸಿಕೊಳ್ಳಲು ಮುಂದಾಗಿದೆ. ಈಕ್ವಲ್ ಅರ್ಥ್ ಕಾರ್ಟೊಗ್ರಾಫಿಕ್ ಪ್ರೊಜೆಕ್ಷನ್ ಆಧಾರಿತ ಈ ಭೂಪಟದಲ್ಲಿ ಆಫ್ರಿಕಾ ಖಂಡದ ಗಾತ್ರ ಹಿಂದಿನ ನಕ್ಷೆಗಳಲ್ಲಿ ಕಾಣಿಸಿದ್ದಕ್ಕಿಂತ ದೊಡ್ಡದಾಗಿ, ಉತ್ತರ ಅಮೆರಿಕ ಮತ್ತು ಯುರೋಪ್ ತುಸು ಸಣ್ಣದಾಗಿ ಕಾಣಿಸಲಿವೆ. ಈ ನಿರ್ಧಾರಕ್ಕೆ ವಿಶ್ವಸಂಸ್ಥೆಯ 164 ಸದಸ್ಯ ರಾಷ್ಟ್ರಗಳು ಬೆಂಬಲ ಸೂಚಿಸಿವೆ.

ಸಾಂಪ್ರದಾಯಿಕವಾಗಿ ವಿಶ್ವದ ನಕ್ಷೆಗಳಲ್ಲಿ ವ್ಯಾಪಕವಾಗಿ ಬಳಕೆಯಾಗಿರುವ ಮರ್ಕೇಟರ್ ಪ್ರೊಜೆಕ್ಷನ್‌ನಲ್ಲಿ ಭೂಮಿಯ ಗೋಳಾಕಾರದ ಮೇಲ್ಮೈಯನ್ನು ಸಮತಟ್ಟಾಗಿ ತೋರಿಸುವಾಗ ಧ್ರುವ ಪ್ರದೇಶಗಳಲ್ಲಿನ ಭೂಭಾಗಗಳು ವಾಸ್ತವಕ್ಕಿಂತ ದೊಡ್ಡದಾಗಿ ಕಾಣಿಸುತ್ತವೆ.

ಇದರಿಂದ ಆಫ್ರಿಕಾ, ದಕ್ಷಿಣ ಅಮೆರಿಕ ಸೇರಿದಂತೆ ಸಮಭಾಜಕದ ಸಮೀಪದ ಖಂಡಗಳ ಗಾತ್ರ ಕಡಿಮೆಯಾಗಿ ಕಾಣುವ ಸಮಸ್ಯೆ ಇದೆ.

**ಯುಎನ್ ನಿರ್ಧಾರಕ್ಕೆ 164 ಸದಸ್ಯ ರಾಷ್ಟ್ರಗಳ ಬೆಂಬಲ, ಅಮೆರಿಕ ಅಸಮಾಧಾನ**

ಹೊಸ ಈಕ್ವಲ್ ಅರ್ಥ್ ನಕ್ಷೆಯ ಪ್ರಮುಖ ಉದ್ದೇಶ ಪ್ರತಿಯೊಂದು ಖಂಡದ ವಿಸ್ತೀರ್ಣವನ್ನು ಸಾಧ್ಯವಾದಷ್ಟು ವಾಸ್ತವಿಕ ಪ್ರಮಾಣದಲ್ಲಿ ಪ್ರದರ್ಶಿಸುವುದು. ಇದರಿಂದ ಆಫ್ರಿಕಾ ಖಂಡದ ನೈಜ ಭೌಗೋಳಿಕ ವಿಸ್ತಾರವನ್ನು ಹೆಚ್ಚು ಸ್ಪಷ್ಟವಾಗಿ ಅರ್ಥಮಾಡಿಕೊಳ್ಳಲು ಸಾಧ್ಯವಾಗಲಿದೆ. ಹೊಸನಕ್ಷೆಯಲ್ಲಿ ಅಮೆರಿಕದ ಗಾತ್ರ ಹಿಂದಿನ ನಕ್ಷೆಗಳಲ್ಲಿ ಕಂಡುಬರುವ ಪ್ರಮಾಣಕ್ಕಿಂತ ತುಸು ಚಿಕ್ಕದಾಗಿ ಕಾಣಿಸಿಕೊಳ್ಳಲಿದೆ. ಇದೇ ಕಾರಣಕ್ಕೆ ಅಮೆರಿಕದಲ್ಲಿ ಈ ನಿರ್ಧಾರದ ಬಗ್ಗೆ ಚರ್ಚೆ ಆರಂಭವಾಗಿದೆ.

ಶತಮಾನಗಳಷ್ಟು ಹಳೆಯದಾದ ನಕ್ಷೆಯ ಪ್ರಕ್ಷೇಪಣಗಳನ್ನು ಚರ್ಚಿಸುವ ಬದಲು ಸಂಸ್ಥೆಯು ಹೆಚ್ಚು ಒತ್ತುವ ಜಾಗತಿಕ ಸಮಸ್ಯೆಗಳ ಮೇಲೆ ಕೇಂದ್ರೀಕರಿಸಬೇಕು ಎಂದು ವಾದಿಸಿ, ಅಮೆರಿಕವು ನಿರ್ಣಯವನ್ನು ಟೀಕಿಸಿದೆ.

## ನಿತ್ಯ ಪಂಚಾಂಗ 6.09.2026 ಭಾನುವಾರ



ಶ್ರೀಶಕ 1949 ಶ್ರೀ ಪರಾಭವ ನಾಮ ಸಂವತ್ಸರ, ದಕ್ಷಿಣಾಯಣ ಗ್ರೀಷ್ಮ ಋತು, ಚಾಂದ್ರಮಾನ ಶ್ರಾವಣ–ಬಾದ್ರಪದ ಮಾಸ

ಶ್ರಾವಣ ಬಹುಳ, ದಶಮಿ, ಆರ್ದ್ರಾ ನಕ್ಷತ್ರ, ಶಿಕ್ಯೋತ್ಸವ, ಹೆಮ್ಮರಗಾಲ ಕೃಷ್ಣೋತ್ಸವ, ಹದಗಾಂವಮಠ ಬಸವಲಿಂಗ ಪುಣ್ಯತಿಥಿ, ರಾಷ್ಟ್ರೀಯ ಪುಸ್ತಕ ಓದುವ ದಿನ

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| ಭಾನು | ಸ. 5.04– 6.33 | 12.00– 1.30 | 3.00– 4.00 |
| ಸೋಮ | ಬೆ. 7.20– 9.04 | 10.30–12.00 | 1.30– 3.00 |
| ಮಂಗಳ | ಮ. 3.25– 4.59 | 9.00–10.30 | 12.00– 1.30 |
| ಬುಧ | ಮ.12.16– 1.50 | 7.30– 9.00 | 10.30– 12.00 |
| ಗುರು | ಮ. 1.50– 3.29 | 6.00– 7.30 | 9.00– 10.30 |
| ಶುಕ್ರ | ಬೆ.10.42–12.16 | 3.00– 4.30 | 7.30– 9.00 |
| ಶನಿ | ಬೆ. 9.07–10.41 | 1.30– 3.00 | 6.00– 7.30 |

# ವರಿಷ್ಠರಿಗೆ ಕೊಟ್ಟ ಮಾತಿನಂತೆ ಮುಖ್ಯಮಂತ್ರಿ ಸ್ಥಾನ ತ್ಯಜಿಸಿದೆ: ಮಾಜಿ ಸಿಎಂ ಸಿದ್ದರಾಮಯ್ಯ ಸ್ಪಷ್ಟನೆ



**ಚಿಕ್ಕಮಗಳೂರು, ಸೆ.5:** ಹಲವರು ರಾಜೀನಾಮೆ ನೀಡದಂತೆ ನನಗೆ ಸಲಹೆ ನೀಡಿದ್ದರು. ಆದರೆ ಹೈಕಮಾಂಡ್‌ಗೆ ಕೊಟ್ಟ ಮಾತಿಗೆ ಬದ್ಧನಾಗಿ ಸಿಎಂ ಸ್ಥಾನ ತ್ಯಜಿಸಿದೆ ಎಂದು ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಅಧಿಕಾರ ತ್ಯಾಗದ ಕುರಿತು ಸ್ಪಷ್ಟನೆ ನೀಡಿದ್ದಾರೆ.

ಜಿಲ್ಲೆಯ ಕಡೂರು ತಾಲೂಕಿನಲ್ಲಿ ಆಯೋಜಿಸಲಾಗಿದ್ದ ಸಮಾವೇಶದಲ್ಲಿ ಮಾತನಾಡಿದ ಅವರು, ಪ್ರಧಾನಿ ನರೇಂದ್ರ ಮೋದಿ ಹಾಗೂ ಬಿಜೆಪಿ ಮುಖಂಡ ಸಿ.ಟಿ. ರವಿ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದರು. ದೇವಸ್ಥಾನಕ್ಕೆ ಭೇಟಿ ನೀಡಿದ ಸಂದರ್ಭದಲ್ಲಿ ಕೆಲವರು ಮೋದಿ, ಮೋದಿ ಎಂದು ಘೋಷಣೆ ಕೂಗುತ್ತಾರೆ. ಮೋದಿ ದೇಶದ ಸ್ವಾತಂತ್ರ್ಯಕ್ಕಾಗಲಿ, ಸಂಗೊಳ್ಳಿ ರಾಯಣ್ಣನಂತೆಯಾಗಲಿ ಹೋರಾಟ ನಡೆಸಿದ್ದಾರೆಯೇ ಎಂದು ಖಾರವಾಗಿ ಪ್ರಶ್ನಿಸಿದರು.

ಕೇಂದ್ರ ಸರ್ಕಾರದ ವೈಫಲ್ಯಗಳನ್ನು ಪಟ್ಟಿ ಮಾಡಿದರು. ಪ್ರತಿ ವರ್ಷ ಎರಡು ಕೋಟಿ ಉದ್ಯೋಗ, ಅಚ್ಛೇ ದಿನ್, ರೈತರ ಆದಾಯ ದುಪ್ಪಟ್ಟು ಹಾಗೂ ವಿದೇಶದಿಂದ ಕಪ್ಪು ಹಣ ತಂದು ಪ್ರತಿಯೊಬ್ಬರ ಖಾತೆಗೆ 15 ಲಕ್ಷ ರೂ. ಹಾಕುವುದಾಗಿ ಭರವಸೆ ನೀಡಿ 12 ವರ್ಷ ಕಳೆದರೂ ಯಾವುದೂ ಈಡೇರಿಲ್ಲ. ಬಿಜೆಪಿ ಸುಳ್ಳು ಭರವಸೆಗಳ ಮೂಲಕ ಜನರನ್ನು ದಾರಿ ತಪ್ಪಿಸುತ್ತಿದ್ದು, ಅಂತಹ ಪಕ್ಷಕ್ಕೆ ಸಂಸತ್ ಚುನಾವಣೆಯಲ್ಲಿ ಮತ ನೀಡಬೇಕೇ ಎಂದು ಪ್ರಶ್ನಿಸಿದರು.

ಇದೇ ವೇಳೆ ಸ್ಥಳೀಯ ನಾಯಕರನ್ನು ಪ್ರಸ್ತಾಪಿಸಿ ಬಿಜೆಪಿ ಮುಖಂಡ ಸಿ.ಟಿ. ರವಿ ವಿರುದ್ಧ ತೀವ್ರ ಆಕ್ರೋಶ ಹೊರಹಾಕಿದ ಅವರು, "ಗೃಹಲಕ್ಷ್ಮಿ ಯೋಜನೆ ಜಾರಿಗೊಳಿಸದ ಕಾರಣ ಸಿದ್ದರಾಮಯ್ಯ ಕುರ್ಚಿ ಕಳೆದುಕೊಂಡರು ಎಂದು ಸಿ.ಟಿ. ರವಿ ಹೇಳಿಕೆ ನೀಡಿದ್ದಾರೆ. ಆದರೆ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿಯವರಿಗೆ ನೀಡಿದ್ದ ಮಾತಿನಂತೆ ಅವರು ಸೂಚಿಸಿದ ತಕ್ಷಣ ಗೌರವಯುತವಾಗಿ ರಾಜೀನಾಮೆ ಸಲ್ಲಿಸಿದ್ದೇನೆ. ಹಲವು ಆಪ್ತರು ಅಧಿಕಾರ ಬಿಡಬೇಡಿ ಎಂದರೂ ವಚನಭ್ರಷ್ಟನಾಗಲು ಇಷ್ಟಪಡಲಿಲ್ಲ. ಕೊಟ್ಟ ಮಾತನ್ನು ಉಳಿಸಿಕೊಂಡ ಇತಿಹಾಸವಿದ್ದರೆ ಅದು ನಮ್ಮ ಸರ್ಕಾರಕ್ಕೆ ಮಾತ್ರ ಸಲ್ಲುತ್ತದೆ" ಎಂದು ತಿರುಗೇಟು ನೀಡಿದರು.

# ಕೇಂದ್ರಕ್ಕೆ ನಿಯೋಗ ಕರೆದೊಯ್ಯಲು ಬಿಜೆಪಿ-ಜೆಡಿಎಸ್‌ಗೆ ಧೈರ್ಯವಿಲ್ಲ: ಸಚಿವ ಪ್ರಿಯಾಂಕ್ ಖರ್ಗೆ ವಾಗ್ದಾಳಿ




**ಕಲಬುರಗಿ, ಸೆ.5:** ರಾಜ್ಯದ ರೈತರ ಹಿತರಕ್ಷಣೆ ಮತ್ತು ಬರ ನಷ್ಟ ಪರಿಹಾರಕ್ಕೆ ಸಂಬಂಧಿಸಿದಂತೆ ಕೇಂದ್ರ ಸರ್ಕಾರದ ಮೇಲೆ ಒತ್ತಡ ಹೇರಲು ಸರ್ವಪಕ್ಷಗಳ ನಿಯೋಗವನ್ನು ದೆಹಲಿಗೆ ಕರೆದೊಯ್ಯುವ ವಿಷಯದಲ್ಲಿ ಬಿಜೆಪಿ ಹಾಗೂ ಜೆಡಿಎಸ್ ನಾಯಕರು ಧೈರ್ಯ ತೋರುತ್ತಿಲ್ಲ ಎಂದು ಗ್ರಾಮೀಣಾಭಿವೃದ್ಧಿ ಸಚಿವ ಪ್ರಿಯಾಂಕ್ ಖರ್ಗೆ ವಾಗ್ದಾಳಿ ನಡೆಸಿದ್ದಾರೆ.

ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ರಾಜ್ಯಕ್ಕೆ ನ್ಯಾಯಯುತವಾಗಿ ಸಿಗಬೇಕಾದ ಎನ್‌ಡಿಆರ್‌ಎಫ್ ಪರಿಹಾರ ಮತ್ತು ಬರ ಅನುದಾನ ಪಡೆಯುವಲ್ಲಿ ಕೇಂದ್ರ ಸರ್ಕಾರ ತಾರತಮ್ಯ ಮಾಡುತ್ತಿದೆ. ರಾಜ್ಯದ ರೈತರ ಸಂಕಷ್ಟಕ್ಕೆ ಸ್ಪಂದಿಸುವ ಬದಲು ಪ್ರತಿಪಕ್ಷಗಳು ಕೇವಲ ರಾಜಕೀಯ ಪಾದಯಾತ್ರೆಗಳಲ್ಲೇ ನಿರತವಾಗಿವೆ ಎಂದಿದ್ದಾರೆ. ರಾಜ್ಯ ಸರ್ಕಾರದ ವಿರುದ್ಧ ಸುಳ್ಳು ಆರೋಪಗಳನ್ನು ಮಾಡುವ ಬದಲು, ಬಿಜೆಪಿ–ಜೆಡಿಎಸ್ ನಾಯಕರು ದೆಹಲಿಗೆ ತೆರಳಿ ಕೇಂದ್ರದಿಂದ ಬರಬೇಕಾದ ಬಾಕಿ ಅನುದಾನ ಬಿಡುಗಡೆ ಮಾಡಿಸಲು ಶ್ರಮಿಸಲಿ ಎಂದು ಖರ್ಗೆ ಸವಾಲು ಹಾಕಿದ್ದಾರೆ.

ರಾಜ್ಯದಲ್ಲಿ ಕಾನೂನು ಪಾಲನೆ ಹಾಗೂ ಕೋಮು ಸೌಹಾರ್ದತೆ ಕುರಿತು ಮಾತನಾಡಿದ ಸಚಿವರು, ನಾನು ಈ ಜವಾಬ್ದಾರಿಯಲ್ಲಿ ಇರುವವರೆಗೂ ಕಾನೂನುಬಾಹಿರ ಚಟುವಟಿಕೆಗಳು ಹಾಗೂ ನಿಯಮಗಳನ್ನು ಉಲ್ಲಂಘಿಸಿ ತಪ್ಪಿಸಿಕೊಳ್ಳಲು ಯಾರಿಂದಲೂ ಸಾಧ್ಯವಿಲ್ಲ. ಪ್ರತಿಯೊಬ್ಬರೂ ಕಾನೂನಿನ ಚೌಕಟ್ಟಿನಲ್ಲೇ ಕಾರ್ಯನಿರ್ವಹಿಸಬೇಕು ಎಂದು ಸ್ಪಷ್ಟವಾಗಿ ಎಚ್ಚರಿಸಿದ್ದಾರೆ.

# ಅಹಿಂದ ಬಲಪ್ರದರ್ಶನಕ್ಕೆ ವೇದಿಕೆ ಸಜ್ಜು, ಕುತೂಹಲ ಮೂಡಿಸಿದ ಸಿದ್ದು ರಾಜಕೀಯ ನಡೆ

**ಬೆಂಗಳೂರು, ಸೆ.5:** ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ರಾಜೀನಾಮೆ ನಂತರ, ಹಿಂದುಳಿದ ವರ್ಗಗಳ ಒಕ್ಕೂಟವು ಭಾನುವಾರ (ಸೆ.6) ದಂದು ರಾಜಧಾನಿ ಬೆಂಗಳೂರಿನಲ್ಲಿ ಪ್ರಮುಖ ಸಮಾವೇಶವನ್ನು ಏರ್ಪಡಿಸಿದೆ.

ಸಿದ್ದರಾಮಯ್ಯ ಅವರ ಉಪಸ್ಥಿತಿಯಲ್ಲಿ ಜರುಗಲಿರುವ ಈ ಕಾರ್ಯಕ್ರಮಕ್ಕೆ ಕಾಂಗ್ರೆಸ್ ಪಕ್ಷದ ಅಹಿಂದ ನಾಯಕರಿಗೂ ಆಹ್ವಾನ ಕಳುಹಿಸಲಾಗಿದೆ. ಆದರೆ, ಇದರಲ್ಲಿ ಭಾಗವಹಿಸುವ ಕುರಿತು ಕೆಲವು ಪ್ರಮುಖ ನಾಯಕರಲ್ಲಿ ಇನ್ನೂ ಗೊಂದಲ ಉಳಿದುಕೊಂಡಿದೆ. ಈ ಬೃಹತ್ ಸಭೆಯಲ್ಲಿ ಜಾತಿಗಣತಿ ವರದಿ ಹಾಗೂ ಒಳಮೀಸಲಾತಿಯಂತಹ ಸೂಕ್ಷ್ಮ ವಿಚಾರಗಳ ಕುರಿತು ಗಂಭೀರ ಚರ್ಚೆಗಳು ನಡೆಯುವ ಸಾಧ್ಯತೆಯಿದೆ. ಪಕ್ಷ ಮತ್ತು ಆಡಳಿತಾರೂಢ ಸರ್ಕಾರಕ್ಕೆ ಅಚ್ಚರಿ ತರುವಂತಹ ಯಾವುದೇ ಪ್ರಮುಖ ನಿರ್ಧಾರಗಳನ್ನು ಅಥವಾ ಸಂದೇಶಗಳನ್ನು ಸಿದ್ದರಾಮಯ್ಯ ಅವರು ಇಲ್ಲಿ ಪ್ರಕಟಿಸಲಿದ್ದಾರೆಯೇ ಎಂಬುದು ರಾಜಕೀಯ ವಲಯದಲ್ಲಿ ತೀವ್ರ ಕುತೂಹಲ ಮೂಡಿಸಿದೆ. ಇದರೊಂದಿಗೆ, ಉಪಮುಖ್ಯಮಂತ್ರಿ ಹಾಗೂ ಕೆಪಿಸಿಸಿ ಅಧ್ಯಕ್ಷರು ಸೇರಿದಂತೆ ಕಾಂಗ್ರೆಸ್‌ನ ಉನ್ನತ ನಾಯಕರು ಈ ಕಾರ್ಯಕ್ರಮಕ್ಕೆ ಹಾಜರಾಗುತ್ತಾರೋ ಇಲ್ಲವೋ ಎಂಬ ಅಂಶದ ಮೇಲೂ ಎಲ್ಲರ ಗಮನ ನೆಟ್ಟಿದೆ.




# ರಾಜ್ಯದಲ್ಲಿರುವುದು ಜನಪ್ರಿಯವಲ್ಲ, ಕೇವಲ ಜಾಹೀರಾತು ಸರ್ಕಾರ

## ಗ್ಯಾರಂಟಿ ಯೋಜನೆಗಳ ಹೆಸರಿನಲ್ಲಿ ಗಾಳಿಗೋಪುರ ಕಟ್ಟುತ್ತಿರುವ ಕಾಂಗ್ರೆಸ್



**ಕೊಪ್ಪಳ, ಸೆ.5:** ಕುಂಭಕರ್ಣನ ನಿದ್ದೆಯಲ್ಲಿರುವ ರಾಜ್ಯ ಸರ್ಕಾರ ಮತ್ತು ಮುಖ್ಯಮಂತ್ರಿ ಅವರನ್ನು ಬಿಜೆಪಿ ಬಡಿದೆಬ್ಬಿಸುವ ಕೆಲಸ ಮಾಡುತ್ತಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಟೀಕಿಸಿದರು.

ಬಳ್ಳಾರಿ ಚಲೋ ಪಾದಯಾತ್ರೆಯ ಐದನೇ ದಿನವಾದ ಶನಿವಾರದಂದು ಕಾರಟಗಿಯ ಎಪಿಎಂಸಿ ಯಾರ್ಡ್‌ನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಾಂಗ್ರೆಸ್ ಸರ್ಕಾರ ಗ್ಯಾರಂಟಿ ಯೋಜನೆಗಳ ನೆಪದಲ್ಲಿ ಗಾಳಿಯಲ್ಲಿ ಗೋಪುರ ಕಟ್ಟುತ್ತಿದೆ. ಇದನ್ನು ಹೊರತುಪಡಿಸಿ ರಾಜ್ಯದಲ್ಲಿ ಬೇರೆ ಯಾವುದೇ ಅಭಿವೃದ್ಧಿ ಕಾರ್ಯಗಳು ನಡೆಯುತ್ತಿಲ್ಲ. ಕಳೆದ ಮೂರು ವರ್ಷಗಳಿಂದ ಗ್ಯಾರಂಟಿ ಯೋಜನೆಗಳ ಬಗ್ಗೆ ಸರ್ಕಾರ ಭಾರಿ ಪ್ರಚಾರ ನಡೆಸಿದೆ. ಇದು ಜನಪ್ರಿಯ ಸರ್ಕಾರವಲ್ಲ, ಜಾಹೀರಾತು ಸರ್ಕಾರ ಎಂದು ತಾನು ಈ ಹಿಂದೆಯೇ ಹೇಳಿದ್ದೆ ಎಂದು ವ್ಯಂಗ್ಯವಾಡಿದರು.

ಮುಂದಿನ ಚುನಾವಣೆಯಲ್ಲೂ ತಮ್ಮದೇ ಸರ್ಕಾರ ಅಧಿಕಾರಕ್ಕೆ ಬರಲಿದೆ ಎಂಬ ಭ್ರಮೆಯಲ್ಲಿ ಕಾಂಗ್ರೆಸ್ ಇದೆ. ಆದರೆ ಎಲ್ಲ ವರ್ಗದ ಜನರಿಗೆ ಸರ್ಕಾರ ಅನ್ಯಾಯ ಮಾಡಿದೆ. ಆಡಳಿತ ಪಕ್ಷದ ಶಾಸಕರೇ ತಮ್ಮ ಸರ್ಕಾರ ಸರಿಯಾಗಿ ಕಾರ್ಯನಿರ್ವಹಿಸುತ್ತಿಲ್ಲ ಎಂದು ಹೇಳುತ್ತಿದ್ದಾರೆ. ಇನ್ನಾದರೂ ಸರ್ಕಾರ ಎಚ್ಚೆತ್ತು ಬಡವರು ಮತ್ತು ರೈತರ ಬಗ್ಗೆ ಕಾಳಜಿ ವಹಿಸಬೇಕು ಅರ್ಹ ಫಲಾನುಭವಿಗಳಿಗೆ ಗೃಹಲಕ್ಷ್ಮಿ ಯೋಜನೆಯ ಹಣ ತಲುಪದಿದ್ದರೆ ಇದಕ್ಕೆ ಯಾರು ಹೊಣೆ ಎಂದು ಪ್ರಶ್ನಿಸಿದ ವಿಜಯೇಂದ್ರ, ಶಕ್ತಿ ಯೋಜನೆಗೆ ಸರ್ಕಾರ ಭಾರಿ ಪ್ರಚಾರ ನೀಡುತ್ತಿದೆ. ಆದರೆ ಗ್ರಾಮೀಣ ಪ್ರದೇಶಗಳಲ್ಲಿ ಸಾಕಷ್ಟು ಬಸ್‌ಗಳೇ ಇಲ್ಲ. ಇದರಿಂದ ಶಾಲಾ–ಕಾಲೇಜು ಗಳಿಗೆ ತೆರಳುವ ವಿದ್ಯಾರ್ಥಿಗಳು ತೊಂದರೆ ಅನುಭವಿಸುತ್ತಿದ್ದಾರೆ ಎಂದು ಹೇಳಿದರು.

ದುಡಿಯುವ ಕೈಗಳಿಗೆ ಸರ್ಕಾರ ಯಾವುದೇ ರೀತಿಯ ಶಕ್ತಿ ನೀಡಿಲ್ಲ. ಉತ್ತರ ಕರ್ನಾಟಕದಲ್ಲಿ ದೊಡ್ಡ ಕೈಗಾರಿಕೆಗಳನ್ನು ಸ್ಥಾಪಿಸುವುದು ಇರಲಿ, ಅಗತ್ಯ ಪ್ರಮಾಣದಲ್ಲಿ ಶಿಕ್ಷಕರನ್ನೂ ನೇಮಕ ಮಾಡಿಲ್ಲ. ಈ ಭಾಗದಲ್ಲಿ ಶಾಲೆಗಳಿದ್ದರೂ ಶಿಕ್ಷಕರಿಲ್ಲ, ಆಸ್ಪತ್ರೆಗಳಿದ್ದರೂ ವೈದ್ಯರಿಲ್ಲದ ಪರಿಸ್ಥಿತಿ ನಿರ್ಮಾಣವಾಗಿದೆ ಎಂದರು.

ತಮ್ಮ ಪಾದಯಾತ್ರೆ ದಿನದಿಂದ ದಿನಕ್ಕೆ ಜನಾಂದೋಲನವಾಗಿ ಪರಿವರ್ತನೆ ಯಾಗುತ್ತಿದೆ. ಪಾದಯಾತ್ರೆಯ ಯಶಸ್ಸನ್ನು ಕಂಡು ಮುಖ್ಯಮಂತ್ರಿ ಹತಾಶರಾಗಿ ಮಾತನಾಡುತ್ತಿದ್ದಾರೆ ಎಂದು ವಿಜಯೇಂದ್ರ ಟೀಕಿಸಿದರು. ಮಾಜಿ ಸಚಿವ ಶ್ರೀರಾಮುಲು, ಮಾಜಿ ಶಾಸಕ ಅನಿಲ್ ಬೆನಕೆ, ಪಕ್ಷದ ಮುಖಂಡ ಕೆ.ವಿರೂಪಾಕ್ಷ ಹಾಗೂ ಜಿಲ್ಲಾಧ್ಯಕ್ಷ ನವೀನ ಗುಳಗಣ್ಣನವರ್ ಉಪಸ್ಥಿತರಿದ್ದರು.

### ಗ್ಯಾರಂಟಿಗಳಿಗೆ ಹಣ ಹೊಂದಿಸಲು ಕುಡುಕರ ರಾಜ್ಯ ನಿರ್ಮಾಣ

ಗ್ಯಾರಂಟಿ ಯೋಜನೆಗಳಿಗೆ ಹಣ ಹೊಂದಿಸಲು ರಾಜ್ಯವನ್ನು ಕುಡುಕರ ರಾಜ್ಯವನ್ನಾಗಿ ಪರಿವರ್ತಿಸಿದ ಕೀರ್ತಿ ಕಾಂಗ್ರೆಸ್ ಸರ್ಕಾರಕ್ಕೆ ಸಲ್ಲುತ್ತದೆ. ಗಲ್ಲಿಗಲ್ಲಿಯಲ್ಲಿ ಮದ್ಯ ಮಾರಾಟಕ್ಕೆ ಅವಕಾಶ ನೀಡಲಾಗಿದೆ. ಒಂದು ಕುಟುಂಬಕ್ಕೆ ಗೃಹಲಕ್ಷ್ಮಿ ಯೋಜನೆಯಡಿ 2 ಸಾವಿರ ನೀಡುವ ಸರ್ಕಾರ ಅದೇ ಕುಟುಂಬದಿಂದ ಎಷ್ಟು ಹಣವನ್ನು ಸರ್ಕಾರ ವಸೂಲಿ ಮಾಡುತ್ತಿದೆ ಎಂದು ವಿಜಯೇಂದ್ರ ಪ್ರಶ್ನಿಸಿದರು. ರಾಜ್ಯ ಸರ್ಕಾರದ ವ್ಯಾಪ್ತಿಯ ಸಹಕಾರ ಸಂಘಗಳಲ್ಲಿರುವ ರೈತರ ಸಾಲ ಮನ್ನಾ ಮಾಡಲು ರಾಜ್ಯ ಸರ್ಕಾರವೇ ಮುಂದಾಗಬೇಕು. ಆಕಾಶದಲ್ಲಿ ನಕ್ಷತ್ರ ತೋರಿಸುವುದನ್ನು ಬಿಟ್ಟು ಸರ್ಕಾರ ತನ್ನ ಹೊಣೆಗಾರಿಕೆ ನಿಭಾಯಿಸಬೇಕು. ಮುಖ್ಯಮಂತ್ರಿ ಅವರು ತಮ್ಮ ಜವಾಬ್ದಾರಿಯಿಂದ ನುಣುಚಿ ಕೊಳ್ಳುವುದನ್ನು ಬಿಡಬೇಕು.

0ಪ್ರತಿಯೊಂದಕ್ಕೂ ಕೇಂದ್ರ ಸರ್ಕಾರದತ್ತ ಬೆರಳು ತೋರಿಸುವುದೇ ಕೆಲಸವಾಗ ಬಾರದು. ಇಷ್ಟೊಂದು ಸಂಖ್ಯಾಬಲ ಹೊಂದಿರುವ ಬಲಿಷ್ಠ ಸರ್ಕಾರ ಜನರಿಗೆ ಆಸರೆಯಾಗದಿದ್ದರೆ ಏನು ಪ್ರಯೋಜನ ಎಂದು ಪ್ರಶ್ನಿಸಿದರು.

# ಮಾಜಿ ಸಿಎಂ ಕೆಂಗಲ್ ಹನುಮಂತಯ್ಯ ಪುತ್ರಿ ವಿಜಯಲಕ್ಷ್ಮಿ ತಿಮ್ಮಯ್ಯ ನಿಧನ

**ಬೆಂಗಳೂರು, ಸೆ.5:** ಮಾಜಿ ಮುಖ್ಯಮಂತ್ರಿ ಕೆಂಗಲ್ ಹನುಮಂತಯ್ಯ ಅವರ ಹಿರಿಯ ಪುತ್ರಿ ವಿಜಯಲಕ್ಷ್ಮಿ ತಿಮ್ಮಯ್ಯ (88) ಅವರು ಶನಿವಾರ ನಿಧನರಾಗಿದ್ದಾರೆ.

ವಿಜಯಲಕ್ಷ್ಮಿ ಅವರಿಗೆ, ಕಾಂಗ್ರೆಸ್ ಮುಖಂಡ ಹಾಗೂ ಮಾಜಿ ರಣಜಿ ಕ್ರಿಕೆಟ್ ಆಟಗಾರ ಕೆಂಗಲ್ ಶ್ರೀಪಾದ ರೇಣು ಸೇರಿ ಮೂವರು ಪುತ್ರರು ಇದ್ದಾರೆ. ಹೆಬ್ಬಾಳ ಚಿತಾಗಾರದಲ್ಲಿ ಅಂತ್ಯಸಂಸ್ಕಾರ ನಡೆಯಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

# ಗ್ರಾಮೀಣ ಭಾಗದ ಸರ್ಕಾರಿ ಶಾಲೆಯಲ್ಲಿ ಓದಿದ ವಿದ್ಯಾರ್ಥಿಗಳಿಗೆ ಉನ್ನತ ಶಿಕ್ಷಣ, ಉದ್ಯೋಗದಲ್ಲಿ ಶೇ.7.5 ಮೀಸಲಾತಿ

## ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಘೋಷಣೆ




**ಕೂಡ್ಲಿಗಿ (ವಿಜಯನಗರ), ಸೆ.5:** ಗ್ರಾಮೀಣ ಹಾಗೂ ಬಡ ವಿದ್ಯಾರ್ಥಿಗಳ ಉನ್ನತ ಶಿಕ್ಷಣದ ಕನಸಿಗೆ ಬಲ ತುಂಬುವ ನಿಟ್ಟಿನಲ್ಲಿ ಸರ್ಕಾರಿ ಶಾಲಾ ವಿದ್ಯಾರ್ಥಿಗಳಿಗೆ ಶಿಕ್ಷಣ ಹಾಗೂ ಉದ್ಯೋಗದಲ್ಲಿ ಶೇಕಡಾ 7.5ರಷ್ಟು ಮೀಸಲಾತಿ ಕಲ್ಪಿಸುವುದಾಗಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಘೋಷಿಸಿದ್ದಾರೆ.

ವಿಜಯನಗರ ಜಿಲ್ಲೆಯ ಕೂಡ್ಲಿಗಿಯಲ್ಲಿ, ಪ್ರಜಾಸೇವಾ ಅಭಿಯಾನಕ್ಕೆ ಚಾಲನೆ ನೀಡಿ ಮಾತನಾಡಿದ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಹಳ್ಳಿಗಳಲ್ಲಿರುವ ಸರ್ಕಾರಿ ಶಾಲೆಗಳಲ್ಲಿ ಓದುತ್ತಿರುವ ಮಕ್ಕಳಿಗೆ ಶೇ.7.5 ರಷ್ಟು ಮೀಸಲಾತಿ ನೀಡಲು ಸರ್ಕಾರ ಮುಂದಾಗಿದೆ. ಗ್ರಾಮೀಣ ಪ್ರದೇಶದ ಬಡ ಹಾಗೂ ಸಾಮಾನ್ಯ ಕುಟುಂಬಗಳ ಮಕ್ಕಳಿಗೆ ಉನ್ನತ ವ್ಯಾಸಂಗ ಮತ್ತು ಅವಕಾಶಗಳಲ್ಲಿ ನೆರವಾಗುವ ನಿಟ್ಟಿನಲ್ಲಿ ಈ ಕ್ರಮ ಕೈಗೊಳ್ಳಲಾಗುತ್ತಿದ್ದು, ಈ ಕುರಿತ ಸಂಪೂರ್ಣ ನಿಯಮಾವಳಿ ಮತ್ತು ಮಾಹಿತಿಯನ್ನು ಮುಂದಿನ ದಿನಗಳಲ್ಲಿ ಅಧಿಕೃತವಾಗಿ ಪ್ರಕಟಿಸಲಾಗುವುದು ಎಂದು ಅವರು ಸ್ಪಷ್ಟಪಡಿಸಿದ್ದಾರೆ.

ಏತನ್ಮಧ್ಯೆ, ಗ್ರಾಮೀಣ ಪ್ರದೇಶದಲ್ಲಿ 1 ರಿಂದ 10ನೇ ತರಗತಿವರೆಗೆ ಓದಿದ ವಿದ್ಯಾರ್ಥಿಗಳಿಗೆ ಪ್ರಸ್ತುತ ಕರ್ನಾಟಕ ರಾಜ್ಯ ನಾಗರಿಕ ಸೇವೆಗಳ ನೇರ ನೇಮಕಾತಿಯಲ್ಲಿ ಗ್ರಾಮೀಣ ಅಭ್ಯರ್ಥಿಗಳಿಗೆ ಎಲ್ಲಾ ಗ್ರೂಪ್ ಹುದ್ದೆಗಳಲ್ಲಿ 25% ಮೀಸಲಾತಿ ಹಾಗೂ ವೃತ್ತಿಪರ ಕೋರ್ಸ್‌ಗಳ ಪ್ರವೇಶಕ್ಕಾಗಿ 15% ಮೀಸಲಾತಿ ನಿಗದಿಪಡಿಸಲಾಗಿದೆ.

# ಪ್ರಜಾಸೇವಾ ಆಂದೋಲನ ಇಡೀ ದೇಶಕ್ಕೆ ಮಾದರಿ

**ಬಳ್ಳಾರಿ ಸೆ 05.** ರಾಜ್ಯದಲ್ಲಿ ಜನರ ಮನೆ ಬಾಗಿಲಿಗೆ ಸರ್ಕಾರದ ಸೇವೆಯನ್ನು ತಲುಪಿಸುವ ಮೂಲಕ ಸಾರ್ವಜನಿಕರ ಸಮಸ್ಯೆಗಳಿಗೆ ಕಾಲಮಿತಿಯಲ್ಲಿ ಸ್ಥಳೀಯವಾಗಿಯೇ ಪರಿಹಾರ ಕಂಡುಕೊಳ್ಳುವ ನಿಟ್ಟಿನಲ್ಲಿ ತ್ವರಿತವಾಗಿ ಸ್ಪಂದಿಸುವ ಪರಿಕಲ್ಪನೆಯೊಂದಿಗೆ ಚಾಲನೆ ನೀಡಲಾಗಿರುವ ಪ್ರಜಾಸೇವಾ ಆಂದೋಲನ ಸಭೆ ಇಡೀ ದೇಶಕ್ಕೆ ಮಾದರಿಯಾಗಲಿದೆ ಎಂದು ಬಳ್ಳಾರಿ ಗ್ರಾಮೀಣ ಶಾಸಕ ಬಿ.ನಾಗೇಂದ್ರ ಹಾಗೂ ನಗರ ಶಾಸಕ ನಾರಾ ಭರತ್‌ರೆಡ್ಡಿ ಶ್ಲಾಘಿಸಿದರು.

ಬಳ್ಳಾರಿ ನಗರದ ಮುನ್ಸಿಪಲ್ ಮೈದಾನದಲ್ಲಿ ಶನಿವಾರ ಆಯೋಜಿಸಲಾಗಿದ್ದ ಪ್ರಜಾಸೇವಾ ಆಂದೋಲನ ಸಭೆಗೆ ಚಾಲನೆ ನೀಡುವ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು.

ಶಾಸಕ ಬಿ. ನಾಗೇಂದ್ರ ಅವರು ಮಾತನಾಡಿ, ಸಾರ್ವಜನಿಕರು ತಮ್ಮ ಸಣ್ಣಪುಟ್ಟ ಸಮಸ್ಯೆಗಳನ್ನು ಪರಿಹರಿಸಿಕೊಳ್ಳಲು ಜಿಲ್ಲಾ ಕೇಂದ್ರ ಹಾಗೂ ರಾಜಧಾನಿಗೆ ಅಲೆದಾಡುವ ಹಾಗೂ ತಮ್ಮ ಸರ್ಕಾರಿ ಕೆಲಸಗಳಿಗಾಗಿ ಸರ್ಕಾರಿ ಕಚೇರಿಗಳು ಹಾಗೂ ಅಧಿಕಾರಿಗಳ ಬಳಿ ಪದೇ ಪದೇ ಅಲೆದಾಡುವ ಕಾಲ ಈಗ ಮುಗಿದಿದೆ. ಸರ್ಕಾರವೇ ನೇರವಾಗಿ ಜನರ ಮನೆಬಾಗಿಲಿಗೆ ತಲುಪಬೇಕು. ಸ್ಥಳೀಯ ಸಮಸ್ಯೆಗಳನ್ನು ಸ್ಥಳೀಯವಾಗಿಯೇ ನಿಗದಿತ ಕಾಲಮಿತಿಯಲ್ಲಿ ಕಾನೂನಿನ ಚೌಕಟ್ಟಿನೊಳಗೆ



ಪರಿಹರಿಸಬೇಕು ಎನ್ನುವ ಸದುದ್ದೇಶದೊಂದಿಗೆ ಈ ಕಾರ್ಯಕ್ರಮವನ್ನು ರೂಪಿಸಲಾಗಿದೆ. ಇದು ಈಗಿನ ಮುಖ್ಯಮಂತ್ರಿಗಳಾದ ಡಿ.ಕೆ. ಶಿವಕುಮಾರ್ ಅವರ ಕನಸಿನ ಕೂಸು. ಇದಕ್ಕಾಗಿಯೇ ಪ್ರತ್ಯೇಕ ಇಲಾಖೆ ಹಾಗೂ ಸಚಿವಾಲಯವನ್ನು ಪ್ರಾರಂಭಿಸಿ, ಅಗತ್ಯ ಹುದ್ದೆಗಳನ್ನು ಕೂಡ ಭರ್ತಿ ಮಾಡಿ, ಇಂದಿನಿಂದಲೇ ಕಾರ್ಯರೂಪಕ್ಕೆ ತಂದಿದ್ದಾರೆ. ರಾಜ್ಯದ ಕಟ್ಟಕಡೆಯ ಗ್ರಾಮದಲ್ಲಿರುವ ಜನರಿಗೂ ಸರ್ಕಾರದ ಸೇವೆಗಳು ತಲುಪಬೇಕು ಎಂಬ ಉದ್ದೇಶದಿಂದ, ಜನರಿಗೆ ಉತ್ತಮ ಆಡಳಿತ ಕೊಡಲು ಪ್ರಜಾಸೇವಾ ಆಂದೋಲನದಂತಹ ಅದ್ಭುತ ಕಾರ್ಯಕ್ರಮವನ್ನು ಜಾರಿಗೊಳಿಸಿದ್ದಾರೆ. ಜನರ ಸೇವೆ ಮಾಡಲು ಸಚಿವರು, ಶಾಸಕರು ಹಾಗೂ ಅಧಿಕಾರಿಗಳಿಗೆ ಇದು ಉತ್ತಮ ಅವಕಾಶವಾಗಿದೆ. ಮುಖ್ಯಮಂತ್ರಿಗಳು ದಿನದ 24 ಗಂಟೆಯೂ ಜನರಿಗಾಗಿ ದುಡಿಯುತ್ತಿದ್ದು, ದೂರದೃಷ್ಟಿ ಯೋಜನೆಗಳನ್ನು ಹಾಕಿಕೊಂಡು ಜನರ ಮನೆಯ ಮಗನಂತೆ ಕೆಲಸ ಮಾಡುತ್ತಿದ್ದಾರೆ. ತಿಂಗಳಿನಲ್ಲಿ ಪ್ರತಿ ಶನಿವಾರದಂದು ಅಧಿಕಾರಿಗಳು,

ನಿಗದಿತ ಸ್ಥಳಕ್ಕೆ ಭೇಟಿ ನೀಡಿ ಸಾರ್ವಜನಿಕರ ಸಮಸ್ಯೆಗಳನ್ನು ಆಲಿಸಲಿದ್ದಾರೆ. ಪಿಂಚಣಿ, ಭೂಮಿ ವ್ಯಾಜ್ಯ, ಮನೆ, ನಿವೇಶನ, ಪಂಚ ಗ್ಯಾರಂಟಿ ಯೋಜನೆಗಳು, ಸರ್ಕಾರದ ಸೌಲಭ್ಯಗಳು, ಖಾತೆ ಬದಲಾವಣೆ ಮುಂತಾದ ಸಮಸ್ಯೆಗಳಿಗೆ ಸಂಬಂಧಿಸಿದ ಸಾರ್ವಜನಿಕರ ಅರ್ಜಿಗಳನ್ನು ಪರಿಶೀಲಿಸಿ ನಿಗದಿತ ಕಾಲಮಿತಿಯೊಳಗೆ ಪರಿಹಾರ ಒದಗಿಸಲಾಗುವುದು. ಅರ್ಜಿ ತಿರಸ್ಕೃತಗೊಂಡರೆ ಅದಕ್ಕೆ ಕಾರಣವನ್ನು ಸ್ಪಷ್ಟಪಡಿಸಲಾಗುವುದು. ಅರ್ಜಿದಾರರಿಗೆ ಸಂಪೂರ್ಣ ಪರಿಹಾರ ಸಿಗುವವರೆಗೂ ಸರ್ಕಾರ ಅರ್ಜಿದಾರರ ಬೆನ್ನಿಗೆ ನಿಲ್ಲಲಿದೆ ಎಂದರು. ಸಾರ್ವಜನಿಕರು 1902 ಸಂಖ್ಯೆಗೆ ಕರೆ ಮಾಡುವ ಮೂಲಕ ಅಥವಾ ಐಪಿಜಿಆರ್‌ಎಸ್ ಪೋರ್ಟಲ್ ಮೂಲಕ ತಮ್ಮ ಸಮಸ್ಯೆಗಳನ್ನು ದಾಖಲಿಸಿ ಪರಿಹಾರ ಪಡೆಯಬಹುದಾಗಿದೆ ಎಂದರು.

# ಉದ್ಯಾನವನ ತಿದ್ದುಪಡಿ ಮಸೂದೆಗೆ ರಾಜ್ಯಪಾಲ ಗೆಹ್ಲೋತ್ ಆಕ್ಷೇಪ ಸ್ಪಷ್ಟನೆ ಕೋರಿ ಸರ್ಕಾರಕ್ಕೆ ವಾಪಸ್



**ಬೆಂಗಳೂರು, ಸೆ.5:** ಕರ್ನಾಟಕ ಸರ್ಕಾರದ ಉದ್ಯಾನವನಗಳ ಸಂರಕ್ಷಣೆ ತಿದ್ದುಪಡಿ ಮಸೂದೆ, 2026ಕ್ಕೆ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋತ್ ಅವರು ಆಕ್ಷೇಪ ವ್ಯಕ್ತಪಡಿಸಿದ್ದು, ಮಸೂದೆಗೆ ಸಂಬಂಧಿಸಿದಂತೆ ಸ್ಪಷ್ಟನೆ ಕೋರಿ ಸರ್ಕಾರಕ್ಕೆ ವಾಪಸ್ ಕಳುಹಿಸಿದ್ದಾರೆ ಎಂದು ಮೂಲಗಳು ತಿಳಿಸಿವೆ.

ರಾಜ್ಯಪಾಲರ ಒಪ್ಪಿಗೆಗಾಗಿ ಲೋಕ ಭವನಕ್ಕೆ ಕಳುಹಿಸಲಾಗಿದ್ದ ಮಸೂದೆ ಕುರಿತು ರಾಜ್ಯಪಾಲರು ಕಳವಳ ವ್ಯಕ್ತಪಡಿಸಿದ್ದಾರೆಂದು ತಿಳಿದು ಬಂದಿದೆ. ಈ ನಡುವೆ ಜನರಿಂದ ತೀವ್ರ ವಿರೋಧ ವ್ಯಕ್ತವಾದ ಹಿನ್ನೆಲೆಯಲ್ಲಿ ಸರ್ಕಾರ ಗುರುವಾರ ಮಸೂದೆಯನ್ನು ಹಿಂಪಡೆಯಲು ನಿರ್ಧರಿಸಿತ್ತು. ಜನರ ಆಕ್ಷೇಪಗಳನ್ನು ಪರಿಗಣಿಸಿ ಮಸೂದೆಯನ್ನು ಪರಿಷ್ಕರಿಸಿ ಮತ್ತೆ ಮಂಡಿಸಲು ಸರ್ಕಾರ ಮುಂದಾಗಿದೆ. ಇದೀಗ ಶುಕ್ರವಾರ ಲೋಕಭವನವು ಮಸೂದೆಯನ್ನು ಸರ್ಕಾರಕ್ಕೆ ಹಿಂದಿರುಗಿಸಿ, ಕೆಲವು ವಿಚಾರಗಳ ಕುರಿತು ಸ್ಪಷ್ಟನೆ ಕೇಳಿದೆ ಎಂದು ಮೂಲಗಳು ತಿಳಿಸಿವೆ. ರಾಜ್ಯ ಸರ್ಕಾರಕ್ಕೆ ಕಳುಹಿಸಿರುವ ಸಂವಹನದಲ್ಲಿ, ಮಸೂದೆಯ ಪ್ರಸ್ತುತ ರೂಪವು ಪರಿಸರದ ದೃಷ್ಟಿಯಿಂದ ಮಹತ್ವದ ಸಾರ್ವಜನಿಕ ಆಸ್ತಿಗಳನ್ನು ಸಮುದಾಯದ ಹಿತಕ್ಕಾಗಿ ಸಂರಕ್ಷಿಸ ಬೇಕೆಂಬ ಮೂಲ ತತ್ವದಿಂದ ಆತಂಕಕಾರಿ ರೀತಿಯಲ್ಲಿ ದೂರ ಸರಿದಿದೆ ಎಂದು ಲೋಕಭವನ ಅಭಿಪ್ರಾಯಪಟ್ಟಿದೆ.

ರಾಜ್ಯದ ಹಸಿರು ಪ್ರದೇಶಗಳ ಸಂರಕ್ಷಕ ಸರ್ಕಾರವೇ ಆಗಿದ್ದು, ಇಂತಹ ಪ್ರದೇಶಗಳನ್ನು ರಕ್ಷಿಸುವುದು ಸರ್ಕಾರದ ಕರ್ತವ್ಯವಾಗಿದೆ. ಸಂರಕ್ಷಕತ್ವವನ್ನು ಸಾರ್ವಜನಿಕ ಆಸ್ತಿಯನ್ನು ಪರಭಾರೆ ಮಾಡಲು ನೀಡುವ ಅನುಮತಿಯಾಗಿ ಪರಿವರ್ತಿಸಲು ಸಾಧ್ಯವಿಲ್ಲ.

ಅಭಿವೃದ್ಧಿ ಎಂದರೆ ಸರ್ಕಾರದ ನಿಯಂತ್ರಣದಲ್ಲಿವೆ ಎಂಬ ಕಾರಣಕ್ಕೆ ಮರುಪಡೆಯಲು ಸಾಧ್ಯವಾಗದ ಸಾರ್ವಜನಿಕ ಆಸ್ತಿಗಳನ್ನು ಹಂತಹಂತವಾಗಿ ಬಿಟ್ಟುಕೊಡುವುದಲ್ಲ. ಇಂತಹ ಅಮೂಲ್ಯ ಸಾರ್ವಜನಿಕ ಸಂಪನ್ಮೂಲಗಳನ್ನು ಸಂರಕ್ಷಿಸುವ ಅಗತ್ಯವಿದೆ ಎಂದು ಲೋಕಭವನ ಸ್ಪಷ್ಟಪಡಿಸಿದೆ ಎಂದು ತಿಳಿದುಬಂದಿದೆ.

# ಬೆಂಗಳೂರು ಮೆಡಿಕಲ್ ಕಾಲೇಜಿನಲ್ಲಿ ಶಿಕ್ಷಕರ ಅರ್ಥಪೂರ್ಣ ದಿನಾಚರಣೆ




**ಬೆಂಗಳೂರು, ಸೆ.5:** ಸಮಾರಂಭದ ಮುಖ್ಯ ಅತಿಥಿಗಳಾಗಿ ಕರ್ನಾಟಕ ಸರ್ಕಾರದ ಹಣಕಾಸು ಇಲಾಖೆಯ ಮಾಜಿ ಮುಖ್ಯ ಕಾರ್ಯದರ್ಶಿ ಎಂ.ಆರ್.ಶ್ರೀನಿವಾಸಮೂರ್ತಿ ಭಾಗವಹಿಸಿದ್ದರು. ಒಂದು ಕಾಲದಲ್ಲಿ ಕರ್ನಾಟಕ ರಾಜ್ಯ ಉನ್ನತ ಶಿಕ್ಷಣಕ್ಕೆ ಹೆಸರಾಗಿತ್ತು. ಮೈಸೂರು ಮಹಾರಾಜರ ಕಾಲದಲ್ಲಿ Indian Institute of Science ಸ್ಥಾಪನೆಯಾಗಿತ್ತು. ತದನಂತರ ಸಾಲು ಸಾಲು Engg and Medical College ಗಳು ಪ್ರಾರಂಭವಾದವು. ಕಾಲೇಜುಗಳ ಸಂಖ್ಯೆ ಹೆಚ್ಚಿದಂತೆ ಶಿಕ್ಷಣದ ಗುಣಮಟ್ಟ ಕಡಿಮೆಯಾಗಲು ತೊಡಗಿತು. ಬಹುತೇಕ ವಿಶ್ವವಿದ್ಯಾಲಯಗಳಲ್ಲಿ ಪ್ರಾಧ್ಯಾಪಕರ ಕೊರತೆ ಎದ್ದು ಕಾಣುತ್ತಿದೆ. ಹಾಗಾಗಿ ವಿಶ್ರಾಂತ ಕುಲಪತಿಗಳ ವೇದಿಕೆ ಉನ್ನತ ಶಿಕ್ಷಣದ ಮೌಲ್ಯದ ಬಗ್ಗೆ ಸರ್ಕಾರಕ್ಕೆ ಮನವರಿಕೆ ಮಾಡಿ ಕೊಡಬೇಕು. ವಿಶ್ರಾಂತ ಕುಲಪತಿಗಳ ವೇದಿಕೆಯಲ್ಲಿ 110 ವಿಶ್ರಾಂತ ಕುಲಪತಿಗಳು ಸದಸ್ಯತ್ವ ಪಡೆದಿದ್ದಾರೆ. ಇದೊಂದು ದೊಡ್ಡ Pool of Talent. ಇವರ ಸೇವೆಯನ್ನು ಸರ್ಕಾರ ಕೂಡ ಸದ್ಬಳಕೆ ಮಾಡಿಕೊಳ್ಳಬೇಕು ಎಂದು ಅವರು ಮಾತನಾಡಿದರು.

ಇದೇ ಸಂದರ್ಭದಲ್ಲಿ ಮೂವರು ವಿಶ್ರಾಂತ ಕುಲಪತಿಗಳಿಗೆ ಜೀವಮಾನ ಸಾಧನೆ ಪ್ರಶಸ್ತಿಗಳನ್ನು ನೀಡಿ ಸನ್ಮಾನಿಸಲಾಯಿತು.

1. ಡಾ. ಆರ್. ಚಂದ್ರಶೇಖರ್, ವಿಶ್ರಾಂತ ಕುಲಪತಿಗಳು, ರಾಜೀವ್ ಗಾಂಧಿ ಆರೋಗ್ಯ ವಿಶ್ವವಿದ್ಯಾಲಯ, ಬೆಂಗಳೂರು.

2. ಡಾ. ಬಿ.ಹನುಮಯ್ಯ ವಿಶ್ರಾಂತ ಕುಲಪತಿಗಳು, ಮಂಗಳೂರು ವಿಶ್ವವಿದ್ಯಾಲಯ, ಮಂಗಳೂರು.

3. ಡಾ. ಎಸ್. ಬಿ. ದಂಡಿನ್, ವಿಶ್ರಾಂತ ಕುಲಪತಿಗಳು, ತೋಟಗಾರಿಕೆ ವಿಶ್ವವಿದ್ಯಾಲಯ, ಬಾಗಲಕೋಟೆ.

ಈ ಸಮಾರಂಭದ ಅಧ್ಯಕ್ಷತೆಯನ್ನು ವಿಶ್ರಾಂತ ಕುಲಪತಿಗಳ ವೇದಿಕೆಯ ಅಧ್ಯಕ್ಷ ಡಾ.ಎಸ್. ಚಂದ್ರಶೇಖರ ಶೆಟ್ಟಿಯವರು ವಹಿಸಿದ್ದರು. ವೇದಿಕೆಯ ಕಾರ್ಯದರ್ಶಿ ಡಾ. ಎಚ್. ಮಹೇಶಪ್ಪನವರು ಸ್ವಾಗತ ಭಾಷಣ ಮಾಡಿದರು. ವೇದಿಕೆಯ ಖಜಾಂಚಿ ಡಾ.ಸಚ್ಚಿದಾನಂದ ವಂದಿಸಿದರು.

Chief reporter : SANDEEP RENU 99728 72151 | Executive Editor : SHARAT JYOTSNA B.R 9886766483 vaarthe@gmail.com

Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20

Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

# ನಾನು ನಿಮ್ಮ ವಿದ್ಯಾರ್ಥಿಯಾಗಿದ್ದರೆ ಉತ್ತಮ ವಾಗ್ಮಿಯಾಗಲು ಏನು ಮಾಡಬೇಕು: ಶಿಕ್ಷಕಿಯನ್ನೇ ಕೇಳಿದ ಪ್ರಧಾನಿ ಮೋದಿ

**ನವದೆಹಲಿ, ಸೆ.5:** ಉತ್ತಮ ವಾಗ್ಮಿಯಾಗಲು ಏನು ಮಾಡಬೇಕು ಎಂಬ ಬಗ್ಗೆ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ರಾಷ್ಟ್ರೀಯ ಶಿಕ್ಷಕ ಪ್ರಶಸ್ತಿ ಪುರಸ್ಕೃತ ಶಿಕ್ಷಕಿಯಿಂದಲೇ ಸಲಹೆ ಪಡೆದ ಪ್ರಸಂಗ ಗಮನ ಸೆಳೆಯಿತು.

ಶಿಕ್ಷಕರ ದಿನದ ಅಂಗವಾಗಿ ನವದೆಹಲಿಯಲ್ಲಿ ರಾಷ್ಟ್ರೀಯ ಪ್ರಶಸ್ತಿ ಪಡೆದ ಶಿಕ್ಷಕರೊಂದಿಗೆ ಪ್ರಧಾನಿ ಮೋದಿ ಸಂವಾದ ನಡೆಸಿದರು. ಈ ವೇಳೆ ತಮ್ಮನ್ನು ವಿದ್ಯಾರ್ಥಿಯಂತೆ ಪರಿಗಣಿಸಿಕೊಂಡು, ನಾನು ನಿಮ್ಮ ವಿದ್ಯಾರ್ಥಿಯಾಗಿದ್ದರೆ ಉತ್ತಮ ವಾಗ್ಮಿಯಾಗಲು ಏನು ಮಾಡಬೇಕು ಎಂದು ಶಿಕ್ಷಕಿಗೆ ಪ್ರಶ್ನಿಸಿದರು.

ಇದಕ್ಕೆ ಪ್ರತಿಕ್ರಿಯಿಸಿದ ಶಿಕ್ಷಕಿ, ಮೊದಲಿಗೆ ಆತ್ಮವಿಶ್ವಾಸ ಇರಬೇಕು. ನಿರಂತರ ಅಭ್ಯಾಸದಿಂದ ಆತ್ಮವಿಶ್ವಾಸ ಮತ್ತಷ್ಟು ಹೆಚ್ಚುತ್ತದೆ ಎಂದು ಸಲಹೆ ನೀಡಿದರು. ಪ್ರಧಾನಿಯವರ ಸಮ್ಮುಖದಲ್ಲಿ ಮಾತನಾಡುವಾಗ ತಮಗೇ ಆತ್ಮವಿಶ್ವಾಸ ಕಡಿಮೆಯಾದಂತಾಗಿದೆ ಎಂದು ಶಿಕ್ಷಕಿ ಹಾಸ್ಯಭರಿತವಾಗಿ ಹೇಳಿದಾಗ ಸಭೆಯಲ್ಲಿ ನಗೆ ಮೂಡಿತು. ಶಿಕ್ಷಕಿಯ ಮಾತಿಗೆ ಮೋದಿ ಅವರೂ ನಕ್ಕರು.

**ಮಕ್ಕಳಲ್ಲಿ ಹೆಚ್ಚುತ್ತಿರುವ ಸ್ಕ್ರೀನ್ ಟೈಮ್ ಬಗ್ಗೆ ಕಳವಳ:** ಶಿಕ್ಷಕರೊಂದಿಗೆ ನಡೆದ ಚರ್ಚೆಯಲ್ಲಿ ಮಕ್ಕಳ ಹೆಚ್ಚುತ್ತಿರುವ ಸ್ಕ್ರೀನ್‌ಟೈಮ್ ಬಗ್ಗೆಯೂ ಪ್ರಧಾನಿ ಮೋದಿ ಕಳವಳ ವ್ಯಕ್ತಪಡಿಸಿದರು. ಮೊಬೈಲ್, ಕಂಪ್ಯೂಟರ್ ಹಾಗೂ ಇತರ ಡಿಜಿಟಲ್ ಸಾಧನಗಳ ಮುಂದೆ ಮಕ್ಕಳು ಹೆಚ್ಚು ಸಮಯ ಕಳೆಯುತ್ತಿರುವುದು ಒಂದು ರೀತಿಯ ಚಟವಾಗಿ ಪರಿಣಮಿಸುತ್ತಿದೆ ಎಂದು ಅವರು ಹೇಳಿದರು. ಮಕ್ಕಳನ್ನು ಸ್ಕ್ರೀನ್‌ನಿಂದ ದೂರವಿಡಲು ಅವರನ್ನು ಹೊರಾಂಗಣ ಕ್ರೀಡೆಗಳತ್ತ ಹೆಚ್ಚು ಸೆಳೆಯಬೇಕು ಎಂದು ಸಲಹೆ ನೀಡಿದರು.

ಇಲ್ಲಿ ಕ್ರೀಡೆ ಎಂದರೆ ವಿಡಿಯೊ ಗೇಮ್‌ಗಳಲ್ಲ, ಬದಲಿಗೆ ಮಕ್ಕಳು ಮೈದಾನಕ್ಕೆ ತೆರಳಿ ಆಡುವ ಕ್ರೀಡೆಗಳು ಎಂದು ಮೋದಿ ಸ್ಪಷ್ಟಪಡಿಸಿದರು. ಆಟವಾಡುವ ಅಭ್ಯಾಸವು ಮಕ್ಕಳ ದೈಹಿಕ ಆರೋಗ್ಯದ ಜೊತೆಗೆ ಸಾಮಾಜಿಕ ಮತ್ತು ಮಾನಸಿಕ ಬೆಳವಣಿಗೆಗೂ ಸಹಕಾರಿಯಾಗುತ್ತದೆ ಎಂಬ ಸಂದೇಶವನ್ನು ಅವರು ನೀಡಿದರು.

**ಸೃಜನಶೀಲ ಚಟುವಟಿಕೆಗಳಿಗೆ ಉತ್ತೇಜನ**

ಮಕ್ಕಳ ಗಮನವನ್ನು ಮೊಬೈಲ್ ಮತ್ತು ಇತರ ಪರದೆಗಳಿಂದ ಬೇರೆಡೆ ಸೆಳೆಯಲು ಅವರನ್ನು ವಿವಿಧ ಸೃಜನಶೀಲ ಚಟುವಟಿಕೆಗಳಲ್ಲಿ ತೊಡಗಿಸಬೇಕು ಎಂದು ಮೋದಿ ಹೇಳಿದರು. ಚಿತ್ರಕಲೆ, ಸೃಜನಾತ್ಮಕ ಕಾರ್ಯಕ್ರಮಗಳು ಹಾಗೂ ಇತರ ಚಟುವಟಿಕೆಗಳ ಮೂಲಕ ಮಕ್ಕಳ ಕಲ್ಪನಾ ಶಕ್ತಿಯನ್ನು ಬೆಳೆಸಬಹುದು. ಇಂತಹ ಚಟುವಟಿಕೆಗಳನ್ನು ಕೇವಲ ಶಾಲಾ ಕಾರ್ಯಕ್ರಮಗಳಿಗೆ ಸೀಮಿತಗೊಳಿಸದೆ, ಮಕ್ಕಳ ಜೀವನದ ಭಾಗವಾಗಿಸುವ ಅಗತ್ಯವಿದೆ ಎಂದು ಅವರು ಅಭಿಪ್ರಾಯಪಟ್ಟರು.



**ವಿದ್ಯಾರ್ಥಿಗಳಲ್ಲಿ ನಶೆ ತಡೆಯಲು ಶಿಕ್ಷಕರ ಪಾತ್ರ:** ಯುವಜನರಲ್ಲಿ ಹೆಚ್ಚುತ್ತಿರುವ ನಶೆಯ ಅಪಾಯದ ಬಗ್ಗೆಯೂ ಪ್ರಧಾನಿ ಮೋದಿ ಶಿಕ್ಷಕರ ಗಮನ ಸೆಳೆದರು.

ವಿದ್ಯಾರ್ಥಿಗಳಿಗೆ ಮಾದಕ ವಸ್ತುಗಳ ದುಷ್ಪರಿಣಾಮಗಳ ಬಗ್ಗೆ ನಿರಂತರವಾಗಿ ಜಾಗೃತಿ ಮೂಡಿಸಬೇಕು ಎಂದು ಅವರು ಶಿಕ್ಷಕರಿಗೆ ಮನವಿ ಮಾಡಿದರು. ದೊಡ್ಡ ನಗರಗಳು ಹಾಗೂ ವಿಶ್ವವಿದ್ಯಾಲಯಗಳಲ್ಲಿ ಒಬ್ಬ ವಿದ್ಯಾರ್ಥಿ ಯಾವ ರೀತಿಯಲ್ಲಿ ನಶೆಯತ್ತ ಆಕರ್ಷಿತನಾಗುತ್ತಾನೆ ಎಂಬುದನ್ನು ಗುರುತಿಸುವುದು ಕೆಲವೊಮ್ಮೆ ಕಷ್ಟವಾಗುತ್ತದೆ. ಹೀಗಾಗಿ ಶಿಕ್ಷಕರು ಮಕ್ಕಳೊಂದಿಗೆ ನಿರಂತರ ಸಂಪರ್ಕದಲ್ಲಿರಬೇಕು ಎಂದರು.

ವಿದ್ಯಾರ್ಥಿಗಳ ವರ್ತನೆಯಲ್ಲಿ ಕಂಡುಬರುವ ಸಣ್ಣಪುಟ್ಟ ಬದಲಾವಣೆಗಳನ್ನೂ ಗಮನಿಸುವುದು ಮುಖ್ಯ. ಆರಂಭದಲ್ಲೇ ಸಮಸ್ಯೆಯನ್ನು ಗುರುತಿಸಿದರೆ ಕ್ರಮ ಕೈಗೊಳ್ಳಲು ಸಾಧ್ಯವಾಗುತ್ತದೆ ಎಂದು ಪ್ರಧಾನಿ ಹೇಳಿದರು.

**ಶಿಕ್ಷಕರು ಪುಸ್ತಕಕ್ಕೆ ಸೀಮಿತವಾಗಬಾರದು**

ಶಿಕ್ಷಕರ ಜವಾಬ್ದಾರಿ ಕೇವಲ ಪಠ್ಯಪುಸ್ತಕ ಮತ್ತು ಪಠ್ಯಕ್ರಮ ಬೋಧಿಸುವುದಕ್ಕೆ ಸೀಮಿತವಾಗಬಾರದು ಎಂಬುದನ್ನು ಮೋದಿ ಒತ್ತಿ ಹೇಳಿದರು. ಮಕ್ಕಳ ಜೀವನ, ಅವರ ಆಸಕ್ತಿಗಳು, ಸಮಸ್ಯೆಗಳು ಮತ್ತು ನಡವಳಿಕೆಯೊಂದಿಗೆ ಶಿಕ್ಷಕರು ನಿಕಟವಾಗಿ ಸಂಪರ್ಕ ಹೊಂದಬೇಕು. ವಿದ್ಯಾರ್ಥಿಯೊಬ್ಬನಿಗೆ ಪಾಠ ಹೇಳುವುದಕ್ಕಿಂತ ಆತನನ್ನು ಅರ್ಥಮಾಡಿಕೊಳ್ಳುವುದು ಕೂಡ ಶಿಕ್ಷಕರ ಪ್ರಮುಖ ಕರ್ತವ್ಯವಾಗಿದೆ ಎಂದು ಅವರು ಸೂಚಿಸಿದರು. ಮಕ್ಕಳ ವರ್ತನೆಯಲ್ಲಿ ಬದಲಾವಣೆ ಕಂಡುಬಂದರೆ ಅದರ ಹಿಂದಿನ ಕಾರಣವನ್ನು ತಿಳಿದುಕೊಳ್ಳುವ ಪ್ರಯತ್ನ ಮಾಡಬೇಕು. ಶಿಕ್ಷಕರು ಮಕ್ಕಳಿಗೆ ಮಾರ್ಗದರ್ಶಕರಾಗಿಯೂ, ಅಗತ್ಯವಿದ್ದಾಗ ಆಪ್ತರಂತೆ ಬೆಂಬಲ ನೀಡುವವರಾಗಿಯೂ ಇರಬೇಕು ಎಂಬ ಸಂದೇಶವನ್ನು ಅವರು ನೀಡಿದರು.

**ಮಕ್ಕಳ ಬಾಲ್ಯವನ್ನು ಕಸಿದುಕೊಳ್ಳಬೇಡಿ**

ಮಕ್ಕಳ ಬಾಲ್ಯವನ್ನು ಉಳಿಸುವ ಮಹತ್ವದ ಜವಾಬ್ದಾರಿ ಶಿಕ್ಷಕರು ಮತ್ತು ಸಮಾಜದ ಮೇಲಿದೆ ಎಂದು ಪ್ರಧಾನಿ ಮೋದಿ ಹೇಳಿದರು. ಇಂದಿನ ಸ್ಪರ್ಧಾತ್ಮಕ ವಾತಾವರಣದಲ್ಲಿ ಮಕ್ಕಳ ಮೇಲೆ ಶೈಕ್ಷಣಿಕ ಹಾಗೂ ಇತರ ಒತ್ತಡ ಹೆಚ್ಚುತ್ತಿದೆ. ಇಂತಹ ಸಂದರ್ಭದಲ್ಲಿ ಮಕ್ಕಳ ಸಹಜ ಕುತೂಹಲ, ಆಟ, ಸೃಜನಶೀಲತೆ ಮತ್ತು ಸಂತೋಷಕ್ಕೆ ಅವಕಾಶ ಕಲ್ಪಿಸಬೇಕು. ಮಕ್ಕಳ ಬಾಲ್ಯ ಕಳೆದುಹೋಗದಂತೆ ನೋಡಿಕೊಳ್ಳುವುದು ಮುಖ್ಯ ಎಂದು ಮೋದಿ ಹೇಳಿದರು.

**ಡ್ರೆಸ್‌ಕೋಡ್ ವಿಚಾರವೂ ಪ್ರಸ್ತಾಪ**

ಕೆಲವು ದೊಡ್ಡ ನಗರಗಳು ಹಾಗೂ ವಿಶ್ವವಿದ್ಯಾಲಯಗಳಲ್ಲಿ ಚರ್ಚೆಗೆ ಕಾರಣವಾಗಿರುವ ಡ್ರೆಸ್‌ಕೋಡ್ ವಿಚಾರವನ್ನೂ ಪ್ರಧಾನಿ ಪ್ರಸ್ತಾಪಿಸಿದರು. ಯಾವುದೇ ನಿಯಮವನ್ನು ಜಾರಿಗೆ ತರುವ ಮುನ್ನ ಅದರ ಬಗ್ಗೆ ವಿದ್ಯಾರ್ಥಿಗಳಿಗೆ ಸಮರ್ಪಕವಾಗಿ ತಿಳಿಸಬೇಕು. ನಿಯಮದ ಉದ್ದೇಶ ಏನು, ಅದರಿಂದ ವಿದ್ಯಾರ್ಥಿಗಳ ಮೇಲೆ ಯಾವ ರೀತಿಯ ಪರಿಣಾಮ ಉಂಟಾಗಬಹುದು ಎಂಬುದನ್ನು ಅರ್ಥಮಾಡಿಕೊಳ್ಳುವುದು ಅಗತ್ಯ ಎಂದು ಅವರು ಹೇಳಿದರು. ನಿಯಮಗಳನ್ನು ಕೇವಲ ಜಾರಿಗೊಳಿಸುವುದಕ್ಕಿಂತ ಅವುಗಳ ಪರಿಣಾಮವನ್ನು ಗಮನಿಸುವುದು ಮುಖ್ಯ. ವಿದ್ಯಾರ್ಥಿಗಳ ವರ್ತನೆಯಲ್ಲಿ ಬದಲಾವಣೆ ಕಂಡುಬರುತ್ತಿದೆಯೇ ಎಂಬುದನ್ನು ಶಿಕ್ಷಕರು ಗಮನಿಸಬೇಕು ಎಂದು ಮೋದಿ ಸಲಹೆ ನೀಡಿದರು.

**ಕಾಶಿಯ ಸ್ತನ ಕ್ಯಾನ್ಸರ್ ಜಾಗೃತಿ ಅಭಿಯಾನ ಸ್ಮರಣೆ:** ಸಂವಾದದ ವೇಳೆ ಪ್ರಧಾನಿ ಮೋದಿ ಅವರು ಕಾಶಿಯ ಸಂಸದರಾಗಿದ್ದ ಸಂದರ್ಭದಲ್ಲಿ ಆರಂಭಿಸಿದ್ದ ಸ್ತನ ಕ್ಯಾನ್ಸರ್ ಜಾಗೃತಿ ಮತ್ತು ತಪಾಸಣಾ ಅಭಿಯಾನವನ್ನೂ ನೆನಪಿಸಿಕೊಂಡರು. ಮಹಿಳೆಯರಲ್ಲಿ ಆರೋಗ್ಯ ತಪಾಸಣೆಯ ಬಗ್ಗೆ ಹಿಂದೆ ಇದ್ದ ಹಿಂಜರಿಕೆ ಈಗ ಕಡಿಮೆಯಾಗುತ್ತಿದೆ. ಮಹಿಳೆಯರೇ ಸ್ವಯಂಪ್ರೇರಣೆಯಿಂದ ತಪಾಸಣೆಗೆ ಮುಂದೆ ಬರುತ್ತಿರುವುದು ಉತ್ತಮ ಬೆಳವಣಿಗೆ ಎಂದು ಅವರು ಹೇಳಿದರು. ಒಂದೇ ದಿನದಲ್ಲಿ ಅತಿಹೆಚ್ಚು ಮಂದಿಯನ್ನು ತಪಾಸಣೆಗೊಳಪಡಿಸಿದ ವಿಶ್ವದಾಖಲೆಯೂ ಈ ಅಭಿಯಾನಕ್ಕೆ ಸಂಬಂಧಿಸಿದಂತೆ ನಿರ್ಮಾಣವಾಗಿತ್ತು ಎಂದು ಪ್ರಧಾನಿ ಉಲ್ಲೇಖಿಸಿದರು.

# ಇಂದಿರಾಗಾಂಧಿ ಹೆಸರಿನ ಶಾಲೆ ಮುಚ್ಚಲು ಅವಕಾಶ ನೀಡುವುದಿಲ್ಲ: ಸಿಎಂ ಡಿಕೆಶಿ

**ಕೂಡ್ಲಿಗಿ, ಸೆ.5:** ಇಂದಿರಾಗಾಂಧಿ ಹೆಸರಿರುವ ಶಾಲೆ ಮುಚ್ಚಲು ಸರ್ಕಾರ ಅವಕಾಶ ನೀಡುವುದಿಲ್ಲ ಎಂದು ಸಿಎಂ ಡಿ.ಕೆ. ಶಿವಕುಮಾರ್ ಅಭಯ ನೀಡಿದ್ದಾರೆ. ಕೂಡ್ಲಿಗಿಯಲ್ಲಿ ಶನಿವಾರ ನಡೆದ ಪ್ರಜಾಸೇವೆ ಅಭಿಯಾನದ ಮೊದಲ ಕಾರ್ಯಕ್ರಮದ ವೇಳೆ ಮನವಿ ನೀಡಲು ಬಂದಿದ್ದ ಶಿಕ್ಷಕಿಯರು ಮುಖ್ಯಮಂತ್ರಿಯವರ ಕೈಹಿಡಿದು ಭಾವುಕರಾದ ಘಟನೆ ನಡೆಯಿತು.



ಶಾಲೆಯ ಶಿಕ್ಷಕಿಯರಾದ ಶಾಂತಾ, ಜಗನ್ನಾಥೆ, ಭಾರತಿ, ವೆಂಕಟೇಶ್ ಅವರು ಸಿಎಂಗೆ ಮನವಿ ನೀಡಿ, "ಸಿಎಂ ಸಾರ್ ಹಗರಿಬೊಮ್ಮನಹಳ್ಳಿ, ರಾಮನಗರದಲ್ಲಿ ಇಂದಿರಾಗಾಂಧಿ ಅವರ ಹೆಸರಿನಲ್ಲಿ ನಡೆಯುತ್ತಿರುವ ಏಕೈಕ ಅನುದಾನಿತ ಪ್ರೌಢಶಾಲೆ ಇದಾಗಿದೆ. 169 ಬಾಲಕಿಯರು ಓದುತ್ತಿದ್ದಾರೆ" ಎಂದರು. ಸಿಎಂ ಕೂಡಲೇ ಜಿಲ್ಲಾ ಪಂಚಾಯತಿ ಸಿಇಓ ಕರೆದು "ಈ ಶಾಲೆಯ ಉಳಿವಿಗೆ ಏನು ಅಗತ್ಯ ಕ್ರಮ ಕೈಗೊಳ್ಳಬೇಕೋ ಅದನ್ನು ಮಾಡಿ" ಎಂದು ಸೂಚಿಸಿದರು.

ತಾಯವ್ವನಹಳ್ಳಿಯ ಮಂಗಳ ಅವರು, "ಸಾರ್ ನಾವು ಉಳುಮೆ ಮಾಡುತ್ತಿರುವ ಭೂಮಿಗೆ, ವಾಸದಲ್ಲಿ ಇರುವ ಮನೆಗೆ ಹಕ್ಕುಪತ್ರ ಮಾಡಿಸಿಕೊಡಿ. ಎಷ್ಟೋ ವರ್ಷಗಳಿಂದ ನಾವು ವಾಸವಿದ್ದೇವೆ" ಎಂದಾಗ "ಉಳುವವನಿಗೆ ಭೂಮಿ ಕೊಟ್ಟ ಪಕ್ಷ ನಮ್ಮದು. ಇನ್ನು ಹಕ್ಕುಪತ್ರ ನೀಡುವುದಿಲ್ಲವೇ, ಜನಸಾಮಾನ್ಯರ ಪರವಾಗಿ ನಮ್ಮ ಸರ್ಕಾರವಿದೆ ಸ್ಥಳದಲ್ಲಿದ್ದ ಕೂಡ್ಲಿಗಿ ತಹಶಿಲ್ದಾರ್ ನೇತ್ರಾವತಿ ಅವರನ್ನು ಕರೆದು ಅವರ ಸಮಸ್ಯೆ ಒಂದೆರಡು ದಿನಗಳಲ್ಲಿ ಬಗೆಹರಿಸಿ ಎಂದು ಸೂಚಿಸಿದರು.ಲಂಬಾಣಿ ತಾಂಡಾದ ರುದ್ರಿಬಾಯಿ ಅವರು "ವ್ಯವಸಾಯಕ್ಕೆ ಜಮೀನು ನೀಡಿ" ಎಂದು ಮನವಿ ಸಲ್ಲಿಸಿದರು. ಸಿ ಬಿ ನಾಗೇಶ್ ಎಂಬುವರು ಕೂಡ್ಲಿಗಿ ತಾಲೂಕಿನಲ್ಲಿ ಕೆರೆಗಳನ್ನು ಅಕ್ರಮವಾಗಿ ನುಂಗಿ ಹಾಕುತ್ತಿದ್ದಾರೆ. ಅಧಿಕಾರಿಗಳೂ ಶಾಮೀಲಾಗಿದ್ದಾರೆ ಎಂದು ದೂರು ನೀಡಿದರು.

**ಸರ್ಕಾರದಿಂದ ಮನೆ ಹಂಚಿಕೆ:** ಮನವಿ ನೀಡಲು ಬಂದಿದ್ದ ಕಾನಮಡುಗು ಗ್ರಾಮದ ತೃತೀಯ ಲಿಂಗಿಗಳಾದ ಮಂಜಮ್ಮ ಜೋಗತಿ, ಪ್ರಗತಿ ಅವರು ಮುಖ್ಯಮಂತ್ರಿಗಳಿಗೆ ಒಳಿತಾಗಲಿ ಎಂದು ದೃಷ್ಟಿ ತೆಗೆದರು. ನಂತರ ನಮಗೆ ಮನೆ ಕೊಡಿ, ವ್ಯವಸಾಯ ಮಾಡಲು ಭೂಮಿ ಕೊಡಿ ಎನ್ನುವ ಮನವಿಗೆ ಮುಖ್ಯಮಂತ್ರಿಯವರು, "ರಾಜ್ಯಕ್ಕೆ ಒಳಿತಾಗಲಿ ಎಂದು ಬೇಡಿಕೊಳ್ಳಿ ಹಾಗೂ ನಿಮಗೆ ಮನೆ ನೀಡುವ ಜವಾಬ್ದಾರಿ ನಮ್ಮದು. ಪ್ರತಿ ಜಿಲ್ಲೆಯಲ್ಲೂ 50 ಸಾವಿರ ನಿವೇಶನವನ್ನು ರಹಿತರಿಗೆ ಸೈಟ್ ಹಂಚಲಾಗುತ್ತದೆ. ನಿಮಗೆ ಮನೆ ಸಿಗುತ್ತದೆ" ಎಂದು ಭರವಸೆ ನೀಡಿದರು. ವೆಂಕಟೇಶ್ ಅವರು ಕೂಡ್ಲಿಗಿಯಲ್ಲಿ ಭೋವಿ ಸಮುದಾಯ ಭವನ ಬೇಕು ಎಂದು ಮನವಿ ನೀಡಿದರೆ. ವೆಂಕಟೇಶ್ ನಾಯ್ಕ ಅವರು ಒಳಮೀಸಲಾತಿ ಬದಲು ಹಿಂದಿನ ವ್ಯವಸ್ಥೆಯನ್ನೇ ಮುಂದುವರೆಸಿ ಎಂದು ಮನವಿ ಮಾಡಿದರು. ದಲಿತ ರಕ್ಷಣಾ ವೇದಿಕೆಯವರು ರಾಯಚೂರಿನಲ್ಲಿ ನಡೆದಿರುವ ದಲಿತರ ಹತ್ಯೆಗಳು ನಡೆಯದಂತೆ ಕಾನೂನು ಕ್ರಮ ತೆಗೆದುಕೊಳ್ಳಿ" ಎಂದು ಮನವಿ ಮಾಡಿದರು.

**ವಿವಿಧ ಉಸ್ತುವಾರಿ ಸಚಿವರ ಜತೆ ವೀಡಿಯೋ ಸಂವಾದ:** ರಾಜ್ಯದಾದ್ಯಂತ ವಿವಿದೆಡೆ ಜಿಲ್ಲಾ ಉಸ್ತುವಾರಿ ಸಚಿವರುಗಳ ನೇತೃತ್ವದಲ್ಲಿ ಪ್ರಜಾಸೇವಾ ಆಂದೋಲನ ಆಯೋಜಿಸಲಾಗಿತ್ತು. ಇದನ್ನು ನೇರಪ್ರಸಾರದ ಮೂಲಕ ವೀಕ್ಷಣೆ ಮಾಡುತ್ತಿದ್ದ ಸಿಎಂ ಕಾರ್ಯಕ್ರಮ ಉದ್ಘಾಟನೆಯ ನಂತರ ವಿಡಿಯೋ ಕಾನ್ಫರೆನ್ಸ್ ಮೂಲಕ ಡಿಸಿಎಂ ಡಾ ಜಿ ಪರಮೇಶ್ವರ್, ಸಚಿವರಾದ ಸಂತೋಷ್ ಲಾಡ್, ಎಸ್ ಎಸ್ ಮಲ್ಲಿಕಾರ್ಜುನ, ಶಿವಲಿಂಗೇಗೌಡ ಅವರೊಟ್ಟಿಗೆ ಸಂವಾದ ನಡೆಸಿದರು.

ಪ್ರಜಾಸೇವೆ ಕಾರ್ಯಕ್ರಮ ನಿಗದಿಯಾದ ದಿನಾಂಕವನ್ನು ಯಾವುದೇ ಕಾರಣಕ್ಕೂ ಮುಂದಕ್ಕೆ ಹಾಕಬಾರದು. ತಪ್ಪಿಸಿಕೊಳ್ಳಬಾರದು, ಜಿಲ್ಲೆ, ತಾಲ್ಲೂಕು ನಂತರ ಹೋಬಳಿ ಮಟ್ಟದಲ್ಲಿ ಕಾರ್ಯಕ್ರಮ ನಡೆಸಬೇಕು. ಒಮ್ಮೆ ಅರ್ಜಿ ಕೊಟ್ಟವರು ಮರಳಿ ಸಮಸ್ಯೆ ಹೇಳಿಕೊಂಡು ಮತ್ತೊಮ್ಮೆ ಅರ್ಜಿ ಸಲ್ಲಿಸಬಾರದು. ಆ ನಿಟ್ಟಿನಲ್ಲಿ ಎಲ್ಲರೂ ಕೆಲಸ ಮಾಡಬೇಕು" ಎಂದು ಸಲಹೆ, ಸೂಚನೆ ನೀಡಿದರು.ವೇದಿಕೆ ಕಾರ್ಯಕ್ರಮಕ್ಕೆ ಆಗಮಿಸುವುದಕ್ಕೂ ಮೊದಲು ಸಾರ್ವಜನಿಕರ ಅರ್ಜಿಗಳನ್ನು ಪಡೆಯುವ ಕೌಂಟರ್‌ಗಳ ಬಳಿ ತೆರಳಿ ಪರಿಶೀಲನೆ ನಡೆಸಿದರು. ಗೃಹಲಕ್ಷ್ಮಿ ಅರ್ಜಿ ಪರಿಶೀಲನೆಯ ಕೌಂಟರ್ ಹೇಗೆ ಕಾರ್ಯ ನಿರ್ವಹಿಸುತ್ತದೆ ಎಂದು ಪರಿಶೀಲನೆ ಮಾಡಿದರು. ನಮ್ಮ ರಾಜ್ಯದ ಮತದಾರರಿಗೆ ಮಾತ್ರ ನಮ್ಮ ಗ್ಯಾರಂಟಿ ಯೋಜನೆಗಳು ತಲುಪಬೇಕು. ಈ ನಿಟ್ಟಿನಲ್ಲಿ ಕೆಲಸ ಮಾಡಿ ಎಂದು ಸೂಚನೆ ನೀಡಿದರು.

**ಹುಣಸೆ ಸರ, ಹುಣಸೆಕಾಯಿ ಹಾರ ಉಡುಗೊರೆ:** ಕೂಡ್ಲಗಿ ಹುಣಸೆಯ ನಾಡು ಎಂದು ಹೆಸರಾಗಿದೆ. ಇದರ ಪ್ರತೀಕವಾಗಿ ಹುಣಸೆ ಬೀಜಗಳಿಂದ ತಯಾರಿಸಿದ ಹುಣಸೆ ಸರವನ್ನು ಅಭಿಮಾನಿಯೊಬ್ಬರು ನೀಡಿದರೆ, ವಿವಿಧ ಸಂಘಟನೆಗಳವರು ಹುಣಸೆಕಾಯಿ ಹಾರವನ್ನು ಸಿಎಂಗೆ ಹಾಕಿ ಅಭಿಮಾನ ಮೆರೆದರು. "ಇದೇ ವೇಳೆ 65.20 ಕೋಟಿ ರೂ. ಮೊತ್ತದ 27 ಯೋಜನೆಗಳಿಗೆ ಶಂಕುಸ್ಥಾಪನೆ ನೆರವೇರಿಸಿದರು. 129.05 ಕೋಟಿ ರೂಪಾಯಿ ವೆಚ್ಚದ 63 ಕಾರ್ಯಕ್ರಮಗಳನ್ನು ಉದ್ಘಾಟಿಸಿದರು.



ತುಮಕೂರು ಜಿಲ್ಲೆಯ ಗುಬ್ಬಿ ತಾಲೂಕು ಶನಿವಾರ ಡಿಸಿಎಂ ಡಾ.ಜಿ.ಪರಮೇಶ್ವರ ಅವರು ಪ್ರಜಾಸೇವಾ ಅಭಿಯಾನ ಜನಸಭೆ? ಉದ್ಘಾಟಿಸಿದರು.

# ಶಿಕ್ಷಕರಿಂದಾಗಿಯೇ ರಾಜ್ಯದ ಶಾಲೆಗಳಲ್ಲಿ ಗುಣಮಟ್ಟದ ಶಿಕ್ಷಣ

**ಬೆಂಗಳೂರು, ಸೆ.5:** ರಾಜ್ಯದಲ್ಲಿ ನೀಡಲಾಗುತ್ತಿರುವ ಗುಣಮಟ್ಟದ ಶಿಕ್ಷಣ, ಸರ್ಕಾರ ಶಿಕ್ಷಣ ಕ್ಷೇತ್ರದಲ್ಲಿ ತರುತ್ತಿರುವ ಬದಲಾವಣೆ, ಇಲಾಖೆಯ ಆಡಳಿತದಲ್ಲಿ ತಂತ್ರಜ್ಞಾನಗಳ ಅಳವಡಿಕೆ ಇದೆಲ್ಲವನ್ನೂ ಗಮನಿಸಿಯೇ ಏಷ್ಯ ಅಭಿವೃದ್ಧಿ ಬ್ಯಾಂಕ್ (ಎಡಿಬಿ) ಕರ್ನಾಟಕ ಪಬ್ಲಿಕ್ ಶಾಲೆಗಳ ಅಭಿವೃದ್ಧಿಗೆ ಬೃಹತ್ ಆರ್ಥಿಕ ನೆರವು ನೀಡುತ್ತಿದೆ. ಶಿಕ್ಷಣ ಕ್ಷೇತ್ರಕ್ಕೆ ಈ ಬ್ಯಾಂಕ್ ಇಷ್ಟೊಂದು ನೆರವು ನೀಡಿರುವುದು ದೇಶದಲ್ಲಿಯೇ ಇದು ಮೊದಲು. ಇಲಾಖೆಯ ಈ ಯಶಸ್ಸಿಗೆ ಶಿಕ್ಷಕರೇ ಕಾರಣ ಎಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವ ಮಧು ಬಂಗಾರಪ್ಪ ಹೇಳಿದ್ದಾರೆ.

ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಹಾಗೂ ಉನ್ನತ ಶಿಕ್ಷಣ ಇಲಾಖೆ ವತಿಯಿಂದ ಭಾರತ ರತ್ನ ಡಾ. ಸರ್ವಪಲ್ಲಿ ರಾಧಾಕೃಷ್ಣನ್ ಅವರ ಜನ್ಮದಿನದ ಅಂಗವಾಗಿ ಆಯೋಜಿಸಿದ್ದ ರಾಜ್ಯ ಮಟ್ಟದ ಶಿಕ್ಷಕರ ದಿನಾಚರಣೆ ಹಾಗೂ ರಾಜ್ಯ ಪ್ರಶಸ್ತಿ ಪುರಸ್ಕೃತ ಶಿಕ್ಷಕರಿಗೆ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಅವರು ಮಾತನಾಡಿದರು. ರಾಜ್ಯದಾದ್ಯಂತ ಗುಣಮಟ್ಟದ ಶಿಕ್ಷಣ ನೀಡುವ ಉದ್ದೇಶದಿಂದ ಒಂದು ಸಾವಿರ ಕೆಪಿಎಸ್ ಶಾಲೆಗಳನ್ನು ನಿರ್ಮಿಸ ಲಾಗುತ್ತಿದ್ದು, ಇದಕ್ಕಾಗಿ 2,500 ಕೋಟಿ ವೆಚ್ಚ ಮಾಡಲಾಗುತ್ತಿದೆ. ಪೂರ್ವ ಪ್ರಾಥಮಿಕದಿಂದ 12ನೇ ತರಗತಿವರೆಗೆ ಒಂದೇ ಸೂರಿನಡಿ ಜಾಗತಿಕ ಗುಣಮಟ್ಟದ ಶಿಕ್ಷಣವನ್ನು ಗ್ರಾಮೀಣ ಪ್ರದೇಶದ ವಿದ್ಯಾರ್ಥಿಗಳಿಗೆ ಒದಗಿಸುವುದು ಕೆಪಿಎಸ್‌ನ ಪ್ರಮುಖ ಉದ್ದೇಶವಾಗಿದೆ ಎಂದು ಸಚಿವರು ವಿವರಿಸಿದರು. ಕೆಪಿಎಸ್ ಶಾಲೆಗಳಿಗೆ ಸರ್ಕಾರದಿಂದ ಉಚಿತ ಬಸ್ ವ್ಯವಸ್ಥೆ ಕಲ್ಪಿಸಲಾಗುವುದು. ಕೆಪಿಎಸ್ ಎಂದರೆ ಕೇವಲ ಹೊಸ ಕಟ್ಟಡವಲ್ಲ. ಗುಣಮಟ್ಟದ ಶಿಕ್ಷಣ, ಉತ್ತಮ ಮೂಲಸೌಕರ್ಯ, ಆಧುನಿಕ ಕಲಿಕಾ ವಾತಾವರಣ ಮತ್ತು ಸರ್ಕಾರಿ ಶಾಲೆಗಳ ಮೇಲಿನ ಜನರ ವಿಶ್ವಾಸವನ್ನು ಹೆಚ್ಚಿಸುವ ಸಮಗ್ರ ಪ್ರಯತ್ನವಾಗಿದೆ ಎಂದರು.

ಶಿಕ್ಷಕಣ ಕ್ಷೇತ್ರದಲ್ಲಿ ಅನೇಕ ಬದಲಾವಣೆಗಳನ್ನು ಮಾಡಲಾಗುತ್ತಿದ್ದು, ಇದನ್ನು ಅರಿತು, ಶಿಕ್ಷಕ ವೃಂದ ನಿರಂತರ ಬದಲಾವಣೆಗೆ ಹೊಂದಿಕೊಳ್ಳುತ್ತಿದ್ದಾರೆ. ಸರ್ಕಾರ ಜಾರಿಗೊಳಿಸುತ್ತಿರುವ ಸುಧಾರಣೆಗಳನ್ನು ಸಮರ್ಥವಾಗಿ ಅನುಷ್ಠಾನಗೊಳಿಸುತ್ತಿದ್ದಾರೆ, ಇವರೆಲ್ಲರನ್ನು ನಾನು ಅಭಿನಂದಿಸುತ್ತೇನೆ ಎಂದು ಹೇಳಿದರು.

**ಶಿಕ್ಷಕರ ನೇಮಕಾತಿಗೆ ಆದ್ಯತೆ:** ಶಿಕ್ಷಣದ ಗುಣಮಟ್ಟ ಹೆಚ್ಚಿಸಲು ಶಾಲೆಗಳಲ್ಲಿ ಅಗತ್ಯ ಸಂಖ್ಯೆಯ ಶಿಕ್ಷಕರು ಇರಬೇಕು ಎಂಬುದು ಸರ್ಕಾರದ ಸ್ಪಷ್ಟ ನಿಲುವಾಗಿದೆ. ಈ ಹಿನ್ನೆಲೆಯಲ್ಲಿ ಶಿಕ್ಷಣ ಇಲಾಖೆಯಲ್ಲಿ ಪ್ರಸ್ತುತ 15 ಸಾವಿರ ಶಿಕ್ಷಕರ ನೇಮಕಾತಿ ಪ್ರಕ್ರಿಯೆ ನಡೆಯುತ್ತಿದೆ ಎಂದು ಮಧು ಬಂಗಾರಪ್ಪ ತಿಳಿಸಿದರು. ವಿಶೇಷವಾಗಿ ಇದೇ ಮೊದಲ ಬಾರಿಗೆ 1ರಿಂದ 8ನೇ ತರಗತಿವರೆಗೆ ಬೋಧಿಸಲು ಕಂಪ್ಯೂಟರ್ ಶಿಕ್ಷಕರ ನೇಮಕಾತಿ ಮಾಡಿಕೊಳ್ಳಲಾಗುತ್ತಿದೆ. ಇದರೊಂದಿಗೆ ಮತ್ತಷ್ಟು 2,500 ಶಿಕ್ಷಕರ ಹುದ್ದೆಗಳನ್ನು ಭರ್ತಿ ಮಾಡುವ ಕುರಿತು ಮುಖ್ಯಮಂತ್ರಿ ಅವರೊಂದಿಗೆ ಚರ್ಚಿಸಲಾಗಿದ್ದು, ಆರ್ಥಿಕ ಇಲಾಖೆಗೆ ಪ್ರಸ್ತಾವನೆ ಸಲ್ಲಿಸಲಾಗಿದೆ. ಪ್ರಸ್ತಾವನೆಗೆ ಅನುಮೋದನೆ ದೊರೆತರೆ ಶಿಕ್ಷಣ ಇಲಾಖೆಯಲ್ಲೇ 18ರಿಂದ 19 ಸಾವಿರ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಸಾಧ್ಯವಾಗಲಿದೆ. ಹಿಂದಿನ ಸರ್ಕಾರ ಅರ್ಧಕ್ಕೆ ನಿಲ್ಲಿಸಿದ್ದ 13 ಸಾವಿರ ಶಿಕ್ಷಕರ ನೇಮಕಾತಿಯನ್ನೂ ಪೂರ್ಣಗೊಳಿಸಲಾಗಿದೆ ಎಂದು ಸಚಿವರು ಹೇಳಿದರು.



**ದ್ವಿಭಾಷಾ ಮಾಧ್ಯಮ:** 2026–27ನೇ ಸಾಲಿನಲ್ಲಿ ರಾಜ್ಯದ ಎಲ್ಲಾ ಕರ್ನಾಟಕ ಪಬ್ಲಿಕ್ ಶಾಲೆಗಳು (ಕೆಪಿಎಸ್) ಹಾಗೂ ಪಿಎಂಶ್ರೀ ಶಾಲೆಗಳಲ್ಲಿ ಹಾಗೂ 15 ಜಿಲ್ಲೆಗಳ ಎಲ್ಲಾ ಸರ್ಕಾರಿ ಶಾಲೆಗಳಲ್ಲಿ ದ್ವಿಭಾಷಾ ತರಗತಿಗಳನ್ನು ಪ್ರಾರಂಭಿಸಲಾಗಿದೆ. ಇಲ್ಲಿ ಪಾಠ ಮಾಡುವ ಶಿಕ್ಷಕರಿಗೆ ನಿರಂತರವಾಗಿ ತರಬೇತಿ ನೀಡಲು ವಿಶೇಷ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಸಚಿವರು ತಿಳಿಸಿದರು.

ಕಾರ್ಯಕ್ರಮದ ಉದ್ಘಾಟನೆಯನ್ನು ಉಪಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ ನೆರವೇರಿಸಿದರು. ಸಾವಿತ್ರಿಬಾಯಿ ಫುಲೆ ಹಾಗೂ ಡಾ. ಸರ್ವಪಲ್ಲಿ ರಾಧಾಕೃಷ್ಣನ್ ಅವರ ಭಾವಚಿತ್ರಗಳಿಗೆ ವೇದಿಕೆಯ ಎಲ್ಲ ಗಣ್ಯರು ಪುಷ್ಪಾರ್ಚನೆ ಸಲ್ಲಿಸಿದರು. ಸಚಿವ ರಿಜ್ವಾನ್ ಅರ್ಷದ್ ಅಧ್ಯಕ್ಷತೆ ವಹಿಸಿದ್ದರು. ವಿಧಾನ ಪರಿಷತ್ ಸಭಾಪತಿ ಸಲೀಂ ಅಹಮದ್, ಸಚಿವರಾದ ಬಸವರಾಜ ರಾಯರೆಡ್ಡಿ, ಕೃಷ್ಣ ಬೈರೇಗೌಡ, ವಿಧಾನ ಪರಿಷತ್ ಸದಸ್ಯರಾದ ಪುಟ್ಟಣ್ಣ, ರಾಮೋಜಿಗೌಡ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ವಿ. ರಶ್ಮಿ ಮಹೇಶ್, ಉನ್ನತ ಶಿಕ್ಷಣ ಇಲಾಖೆಯ ಸರ್ಕಾರದ ಕಾರ್ಯದರ್ಶಿ ತುಳಸಿ ಮದ್ದಿನೇನಿ ಹಾಗೂ ಶಾಲಾ ಶಿಕ್ಷಣ ಇಲಾಖೆ ಆಯುಕ್ತ ವಿಕಾಸ್ ಕಿಶೋರ್ ಸುರಳ್ಕರ್ ಮತ್ತಿತರರು ಉಪಸ್ಥಿತರಿದ್ದರು.

# ರಾಜ್ಯಕ್ಕೆ ಎಲ್‌ನಿನೋ ಪೆಟ್ಟು: ಮಾಸಾಂತ್ಯಕ್ಕೆ 200 ತಾಲೂಕುಗಳು ಬರಪೀಡಿತ ಘೋಷಣೆ

**ಬೆಂಗಳೂರು, ಸೆ.5:** ಈ ಬಾರಿ ಎಲ್‌ನಿನೋ ಪ್ರಭಾವದಿಂದಾಗಿ ಮಳೆಯ ಪ್ರಮಾಣ ಗಣನೀಯವಾಗಿ ಕಡಿಮೆಯಾಗಿದೆ. ಈ ಹಿನ್ನೆಲೆಯಲ್ಲಿ ಈ ತಿಂಗಳ ಅಂತ್ಯದ ವೇಳೆಗೆ 180 ರಿಂದ 200 ತಾಲೂಕುಗಳನ್ನು ಬರಪೀಡಿತ ಎಂದು ಘೋಷಿಸುವ ಸಾಧ್ಯತೆಯಿದೆ ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಖಂಡ್ರೆ ಹೇಳಿದರು.



ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಅವರು, ಈಗಾಗಲೇ ರಾಜ್ಯದಲ್ಲಿ 101 ತಾಲೂಕುಗಳನ್ನು ಬರಪೀಡಿತ ಎಂದು ಗುರುತಿಸಲಾಗಿದೆ. ಶೀಘ್ರದಲ್ಲಿಯೇ ಮತ್ತಷ್ಟು 24 ತಾಲೂಕುಗಳನ್ನು ಬರಪೀಡಿತ ಸಾಲಿಗೆ ಸೇರಿಸಲು ಅಗತ್ಯ ಸಿದ್ಧತೆ ಕೈಗೊಳ್ಳಲಾಗಿದೆ. ಮಾಸಾಂತ್ಯದಲ್ಲಿ ನಡೆಯಲಿರುವ ಮತ್ತೊಂದು ಹಂತದ ಗ್ರೌಂಡ್ ಟ್ರೂಥಿಂಗ್ (ನೆಲಮಟ್ಟದ ಪರಿಶೀಲನೆ) ಪ್ರಕ್ರಿಯೆಯ ಬಳಿಕ ಈ ಸಂಖ್ಯೆ 180ರಿಂದ 200ಕ್ಕೆ ಏರಿಕೆಯಾಗುವ ನಿರೀಕ್ಷೆಯಿದೆ ಎಂದರು.

**ಸಂಪುಟ ಉಪಸಮಿತಿ ಸಭೆಯಲ್ಲಿ ಚರ್ಚೆ:** 2026ರ ಮುಂಗಾರು, ಬರ ಪರಿಸ್ಥಿತಿ ಹಾಗೂ ನೈಸರ್ಗಿಕ ವಿಕೋಪಗಳ ಪರಾಮರ್ಶೆಗಾಗಿ ಗೃಹ ಸಚಿವ ಡಾ. ಜಿ. ಪರಮೇಶ್ವರ್ ಅಧ್ಯಕ್ಷತೆಯಲ್ಲಿ ರಚಿಸಲಾಗಿರುವ ಸಂಪುಟ ಉಪಸಮಿತಿಯ ಸದಸ್ಯನಾಗಿ, ಇತ್ತೀಚೆಗೆ ನಡೆದ ಸಭೆಯಲ್ಲಿ ಈ ವಿಷಯಗಳ ಕುರಿತು ಸುದೀರ್ಘ ಚರ್ಚೆ ನಡೆಸಲಾಗಿದೆ ಎಂದು ಖಂಡ್ರೆ ಸ್ಪಷ್ಟಪಡಿಸಿದರು.


**ಕೇಂದ್ರದ ಪರಿಹಾರಕ್ಕೆ ಬೇಡಿಕೆ:** ಎನ್‌ಡಿಆರ್‌ಎಫ್ ನಿಯಮಾವಳಿ ಪ್ರಕಾರ ಒಣಭೂಮಿ ಮತ್ತು ನೀರಾವರಿ ಜಮೀನುಗಳಿಗೆ ಪರಿಹಾರ ದೊರೆಯಲಿದೆ. ಇದರ ಜೊತೆಗೆ ತೀವ್ರ ಬೆಳೆ ಹಾನಿಗೊಳಗಾದ ಪ್ರದೇಶಗಳ ರೈತರಿಗೆ ರಾಜ್ಯ ಸರ್ಕಾರದಿಂದ ಹೆಚ್ಚುವರಿ ಪರಿಹಾರ ನೀಡುವ ಕುರಿತು ಮುಖ್ಯಮಂತ್ರಿಗಳು ಸೂಕ್ತ ನಿರ್ಧಾರ ಕೈಗೊಳ್ಳಲಿದ್ದಾರೆ. ಸದ್ಯ ಬರಪೀಡಿತ ಎಂದು ಪ್ರಕಟಿಸಲಾಗಿರುವ 101 ತಾಲೂಕುಗಳಿಗೆ 2,600 ಕೋಟಿ ರೂಪಾಯಿ ಪರಿಹಾರ ಬಿಡುಗಡೆ ಮಾಡುವಂತೆ ಕೇಂದ್ರ ಸರ್ಕಾರಕ್ಕೆ ಮನವಿ ಸಲ್ಲಿಸಲಾಗಿದೆ ಎಂದು ತಿಳಿಸಿದರು.

**ಪ್ರತಿ ಪಕ್ಷಗಳ ನಡೆಗೆ ಅಸಮಾಧಾನ:** ರಾಜ್ಯದ ಬಿಜೆಪಿ ಸಂಸದರು ಹಾಗೂ ನಾಯಕರು ರಾಜ್ಯದಲ್ಲಿನ ಸಂಕಷ್ಟದ ಪರಿಸ್ಥಿತಿಯನ್ನು ಅರಿತು ರೈತರ ನೆರವಿಗೆ ಧಾವಿಸಬೇಕು. ಕೇಂದ್ರ ಸರ್ಕಾರದ ಮೇಲೆ ಒತ್ತಡ ತಂದು ಅಗತ್ಯ ಅನುದಾನ ಕೊಡಿಸುವ ಕೆಲಸ ಮಾಡುವುದನ್ನು ಬಿಟ್ಟು, ಪಾದಯಾತ್ರೆ ಹೆಸರಿನಲ್ಲಿ ಕಾಲಹರಣ ಮಾಡುತ್ತಿದ್ದಾರೆ ಎಂದು ಸಚಿವರು ವಾಗ್ದಾಳಿ ನಡೆಸಿದರು.

# ನಾಗರಿಕ ಸೇವೆಯಲ್ಲಿ ನಿರ್ಲಕ್ಷಿಸಿದರೆ ಕಠಿಣ ಕ್ರಮ: ಕೃಷ್ಣ ಬೈರೇಗೌಡ ಎಚ್ಚರಿಕೆ

**ಬೆಂಗಳೂರು, ಸೆ.5:** ನಗರದ ನಾಗರಿಕ ಸೇವೆಗಳಲ್ಲಿ ನಿರ್ಲಕ್ಷ್ಯ ತೋರಿಸುವ ಅಧಿಕಾರಿಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಗ್ರೇಟರ್ ಬೆಂಗಳೂರು ಅಭಿವೃದ್ಧಿ ಸಚಿವ ಕೃಷ್ಣ ಬೈರೇಗೌಡ ಎಚ್ಚರಿಕೆ ನೀಡಿದ್ದಾರೆ.

ಶನಿವಾರ ಬೆಳಗ್ಗೆ ಬೆಂಗಳೂರು ಪೂರ್ವ ನಗರ ಪಾಲಿಕೆ ವ್ಯಾಪ್ತಿಯ ಹೊರಮಾವು, ಬಂಜಾರ ಲೇಔಟ್, ಅಗರ ಕೆರೆ, ಜಯಂತಿನಗರ, ರಾಮಮೂರ್ತಿನಗರ ಹಾಗೂ ಕಸ್ತೂರಿನಗರ ಸೇರಿದಂತೆ ಹಲವು ಪ್ರದೇಶಗಳಿಗೆ ದಿಢೀರ್ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಈ ವೇಳೆ ಸ್ವಚ್ಛತೆ, ಕಸ ವಿಲೇವಾರಿ, ಪೌರಕಾರ್ಮಿಕರ ಕಾರ್ಯನಿರ್ವಹಣೆ, ರಸ್ತೆ ಹಾಗೂ ಫುಟ್‌ಪಾತ್‌ಗಳ ನಿರ್ವಹಣೆ, ರಾಜಕಾಲುವೆಗಳ ಸ್ವಚ್ಛತೆ, ಕೆರೆಗಳ ನಿರ್ವಹಣೆ, ನಡೆಯುತ್ತಿರುವ ಮೂಲಸೌಕರ್ಯ ಕಾಮಗಾರಿಗಳು ಹಾಗೂ ಸಾರ್ವಜನಿಕರು ಎದುರಿಸುತ್ತಿರುವ ನಾಗರಿಕ ಸಮಸ್ಯೆಗಳ ಕುರಿತು ಅಧಿಕಾರಿಗಳಿಂದ ಮಾಹಿತಿ ಪಡೆದರು. ಮೂಲಭೂತ ನಾಗರಿಕ ಸೇವೆಗಳು ನೆಲಮಟ್ಟದಲ್ಲಿ ಪರಿಣಾಮಕಾರಿಯಾಗಿ ಕಾರ್ಯನಿರ್ವಹಿಸಬೇಕು. ಅಧಿಕಾರಿಗಳ ನಿರ್ಲಕ್ಷ್ಯದಿಂದ ಸಾರ್ವಜನಿಕರಿಗೆ ತೊಂದರೆ ಅಥವಾ ಸುರಕ್ಷತಾ ಸಮಸ್ಯೆ ಉಂಟಾಗ ಬಾರದು ಎಂದು ಅಧಿಕಾರಿ ಗಳಿಗೆ ಸೂಚಿಸಿದರು.



**ಕೆರೆ ಒತ್ತುವರಿ ಕಂಡುಬಂದರೆ ತಕ್ಷಣ ಕ್ರಮ ಕೈಗೊಳ್ಳಿ:** ಕೆರೆ ಸುತ್ತಮುತ್ತ ಸಂಭವನೀಯ ಒತ್ತುವರಿಗಳ ಕುರಿತು ಅಧಿಕಾರಿಗಳಿಂದ ಮಾಹಿತಿ ಪಡೆದ ಸಚಿವರು, ಒತ್ತುವರಿ ಕಂಡುಬಂದಲ್ಲಿ ಕಾನೂನು ಪ್ರಕಾರ ತಕ್ಷಣ ಕ್ರಮ ಕೈಗೊಳ್ಳಬೇಕು ಎಂದರು. ಫುಟ್‌ಪಾತ್‌ಗಳ ಮೇಲಿನ ಒತ್ತುವರಿಗಳನ್ನು ತೆರವುಗೊಳಿಸಿ, ಪಾದಚಾರಿಗಳ ಸುರಕ್ಷಿತ ಹಾಗೂ ಅಡೆತಡೆಯಿಲ್ಲದ ಸಂಚಾರಕ್ಕೆ ಅನುವು ಮಾಡಿಕೊಡಬೇಕು ಎಂದು ಸೂಚಿಸಿದರು.

**ರಸ್ತೆ ಕಾಮಗಾರಿ ಮುಗಿದ ತಕ್ಷಣ ದುರಸ್ತಿ:** ಯುಟಿಲಿಟಿ ಕಾಮಗಾರಿಗಳಿಗಾಗಿ ರಸ್ತೆಗಳನ್ನು ಅಗೆದ ಬಳಿಕ ಕಾಮಗಾರಿ ಪೂರ್ಣಗೊಂಡ ತಕ್ಷಣವೇ ಅವುಗಳನ್ನು ಪುನಃ ದುರಸ್ತಿ ಮಾಡಬೇಕು. ಸಾರ್ವಜನಿಕರು ಹಾಗೂ ವಾಹನ ಸವಾರರಿಗೆ ಕನಿಷ್ಠ ತೊಂದರೆಯಾಗುವಂತೆ ಕ್ರಮ ಕೈಗೊಳ್ಳಬೇಕು. ರಸ್ತೆ ಗುಂಡಿಗಳನ್ನು ತ್ವರಿತವಾಗಿ ಮುಚ್ಚಿ ಸುರಕ್ಷಿತ ಸಂಚಾರಕ್ಕೆ ಅನುವು ಮಾಡಿಕೊಡಬೇಕು ಎಂದು ಸಚಿವರು ಅಧಿಕಾರಿಗಳಿಗೆ ಸೂಚಿಸಿದರು. ರಾಮಮೂರ್ತಿನಗರ ಮುಖ್ಯರಸ್ತೆಯಲ್ಲಿ ನಡೆಯುತ್ತಿರುವ ರೈಲ್ವೆ ನಿಲ್ದಾಣದ ಕಾಮಗಾರಿಗಳ ಪ್ರಗತಿ ಹಾಗೂ ಸುತ್ತಮುತ್ತಲಿನ ಸ್ವಚ್ಛತೆಯನ್ನು ಸಚಿವರು ಪರಿಶೀಲಿಸಿದರು. ರಸ್ತೆ ಬದಿಯಲ್ಲಿ ಬಿದ್ದಿರುವ ನಿರ್ಮಾಣ ತ್ಯಾಜ್ಯ, ಮಣ್ಣು ಹಾಗೂ ಇತರ ಸಾಮಗ್ರಿಗಳನ್ನು ಕೂಡಲೇ ತೆರವುಗೊಳಿಸುವಂತೆ ಸೂಚಿಸಿದರು. ಬೆಂಗಳೂರು ಪೂರ್ವ ನಗರ ಪಾಲಿಕೆ ಅಧಿಕಾರಿಗಳು ಸಂಬಂಧಪಟ್ಟ ರೈಲ್ವೆ ಅಧಿಕಾರಿಗಳೊಂದಿಗೆ ಸಮನ್ವಯ ಸಾಧಿಸಿ, ಸಮಸ್ಯೆಗಳಿಗೆ ತ್ವರಿತ ಪರಿಹಾರ ಕಂಡುಕೊಳ್ಳಬೇಕು ಎಂದರು.

**ಶೇ.30 ಪೌರಕಾರ್ಮಿಕರು ಕೆಲಸಕ್ಕೇ ಬರುತ್ತಿಲ್ಲ:** ತಪಾಸಣೆ ವೇಳೆ ಕೆಲವು ಪೌರಕಾರ್ಮಿಕರು ತಮ್ಮ ಸೇವೆಗಳನ್ನು ಕಾಯಂಗೊಳಿಸುವಂತೆ ಸಚಿವರಿಗೆ ಮನವಿ ಮಾಡಿದರು. ಇದಕ್ಕೆ ತೀವ್ರ ಅಸಮಾಧಾನ ವ್ಯಕ್ತಪಡಿಸಿದ ಬೈರೇಗೌಡ, ಸುಮಾರು ಶೇ.30ರಷ್ಟು ಪೌರಕಾರ್ಮಿಕರು ಪ್ರತಿದಿನದ ಕರ್ತವ್ಯಕ್ಕೆ ಹಾಜರಾಗುತ್ತಿಲ್ಲ. ಮನೆಮನೆಗೆ ಕಸ ಸಂಗ್ರಹಿಸುವ ಕೆಲಸವೂ ನಡೆಯುತ್ತಿಲ್ಲ ಎಂದು ಹೇಳಿದರು. ಇದರಿಂದ ಹಲವು ಪ್ರದೇಶಗಳಲ್ಲಿ ಜನರು ರಸ್ತೆಗಳ ಮೇಲೆಯೇ ಕಸ ಎಸೆಯುವಂತಾಗಿದೆ. ನಗರದ ಹಲವು ಭಾಗಗಳಲ್ಲಿ ದುರ್ವಾಸನೆ ಬೀರುತ್ತಿದೆ ಎಂದು ಅವರು ಅಸಮಾಧಾನ ವ್ಯಕ್ತಪಡಿಸಿದರು. ಕೆಲಸಕ್ಕೆ ಬಾರದವರನ್ನು ಅಥವಾ ಕೆಲಸಕ್ಕೆ ಬಂದು ಕರ್ತವ್ಯವನ್ನು ಸರಿಯಾಗಿ ನಿರ್ವಹಿಸದವರನ್ನು ಕಾಯಂಗೊಳಿಸುವುದು ಏಕೆ ಎಂದು ಕೃಷ್ಣಬೈರೇಗೌಡ ಪ್ರಶ್ನಿಸಿದರು.

# ಕೊಟ್ಟಿಗೆಯಂತಿರುವ ಶೆಡ್‌ನಲ್ಲೇ ವಸತಿಶಾಲೆಯ ವಿದ್ಯಾರ್ಥಿಗಳಿಗೆ ಆಶ್ರಯ

## ಅಧಿಕಾರಿಗಳ ವಿರುದ್ಧ ಸಚಿವ ಶಿವಲಿಂಗೇಗೌಡ ಕೆಂಡಾಮಂಡಲ

**ಹಾಸನ, ಸೆ.5:** ತಾಲ್ಲೂಕಿನ ಶಾಂತಿಗ್ರಾಮದಲ್ಲಿರುವ ಡಾ. ಬಿ.ಆರ್. ಅಂಬೇಡ್ಕರ್ ವಸತಿ ಶಾಲೆಯ ದಯನೀಯ ಸ್ಥಿತಿ ಮಾಧ್ಯಮಗಳಲ್ಲಿ ವರದಿಯಾಗುತ್ತಿದ್ದಂತೆ ಎಚ್ಚೆತ್ತಿರುವ ಜಿಲ್ಲಾ ಉಸ್ತುವಾರಿ ಸಚಿವ ಕೆ.ಎಂ. ಶಿವಲಿಂಗೇಗೌಡ, ಸಂಬಂಧಪಟ್ಟ ಅಧಿಕಾರಿಗಳನ್ನು ತೀವ್ರ ತರಾಟೆಗೆ ತೆಗೆದುಕೊಂಡಿದ್ದಾರೆ. ವಿದ್ಯಾರ್ಥಿಗಳನ್ನು ತಕ್ಷಣವೇ ಬೇರೊಂದು ಸುರಕ್ಷಿತ ಕಟ್ಟಡಕ್ಕೆ ಸ್ಥಳಾಂತರಿಸುವಂತೆ ಕಟ್ಟುನಿಟ್ಟಿನ ಆದೇಶ ನೀಡಿದ್ದಾರೆ.



ನಗರದಲ್ಲಿ ಆಯೋಜಿಸಲಾಗಿದ್ದ 'ಪ್ರಜಾ ಸೇವಾ' ಆಂದೋಲನ ಸಭೆಯಲ್ಲಿ ವಿಷಯ ಪ್ರಸ್ತಾಪಿಸಿದ ಸಚಿವರು, ಸಮಾಜಕಲ್ಯಾಣ ಇಲಾಖೆಯ ಉಪನಿರ್ದೇಶಕ ದೂದ್‌ಪೀರ್ ವಿರುದ್ಧ ಕೆಂಡಾಮಂಡಲರಾದರು. "ಕೂಡಿ ಹಾಕಲು ಅವರೇನು ಕುರಿ–ದನಗಳಾ, ನಿಮ್ಮ ಮಕ್ಕಳಾಗಿದ್ದರೆ ಇಂತಹ ಜಾಗದಲ್ಲಿ ಮಲಗಲು ಬಿಡುತ್ತಿದ್ದಿರಾ, ನಿಮ್ಮ ಆತ್ಮಸಾಕ್ಷಿ ಇದಕ್ಕೆ ಹೇಗೆ ಒಪ್ಪುತ್ತದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

**ಶೆಡ್‌ನಲ್ಲೇ 172 ವಿದ್ಯಾರ್ಥಿಗಳ ವಾಸ್ತವ್ಯ**

ಪ್ರಸ್ತುತ ಬಾಡಿಗೆ ಕಟ್ಟಡದಲ್ಲಿ ನಡೆಯುತ್ತಿರುವ ಈ ವಸತಿ ಶಾಲೆಯಲ್ಲಿ 6ರಿಂದ 10ನೇ ತರಗತಿಯ 92 ಬಾಲಕರು ಹಾಗೂ 80 ಬಾಲಕಿಯರು ಸೇರಿದಂತೆ ಒಟ್ಟು 172 ವಿದ್ಯಾರ್ಥಿಗಳು ಆಶ್ರಯ ಪಡೆದಿದ್ದಾರೆ. ಕಳೆದ ಐದು ವರ್ಷಗಳಿಂದ ದನದ ಕೊಟ್ಟಿಗೆಯಂತಿರುವ ಶೆಡ್‌ನಲ್ಲೇ ಮಕ್ಕಳು ಊಟ, ನಿದ್ರೆ ಮತ್ತು ಪಾಠ ಕಲಿಯುವಂತಾಗಿದೆ. ಗಾಳಿ–ಬೆಳಕಿನ ಕೊರತೆಯ ಜೊತೆಗೆ 92 ಬಾಲಕರಿಗೆ ಕೇವಲ ಐದು ಶೌಚಾಲಯಗಳಿದ್ದು, ಕನಿಷ್ಠ ಮೂಲಸೌಕರ್ಯಗಳಿಲ್ಲದೆ ಮಕ್ಕಳು ಪರದಾಡುತ್ತಿದ್ದಾರೆ.

**15 ದಿನಗಳ ಗಡುವು**

ಚರ್ಚೆಯ ವೇಳೆ ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ ಮಧ್ಯಪ್ರವೇಶಿಸಿ, ಘಣಘಟ್ಟದಲ್ಲಿ ನೂತನ ಕಟ್ಟಡದ ಶೇ.60ರಷ್ಟು ಕಾಮಗಾರಿ ಮುಗಿದಿದ್ದು, ಇನ್ನು ನಾಲ್ಕು ತಿಂಗಳಲ್ಲಿ ಪೂರ್ಣಗೊಳ್ಳಲಿದೆ ಎಂದು ಸಚಿವರಿಗೆ ವಿವರಣೆ ನೀಡಿದರು.

ಇದಕ್ಕೆ ಸಮಾಧಾನಗೊಳ್ಳದ ಸಚಿವರು, ಗುತ್ತಿಗೆದಾರರು ನಿಗದಿತ ಸಮಯಕ್ಕೆ ಕೆಲಸ ಮುಗಿಸುವುದಿಲ್ಲ, ಅವರ ಮಾತನ್ನು ನಂಬಿ ಮಕ್ಕಳನ್ನು ಅಪಾಯಕ್ಕೆ ತಳ್ಳಲಾಗದು. ಮುಂದಿನ 15 ದಿನಗಳ ಒಳಗೆ ಪರ್ಯಾಯ ಸುಸಜ್ಜಿತ ಬಾಡಿಗೆ ಕಟ್ಟಡವನ್ನು ಹುಡುಕಿ ವಿದ್ಯಾರ್ಥಿಗಳನ್ನು ಸ್ಥಳಾಂತರಿಸಬೇಕು. ಮುಂದಿನ ಬಾರಿ ಭೇಟಿ ನೀಡುವ ಹೊತ್ತಿಗೆ ಮಕ್ಕಳು ಈ ಹಳೆಯ ಶೆಡ್‌ನಲ್ಲಿ ಇರಬಾರದು. ತಪ್ಪಿದರೆ ಕಠಿಣ ಕ್ರಮ ಎದುರಿಸಬೇಕಾಗುತ್ತದೆ ಎಂದು ಸಚಿವ ಶಿವಲಿಂಗೇಗೌಡ ಎಚ್ಚರಿಕೆ ನೀಡಿದರು.

# ಬರೇಲಿಯ ವ್ಯಾಪಾರಕ್ಕೆ ಬರೆ ಎಳೆದ ನೇಪಾಳ ಪ್ರವಾಹ: ತಿಂಗಳಿಗೆ 10 ಕೋಟಿ ರೂ. ರಫ್ತು ಸ್ಥಗಿತ

**ಬರೇಲಿ, ಸೆ.5:** ನೇಪಾಳದಲ್ಲಿ ಸಂಭವಿಸಿರುವ ಭೀಕರ ಪ್ರವಾಹದ ಪರಿಣಾಮ ಗಡಿ ವ್ಯಾಪಾರಕ್ಕೂ ತೀವ್ರ ಹೊಡೆತ ಬಿದ್ದಿದ್ದು, ಉತ್ತರ ಪ್ರದೇಶದ ಬರೇಲಿ ಜಿಲ್ಲೆಯಿಂದ ನೇಪಾಳಕ್ಕೆ ನಡೆಯುತ್ತಿದ್ದ ತಿಂಗಳಿಗೆ ಸುಮಾರು 10 ಕೋಟಿ ರೂ.ಮೌಲ್ಯದ ಸರಕುಗಳ ರಫ್ತು ಸ್ಥಗಿತಗೊಂಡಿದೆ. ಪ್ರವಾಹದಿಂದ ರಸ್ತೆ ಹಾಗೂ ಸೇತುವೆಗಳು ಹಾನಿಗೊಳಗಾಗಿರುವುದರಿಂದ ಸರಕು ಸಾಗಣೆ ವಾಹನಗಳ ಸಂಚಾರ ಅಸ್ತವ್ಯಸ್ತವಾಗಿದ್ದು, ಗಡಿ ಪ್ರದೇಶದಲ್ಲಿ ನೂರಾರು ಟ್ರಕ್‌ಗಳು ಸಿಲುಕಿಕೊಂಡಿವೆ.



ಬರೇಲಿಯಿಂದ ಉತ್ತರಾಖಂಡದ ಟನಕ್‌ಪುರ ಮಾರ್ಗವಾಗಿ ನೇಪಾಳದ ಮಹೇಂದ್ರನಗರ ಗಡಿ ಪ್ರಮುಖ ವ್ಯಾಪಾರ ಮಾರ್ಗವಾಗಿದೆ. ಬರೇಲಿಯಿಂದ ಮಹೇಂದ್ರನಗರಕ್ಕೆ 110 ಕಿ.ಮೀ. ದೂರವಿದ್ದು, ಇದೇ ಮಾರ್ಗದ ಮೂಲಕ ಉಭಯ ದೇಶಗಳ ನಡುವೆ ಸರಕು ಸಾಗಣೆ ನಡೆಯುತ್ತದೆ. ಬರೇಲಿಯ ಶ್ಯಾಮಗಂಜ್ ಮಾರುಕಟ್ಟೆಯಿಂದ ಮಸಾಲೆ, ಅಡುಗೆ ಎಣ್ಣೆ, ಸಕ್ಕರೆ, ಹಿಟ್ಟು, ಅಕ್ಕಿ, ಬೇಳೆ ಸೇರಿದಂತೆ ಆಹಾರ ಪದಾರ್ಥಗಳು ಹಾಗೂ ಕಬ್ಬಿಣದ ಸಾಮಗ್ರಿಗಳನ್ನು ನೇಪಾಳಕ್ಕೆ ರಫ್ತು ಮಾಡಲಾಗುತ್ತದೆ.

ನೇಪಾಳದ ಪ್ರವಾಹದಿಂದ ಅಲ್ಲಿನ ಹಲವು ಪರ್ವತ ಪ್ರದೇಶಗಳ ಸಂಪರ್ಕ ಕಡಿತಗೊಂಡಿದೆ. ಹೀಗಾಗಿ ಬರೇಲಿಯಿಂದ ಕಳುಹಿಸಲಾಗುತ್ತಿದ್ದ ಸರಕುಗಳು ಗಮ್ಯಸ್ಥಾನ ತಲುಪುವುದು ಕಷ್ಟವಾಗಿದೆ. ಪರಿಣಾಮವಾಗಿ ನೇಪಾಳದ ವ್ಯಾಪಾರಿಗಳು ಈಗಾಗಲೇ ನೀಡಿದ್ದ ಹಲವು ಆರ್ಡರ್‌ಗಳನ್ನು ರದ್ದುಪಡಿಸಿದ್ದಾರೆ ಅಥವಾ ಸರಕು ವಿತರಣೆ ದಿನಾಂಕವನ್ನು ಮುಂದೂಡಿದ್ದಾರೆ ಎಂದು ವ್ಯಾಪಾರಿ ಸಂಘಟನೆಗಳು ತಿಳಿಸಿವೆ. ಬರೇಲಿಯಿಂದ ನೇಪಾಳಕ್ಕೆ ಪ್ರತಿ ತಿಂಗಳು 10 ಕೋಟಿ ಮೌಲ್ಯದ ಸರಕು ರಫ್ತಾಗುತ್ತಿತ್ತು ಎಂದು ರಾಷ್ಟ್ರೀಯ ವ್ಯಾಪಾರಿ ಕಲ್ಯಾಣ ಮಂಡಳಿ ಸದಸ್ಯ ರಾಜೇಂದ್ರ ಗುಪ್ತಾ ತಿಳಿಸಿದ್ದಾರೆ.

**ಟ್ರಾನ್ಸ್‌ಪೋರ್ಟರ್‌ಗಳ ಸಂಕಷ್ಟ:** ಗಡಿಯಲ್ಲಿ ಟ್ರಕ್‌ಗಳು ಸಿಲುಕಿಕೊಂಡಿರುವುದರಿಂದ ಸಾರಿಗೆ ಉದ್ಯಮದ ಮೇಲೂ ಹೆಚ್ಚುವರಿ ಆರ್ಥಿಕ ಹೊರೆ ಬಿದ್ದಿದೆ. ಟ್ರಕ್‌ಗಳ ನಿರ್ವಹಣಾ ವೆಚ್ಚ, ಬ್ಯಾಂಕ್‌ಗಳ ಕಂತು, ಚಾಲಕರು ಮತ್ತು ಕ್ಲೀನರ್‌ಗಳ ದೈನಂದಿನ ಖರ್ಚು ಮುಂದುವರಿದಿರುವುದರಿಂದ ಪ್ರತಿದಿನವೂ ನಷ್ಟ ಹೆಚ್ಚುತ್ತಿದೆ. ಟ್ರಕ್‌ಗಳಲ್ಲಿ ಸಾಗಿಸಲಾಗುತ್ತಿದ್ದ ತರಕಾರಿ ಹಾಗೂ ಕೆಲವು ಆಹಾರ ಪದಾರ್ಥಗಳು ಹಾಳಾಗುತ್ತಿವೆ. ಸರಕು ಸಮಯಕ್ಕೆ ತಲುಪದ ಕಾರಣ ವ್ಯಾಪಾರಿಗಳ ಪಾವತಿಗಳೂ ಸ್ಥಗಿತಗೊಂಡಿದ್ದು, ಒಟ್ಟಾರೆ ವ್ಯಾಪಾರದ ಹಣಕಾಸು ಚಕ್ರಕ್ಕೆ ಹೊಡೆತಬಿದ್ದಿದೆ.

ಪ್ರವಾಹದಿಂದ ಹಾನಿಗೊಳಗಾದ ಮಾರ್ಗಗಳನ್ನು ತಕ್ಷಣ ದುರಸ್ತಿ ಮಾಡಿ ಸಂಚಾರ ಪುನರಾರಂಭಿಸಬೇಕು. ಗಡಿಯಲ್ಲಿ ಸಿಲುಕಿರುವ ಸರಕುಸಾಗಣೆ ವಾಹನಗಳನ್ನು ಸುರಕ್ಷಿತವಾಗಿ ತೆರವುಗೊಳಿಸುವ ವ್ಯವಸ್ಥೆ ಮಾಡಬೇಕು ಎಂದು ಟ್ರಾನ್ಸ್‌ಪೋರ್ಟ್ ಸಂಘಟನೆಗಳು ಒತ್ತಾಯಿಸಿವೆ.

**ಪ್ರವಾಸೋದ್ಯಮಕ್ಕೂ ಹೊಡೆತ:** ನೇಪಾಳದ ಪ್ರವಾಹದ ಪರಿಣಾಮ ಬರೇಲಿಯ ಪ್ರವಾಸೋದ್ಯಮ ಮತ್ತು ಪ್ರಯಾಣ ಸೇವೆಗಳ ಮೇಲೂ ಪರಿಣಾಮ ಬೀರಿದೆ. ನೇಪಾಳಕ್ಕೆ ತೆರಳುವ ಪ್ರವಾಸಿಗರು ಬರೇಲಿಯಲ್ಲಿ ತಂಗಿ ನಗರದ ನಾಥ ದೇವಾಲಯಗಳು ಸೇರಿದಂತೆ ವಿವಿಧ ಸ್ಥಳಗಳಿಗೆ ಭೇಟಿ ನೀಡುವುದು ಸಾಮಾನ್ಯವಾಗಿತ್ತು. ಆದರೆ ಪ್ರಸ್ತುತ ನೇಪಾಳ ಪ್ರವಾಸಕ್ಕೆ ಹೊಸ ಬುಕಿಂಗ್‌ಗಳು ಬಹುತೇಕ ನಿಂತಿವೆ ಎಂದು ಟ್ರಾವೆಲ್ ಏಜೆನ್ಸಿಗಳು ತಿಳಿಸಿವೆ.




# ಭಾರತ ಚಂದ್ರನನ್ನು ತಲುಪಿರಬಹುದು, ಆದರೆ ಜಾತಿ ವ್ಯವಸ್ಥೆಯ ದುಷ್ಟತನ ಇನ್ನೂ ಸಮಾಜದಲ್ಲಿ ಅಸ್ತಿತ್ವದಲ್ಲಿದೆ: ಬಾಂಬೇ ಹೈಕೋರ್ಟ್

**ಮುಂಬೈ, ಸೆ.5:** ಭಾರತ ಬಾಹ್ಯಾಕಾಶ ಕ್ಷೇತ್ರದಲ್ಲಿ ಮಹತ್ವದ ಸಾಧನೆಗಳನ್ನು ಮಾಡುತ್ತಾ ಚಂದ್ರನತ್ತ ತಲುಪಿದ್ದರೂ, ಸಮಾಜದಲ್ಲಿ ಜಾತಿ ವ್ಯವಸ್ಥೆಯಂತಹ ಸಾಮಾಜಿಕ ಪಿಡುಗುಗಳು ಇನ್ನೂ ಮುಂದುವರಿದಿರುವುದು ವಿಷಾದಕರ ಎಂದು ಬಾಂಬೇ ಹೈಕೋರ್ಟ್ ತೀವ್ರ ಅಸಮಾಧಾನ ವ್ಯಕ್ತಪಡಿಸಿದೆ. ಮ್ಯಾನುಯಲ್ ಸ್ಕ್ಯಾವೆಂಜಿಂಗ್ (ಮಲಮೂತ್ರವನ್ನು ಕೈಯಿಂದ ಸ್ವಚ್ಛಗೊಳಿಸುವ ಅಮಾನವೀಯ ಪದ್ಧತಿ) ವೇಳೆ ಮೃತಪಟ್ಟ ಕಾರ್ಮಿಕರ ಕುಟುಂಬಗಳಿಗೆ ಪರಿಹಾರ ನೀಡುವ ವಿಚಾರಣೆ ಸಂದರ್ಭದಲ್ಲಿ ನ್ಯಾಯಮೂರ್ತಿಗಳಾದ ಭಾರತಿ ಡಾಂಗ್ರೆ ಮತ್ತು ಮಂಜುಷಾ ದೇಶಪಾಂಡೆ ಅವರನ್ನೊಳಗೊಂಡ ಪೀಠ ಈ ಮಹತ್ವದ ಅಭಿಪ್ರಾಯ ವ್ಯಕ್ತಪಡಿಸಿದೆ.

ಅಪಾಯಕಾರಿ ಸ್ವಚ್ಛತಾ ಕಾರ್ಯದಲ್ಲಿ ಮೃತಪಟ್ಟ ಕಾರ್ಮಿಕರ ಕುಟುಂಬಗಳಿಗೆ ಪರಿಹಾರ ನೀಡುವ ಹೊಣೆಗಾರಿಕೆಯನ್ನು ಖಾಸಗಿ ಸಂಸ್ಥೆಗಳು ಮತ್ತು ಉದ್ಯೋಗದಾತರ ಮೇಲೆ ಮಾತ್ರ ಹೊರಿಸುವ ಮಹಾರಾಷ್ಟ್ರ ಸರ್ಕಾರದ ನೀತಿಯ ಒಂದು ಭಾಗವನ್ನು ನ್ಯಾಯಾಲಯ ರದ್ದುಗೊಳಿಸಿದೆ.

ಸರ್ಕಾರಿ ಸಂಸ್ಥೆಗಳಲ್ಲಿ ಕೆಲಸ ಮಾಡುವ ಕಾರ್ಮಿಕರು ಮತ್ತು ಖಾಸಗಿ ಸಂಸ್ಥೆಗಳು ಅಥವಾ ಗುತ್ತಿಗೆದಾರರ ಮೂಲಕ ಕೆಲಸ ಮಾಡುವ ಕಾರ್ಮಿಕರ ನಡುವೆ ಪರಿಹಾರದ ವಿಚಾರದಲ್ಲಿ ತಾರತಮ್ಯ ಮಾಡಲಾಗದು ಎಂದು ನ್ಯಾಯಾಲಯ ಸ್ಪಷ್ಟಪಡಿಸಿದೆ. 2013ರ ಮ್ಯಾನುಯಲ್ ಸ್ಕ್ಯಾವೆಂಜರ್ಸ್ ಕಾಯ್ದೆ ಕಾರ್ಮಿಕರು ಸರ್ಕಾರಿ ಅಥವಾ ಖಾಸಗಿ ಸಂಸ್ಥೆಯಲ್ಲಿ ಕೆಲಸ ಮಾಡುತ್ತಿದ್ದಾರೆ ಎಂಬ ಆಧಾರದ ಮೇಲೆ ಯಾವುದೇ ಭೇದಭಾವ ಮಾಡುವುದಿಲ್ಲ ಎಂದು ಪೀಠ ಹೇಳಿದೆ.

**ಸರ್ಕಾರವೇ ಮೊದಲು ಪರಿಹಾರ ನೀಡಬೇಕು**

ಅಪಾಯಕಾರಿ ಸ್ವಚ್ಛತಾ ಕಾರ್ಯದಲ್ಲಿ ಮೃತಪಟ್ಟ ಕಾರ್ಮಿಕರ ಅವಲಂಬಿತರಿಗೆ ರಾಜ್ಯ ಸರ್ಕಾರವೇ ತಕ್ಷಣ ಪರಿಹಾರ ನೀಡಬೇಕು ಎಂದು ಹೈಕೋರ್ಟ್ ನಿರ್ದೇಶಿಸಿದೆ. ಬಳಿಕ ಅಗತ್ಯವಿದ್ದರೆ ಸಂಬಂಧಪಟ್ಟ ಖಾಸಗಿ ಸಂಸ್ಥೆ ಅಥವಾ ಉದ್ಯೋಗದಾತರಿಂದ ಆ ಮೊತ್ತವನ್ನು ವಸೂಲಿ ಮಾಡಿಕೊಳ್ಳಬಹುದು ಎಂದರು. ಮೃತ ಕಾರ್ಮಿಕರ ಕುಟುಂಬಗಳಿಗೆ ತಲಾ 30 ಲಕ್ಷ ಪರಿಹಾರ ನೀಡುವಂತೆ ನ್ಯಾಯಾಲಯ ಆದೇಶಿಸಿದೆ. ಈಗಾಗಲೇ ಐವರು ಖಾಸಗಿ ಸ್ವಚ್ಛತಾ ಕಾರ್ಮಿಕರ ಕುಟುಂಬಗಳಿಗೆ ಈ ಪರಿಹಾರ ನೀಡಲು ಸೂಚಿಸಲಾಗಿದ್ದು, 2013ರ ಕಾಯ್ದೆಯ ವ್ಯಾಪ್ತಿಗೆ ಬರುವ ಅಪಾಯಕಾರಿ ಸ್ವಚ್ಛತಾ ಕಾರ್ಯದಲ್ಲಿ ಮೃತಪಟ್ಟ ಎಲ್ಲರನ್ನೂ ಗುರುತಿಸುವಂತೆ ಸರ್ಕಾರಕ್ಕೆ ನಿರ್ದೇಶನ ನೀಡಲಾಗಿದೆ. ಈ ಗುರುತಿಸುವಿಕೆ ಪ್ರಕ್ರಿಯೆಯನ್ನು ಆರು ತಿಂಗಳೊಳಗೆ ಪೂರ್ಣಗೊಳಿಸಬೇಕು ಎಂದು ಪೀಠ ಆದೇಶಿಸಿದೆ.

**ಮಾನವ ಘನತೆಗೆ ವಿರುದ್ಧವಾದ ಕೆಲಸ**

ಜಾತಿ ವ್ಯವಸ್ಥೆಯಿಂದ ಸಮಾಜದ ನಿರ್ದಿಷ್ಟ ವರ್ಗದ ಜನರು ತಲೆತಲಾಂತರಗಳಿಂದ ಮಾನವ ಘನತೆಗೆ ವಿರುದ್ಧವಾದ ಕೆಲಸ ಮಾಡಲು ಒತ್ತಾಯಿಸಲ್ಪಡುತ್ತಿರುವುದು ಕಳವಳಕಾರಿ ಎಂದು ನ್ಯಾಯಾಲಯ ಅಭಿಪ್ರಾಯಪಟ್ಟಿದೆ. ಸಂವಿಧಾನವು ಪ್ರತಿಯೊಬ್ಬ ನಾಗರಿಕನಿಗೂ ಕಾನೂನಿನ ಮುಂದೆ ಸಮಾನತೆ ಹಾಗೂ ಸಮಾನ ಕಾನೂನು ರಕ್ಷಣೆಯ ಭರವಸೆ ನೀಡಿದೆ. ಸಂವಿಧಾನ ಜಾರಿಗೆ ಬಂದು 75 ವರ್ಷಗಳಿಗೂ ಹೆಚ್ಚು ಕಾಲ ಕಳೆದಿದ್ದರೂ, ಶತಮಾನಗಳಿಂದ ಸಮಾಜವನ್ನು ಕಾಡುತ್ತಿರುವ ಜಾತಿ ವ್ಯವಸ್ಥೆಯಂತಹ ಸಾಮಾಜಿಕ ಪಿಡುಗಿನಿಂದ ದೇಶ ಇನ್ನೂ ಸಂಪೂರ್ಣವಾಗಿ ಮುಕ್ತವಾಗಿಲ್ಲ ಎಂದು ಪೀಠ ವಿಷಾದಿಸಿದೆ.

# ನೇಪಾಳ ಪ್ರವಾಹ: ಸಾವಿನ ಸಂಖ್ಯೆ 1,350ಕ್ಕೆ ಏರಿಕೆ, 4,800ಕ್ಕೂ ಹೆಚ್ಚು ಮಂದಿ ಇನ್ನೂ ನಾಪತ್ತೆ

**ಕಠ್ಮಂಡು, ಸೆ.5:** ನೇಪಾಳವನ್ನು ಅಪ್ಪಳಿಸಿದ ಭೀಕರ ಪ್ರವಾಹದಲ್ಲಿ ಶನಿವಾರ 1,350ಕ್ಕೆ ಏರಿಕೆಯಾಗಿದೆ. ರಕ್ಷಣಾ ಪಡೆಗಳು ವಿಪತ್ತು ಪೀಡಿತ ಪ್ರದೇಶಗಳಲ್ಲಿ ಶೋಧ ಕಾರ್ಯಾಚರಣೆಯನ್ನು ಮುಂದುವರೆಸಿದ್ದು, ಹೆಚ್ಚಿನ ಶವಗಳು ಪತ್ತೆಯಾಗಿವೆ. ನೇಪಾಳ ಪೊಲೀಸರು ಬಿಡುಗಡೆ ಮಾಡಿದ ಅಧಿಕೃತ ಮಾಹಿತಿಯ ಪ್ರಕಾರ, 758 ವೃದ್ಧರು ಮತ್ತು 85 ಮಕ್ಕಳು ಸೇರಿದಂತೆ ಒಟ್ಟು 843 ಶವಗಳನ್ನು ಯಶಸ್ವಿಯಾಗಿ ಗುರುತಿಸಲಾಗಿದೆ ಮತ್ತು ಇದುವರೆಗೆ ವಶಪಡಿಸಿಕೊಳ್ಳಲಾಗಿದೆ.

ಇದಲ್ಲದೆ, ಅಧಿಕಾರಿಗಳು ಪ್ರವಾಹ ಪೀಡಿತ ಪ್ರದೇಶಗಳಿಂದ 501 ಅಂಗವಿಕಲ ಮತ್ತು ಛಿದ್ರಗೊಂಡ ಶವಗಳನ್ನು ವಶಪಡಿಸಿಕೊಂಡಿದ್ದಾರೆ. ಆಗಸ್ಟ್ 26 ರಂದು ನೇಪಾಳ-ಟಿಬೆಟ್ ಗಡಿಯಲ್ಲಿ ಸಂಭವಿಸಿದ ಭಾರಿ ಹಿಮಪಾತದಿಂದ ಉಂಟಾದ ನೈಸರ್ಗಿಕ ವಿಕೋಪವು ಉತ್ತರ ಮತ್ತು ಮಧ್ಯ ನೇಪಾಳದ ನಗರಗಳು ಮತ್ತು ಹಳ್ಳಿಗಳನ್ನು ಸಂಪೂರ್ಣವಾಗಿ ಧ್ವಂಸಗೊಳಿಸಿದೆ. ಇಲ್ಲಿಯವರೆಗೆ, ಡಿಎನ್‌ಎ ಮಾದರಿಗಳ ಸಂಗ್ರಹ ಸೇರಿದಂತೆ ನಿಗದಿತ ಕಾನೂನು ಕಾರ್ಯವಿಧಾನಗಳನ್ನು ಅನುಸರಿಸಿ 1,030 ಶವಗಳನ್ನು ತಾತ್ಕಾಲಿಕವಾಗಿ ಹೊರತೆಗೆದು ದಹನ ಮಾಡಲಾಗಿದೆ. ನೇಪಾಳ ಸೇನೆಯ ನೇತೃತ್ವದಲ್ಲಿ ಜಂಟಿ ರಕ್ಷಣಾ ಕಾರ್ಯಾಚರಣೆ ಶನಿವಾರ 11ನೇ ದಿನವೂ ಮುಂದುವರಿದಿದ್ದು, ಅಂದಾಜು 4,898 ಜನರು ಇನ್ನೂ ಕಾಣೆಯಾಗಿದ್ದಾರೆ. ಹಾನಿಗೊಳಗಾದ ಸುರಂಗಗಳು, ಕಟ್ಟಡಗಳು ಮತ್ತು ನದಿಪಾತ್ರಗಳಲ್ಲಿ ಬಲಿಪಶುಗಳನ್ನು ಪತ್ತೆಹಚ್ಚಲು ಶೋಧ ಕಾರ್ಯಾಚರಣೆ ನಡೆಯುತ್ತಿದೆ.

# ಎಲ್‌ಐಸಿ ಹೌಸಿಂಗ್ ಫೈನಾನ್ಸ್ ಸಾಲ ವಂಚನೆ ಪ್ರಕರಣ ಸುಭಾಷ್‌ಚಂದ್ರ ವಿರುದ್ಧ ಸಿಬಿಐ ಎಫ್‌ಐಆರ್ ದಾಖಲು

**ನವದೆಹಲಿ,ಸೆ.5:** ಎಲ್‌ಐಸಿ ಹೌಸಿಂಗ್ ಫೈನಾನ್ಸ್‌ನಿಂದ ಪಡೆದ 1,322 ಕೋಟಿಗೂ ಹೆಚ್ಚಿನ ಸಾಲದಲ್ಲಿ ನಡೆದಿದೆ ಎನ್ನಲಾದ ಅಕ್ರಮಗಳಿಗೆ ಸಂಬಂಧಿಸಿದಂತೆ ಎಸ್ಸೆಲ್ ಗ್ರೂಪ್ ಅಧ್ಯಕ್ಷ ಸುಭಾಷ್‌ಚಂದ್ರ ಮತ್ತು ಇತರರ ವಿರುದ್ಧ ಸಿಬಿಐ ಎಫ್‌ಐಆರ್ ದಾಖಲಿಸಿದೆ ಎಂದು ತನಿಖಾ ಸಂಸ್ಥೆ ಶನಿವಾರ ತಿಳಿಸಿದೆ. ಸುಭಾಷ್ ಚಂದ್ರ ಅವರು ಇತರ ಕಂಪನಿಗಳು ಮತ್ತು ಅವುಗಳ ನಿರ್ದೇಶಕರೊಂದಿಗೆ ಸೇರಿ ಸಾಲ ಪಡೆಯಲು ಸುಳ್ಳು ಹಾಗೂ ಉತ್ಪ್ರೇಕ್ಷಿತ ಷೇರುಮೌಲ್ಯಗಳನ್ನು ಸಲ್ಲಿಸಿದ್ದಾರೆ ಎಂದು ಆರೋಪಿಸಿ ಎಲ್‌ಐಸಿ ಹೌಸಿಂಗ್ ಫೈನಾನ್ಸ್ ನೀಡಿದ ದೂರಿನ ಆಧಾರದ ಮೇಲೆ ಆಗಸ್ಟ್ 31 ರಂದು ಈ ಎಫ್‌ಐಆರ್ ದಾಖಲಾಗಿದೆ. ಪ್ರಕರಣದಲ್ಲಿ ಹೆಸರಿಸಲಾದವರ ವಿರುದ್ಧ ಅಪರಾಧಿಕ ಸಂಚು, ವಂಚನೆ ಮತ್ತು ನಂಬಿಕೆ ದ್ರೋಹದ ಆರೋಪಗಳ ಅಡಿಯಲ್ಲಿ ತನಿಖಾ ಸಂಸ್ಥೆಯು ಪ್ರಕರಣ ದಾಖಲಿಸಿಕೊಂಡಿದೆ.

**ಎಲ್‌ಐಸಿ ಹೌಸಿಂಗ್ ಫೈನಾನ್ಸ್ ವಿರುದ್ಧದ ಆರೋಪವೇನು:** ಎಲ್‌ಐಸಿ ಹೌಸಿಂಗ್ ಫೈನಾನ್ಸ್ ನೀಡಿರುವ ದೂರಿನ ಪ್ರಕಾರ, ಮಾರ್ಚ್ 2018 ರಲ್ಲಿ ಎಲ್‌ಐಸಿ ಹೌಸಿಂಗ್ ಫೈನಾನ್ಸ್ ಸಂಸ್ಥೆಯು ಉದ್ಯಮ ವಿಸ್ತರಣೆಗಾಗಿ ವಸಂತ್ ಸಾಗರ್ ಪ್ರಾಪರ್ಟೀಸ್ ಪ್ರೈವೇಟ್ ಲಿಮಿಟೆಡ್ ಮತ್ತು ಪ್ಯಾನ್ ಇಂಡಿಯಾ ಇನ್ಫ್ರಾಪ್ರಾಜೆಕ್ಟ್ಸ್ ಪ್ರೈವೇಟ್ ಲಿಮಿಟೆಡ್‌ಗೆ 500 ಕೋಟಿ ಸಾಲವನ್ನು ಮಂಜೂರು ಮಾಡಿತ್ತು. ಇದಕ್ಕೆ ಸುಭಾಷ್ ಚಂದ್ರ ಅವರು ವೈಯಕ್ತಿಕ ಶೂರಿಟಿ (ಗ್ಯಾರಂಟರ್) ಆಗಿದ್ದರು. ನಂತರ ಆಗಸ್ಟ್ 2018 ರಲ್ಲಿ, ಬಾಡಿಗೆ ರಿಯಾಯಿತಿ ಯೋಜನೆಯಡಿ ಡಿಜಿಟಲ್ ಸಬ್‌ಸ್ಕ್ರೈಬರ್ ಮ್ಯಾನೇಜ್ಮೆಂಟ್ ಅಂಡ್ ಕನ್ಸಲ್ಟೆನ್ಸಿ ಸರ್ವಿಸಸ್ ಪ್ರೈವೇಟ್ ಲಿಮಿಟೆಡ್ ಮತ್ತು ಸ್ಪಿರಿಟ್ ಇನ್ಫ್ರಾಪವರ್ ಅಂಡ್ ಮಲ್ಟಿವೆಂಚರ್ಸ್ ಪ್ರೈವೇಟ್ ಲಿಮಿಟೆಡ್‌ಗೆ 480 ಕೋಟಿಯ ಮತ್ತೊಂದು ಸಾಲವನ್ನು ಮಂಜೂರು ಮಾಡಲಾಗಿತ್ತು. ಇದಕ್ಕೂ ಸುಭಾಷ್‌ಚಂದ್ರ ಅವರೇ ವೈಯಕ್ತಿಕ ಗ್ಯಾರಂಟರ್ ಆಗಿದ್ದರು.

ಆದರೆ ಮೊದಲ ಸಾಲದ ಅನುಮೋದನೆಯು ಭಾಗಶಃ ಸುಭಾಷ್ ಚಂದ್ರ ಅವರು ಸಲ್ಲಿಸಿದ ನಿವ್ವಳ ಮೌಲ್ಯ (ನೆಟ್ ವರ್ತ್) ಪ್ರಮಾಣಪತ್ರವನ್ನು ಆಧರಿಸಿತ್ತು. ಈ ಪ್ರಮಾಣಪತ್ರವು ಮಾರ್ಚ್ 31, 2017 ರಂತೆ ಅವರ ನಿವ್ವಳ ಮೌಲ್ಯವನ್ನು $6.2 ಬಿಲಿಯನ್ (?59,113 ಕೋಟಿ) ಎಂದು ತೋರಿಸಿತ್ತು. ಎರಡನೇ ಸಾಲಕ್ಕೆ ಬಳಸಲಾದ ಮತ್ತೊಂದು ಪ್ರಮಾಣಪತ್ರವು ಅವರ ನಿವ್ವಳ ಮೌಲ್ಯವನ್ನು 40,562 ಕೋಟಿ ಎಂದು ತೋರಿಸಿದೆ ಎಂದು ಆರೋಪಿಸಲಾಗಿದೆ.

ನಂತರ ಈ ಎರಡೂ ಸಾಲದ ಖಾತೆಗಳು ಸುಸ್ತಿದಾರವಾದವು (ಡಿಫಾಲ್ಟ್). ವಸಂತ್ ಸಾಗರ್ ಸಂಸ್ಥೆಯ ಸಾಲದ ಬಾಕಿ 570.50 ಕೋಟಿ ಮತ್ತು ಡಿಜಿಟಲ್ ಸಬ್‌ಸ್ಕ್ರೈಬರ್ ಮ್ಯಾನೇಜ್ಮೆಂಟ್ ಸಂಸ್ಥೆಯ ಸಾಲದ ಬಾಕಿ 507.25 ಕೋಟಿ ತಲುಪಿದೆ. ಚಂದ್ರ ಅವರು ನಂತರ ತಮ್ಮ ವೈಯಕ್ತಿಕ ದಿವಾಳಿತನದ ನಡಾವಳಿಗಳ ಸಮಯದಲ್ಲಿ ಈ ನಿವ್ವಳ ಮೌಲ್ಯದ ಅಂಕಿಅಂಶಗಳನ್ನು ವಿವಾದಕ್ಕೆಡೆ ಮಾಡಿದರು. ಅವರ ಆರ್ಥಿಕ ಸ್ಥಿತಿಯನ್ನು ಸುಳ್ಳಾಗಿ ಬಿಂಬಿಸಲು ನಕಲಿ ದಾಖಲೆಗಳನ್ನು ಸೃಷ್ಟಿಸಲಾಗಿದೆ ಎಂದು ಎಲ್‌ಐಸಿ ಹೌಸಿಂಗ್ ಫೈನಾನ್ಸ್ ಆರೋಪಿಸಿದೆ

# ಭದ್ರತಾ ಪಡೆಗಳ ಜೊತೆಗೆ ಗುಂಡಿನ ಚಕಮಕಿ: ಪಾಕ್ ಮೂಲದ ಲಷ್ಕರ್ ಕಮಾಂಡರ್ ಯಾಸಿರ್ ಹತ



**ಶ್ರೀನಗರ, ಸೆ.5:** ಜಮ್ಮು-ಕಾಶ್ಮೀರದ ಯುಸ್ಮರ್ಗ್ ಪ್ರದೇಶದಲ್ಲಿ ಭದ್ರತಾ ಪಡೆಗಳೊಂದಿಗೆ ನಡೆದ ಗುಂಡಿನ ಚಕಮಕಿಯಲ್ಲಿ ಪಾಕಿಸ್ತಾನ ಮೂಲದ ಲಷ್ಕರ್-ಎ-ತೊಯ್ಬಾ (ಎಲ್‌ಇಟಿ) ಕಮಾಂಡರ್ ಯಾಸಿರ್ ಹತನಾಗಿದ್ದಾನೆ.

ಭದ್ರತಾ ಪಡೆಗಳ ಮೂಲಗಳ ಪ್ರಕಾರ, ಯಾಸಿರ್ ಲಷ್ಕರ್-ಎ-ತೊಯ್ಬಾದ ಸುಲೈಮಾನ್ ಮೂಸಾ ಗುಂಪಿನ ಭಾಗವಾಗಿದ್ದ. ಆದರೆ ಸುಮಾರು ಒಂದು ವರ್ಷದ ಹಿಂದೆ ಆತ ಆ ಗುಂಪಿನಿಂದ ಬೇರ್ಪಟ್ಟಿದ್ದ. ಬಳಿಕ ಪ್ರತ್ಯೇಕವಾಗಿ ಕಾರ್ಯನಿರ್ವಹಿಸುತ್ತಿದ್ದ ಯಾಸಿರ್, ಯುಸ್ಮರ್ಗ್ ಪ್ರದೇಶದಲ್ಲಿ ಲಷ್ಕರ್‌ನ ಪ್ರಮುಖ ಕಮಾಂಡರ್ ಆಗಿ ಹೊರಹೊಮ್ಮಿದ್ದ ಎಂದು ತಿಳಿಸಲಾಗಿದೆ.

ಭದ್ರತಾ ಪಡೆಗಳು ಯಾಸಿರ್‌ನ ಚಲನವಲನದ ಮೇಲೆ ದೀರ್ಘಕಾಲದಿಂದ ನಿಗಾ ಇರಿಸಿದ್ದವು. ಶನಿವಾರ ಆತನೊಂದಿಗೆ ಭದ್ರತಾ ಪಡೆಗಳು ಮುಖಾಮುಖಿಯಾದ ಸಂದರ್ಭದಲ್ಲಿ ಗುಂಡಿನ ಚಕಮಕಿ ನಡೆದಿದ್ದು, ಕಾರ್ಯಾಚರಣೆಯಲ್ಲಿ ಯಾಸಿರ್ ಹತನಾಗಿದ್ದಾನೆ.

ಯುಸ್ಮರ್ಗ್‌ನಲ್ಲಿ ನಡೆದ ಈ ಎನ್‌ಕೌಂಟರ್ ಜಮ್ಮು-ಕಾಶ್ಮೀರದಲ್ಲಿ ಮುಂದುವರಿದಿರುವ ಉಗ್ರ ನಿಗ್ರಹ ಕಾರ್ಯಾಚರಣೆಯ ಭಾಗವಾಗಿದೆ. ಯಾಸಿರ್‌ನ ಜಾಲ, ಇತರ ಲಷ್ಕರ್ ಉಗ್ರರೊಂದಿಗಿನ ಆತನ ಸಂಪರ್ಕ ಹಾಗೂ ಇತ್ತೀಚೆಗೆ ನಡೆದಿರುವ ಯಾವುದೇ ಉಗ್ರ ಚಟುವಟಿಕೆಗಳ ಯೋಜನೆ ಅಥವಾ ನೆರವಿನಲ್ಲಿ ಆತ ಭಾಗಿಯಾಗಿದ್ದನೇ ಎಂಬುದರ ಕುರಿತು ಭದ್ರತಾ ಸಂಸ್ಥೆಗಳು ತನಿಖೆ ನಡೆಸುತ್ತಿವೆ.

# 280ಕ್ಕೂ ಹೆಚ್ಚು ಚುನಾವಣೆಗೆ ಸ್ಪರ್ಧಿಸಿದ್ದ ಧರ್ತಿ ಪಕಡ್ ಇನ್ನಿಲ್ಲ



**ಪಟನಾ, ಸೆ.5:** ಧರ್ತಿ ಪಕಡ್ ಎಂದೇ ಖ್ಯಾತಿ ಗಳಿಸಿದ್ದ ಬಿಹಾರದ ಹಿರಿಯ ಉದ್ಯಮಿ ಹಾಗೂ ಸಮಾಜ ಸೇವಕ ನಾಗರ್‌ಮಲ್ ಬಾಜೋರಿಯಾ (97) ಅವರು ಶುಕ್ರವಾರ ಪಟನಾದ ಆಸ್ಪತ್ರೆಯಲ್ಲಿ ನಿಧನರಾಗಿದ್ದಾರೆ. ಸ್ಥಳೀಯ ವಾರ್ಡ್ ಚುನಾವಣೆಯಿಂದ ಹಿಡಿದು ದೇಶದ ಅತ್ಯುನ್ನತ ರಾಷ್ಟ್ರಪತಿ ಹಾಗೂ ಉಪರಾಷ್ಟ್ರಪತಿ ಚುನಾವಣೆಗಳವರೆಗೆ ಒಟ್ಟು 280ಕ್ಕೂ ಹೆಚ್ಚು ಬಾರಿ ಸ್ಪರ್ಧಿಸಿ, ಸೋತರೂ ಪ್ರಜಾಪ್ರಭುತ್ವದ ಹಬ್ಬದಲ್ಲಿ ಭಾಗವಹಿಸುವ ಮೂಲಕ ಅವರು ದೇಶಾದ್ಯಂತ ವಿಶಿಷ್ಟ ಗುರುತನ್ನು ಪಡೆದುಕೊಂಡಿದ್ದರು.

ರಾಯ್‌ಬರೇಲಿಯಲ್ಲಿ ಇಂದಿರಾ ಗಾಂಧಿ, ಅಮೇಟಿಯಲ್ಲಿ ರಾಜೀವ್ ಗಾಂಧಿ ಹಾಗೂ ಮಾಜಿ ಪ್ರಧಾನಿಗಳಾದ ಅಟಲ್ ಬಿಹಾರಿ ವಾಜಪೇಯಿ, ಸಂಜಯ್ ಗಾಂಧಿ, ಎಲ್.ಕೆ. ಅಡ್ವಾಣಿ ಮತ್ತು ಪ್ರಣಬ್ ಮುಖರ್ಜಿ ಅವರಂತಹ ಪ್ರಭಾವಿ ರಾಜಕಾರಣಿಗಳ ವಿರುದ್ಧವೇ ನಾಗರ್‌ಮಲ್ ಸ್ಪರ್ಧಿಸಿದ್ದರು. ನಾನು ಚುನಾವಣೆಯಲ್ಲಿ ಸೋಲುವುದಿಲ್ಲ, ಬದಲಿಗೆ ಜನರೇ ಸೋಲುತ್ತಾರೆ ಎನ್ನುವುದು ಪ್ರಸಿದ್ಧ ಸಾಲಾಗಿತ್ತು. ಅವಿಭಜಿತ ಭಾರತದ ಲಾಹೋರ್‌ನಲ್ಲಿ ಜನಿಸಿದ್ದ ಬಾಜೋರಿಯಾ ಕುಟುಂಬ, ಸ್ವಾತಂತ್ರ್ಯನಂತರ ಭಾಗಲ್ಪುರದಲ್ಲಿ ನೆಲೆಸಿ ವ್ಯಾಪಾರ ಪ್ರಾರಂಭಿಸಿತು. ತಮ್ಮ ಚುನಾವಣಾ ಪ್ರಚಾರದಲ್ಲಿ ಗಾಂಧೀಜಿ ಕಾಲದ ಹಳೆಯ ಕೈಗಡಿಯಾರ ಧರಿಸಿ, ಕೈಯಲ್ಲಿ ಘಂಟೆ ಬಾರಿಸುತ್ತಾ ಜನರಲ್ಲಿ ಜಾಗೃತಿ ಮೂಡಿಸುತ್ತಿದ್ದರು. 2005ರ ಚುನಾವಣೆಯಲ್ಲಿ ಭ್ರಷ್ಟಾಚಾರದ ವಿರುದ್ಧ ಕತ್ತೆಗಳ ಕೊರಳಿಗೆ ಭಿತ್ತಿಪತ್ರಗಳನ್ನು ಕಟ್ಟಿ ಅವರು ನಡೆಸಿದ್ದ ರ‍್ಯಾಲಿಲಿ ದೇಶದ ಗಮನ ಸೆಳೆದಿತ್ತು.

ಸಾಮಾಜಿಕ ಕಾರ್ಯಗಳಲ್ಲೂ ಸಕ್ರಿಯರಾಗಿದ್ದ ಅವರು, ಬಡ ಹೆಣ್ಣುಮಕ್ಕಳ ಮದುವೆ ಹಾಗೂ ಕುಡಿಯುವ ನೀರಿನ ಸೌಲಭ್ಯಕ್ಕಾಗಿ ಕೊಳವೆಬಾವಿಗಳನ್ನು ತೋಡಿಸುವ ಮೂಲಕ ಭಾಗಲ್ಪುರದಲ್ಲಿ ಜನಪ್ರಿಯರಾಗಿದ್ದರು. ಅವರ ನಿಧನಕ್ಕೆ ಬಿಹಾರದ ರಾಜಕೀಯ ಮತ್ತು ಸಾಮಾಜಿಕ ವಲಯ ತೀವ್ರ ಕಂಬನಿ ಮಿಡಿದಿದೆ.

# ಶ್ರೀಕೃಷ್ಣನ ಅನುಗ್ರಹ ಪರಮ ಪುಣ್ಯದಾಯಕವಾದುದು: ಪುತ್ತಿಗೆ ಸುಗುಣೇಂದ್ರ ತೀರ್ಥರು

**ಮುಂಬಯಿ, ಸೆ.5:** ಸಯಾನ್ ಪೂರ್ವದನಲ್ಲಿನ ಗೋಕುಲ ಸಂಕುಲದಲ್ಲಿ ಪ್ರತಿಷ್ಠಾಪಿತ ನೂತನ ಶಿಲಾಮಯ ಶ್ರೀ ಗೋಪಾಲಕೃಷ್ಣನ ಸನ್ನಿಧಾನದಲ್ಲಿ ಇಂದಿಲ್ಲಿ ಶನಿವಾರ ಗೋಪಾಲಕೃಷ್ಣ ಪಬ್ಲಿಕ್ ಟ್ರಸ್ಟ್ ಮತ್ತು ಬಾಂಬೇ ಸೌತ್ ಕೆನರಾ ಬ್ರಾಹ್ಮೀಣ್ಸ್ ಅಸೋಸಿಯೇಶನ್ (ಬಿಎಸ್‌ಕೆಬಿಎ-ಗೋಕುಲ) ಸಂಭ್ರಮ ಸಡಗರದೊಂದಿಗೆ ವಿಟ್ಲಪಿಂಡಿ, ಕೃಷ್ಣ ಲಿಲೋತ್ಸವ ನೆರವೇರಿಸಿ ಸಾಂಪ್ರದಾಯಿಕ ಮತ್ತು ಶ್ರದ್ಧಾಪೂರ್ವಕವಾಗಿ ಶ್ರೀಕೃಷ್ಣ ಜನ್ಮಾಷ್ಟಮಿ ಆಚರಿಸಿತು.

ಶನಿವಾರ ಪೂರ್ವಾಹ್ನ ಜಗದ್ಗುರು ಶ್ರೀ ಮಧ್ವಾಚಾರ್ಯ ಮೂಲ ಮಹಾ ಸಂಸ್ಥಾನಂ (ಉಡುಪಿ ಶ್ರೀ ಪುತ್ತಿಗೆ ಮಠ) ಇದರ ಪೀಠಾಧಿಪತಿ ಶ್ರೀ ಸುಗುಣೇಂದ್ರ ತೀರ್ಥ ಸ್ವಾಮೀಜಿ ಅವರು ಅಪರಾಹ್ನ ಗೋಕುಲಕ್ಕೆ ಚಿತ್ತೈಸಿ ಸನ್ನಿಧಾನದಲ್ಲಿನ ಗೋಪಾಲಕೃಷ್ಣ ದೇವರ ದರ್ಶನ ಪಡೆದು ಆರತಿ ನೆರವೇರಿಸಿ ನೆರೆದ ಭಕ್ತಾದಿಗಳನ್ನು ಹರಸಿದರು. ಸಂಸ್ಕೃತ ಭಾಷೆಯು ದೇವಭಾಷೆ ಮತ್ತು ಅಂತರ್‌ದೇಶಿಯ ಭಾಷೆಯಾಗಿದೆ. ಆದ್ದರಿಂದ ದೇವರನ್ನು ಸಮೀಪಿಸು ವ ಭಾಷೆ ಎಂದೆಣಿಸಿ ದೇವಪೂಜಾ ಸರ್ವಶ್ರೇಷ್ಠ ಭಾಷೆಯಾಗಿದೆ. ಸಂಸ್ಕೃತಿಯು ಮಹಿಮಯುತವಾಗಿದ್ದು ಇದರ ಅಭ್ಯಾಸ, ಅಧ್ಯಯನವಾಗಲಿ. ಶ್ರೀಕೃಷ್ಣನ ಭಗವಾದ್ಗೀತೆ ಅರಿತ ಭಕ್ತರೇ ಸರ್ವಶ್ರೇಷ್ಠರಾರಾಗಿರುತ್ತಾರೆ. ಇಂತಹ ಕೃಷ್ಣನು ಮುಂಬಯಿ ಕೇಂದ್ರಿತ ಸಯನ್‌ನ ಗೋಕುಲದಲ್ಲಿ ನೆಲೆಯಾಗಿ ಈ ಸಡಗರಕ್ಕೆ ನಾಂದಿಯಾಗಿದ್ದು ಇದು ನೆರೆದ ಸದ್ಭಕ್ತರ ಭಾಗ್ಯವಾಗಿದೆ ಎಂದು ಯತಿಕುಲ ಚಕ್ರವರ್ತಿ ಪುತ್ತಿಗೆಶ್ರೀ ಸುಗುಣೇಂದ್ರ ತೀರ್ಥರು ನುಡಿದರು.



ಬಿಎಸ್‌ಕೆಬಿಎ ಅಧ್ಯಕ್ಷೆ ಶೈಲಿನಿ ಎ.ರಾವ್ ಮತ್ತು ಡಾ| ಅರುಣ್ ರಾವ್ ದಂಪತಿ ಪದಾಧಿಕಾರಿಗಳನ್ನೊಳಗೊಂಡು ಶ್ರೀಗಳವರನ್ನು ಕುಂಭಪೂರ್ಣ ಸ್ವಾಗತಗೈದು ಗೋಕುಲ ಸನ್ನಿಧಿಗೆ ಬರಮಾಡಿಕೊಂಡು ಶ್ರೀಗಳವರ ಪಾದಪೂಜೆ ನೆರವೇರಿಸಿದರು. ಬಿಎಸ್‌ಕೆಬಿಎ ಮಾಜಿ ಉಪಾಧ್ಯಕ್ಷ ವಾಮನ ಹೊಳ್ಳ ಸ್ವಾಗತಿಸಿ, ಕಾರ್ಯಕ್ರಮ ನಿರೂಪಿಸಿದರು. ಅನಂತ ಪದ್ಮನಾಭನ್ ಕೆ.ಪೊತಿ ಕೃತಜ್ಞತೆ ಸಲ್ಲಿಸಿದರು. ಬಿಎಸ್‌ಕೆಬಿಎ ಅಧ್ಯಕ್ಷೆ ಶೈಲಿನಿ ಎ.ರಾವ್, ನಿಕಟಪೂರ್ವ ಅಧ್ಯಕ್ಷ ಡಾ| ಸುರೇಶ್ ಎಸ್.ರಾವ್ ಕಟೀಲು, ಉಪಾಧ್ಯಕ್ಷ ಕೆ.ರಾಜಾರಾಮ್ ಆಚಾರ್ಯ (ಆಶ್ರಯ, ಹಿರಿಯ ಆರೈಕೆ ಕೇಂದ್ರ ಸಮಿತಿ ಕಾರ್ಯಧ್ಯಕ್ಷ), ಗೌರವ ಕಾರ್ಯದರ್ಶಿ ಅನಂತ ಪದ್ಮನಾಭನ್ ಕೆ.ಪೊತಿ, ಗೌರವ ಕೋಶಾಧಿಕಾರಿ ಗಣೇಶ್ ಭಟ್ (ಸಂರಕ್ಷಕ ನಿರ್ವಹಣಾ ಸಮಿತಿ ಸಂಚಾಲಕ), ಗೌರವ ಜೊತೆ ಕಾರ್ಯದರ್ಶಿಗಳಾದ ಪ್ರಶಾಂತ್ ಆರ್. ಹೆರ್ಲೆ (ಆಶ್ರಯ ಜೊತೆ ಕಾರ್ಯದರ್ಶಿ) ಮತ್ತು ನ್ಯಾಯವಾದಿ ಎಲ್ಲೂರು ಗುರುರಾಜ್ ಭಟ್, ಮಹಿಳಾ ವಿಭಾಗದ ಸಂಚಾಲಕಿ ಸ್ಮಿತಾ ಎ.ಭಟ್, ಯುವ ವಿಭಾಗದ ಸಂಚಾಲಕಿ ಕು| ಶ್ರೀಲಕ್ಷ್ಮಿ ಎಸ್. ಉಡುಪ, ಗೋಕುಲ ಭಜನಾ ಮಂಡಳಿ ಸಮಿತಿ ಮತ್ತು ಮಾಧ್ಯಮ ಸಂಚಾಲಕಿ ಐ.ಕೆ. ಪ್ರೇಮಾ ಸುಬ್ರಹ್ಮಣ್ಯರಾವ್, ಆಹಾರ ಸಮಿತಿ ಹಾಗೂ ಗೋಕುಲ ಸಾಂಸ್ಕೃತಿಕ ತರಬೇತಿ ಕೇಂದ್ರ ಸಮಿತಿ ಸಂಚಾಲಕಿ ಡಾ|ಸಹನಾ ಎ.ಪೊತಿ, ಗೋಕುಲ ಕಲಾವೃಂದದ ಸಂಚಾಲಕಿ ನ್ಯಾಯವಾದಿ ಗೀತಾ ಎಲ್.ಭಟ್, ವಿದ್ಯಾನಿಧಿ ಮತ್ತು ಶಾಲಾ ದತ್ತು ಸಮಿತಿ ಸಂಚಾಲಕಿ ವಿದ್ಯಾ ರಾವ್ ಖಾರ್, ವಲಯ ಚಟುವಟಿಕೆಗಳ ಸಮಿತಿ ಹಾಗೂ ಆಶ್ರಯ ಸಮಿತಿ ಸಂಚಾಲಕಿ ಚಂದ್ರಾವತಿ ಕೆ.ರಾವ್, ಗ್ರಂಥಾಲಯ ಮತ್ತು ದಾಖಲೆ ಸಂಗ್ರಹಣಾ ಸಮಿತಿ ಸಂಚಾಲಕ ಕೆ.ಸುಬ್ಬಣ್ಣ ರಾವ್, ಮಾಹಿತಿ ತಂತ್ರಜ್ಞಾನ ಮತ್ತು ಸಾಮಾಜಿಕ ಮಾಧ್ಯಮ ಸಮಿತಿ ಸಂಚಾಲಕ ಕಾರ್ತಿಕ್ ಎಸ್. ಉಡುಪ, ಸದಸ್ಯತ್ವ ಸಮಿತಿ ಸಂಚಾಲಕ ಚಂದ್ರಶೇಖರ ಭಟ್, ವಿಶೇಷ ಆಮಂತ್ರಿತ ಸದಸ್ಯರಾದ ರಾಮಪ್ರಸಾದ್ ರಾವ್, ಜಗದೀಶ್ ಜಿ.ಆಚಾರ್ಯ ಹಾಗೂ ಪುರೋಹಿತ ಗುರುಪ್ರಸಾದ್ ಭಟ್ (ಫನ್ಸೋಲಿ), ಗೋಪಾಲ ಎಸ್.ರಾವ್,

## ಗೋಕುಲ ಸಂಕುಲದಲ್ಲಿನ ಶ್ರೀಗೋಪಾಲಕೃಷ್ಣ ಮಂದಿರದಲ್ಲಿ ಶ್ರೀಕೃಷ್ಣ ಜನ್ಮಾಷ್ಟಮಿ

ಗೋಪಾಲ ಕೃಷ್ಣ ಟ್ರಸ್ಟ್‌ನ ಗೌರವ ಟ್ರಸ್ಟಿಗಳಾದ ಬಿ.ರಮಾನಂದ ರಾವ್, ಕೃಷ್ಣ ಆಚಾರ್ಯ, ಜೆ.ಸಿ ಕುಮಾರ್, ಆರ್.ಎಲ್ ಭಟ್ ಜೆರಿಮೆರಿ ಸೇರಿದಂತೆ ಉಭಯ ಸಂಸ್ಥೆಗಳ ಪದಾಧಿಕಾರಿಗಳು, ಸದಸ್ಯರನೇಕರು, ವಾರ್ಷಿಕ ಅಷ್ಟಮಿ ಉತ್ಸವದಲ್ಲಿ ಪಾಲ್ಗೊಂಡಿದ್ದು, ಅಪಾರ ಸಂಖ್ಯೆಯ ಭಕ್ತಾದಿಗಳು ಆಗಮಿಸಿ ಶ್ರೀಗೋಪಾಲಕೃಷ್ಣ ದೇವರ ದರ್ಶನ ಪಡೆದು ವಿಶೇಷ ಪೂಜೆಗೈದರು.

ಶುಕ್ರವಾರ ಸಂಜೆಯಿಂದಲೇ ಜನ್ಮಾಷ್ಟಮಿ ಸಡಗರಕ್ಕೆ ಸಿದ್ಧತೆ ನಡೆಸಲಾಗಿ ಡೊಗ್ಗಾಲು ಶ್ರೀ ಕೃಷ್ಣನಿಗೆ 108 ರಜತ ಕಲಶಾಭಿಷೇಕ, ಸ್ಯಾಕ್ಸೋಫೋನ್ ವಾದನ, ಹೆಸರಾಂತ ಶಾಸ್ತ್ರೀಯ ಹಾಗೂ ಭಕ್ತಿಗೀತೆ ಗಾಯಕಿಯರಿಂದ ಭಕ್ತಿ ಸಂಗೀತ, ದೇವರನಾಮಗಳ ಕಚೇರಿ, ವಿಷ್ಣು ಸಹಸ್ರ ನಾಮ, ಕೃಷ್ಣಾಷ್ಟೋತ್ತರ ಪಠಣೆ, ನಿಶೀಥಿನಿ ಸಮಯದಿ ಜನ್ಮಾಷ್ಠಮಿ ಪೂಜೆ, ಅರ್ಘ್ಯ ಪ್ರದಾನ ನೆರವೇರಿಸಿ ವಾರ್ಷಿಕ ಜನ್ಮಾಷ್ಟಮಿಗೆ ಮೊದಲ್ಗೊಳ್ಳಲಾಯಿತು.

ಶನಿವಾರ ಬೆಳಗ್ಗೆಯಿಂದ ಪುನಃ ರಜತ ಕಲಶಾಭಿಷೇಕ, ಮಹಾಪೂಜೆ, ನಂತರ ಜನ್ಮಾಷ್ಟಮಿ ಮಹಾ ಅನ್ನಪ್ರಸಾದ ನಡೆಸಲಾಯಿತು. ಅಪರಾಹ್ನ ಶ್ರೀಕೃಷ್ಣ ಲೀಲೋತ್ಸವದ ಅಂಗವಾಗಿ ಕರಿವೇಶ, ಯಕ್ಷಗಾನ ವೇಷ ಇತ್ಯಾದಿಗಳೊಂದಿಗೆ ವೈಭವದ ಪಲ್ಲಕ್ಕಿ ಉತ್ಸವ, ರಾತ್ರಿ ಮಂಗಳಾರತಿ, ಮಹಾಪೂಜೆ, ತೀರ್ಥ ಪ್ರಸಾದ ವಿತರಣೆ, ಉಪಹಾರ ನಡೆಸಲ್ಪಟ್ಟಿತು. ಗೋಕುಲದ ಪ್ರಧಾನ ಅರ್ಚಕ ವೇ| ಮೂ| ಶ್ರೀನಿವಾಸ ಭಟ್ ಧರೆಗುಡ್ಡೆ, ಅರ್ಚಕ ಪ್ರಸನ್ನ ಭಟ್, ರಾಮವಿಠಲ ಕಲ್ಲೂರಾಯ ಮತ್ತಿತರ ಪುರೋಹಿತರು ತಮ್ಮ ಪೌರೋಹಿತ್ಯದಲ್ಲಿ ವಿವಿಧ ಪೂಜಾಧಿಗಳನ್ನು ನೆರವೇರಿಸಿ ಅನುಗ್ರಹಿಸಿದರು.

ಬಿ.ಆರ್ ಹೊಟೇಲು ಸಮೂಹದ ಆಡಳಿತ ನಿರ್ದೇಶಕ ಬಿ.ಆರ್ ಶೆಟ್ಟಿ (ಉಡುಪಿ) ಪ್ರಾಯೋಜಕತ್ವದಲ್ಲಿ ದಹಿಹಂಡಿ ನಡೆಸಲಾಗಿದ್ದು ಕೃಷ್ಣಭಕ್ತರು ಪಾಲ್ಗೊಂಡು ಅದ್ದೂರಿಯಾಗಿ ಮೊಸರು ಕುಡಿಕೆ (ದಹಿ ಹಂಡಿ) ಸಂಭ್ರಮಿಸಿದರು.

ವಕ್ರತುಂಡ ಸಂಗೀತ ಬಳಗವು ಇಂದಿಲ್ಲಿ ಕೊಳಲು ವಾದನ, ಗೋಕುಲ ಭಜನಾ ಮಂಡಳಿಯು ಭಜನೆ, ಆರ್ಟ್ಸ್ ಆಫ್ ಲಿವಿಂಗ್ ಬಳಗವು ಭಕ್ತಿಗೀತೆ ಪ್ರಸ್ತುತ ಪಡಿಸಿದವು. ಗೀತಾ ಎಲ್.ಭಟ್ ನಿರ್ದೇಶನದಲ್ಲಿ ಗೋಕುಲದ ಕಲಾವಿದರು 'ಕನಕಾಂಗಿ ಕಲ್ಯಾಣ' ಯಕ್ಷಗಾನ ಪ್ರದರ್ಶಿಸಿತು. ಈ ಮೂಲಕ ವಾರ್ಷಿಕ ಶ್ರೀಕೃಷ್ಣೋತ್ಸವ ಸಮಾಪ್ತಿ ಗೊಂಡಿತು.

### ಸಾರ್ವಜನಿಕರ ಮನೆ ಬಾಗಿಲಿಗೇ ಆಡಳಿತ, ಸೌಲಭ್ಯ:

# ಪ್ರಜಾಸೇವಾ ಅಭಿಯಾನಕ್ಕೆ ಕೃಷ್ಣಬೈರೇಗೌಡ ಚಾಲನೆ


**ಬೆಂಗಳೂರು, ಸೆ.5:** ರಾಜ್ಯ ಸರ್ಕಾರದ ಮಹತ್ವಾಕಾಂಕ್ಷೆಯ 'ಪ್ರಜಾಸೇವೆ' ಅಭಿಯಾನ ಜಿಲ್ಲೆಯ ಜನರಿಗೆ ಸರ್ಕಾರದ ಸೌಲಭ್ಯಗಳು ಹಾಗೂ ಆಡಳಿತವನ್ನು ನೇರವಾಗಿ ಸಾರ್ವಜನಿಕರ ಮನೆಬಾಗಿಲಿಗೆ ತಲುಪಿಸುವ ಯೋಜನೆಯಾಗಿದ್ದು ಈ ಯೋಜನೆಯನ್ನು ಸದುಪಯೋಗ ಪಡೆದುಕೊಳ್ಳುವಂತೆ ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಸಚಿವರು ಹಾಗೂ ಬೆಂಗಳೂರು ನಗರ ಜಿಲ್ಲಾ ಉಸ್ತುವಾರಿ ಸಚಿವರಾದ ಕೃಷ್ಣ ಬೈರೇಗೌಡ ತಿಳಿಸಿದರು.

ಬೆಂಗಳೂರು ಪೂರ್ವ ತಾಲ್ಲೂಕಿನ ಬಿದರಹಳ್ಳಿ ಗ್ರಾಮದ ಸರ್ಕಾರಿ ಪ್ರೌಢಶಾಲಾ ಆವರಣದಲ್ಲಿ ಆಯೋಜಿಸಿದ್ದ ಪ್ರಜಾಸೇವೆ ಆಂದೋಲನ ಸಭೆಗೆ ಶನಿವಾರ ಚಾಲನೆ ನೀಡಿ ಮಾತನಾಡಿ, ಮುಖ್ಯಮಂತ್ರಿಗಳು ತಮ್ಮ ಕನಸಿನ, ಹೊಸ ಕಲ್ಪನೆಯ ನೂತನ ಪ್ರಜಾ




ಸೇವಾ ಇಲಾಖೆಯನ್ನೇ ಹುಟ್ಟುಹಾಕಿದ್ದಾರೆ. ಜನರ ಸಮಸ್ಯೆಗಳಿಗೆ ವಿಶೇಷವಾಗಿ ಜನ ಸಾಮಾನ್ಯರು ಹಾಗೂ ಬಡವರ ಸಮಸ್ಯೆಗಳಿಗೆ ಸ್ಪಂದಿಸಲು ಈ ಅಭಿಯಾನ ರಾಜ್ಯಾದ್ಯಂತ ಹಮ್ಮಿಕೊಳ್ಳಲಾಗಿದೆ ಎಂದು ಹೇಳಿದರು.

ಜನರು ತಮ್ಮ ಸಮಸ್ಯೆಗಳ ಪರಿಹಾರಕ್ಕಾಗಿ ಸರ್ಕಾರಿ ಕಚೇರಿಗಳಿಗೆ ಅಲೆಯುವ ಬದಲು ಸರ್ಕಾರವೇ ಜನರ ಮನೆಬಾಗಿಲಿಗೆ ತೆರಳಿ ಸಮಸ್ಯೆಗಳನ್ನು ಆಲಿಸಿ ಪರಿಹಾರ ಒದಗಿಸಬೇಕು ಎಂಬ ಉದ್ದೇಶದಿಂದ ರಾಜ್ಯದ ಎಲ್ಲಾ



ಜಿಲ್ಲೆಗಳಲ್ಲಿ ಏಕಕಾಲದಲ್ಲಿ ಪ್ರಜಾಸೇವೆ ಆಂದೋಲನ ಸಭೆಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು.

ಈ ಕಾರ್ಯಕ್ರಮ ಪ್ರತಿ ಶನಿವಾರ ನಡೆಯಲಿದ್ದು ಎಲ್ಲಾ ಇಲಾಖೆಯ ಅಧಿಕಾರಿಗಳು ಜನರ ಸಮಸ್ಯೆಗಳನ್ನು ಪರಿಹರಿಸುವ ಕಾರ್ಯ ಮಾಡಬೇಕಾಗುತ್ತದೆ ಎಂದರು.

ಸಾರ್ವಜನಿಕರಿಂದ ಸ್ವೀಕರಿಸಲಾಗುವ ದೂರು ಹಾಗೂ ಅರ್ಜಿಗಳನ್ನು ನಿಗದಿತ ಕಾಲಮಿತಿಯಲ್ಲಿ ವಿಲೇವಾರಿ ಮಾಡಲಾಗುತ್ತಿದೆಯೇ ಎಂಬುದನ್ನು ಪರಿಶೀಲಿಸಲು ಪ್ರಜಾಸೇವಾ ಇಲಾಖೆಗೆ ಓರ್ವ ಕಾರ್ಯದರ್ಶಿಯನ್ನು ನೇಮಕ ಮಾಡಲಾಗಿದೆ ಎಂದು ಹೇಳಿದರು.

ಸಭೆಯಲ್ಲಿ ವಿವಿಧ ಇಲಾಖೆಗಳ ವ್ಯಾಪ್ತಿಗೆ ಸಂಬಂಧಿಸಿದಂತೆ ಒಟ್ಟು 235 ಅರ್ಜಿಗಳನ್ನು ಸಾರ್ವಜನಿಕರಿಂದ ಸ್ವೀಕರಿಸಲಾಯಿತು. ಅದರಲ್ಲಿ ಬಹುತೇಕ ಅರ್ಜಿಗಳು ವಸತಿ ಹಾಗೂ ನಿವೇಶನ ಕೋರಿ ಬಂದಿದ್ದು ಉಳಿದಂತೆ ಬಿದರಹಳ್ಳಿಹೋಬಳಿಯಲ್ಲಿ ಪದವಿಪೂರ್ವ ಕಾಲೇಜು ಮಂಜೂರಾತಿಗಾಗಿ ಬಂದಿದೆ ಎಂದು ಬೆಂಗಳೂರು ನಗರ ಜಿಲ್ಲಾಧಿಕಾರಿ ಕಾಂತರಾಜು ಪಿ.ಎಸ್. ಮಾಹಿತಿ ನೀಡಿದರು.



ಮೈಸೂರಿನಿಂದ 20 ಕಿ.ಮೀ ದೂರದಲ್ಲಿರುವ ಬಿಳಿಕೆರೆ ಬಳಿ ಶನಿವಾರ ಸಂಜೆ ಕೆಎಸ್ಆರ್‌ಟಿಸಿ ನಡೆಸುತ್ತಿದ್ದ ಎಲೆಕ್ಟ್ರಿಕ್ ಬಸ್‌ಗೆ ಬೆಂಕಿ ಹೊತ್ತಿಕೊಂಡಿದ್ದು, 18 ಪ್ರಯಾಣಿಕರು ಕೂದಲೆಳೆ ಅಂತರದಲ್ಲಿ ಅಪಾಯದಿಂದ ಪಾರಾಗಿದ್ದಾರೆ. ಬಸ್ ಬೆಂಕಿಗೆ ಸಂಪೂರ್ಣ ಆಹುತಿಯಾಗಿದೆ.

### ಮಾಧ್ಯಮಗಳಿಗೆ ಸಚಿವ ಮಧುಬಂಗಾರಪ್ಪ ಮನವಿ: ಶಾಲೆಗಳಿಗೆ ದಿಢೀರ್ ಭೇಟಿ ನೀಡಿ ಶಿಕ್ಷಕರಿಗೆ ಶುಭಾಶಯ

# ಶಾಲೆಗಳ ಕೊರತೆ ಜತೆಗೆ ಸಾಧನೆ, ಸೌಕರ್ಯಗಳನ್ನೂ ಜನರಿಗೆ ತೋರಿಸಿ

**ಬೆಂಗಳೂರು, ಸೆ.5:** ಶಿಕ್ಷಕರ ದಿನಾಚರಣೆಯಾದ ಸೆ.5ರ ಶನಿವಾರ ದಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಸಚಿವ ಮಧು ಬಂಗಾರಪ್ಪ ಅವರು ಬೆಂಗಳೂರಿನ ಸರ್ಕಾರಿ ಶಾಲೆಗಳಿಗೆ ದಿಢೀರ್ ಭೇಟಿ ನೀಡಿ ಶಿಕ್ಷಕರಿಗೆ ಶುಭಾಶಯ ಕೋರಿ ಅಚ್ಚರಿ ಮೂಡಿಸಿದರು.

ಥಣಿಸಂದ್ರದ ಸರ್ಕಾರಿ ಪ್ರೌಢ ಶಾಲೆಗೆ ಭೇಟಿ ನೀಡಿ ಶಿಕ್ಷಕರೊಂದಿಗೆ ದಿನಾಚರಣೆ ಆಚರಿಸಿದ ಸಚಿವರು, ಶಿಕ್ಷಕ ವೃಂದಕ್ಕೆ ಪ್ರೀತಿಯಿಂದ ಗುಲಾಬಿ ಹೂ ನೀಡಿ ಗೌರವಿಸಿದರು.

ಶಿಕ್ಷಣ ಸಚಿವರೊಬ್ಬರು ನೇರವಾಗಿ ಶಾಲೆಗೆ ಆಗಮಿಸಿ ಶಿಕ್ಷಕರ ದಿನಾಚರಣೆ ಯಲ್ಲಿ ಪಾಲ್ಗೊಂಡಿದ್ದು ಇದೇ ಮೊದಲು. ದೆಹಲಿ ಶಾಲೆಗಳಿಗಿಂತ ನಮ್ಮ ಸರ್ಕಾರಿ ಶಾಲೆಗಳೇ ಮೇಲು ಕಾರ್ಯಕ್ರಮದಲ್ಲಿ ಮಾತನಾಡಿದ ಸಚಿವರು, ಥಣಿಸಂದ್ರದ ಸರ್ಕಾರಿ ಶಾಲೆ ದೆಹಲಿಯ ಸರ್ಕಾರಿ



ಶಾಲೆಗಳಿಗಿಂತಲೂ ಉತ್ತಮವಾಗಿದೆ. ಮಾಧ್ಯಮಗಳು ಸರ್ಕಾರಿ ಶಾಲೆಗಳ ಕೊರತೆಗಳ ಜೊತೆಗೆ ಇಂತಹ ಸಾಧನೆ ಹಾಗೂ ಸೌಕರ್ಯಗಳನ್ನೂ ರಾಜ್ಯದ ಜನರಿಗೆ ತೋರಿಸಬೇಕು ಎಂದು ಮನವಿ ಮಾಡಿದರು. ಸರ್ಕಾರಿ ಶಾಲಾ ವಿದ್ಯಾರ್ಥಿಗಳಿಗೆ ಹಲವು ಹೊಸ ಕೊಡುಗೆಗಳನ್ನು ನೀಡಲಾಗುತ್ತಿದ್ದು, 1ರಿಂದ 12ನೇ ತರಗತಿಯವರೆಗಿನ ವಿದ್ಯಾರ್ಥಿಗಳಿಗೆ ಉಚಿತ ನೋಟ್‌ಬುಕ್ ಗಳನ್ನು ನೀಡಲಾಗು ವುದು. ಸಾಧ್ಯವಾದರೆ ಇದನ್ನು ಇದೇ ವರ್ಷದಿಂದಲೇ ಜಾರಿಗೆ ತರಲಾಗುವುದು. ಅಲ್ಲದೆ, ಈ ಬಾರಿಯಿಂದ ಪಿಯುಸಿ ವಿದ್ಯಾರ್ಥಿ ಗಳಿಗೂ ಉಚಿತ ಪಠ್ಯಪುಸ್ತಕಗಳನ್ನು ವಿತರಿಸಲಾಗುತ್ತಿದೆ ಎಂದು ಸಚಿವರು ವಿವರಿಸಿದರು. ಬಳಿಕ ಆರ್.ಕೆ. ಹೆಗ್ಗಡೆನಗರದ ಸರ್ಕಾರಿ ಉರ್ದು ಆಂಗ್ಲ ಮಾಧ್ಯಮ ಶಾಲೆ ಹಾಗೂ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳಿಗೂ ಭೇಟಿ ನೀಡಿ ಶಿಕ್ಷಕರಿಗೆ ಸಚಿವರು ಶುಭ ಹಾರೈಸಿದರು.

**ಶಿಕ್ಷಕರೇ ಇಲ್ಲ ಎಂಬ ಸ್ಥಿತಿ ರಾಜ್ಯದಲ್ಲಿಲ್ಲ:** ತಂದೆ-ತಾಯಿ ಜನ್ಮ ನೀಡಿದರೆ, ಬದುಕಿನ ದಾರಿ ತೋರಿಸುವವರು ಶಿಕ್ಷಕರು. ಕರ್ನಾಟಕ ಪಬ್ಲಿಕ್ ಸ್ಕೂಲ್‌ಗಳನ್ನು ರಾಜ್ಯದ ಮಾದರಿ ಶಾಲೆಗಳನ್ನಾಗಿ ರೂಪಿಸಲು ಸರ್ಕಾರ ಬದ್ಧವಾಗಿದೆ.

15 ಸಾವಿರಕ್ಕೂ ಹೆಚ್ಚು ಶಿಕ್ಷಕರ ನೇಮಕಾತಿ ಪ್ರಕ್ರಿಯೆ ಚಾಲ್ತಿಯಲ್ಲಿದೆ. 52 ಸಾವಿರ ಅತಿಥಿ ಶಿಕ್ಷಕರನ್ನು ನೇಮಕ ಮಾಡಲಾಗಿದ್ದು, ರಾಜ್ಯದಲ್ಲಿ 'ಶಿಕ್ಷಕರೇ ಇಲ್ಲ' ಎಂಬ ಸ್ಥಿತಿ ಇಲ್ಲ. ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರ ನೇಮಕಾತಿಯೂ ಪ್ರಗತಿಯಲ್ಲಿದೆ ಎಂದರು.

# ಬೆಂಗಳೂರಿನ ರಸ್ತೆಗಳ ದುಸ್ಥಿತಿ ಬಗ್ಗೆ ಸಂಸದ ತೇಜಸ್ವಿ ಸೂರ್ಯ ಆಕ್ರೋಶ

**ಬೆಂಗಳೂರು, ಸೆ.5:** ಸಿಲಿಕಾನ್ ಸಿಟಿ ಬೆಂಗಳೂರಿನ ರಸ್ತೆ ಗುಂಡಿಗಳ ಸಮಸ್ಯೆ ಹಾಗೂ ಮೂಲಸೌಕರ್ಯಗಳ ಕುರಿತಾದ ಚರ್ಚೆ ಈಗ ಮತ್ತೊಮ್ಮೆ ತಾರಕಕ್ಕೇರಿದೆ. ನೂತನ ಗ್ರೇಟರ್ ಬೆಂಗಳೂರು ಅಭಿವೃದ್ಧಿ ಸಚಿವ ಕೃಷ್ಣಬೈರೇಗೌಡ ಅವರು ಇತ್ತೀಚೆಗೆ ಬೆಂಗಳೂರಿನ ಎಲ್ಲಾ ಸಂಸದರು ಹಾಗೂ ಶಾಸಕರ ಪ್ರಮುಖ ಸಭೆ ಯೊಂದನ್ನು ಕರೆದಿದ್ದರು. ಬೆಂಗಳೂರಿನ ಸರ್ವಾಂಗೀಣ ಅಭಿವೃದ್ಧಿ ಹಾಗೂ ಪ್ರಮುಖ ನಾಗರಿಕ ಸಮಸ್ಯೆಗಳ ಬಗ್ಗೆ ಚರ್ಚಿಸಲು ಈ ಸಭೆ ಆಯೋಜಿಸಲಾಗಿತ್ತು.

ಈ ಮಹತ್ವದ ಸಭೆಯಲ್ಲಿ ಬೆಂಗಳೂರು ದಕ್ಷಿಣ ಸಂಸದ ತೇಜಸ್ವಿ ಸೂರ್ಯ, ಶಾಸಕರಾದ ದಿನೇಶ್ ಗುಂಡೂರಾವ್, ಗೋಪಾಲಯ್ಯ, ಎಸ್.ಆರ್. ವಿಶ್ವನಾಥ್, ಬೈರತಿ ಬಸವರಾಜ್, ಮುನಿರತ್ನ, ಎಂ. ಕೃಷ್ಣಪ್ಪ, ಮಂಜುಳಾ ಲಿಂಬಾವಳಿ, ಗೋವಿಂದರಾಜ್ ಹಾಗೂ ನಾಗರಾಜ್ ಯಾದವ್ ಸೇರಿದಂತೆ ಹಲವು ಪ್ರಮುಖ ಜನಪ್ರತಿನಿಧಿಗಳು ಭಾಗವಹಿಸಿದ್ದರು.

ಸಭೆಯ ನಂತರ ಸಂಸದ ತೇಜಸ್ವಿ ಸೂರ್ಯ ಮಾಧ್ಯಮಗಳ ಮುಂದೆ ಬಿಚ್ಚಿಟ್ಟ ಅಂಕಿ-ಅಂಶಗಳು ಈಗ ಇಡೀ ಬೆಂಗಳೂರಿನ





ತೆರಿಗೆದಾರರನ್ನು ಬೆಚ್ಚಿಬೀಳಿಸಿದೆ.

ಬೆಂಗಳೂರಿನ ರಸ್ತೆಗಳ ದುಸ್ಥಿತಿಯ ಬಗ್ಗೆ ತೀವ್ರ ಆಕ್ರೋಶ ಹೊರಹಾಕಿದರು. ಕಳೆದ ಕೇವಲ ಮೂರು ವರ್ಷಗಳಲ್ಲಿ ಬೆಂಗಳೂರು ನಗರವೊಂದರಲ್ಲೇ ರಸ್ತೆ ಗುಂಡಿ ಮುಚ್ಚಲು ಮತ್ತು ರಸ್ತೆ ದುರಸ್ತಿಗಾಗಿ ಬರೋಬ್ಬರಿ 5,500 ಕೋಟಿ ರೂಪಾಯಿ ಖರ್ಚು ಮಾಡಲಾಗಿದೆ. ಇಷ್ಟೊಂದು ಬೃಹತ್ ಮೊತ್ತದ ಹಣ ತೆರಿಗೆದಾರರ ಜೇಬಿನಿಂದ ಹೋದರೂ ಬೆಂಗಳೂರಿನ ರಸ್ತೆಗಳ ಪರಿಸ್ಥಿತಿ ಮಾತ್ರ ಸುಧಾರಿಸಿಲ್ಲ ಎಂದು ಅವರು ಆರೋಪಿಸಿದರು.

ಅಷ್ಟೇ ಅಲ್ಲದೆ ಈಗ ಸರ್ಕಾರ ಮತ್ತೆ ರಸ್ತೆ ಕಾಮಗಾರಿಗಳ ಹೆಸರಿನಲ್ಲಿ ಸುಮಾರು 8,000 ಕೋಟಿ ರೂಪಾಯಿ ಖರ್ಚು ಮಾಡಲು ಮುಂದಾಗಿದೆ. ಕಳೆದ ಮೂರು ವರ್ಷಗಳಲ್ಲಿ ಖರ್ಚಾದ 5,500 ಕೋಟಿ ರೂ.ಗಳ ಲೆಕ್ಕ ಎಲ್ಲಿದೆ. ಆ ಹಣ ಯಾವ ರಸ್ತೆಗೆ, ಯಾರಿಗೆ ಹೋಯಿತು ಎಂಬ ಸರಿಯಾದ ಮಾಹಿತಿಯೇ ಇಲ್ಲ. ಆದ್ದರಿಂದ ಸರ್ಕಾರ ತಕ್ಷಣವೇ ಈ ವೆಚ್ಚದ ಬಗ್ಗೆ ಶ್ವೇತಪತ್ರ ಹೊರಡಿಸಬೇಕು ಎಂದು ಸಭೆಯಲ್ಲಿ ಸಚಿವರಿಗೆ ಲಿಖಿತ ಮನವಿ ಸಲ್ಲಿಸಿರುವುದಾಗಿ ತಿಳಿಸಿದರು.

**ಮೆಟ್ರೋ ಅವ್ಯವಸ್ಥೆ ವಿರುದ್ಧವೂ ವಾಗ್ದಾಳಿ:** ರಸ್ತೆಗಳ ಜೊತೆಗೆ ಬೆಂಗಳೂರಿನ ಜೀವನಾಡಿಯಾಗಿರುವ 'ನಮ್ಮ ಮೆಟ್ರೋ'ದ ಅವ್ಯವಸ್ಥೆಯ ವಿರುದ್ಧವೂ ತೇಜಸ್ವಿ ಸೂರ್ಯ ವಾಗ್ದಾಳಿ ನಡೆಸಿದರು. ಬೆಂಗಳೂರಿನಲ್ಲಿ ಪ್ರತಿದಿನ 12 ಲಕ್ಷಕ್ಕೂ ಅಧಿಕ ಮಂದಿ ಮೆಟ್ರೋ ಬಳಸುತ್ತಾರೆ. ಆದರೆ ದೇಶದ ಇತರ ಮೆಟ್ರೋ ನಗರಗಳಿಗೆ ಹೋಲಿಸಿದರೆ ನಮ್ಮ ಬೆಂಗಳೂರು ಮೆಟ್ರೋ ಪ್ರಯಾಣ ದರ ಅತ್ಯಂತ ದುಬಾರಿಯಾಗಿದೆ. ಇಷ್ಟು ಗರಿಷ್ಠ ದರ ವಸೂಲಿ ಮಾಡಿದರೂ ಕಳೆದ ಕೇವಲ 12 ತಿಂಗಳುಗಳಲ್ಲಿ ವಿವಿಧ ತಾಂತ್ರಿಕ ದೋಷಗಳಿಂದಾಗಿ ನಮ್ಮ ಮೆಟ್ರೋ ಸೇವೆ ಬರೋಬ್ಬರಿ 21 ಬಾರಿ ಸ್ಥಗಿತಗೊಂಡಿದೆ. ಹೆಚ್ಚಿನದರ ಪಡೆದರೂ ನಮ್ಮ ಮೆಟ್ರೋ ನೀಡುತ್ತಿರುವುದು ಡಕೋಟಾ ಎಕ್ಸ್‌ಪ್ರೆಸ್ ಸರ್ವೀಸ್ ಎಂದು ಸಂಸದರು ಲೇವಡಿ ಮಾಡಿದರು.

ಸದ್ಯ ಪ್ರಗತಿಯಲ್ಲಿರುವ ಮೆಟ್ರೋ ಆರೆಂಜ್ ಲೈನ್ ಹಾಗೂ ರೆಡ್ ಲೈನ್ ಕಾಮಗಾರಿಗಳನ್ನು ಆದಷ್ಟು ಬೇಗ ಪೂರ್ಣಗೊಳಿಸಿದರೆ ಲಕ್ಷಾಂತರ ಜನಸಾಮಾನ್ಯರಿಗೆ ಅನುಕೂಲವಾಗಲಿದೆ ಎಂದು ಅವರು ಸಭೆಯಲ್ಲಿ ಒತ್ತಾಯಿಸಿದರು. ವರ್ಷಕ್ಕೊಮ್ಮೆ ಸಾವಿರಾರು ಕೋಟಿ ರೂಪಾಯಿಗಳ ಯೋಜನೆಗಳು ಪ್ರಕಟವಾಗುತ್ತವೆ. ಕಾಗದದ ಮೇಲೆ ರಸ್ತೆಗುಂಡಿ ಮುಚ್ಚುವ ಕಾಮಗಾರಿಗಳೂ ನಡೆಯುತ್ತವೆ. ಆದರೆ ಮಳೆ ಬಂದಾಗ ಬೆಂಗಳೂರಿನ ರಸ್ತೆಗಳು ಕೆರೆಯಂತಾಗು ವುದು ಹಾಗೂ ಗುಂಡಿಗಳಿಂದಾಗಿ ಸವಾರರು ಪ್ರಾಣ ಕಳೆದುಕೊಳ್ಳುವುದು ಮಾತ್ರ ತಪ್ಪಿಲ್ಲ. ಸಂಸದ ತೇಜಸ್ವಿ ಸೂರ್ಯ ಬಿಚ್ಚಿಟ್ಟಿರುವ ಈ 5,500 ಕೋಟಿ ರೂ.ಗಳ ವೆಚ್ಚದ ಅಸಲಿ ಸತ್ಯದ ಬೆನ್ನಲ್ಲೇ ಈಗ ಬೆಂಗಳೂರಿಗರು ಪ್ರಶ್ನೆ ಎತ್ತುತ್ತಿದ್ದಾರೆ.

ನಿಮ್ಮ ಏರಿಯಾದಲ್ಲಿ ರಸ್ತೆ ಗುಂಡಿಗಳು ಮುಚ್ಚಲ್ಪಟ್ಟಿವೆಯೇ? ಇಷ್ಟೊಂದು ಕೋಟಿ ಹಣ ಖರ್ಚಾದರೂ ನಿಮ್ಮ ರಸ್ತೆಗಳು ಸುಧಾರಿಸಿವೆಯೇ ಎನ್ನುವುದನ್ನು ನೀವೇ ಯೋಚಿಸಬೇಕಿದೆ.

ಸಚಿವರು ಈ ಸಭೆಯ ಬಳಿಕ ರಸ್ತೆ ಸುಧಾರಣೆಗೆ ನೀಡಿರುವ ಹೊಸ ಡೆಡ್‌ಲೈನ್ ಗಳನ್ನಾದರೂ ಕಾಪಾಡುತ್ತಾರಾ ಎಂಬುದನ್ನು ಕಾದು ನೋಡಬೇಕಿದೆ.

# ಮತದಾರ ಪಟ್ಟಿಯಲ್ಲಿ ನಕಲಿ ಹೆಸರು, ಒಂದಕ್ಕಿಂತ ಹೆಚ್ಚುಕಡೆ ನೋಂದಣಿ ಪತ್ತೆಯಾದರೆ ಕ್ರಿಮಿನಲ್ ಪ್ರಕರಣ ದಾಖಲು

**ಬೆಂಗಳೂರು, ಸೆ.5:** ಮತದಾರರ ಪಟ್ಟಿಯಲ್ಲಿ ನಕಲಿ ಹೆಸರು, ದ್ವಿಮುಖ ನೋಂದಣಿ ಅಥವಾ ಒಂದಕ್ಕಿಂತ ಹೆಚ್ಚು ಕಡೆ ಹೆಸರು ಹೊಂದಿರುವ ಪ್ರಕರಣಗಳು ಪತ್ತೆಯಾದರೆ ಕ್ರಿಮಿನಲ್ ಮೊಕದ್ದಮೆ ದಾಖಲಿಸಲಾಗುವುದು ಎಂದು ಅಪರ ಜಿಲ್ಲಾ ಚುನಾವಣಾಧಿಕಾರಿ ಹಾಗೂ ಬೆಂಗಳೂರು ದಕ್ಷಿಣ ನಗರ ಪಾಲಿಕೆ ಆಯುಕ್ತ ಕೆ.ಎನ್. ರಮೇಶ್ ಎಚ್ಚರಿಕೆ ನೀಡಿದ್ದಾರೆ.


ಬೆಂಗಳೂರು ದಕ್ಷಿಣ ನಗರ ಜಿಲ್ಲಾ ವ್ಯಾಪ್ತಿಯಲ್ಲಿ ನಡೆಯುತ್ತಿರುವ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ಕುರಿತು ರಾಜಕೀಯ ಪಕ್ಷಗಳ ಪ್ರತಿನಿಧಿಗಳೊಂದಿಗೆ ನಡೆದ ಸಭೆಯಲ್ಲಿ ಅವರು ಈ ಸೂಚನೆ ನೀಡಿದರು. ಚುನಾವಣಾ ಆಯೋಗದ ಪರಿಷ್ಕೃತ ವೇಳಾಪಟ್ಟಿಯಂತೆ ಆಗಸ್ಟ್ 24ರಂದು ಕರಡು ಮತದಾರರ ಪಟ್ಟಿ ಪ್ರಕಟಿಸಲಾಗಿದ್ದು, ಮಾನ್ಯತೆ ಪಡೆದ ರಾಜಕೀಯ ಪಕ್ಷಗಳ ಪ್ರತಿನಿಧಿಗಳಿಗೆ ಪಟ್ಟಿಗಳನ್ನು ವಿತರಿಸಲಾಗಿದೆ. ಸೆಪ್ಟೆಂಬರ್ 3ರ ಮಾಹಿತಿಯಂತೆ ನಮೂನೆ 9, 10, 11 ಹಾಗೂ ಭಾವಚಿತ್ರರಹಿತ ಕರಡು ಮತದಾರರ ಪಟ್ಟಿಯ ಮಾಹಿತಿಯನ್ನು ಪೆನ್‌ಡ್ರೈವ್ ಮೂಲಕ ಪಕ್ಷಗಳ ಪ್ರತಿನಿಧಿಗಳಿಗೆ ನೀಡಲಾಗಿದೆ. 237 ಹೆಚ್ಚುವರಿ ಎಇಆರ್‌ಒಗಳ ನೇಮಕ-ವಿಶೇಷ ಪರಿಷ್ಕರಣೆಗೆ ಸಂಬಂಧಿಸಿದ ವಿಚಾರಣೆಗಳನ್ನು ನಿಗದಿತ ಅವಧಿಯಲ್ಲಿ ಪೂರ್ಣಗೊಳಿಸಲು 237 ಹೆಚ್ಚುವರಿ ಸಹಾಯಕ ಮತದಾರರ ನೋಂದಣಾಧಿಕಾರಿಗಳನ್ನು (ಎಇಆರ್‌ಒ) ನೇಮಕ ಮಾಡಲಾಗಿದೆ. ಅವರಿಗೆ ಈಗಾಗಲೇ ತರಬೇತಿ ನೀಡಲಾಗಿದ್ದು, ದಿನಕ್ಕೆ ಗರಿಷ್ಠ 50ರಿಂದ 60 ಪ್ರಕರಣಗಳ ವಿಚಾರಣೆ ನಡೆಸುವಂತೆ ಸೂಚಿಸಲಾಗಿದೆ.

ನೋಟಿಸ್ ಪಡೆದ ಮತದಾರರಿಗೆ ವಿಚಾರಣೆಗೆ ಹಾಜರಾಗಲು ಕನಿಷ್ಠ ಏಳು ದಿನಗಳ ಕಾಲಾವಕಾಶ ನೀಡಬೇಕು. ಮೊದಲ ನೋಟಿಸ್‌ಗೆ ಹಾಜರಾಗಲು ಸಾಧ್ಯವಾಗದವರಿಗೆ ಅಗತ್ಯವಿದ್ದಲ್ಲಿ ಎರಡನೇ ನೋಟಿಸ್ ನೀಡಿ ವಿಚಾರಣೆ ನಡೆಸಬೇಕು ಎಂದು ರಮೇಶ್ ಸೂಚಿಸಿದರು.

ಆಸ್ಪತ್ರೆಗೆ ದಾಖಲಾಗಿರುವವರು, 80 ವರ್ಷ ಮೇಲ್ಪಟ್ಟ ಹಿರಿಯ ನಾಗರಿಕರು ಹಾಗೂ ವಿಶೇಷ ಚೇತನ ಮತದಾರರನ್ನು ಕಚೇರಿಗೆ ಕರೆಸುವ ಬದಲು ಬಿಎಲ್‌ಒ ಅಥವಾ ಎಇಆರ್‌ಒಗಳು ಅವರ ಮನೆ ಅಥವಾ ಆಸ್ಪತ್ರೆಗೆ ತೆರಳಿ ಪರಿಶೀಲನೆ ನಡೆಸಬೇಕು ಎಂದು ಸೂಚಿಸಲಾಗಿದೆ.

ವಿಚಾರಣೆಗೆ ಹಾಜರಾಗುವ ಮತದಾರರು ಸಲ್ಲಿಸುವ ದಾಖಲೆಗಳಿಗಾಗಿ ಹಿಯರಿಂಗ್ ರಿಜಿಸ್ಟರ್ ನಿರ್ವಹಿಸಬೇಕು. ದಾಖಲೆಗಳಿಗೆ ಹಿಂಬರಹ ನೀಡಿ ಸಿಸ್ಟಮ್‌ನಲ್ಲಿ ಅಪ್‌ಲೋಡ್ ಮಾಡಬೇಕು. ವಿಚಾರಣೆಯ ದಿನಾಂಕ, ಸಮಯ ಹಾಗೂ ಸ್ಥಳವನ್ನು ನೋಟಿಸ್‌ನಲ್ಲಿ ಸ್ಪಷ್ಟವಾಗಿ ನಮೂದಿಸುವುದು ಕಡ್ಡಾಯ ಎಂದು ಅಧಿಕಾರಿಗಳಿಗೆ ಸೂಚಿಸಲಾಗಿದೆ. ಒಬ್ಬ ಮತದಾರನ ಹೆಸರು ಕರ್ನಾಟಕದ ಜೊತೆಗೆ ಬೇರೆ ರಾಜ್ಯದಲ್ಲಿಯೂ ಅಥವಾ ಒಂದಕ್ಕಿಂತ ಹೆಚ್ಚು ಮತದಾರರ ಪಟ್ಟಿಗಳಲ್ಲಿಯೂ ಇರುವುದಾಗಿ ಕಂಡುಬಂದರೆ ಪ್ರಜಾಪ್ರತಿನಿಧಿ ಕಾಯ್ದೆಯ ಕಲಂ 31ರಡಿ ಕ್ರಿಮಿನಲ್ ಮೊಕದ್ದಮೆ ದಾಖಲಿಸುವಂತೆ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ.

ಅದೇ ರೀತಿ ಫಾರ್ಮ್-6 ಮತ್ತು ಫಾರ್ಮ್-8ರ ಅರ್ಜಿಗಳನ್ನು ಮರುಪರಿಶೀಲಿಸಿ, ಅರ್ಹ ಪ್ರಕರಣಗಳನ್ನು ಮಾತ್ರ ಪರಿಗಣಿಸುವಂತೆ ಸೂಚಿಸಲಾಗಿದೆ. ಮತದಾರರ ಪಟ್ಟಿ ಪರಿಷ್ಕರಣೆ ಕುರಿತು ಜನರಲ್ಲಿ ಜಾಗೃತಿ ಮೂಡಿಸಲು ಪ್ರತಿ ವಾರ್ಡ್‌ಗೆ ಒಂದರಂತೆ ಧ್ವನಿವರ್ಧಕ ಅಳವಡಿಸಿದ ಆಟೋಗಳ ಮೂಲಕ ಬೆಳಗ್ಗೆ ಮತ್ತು ಸಂಜೆ ಪ್ರಚಾರ ನಡೆಸಲು ತೀರ್ಮಾನಿಸಲಾಗಿದೆ.



ಶಾಲಾ-ಕಾಲೇಜುಗಳು, ವೃತ್ತಗಳು ಹಾಗೂ ಜನನಿಬಿಡ ಪ್ರದೇಶಗಳಲ್ಲಿ ಕನ್ನಡ ಮತ್ತು ಇಂಗ್ಲಿಷ್‌ನಲ್ಲಿ ಬ್ಯಾನರ್‌ಗಳ ಮೂಲಕವೂ ಜಾಗೃತಿ ಮೂಡಿಸಲಾಗುತ್ತದೆ.ಸಭೆಯಲ್ಲಿ ರಾಜಕೀಯ ಪಕ್ಷಗಳ ಪ್ರತಿನಿಧಿಗಳು ಬಿಎಲ್‌ಒಗಳ ಕಾರ್ಯವೈಖರಿ, ವಿಳಾಸಗಳಲ್ಲಿನ ಲೋಪದೋಷ ಗಳು ಹಾಗೂ ಕ್ಷೇತ್ರ ಭೇಟಿಗೆ ಸಂಬಂಧಿಸಿದಂತೆ ಹಲವು ದೂರುಗಳನ್ನು ಸಲ್ಲಿಸಿದರು. ಈ ಬಗ್ಗೆ ಸ್ಥಳ ಪರಿಶೀಲನೆ ನಡೆಸಿ ತಕ್ಷಣ ಕ್ರಮ ಕೈಗೊಳ್ಳುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ರಮೇಶ್ ಸೂಚಿಸಿದರು.ಸಭೆಯಲ್ಲಿ ಅಪರ ಆಯುಕ್ತ ರಾಜಪ್ಪ, ಚುನಾವಣಾ ವಿಭಾಗದ ತಹಶೀಲ್ದಾರ್ ರಶ್ಮಿ ಹಾಗೂ ವಿವಿಧ ರಾಜಕೀಯ ಪಕ್ಷಗಳ ಪ್ರತಿನಿಧಿಗಳು ಉಪಸ್ಥಿತರಿದ್ದರು.

# ರಿಯಲ್ ಎಸ್ಟೇಟ್ ಗುಂಗಿನಿಂದ ಹೊರಬಂದು ಪ್ರಜಾಸೇವೆಗೆ ಮುಂದಾದ ಮುಖ್ಯಮಂತ್ರಿಗೆ ಧನ್ಯವಾದ: ನಿಖಿಲ್ ಲೇವಡಿ

**ಬೆಂಗಳೂರು, ಸೆ.5:** ರಿಯಲ್ ಎಸ್ಟೇಟ್ ಆಡಳಿತದ ಗುಂಗಿನಿಂದ ಹೊರಬಂದು, ಕೊನೆಗೂ ಪ್ರಜಾಸೇವೆ ನೆನಪಿಸಿಕೊಂಡ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಅವರಿಗೆ ಧನ್ಯವಾದಗಳು ಎಂದು ನಿಖಿಲ್ ಕುಮಾರಸ್ವಾಮಿ ಲೇವಡಿ ಮಾಡಿದ್ದಾರೆ.

ಈ ಸಂಬಂಧ ತಮ್ಮ ಎಕ್ಸ್ ಖಾತೆಯಲ್ಲಿ ಬರೆದುಕೊಂಡಿರುವ ಅವರು, ಕಳೆದ 3 ವರ್ಷಗಳಿಂದ ಜನಸಾಮಾನ್ಯರನ್ನು ಸಂಪೂರ್ಣವಾಗಿ ನಿರ್ಲಕ್ಷಿಸಿ, ಈಗ ಮಾಡುತ್ತಿರುವ ಈ ಕಾರ್ಯಕ್ರಮ 'ಬ್ರ್ಯಾಂಡ್ ಬೆಂಗಳೂರು' ಮಾದರಿಯ ಮತ್ತೊಂದು ಪ್ರಚಾರದ ಗಿಮಿಕ್ ಅಷ್ಟೇ ಎಂಬುದು ರಾಜ್ಯದ ಜನರಿಗೆ ಚೆನ್ನಾಗಿ ತಿಳಿದಿದೆ, ಕ್ಯಾಮರಾಗಳಿಗೆ ಪೋಸ್ ಕೊಡುವ ಮೊದಲು, ನಾಡಿನ ಈ ಜ್ವಲಂತ ಪ್ರಶ್ನೆಗಳಿಗೆ ಉತ್ತರಿಸಿ ಎಂದಿದ್ದಾರೆ.

ಹೈಕೋರ್ಟ್ ಗಮನ ಸೆಳೆದಿದ್ದರೂ, 1.2 ಕೋಟಿ ಫಲಾನುಭವಿ ಮಹಿಳೆಯ ರಿಗೆ ತಲುಪಬೇಕಾದ 5,000 ಕೋಟಿ ಹಣ ಎಲ್ಲಿದೆ ಸಾರಿಗೆ ನಿಗಮಗಳಿಗೆ ನೀಡಬೇಕಾದ 5,650 ಕೋಟಿ ಬಾಕಿ ಮೊತ್ತವನ್ನು ಬಿಡುಗಡೆ ಮಾಡದೆ, ಸಾರಿಗೆ ಸಂಸ್ಥೆಗಳನ್ನು ಕತ್ತಲಿಗೆ ತಳ್ಳಿದ್ದೀರಿ. ವಿಧವೆಯರು, ವೃದ್ಧರು ಹಾಗೂ ದಿವ್ಯಾಂಗರ 8 ತಿಂಗಳ ಮಾಸಾಶನವನ್ನು ತಡೆಹಿಡಿದಿರುವುದೇ ನಿಮ್ಮ "ಸಾಮಾಜಿಕ ನ್ಯಾಯವೇ" ಎಂದು ನಿಖಿಲ್ ಪ್ರಶ್ನಿಸಿದ್ದಾರೆ.

ಬರಪೀಡಿತ ರೈತರಿಗೆ ಸೂಕ್ತ ಪರಿಹಾರ ತಲುಪಿಲ್ಲ. ಇತ್ತ ಬಿಡದಿಯಲ್ಲಿ ಭೂಸ್ವಾಧೀನ ವಿರೋಧಿಸಿ ರೈತರು 600ಕ್ಕೂ ಹೆಚ್ಚು ದಿನಗಳಿಂದ ಹೋರಾಟ ನಡೆಸುತ್ತಿದ್ದಾರೆ. ಬೆಂಗಳೂರಿನ ಮಾರಣಾಂತಿಕ ರಸ್ತೆ



ಗುಂಡಿಗಳನ್ನು ಮುಚ್ಚಲು ಸಾಧ್ಯವಾಗಿಲ್ಲ, ಶಾಸಕರ ಕ್ಷೇತ್ರಾಭಿವೃದ್ಧಿ ಅನುದಾನ ವನ್ನೂ ಸಂಪೂರ್ಣವಾಗಿ ತಡೆಹಿಡಿಯ ಲಾಗಿದೆ. ಪ್ರಚಾರಕ್ಕಷ್ಟೇ ಸೀಮಿತವಾದ ಆಡಳಿತವನ್ನು ಬಿಟ್ಟು, ಜನಪರ ಆಡಳಿತ ನೀಡಿ. ಸೂಪರ್ ಸಿಎಂ ಸುರ್ಜೇವಾಲಾ ಅವರೇ, ನಿಮ್ಮ ಸರ್ಕಾರಕ್ಕೆ ತಕ್ಷಣವೇ ಸೂಕ್ತ ನಿರ್ದೇಶನ ನೀಡಿ, ರಾಜ್ಯದ ಜನರ ಕಷ್ಟಗಳಿಗೆ ಸ್ಪಂದಿಸುವಂತೆ ಮಾಡಿ ಎಂದು ನಿಖಿಲ್ ಆಗ್ರಹಿಸಿದ್ದಾರೆ.

# ಬೆಂಗಳೂರಿನ ರಸ್ತೆ ಸ್ವಚ್ಛತೆಗೆ ಹೈಟೆಕ್ ಯಂತ್ರ ದಿನಕ್ಕೆ 160 ಕಿಲೋಮೀಟರ್ ಸ್ವಚ್ಛತೆ

**ಬೆಂಗಳೂರು, ಸೆ.5:** ಗ್ರೇಟರ್ ಬೆಂಗಳೂರು ಪ್ರಾಧಿಕಾರ (ಜಿಬಿಎ) ನಗರದ ರಸ್ತೆಗಳ ಸ್ವಚ್ಛತೆಗೆ ಈಗಾಗಲೇ ಕೆಲವು ಸ್ವಚ್ಛತಾ ವಾಹನ ಬಳಸುತ್ತಿದೆ. ಹೊಸ ತಂತ್ರಜ್ಞಾನಗಳನ್ನು ಉಪಯೋಗಿ ಸುತ್ತಿದೆ. ಇದೀಗ ಅತ್ಯಾಧುನಿಕ ಮೆಕ್ಯಾನಿಕಲ್ ಸ್ವೀಪಿಂಗ್ ಯಂತ್ರಗಳ ಬಳಕೆಗೆ ಮುಂದಾಗಿದೆ. ಸದ್ಯ ಪ್ರಾಯೋಗಿಕವಾಗಿ ಬಳಸಲಿದ್ದು, ಶೀಘ್ರವೇ ಶಾಶ್ವತವಾಗಿ ಬಳಸಲು ಪ್ಲ್ಯಾನ್ ಮಾಡಲಾಗಿದೆ.ಟೆಂಡರ್‌ನಲ್ಲಿ ಕೆಲವು ಸಂಸ್ಥೆಗಳು ಪಾಲ್ಗೊಂಡಿದ್ದು, ಶೀಘ್ರವೇ ಬಿಡ್ ಆರಂಭಗೊಳ್ಳಲಿದೆ.

ಬೆಂಗಳೂರು ದಕ್ಷಿಣ ನಗರ ಪಾಲಿಕೆ ವ್ಯಾಪ್ತಿಯ ರಸ್ತೆಗಳ ಸ್ವಚ್ಛತೆ ಕಾಪಾಡುವ ನಿಟ್ಟಿನಲ್ಲಿ, ಅತ್ಯಾಧುನಿಕ ಮೆಕ್ಯಾನಿಕಲ್ ಸ್ವೀಪಿಂಗ್ ಯಂತ್ರಗಳ ಪ್ರಾಯೋಗಿಕ ಕಾರ್ಯವೈಖರಿಯನ್ನು ತಪಾಸಣೆ ಮಾಡಲಾಯಿತು. ಪಾಲಿಕೆ ಆಯುಕ್ತರಾದ ಕೆ.ಎನ್. ರಮೇಶ್ ರವರ ನೇತೃತ್ವದ ತಾಂತ್ರಿಕ ಮೌಲ್ಯ ಮಾಪನ ಸಮಿತಿಯು ಜಯನಗರದ ಸೌತ್ ಎಂಡ್ ಸರ್ಕಲ್ ಬಳಿ ಶನಿವಾರ ತಪಾಸಣೆ ಕೈಗೊಂಡಿತು.

**160 ಕಿ.ಮೀ ಉದ್ದದ ರಸ್ತೆ ಸ್ವಚ್ಛತೆ:** ಜಯನಗರ ಹಾಗೂ ಬೊಮ್ಮನಹಳ್ಳಿ ವಲಯಗಳಲ್ಲಿ ಪ್ರತಿ ಕಿಲೋಮೀಟರ್ ಪಾವತಿ ಆಧಾರದ ಮೇಲೆ ದಿನಕ್ಕೆ ಒಟ್ಟು 160 ಕಿ.ಮೀ ಉದ್ದದ ರಸ್ತೆಗಳನ್ನು ಆಧುನಿಕ ಯಾಂತ್ರೀಕೃತ ರಸ್ತೆ ಕಸ ಗುಡಿಸುವ ಕಾಮಗಾರಿಗೆ ಕರೆಯಲಾಗಿದ್ದ ಟೆಂಡರ್‌ನಲ್ಲಿ ಭಾಗವಹಿಸಿದ್ದಂತಹ



ಸಂಸ್ಥೆಗಳ ಮೆಕ್ಯಾನಿಕಲ್ ಸ್ವೀಪಿಂಗ್ ಯಂತ್ರಗಳ ಕಾರ್ಯನಿರ್ವಹಣೆಯನ್ನು ಸಮಿತಿ ಖುದ್ದು ಪರಿಶೀಲಿಸಿತು.

ಎರಡು ಸಂಸ್ಥೆಗಳ ಯಂತ್ರಗಳು -ಮೆಕ್ಯಾನಿಕಲ್ ಸ್ವೀಪಿಂಗ್ ಯಂತ್ರದ ಒದಗಿಸುವ ಟೆಂಡರ್‌ನಲ್ಲಿ ಭಾಗ ವಹಿದ್ದಂತಹ ಎರಡು ಸಂಸ್ಥೆಗಳ ಮೆಕ್ಯಾನಿಕಲ್ ಸ್ವೀಪಿಂಗ್ ಯಂತ್ರಗಳನ್ನು ಪ್ರಾಯೋಗಿಕವಾಗಿ ಇಂದಿನಿಂದ ರಸ್ತೆ ಸ್ವಚ್ಛಗೊಳಿಸಲಿದ್ದು, ರಸ್ತೆ ಬದಿಯ ಕಸ ಹಾಗೂ ಧೂಳನ್ನು ಅತಿ ಸಮರ್ಥವಾಗಿ ಸ್ವಚ್ಛಗೊಳಿಸುವ ಸಾಮರ್ಥ್ಯ ಹೊಂದಿರುವ ವಾಹನ ಗಳನ್ನು ಆಯ್ಕೆ ಮಾಡಲಾಗುವುದು ಎಂದು ಆಯುಕ್ತರು ಸ್ಪಷ್ಟಪಡಿಸಿದರು.

5 ದಿನಗಳ ಸ್ವೀಪಿಂಗ್ ಯಂತ್ರಗಳ ಕಾರ್ಯಾಚರಣೆ -ನಾಳೆ ಭಾನುವಾರದಿಂದ 5 ದಿನಗಳ ಕಾಲ ಪಾಲಿಕೆ ವ್ಯಾಪ್ತಿಯ ಪ್ರಮುಖ ಆರ್ಟಿರಿಯಲ್ ರಸ್ತೆಗಳಲ್ಲಿ ಮೆಕ್ಯಾನಿಕಲ್ ಸ್ವೀಪಿಂಗ್ ಯಂತ್ರಗಳು ಕಾರ್ಯಚರಣೆ ಕೈಗೊಳ್ಳಲಾಗುವುದು. ಆರ್ಟೀರಿಯಲ್ ಮತ್ತು ಸಬ್-ಆರ್ಟೀರಿಯಲ್ ರಸ್ತೆಗಳನ್ನು ಗುಡಿಸಲು ಅತ್ಯುತ್ತಮ ಯಂತ್ರಗಳ ಕಾರ್ಯಾಚರಣೆ ಮತ್ತು ನಿರ್ವಹಣಾ ವೇಳಾಪಟ್ಟಿಯ ಆಧಾರದ ಮೇಲೆ ಆಯ್ಕೆ ಮಾಡಲು, ಆರ್ಥಿಕ ಬಿಡ್‌ಗಳನ್ನು ತೆರೆಯುವ ಮೊದಲು ಕಾರ್ಯಕ್ಷಮತೆ ಅಂಕಗಳನ್ನು ನೀಡಲಾಗುತ್ತದೆ ಎಂದು ಮುಖ್ಯ ಅಭಿಯಂತರರು ತಿಳಿಸಿದರು.


ರಸ್ತೆ ಸ್ವಚ್ಛತೆಗಾಗಿ ಕನಿಷ್ಠ 5 ಕ್ಯೂಬಿಕ್ ಮೀಟರ್ ಸಾಮರ್ಥ್ಯದ 8 ಮೆಕ್ಯಾನಿಕಲ್ ಸ್ವೀಪಿಂಗ್ ಯಂತ್ರಗಳನ್ನು ಕಾರ್ಯಾಚರಣೆ ಹಾಗೂ ನಿರ್ವಹಣೆ ಅಡಿಯಲ್ಲಿ ಸೇವೆ ಪಡೆಯಲು ನಿರ್ಧರಿಸಿದ್ದು, ಬಿಎಸ್-6 ಎಮಿಷನ್ ನಿಯಮ, ಪಿಎಂ 2.5 ನಿಯಂತ್ರಣದ ಡಸ್ಟ್ ಕಂಟ್ರೋಲ್ ಸಿಸ್ಟಂ, 360-ಡಿಗ್ರಿ ಕ್ಯಾಮೆರಾ, ಎಐಎಸ್-140 ಜಿಪಿಎಸ್ ವ್ಯವಸ್ಥೆ, ಹೈ ಪ್ರೆಶರ್ ವಾಟರ್ ಪಂಪ್ ಆಟೋಮ್ಯಾಟಿಕ್ ಲೆವೆಲಿಂಗ್ ಸಿಸ್ಟಂ ಮುಂತಾದ ತಾಂತ್ರಿಕ ಮಾನ ದಂಡಗಳ ಆಧಾರದ ಮೇಲೆ ಅತ್ಯುತ್ತಮ ಕಾರ್ಯಕ್ಷಮತೆ ತೋರುವ ಯಂತ್ರಗಳ ಸೇವೆ ಪಡೆಯಲಾಗುವುದು ಎಂದು ಆಯುಕ್ತರು ತಿಳಿಸಿದರು.

# ತುಮಕೂರು ವಿಶ್ವವಿದ್ಯಾಲಯ ವ್ಯವಹಾರ

## ಬಸವರಾಜ ಕನ್ನಾಳೆ ಸಂಪರ್ಕ ವಿಸ್ತರಣೆ ಆರೋಪ

**ಬೆಂಗಳೂರು, ಸೆ.5:** ಕೆಪಿಎಸ್‌ಸಿ (ಕರ್ನಾಟಕ ಲೋಕಸೇವಾ ಆಯೋಗ) ಹಗರಣದ ತನಿಖೆಯ ಬೆನ್ನಲ್ಲೇ ಪ್ರಕರಣದ ಪ್ರಮುಖ ಆರೋಪಿ ಹಾಗೂ ತುಮಕೂರು ವಿಶ್ವವಿದ್ಯಾಲಯದ ನಾಮನಿರ್ದೇಶಿತ ಸಿಂಡಿಕೇಟ್ ಸದಸ್ಯ ಬಸವರಾಜ ಕನ್ನಾಳೆ ಅವರ ಸಂಪರ್ಕ ವಿಶ್ವವಿದ್ಯಾಲಯದ ವ್ಯವಹಾರಗಳಿಗೂ ವಿಸ್ತರಿಸಿರುವ ಆರೋಪಗಳು ಕೇಳಿಬಂದಿವೆ.

ಕನ್ನಾಳೆ ಅವರು ತುಮಕೂರು ವಿಶ್ವವಿದ್ಯಾಲಯದಲ್ಲೂ ಕೋಟ್ಯಂತರ ರೂಪಾಯಿ ಮೌಲ್ಯದ ಖರೀದಿ ಮತ್ತು ಕಾಮಗಾರಿಗಳಿಗೆ ಸಂಬಂಧಿಸಿದ ಅಕ್ರಮಗಳಲ್ಲಿ ಭಾಗಿಯಾಗಿದ್ದರು ಎಂಬ ಆರೋಪಗಳ ಹಿನ್ನೆಲೆಯಲ್ಲಿ ಸಿಐಡಿ ಅಧಿಕಾರಿಗಳು ತನಿಖೆ ಮುಂದುವರಿಸಿದ್ದಾರೆ ಎಂದು ಮೂಲಗಳು ತಿಳಿಸಿವೆ. 2025ರ ಆಗಸ್ಟ್‌ನಲ್ಲಿ ಬಸವರಾಜ ಕನ್ನಾಳೆ ಅವರನ್ನು ತುಮಕೂರು ವಿಶ್ವವಿದ್ಯಾಲಯದ ನಾಮನಿರ್ದೇಶಿತ ಸಿಂಡಿಕೇಟ್ ಸದಸ್ಯರನ್ನಾಗಿ ನೇಮಕ ಮಾಡಲಾಗಿತ್ತು ಎನ್ನಲಾಗಿದೆ. ಬಂಧನದ ಬಳಿಕವೂ ಅವರ ಸಿಂಡಿಕೇಟ್ ಸದಸ್ಯತ್ವದ ಕುರಿತು ತಕ್ಷಣ ಯಾವುದೇ ಸ್ಪಷ್ಟ ಕ್ರಮ ಕೈಗೊಳ್ಳದಿ ರುವುದು ಚರ್ಚೆಗೆ ಕಾರಣವಾಗಿದೆ. ಈ ಕುರಿತು ರಾಜಭವನ ಯಾವ ನಿರ್ಧಾರ ಕೈಗೊಳ್ಳಲಿದೆ ಎಂಬ ಕುತೂಹಲವೂ ಮೂಡಿದೆ.



ಸಿಂಡಿಕೇಟ್ ಸದಸ್ಯರಾಗಿದ್ದ ಅವಧಿಯಲ್ಲಿ ವಿಶ್ವವಿದ್ಯಾಲಯದ ಖರೀದಿ ಮತ್ತು ಕಾಮಗಾರಿಗಳಿಗೆ ಸಂಬಂಧಿಸಿದ ಉಪಸಮಿತಿಯಲ್ಲೂ ಕನ್ನಾಳೆ ಸ್ಥಾನ ಪಡೆದಿದ್ದರು ಎನ್ನಲಾಗಿದೆ.

ಹೀಗಾಗಿ ಅವರು ಸದಸ್ಯರಾಗಿದ್ದ ಅವಧಿಯಲ್ಲಿ ನಡೆದ ಟೆಂಡರ್‌ಗಳು, ಕಾಮಗಾರಿಗಳು, ಖರೀದಿ ಆದೇಶಗಳು, ಪಾವತಿಗಳು ಹಾಗೂ ಸಿಂಡಿಕೇಟ್ ಮತ್ತು ಉಪಸಮಿತಿ ಸಭೆಗಳ ನಡಾವಳಿಗಳನ್ನು ಪರಿಶೀಲಿಸಬೇಕೆಂಬ ಆಗ್ರಹ ಕೇಳಿಬಂದಿದೆ. ವಿಶ್ವವಿದ್ಯಾಲ ಯದ ಖರೀದಿ ಮತ್ತು ಕಾಮಗಾರಿ ಸಂಬಂಧಿತ ನಿರ್ಧಾರಗಳಲ್ಲಿ ಕನ್ನಾಳೆ ಪ್ರಭಾವ ಬೀರಿದ್ದರು ಎಂಬ ಆರೋಪಗಳೂ ಕೇಳಿಬಂದಿವೆ. ಕೆಲವು ಟೆಂಡರ್‌ಗಳನ್ನು ನಿರ್ದಿಷ್ಟ ವ್ಯಕ್ತಿಗಳಿಗೆ ಅನುಕೂಲವಾಗುವಂತೆ ಮಾಡಿಸುವಲ್ಲಿ ಮಧ್ಯಸ್ಥಿಕೆ ವಹಿಸಿದ್ದರು ಎಂಬ ಆರೋಪಗಳೂ ಇವೆ.ಈ ಆರೋಪಗಳ ಸತ್ಯಾಸತ್ಯತೆ ಪತ್ತೆಹಚ್ಚಲು ಟೆಂಡರ್ ದಾಖಲೆ, ತಾಂತ್ರಿಕ ಮತ್ತು ಹಣಕಾಸು ಬಿಡ್, ಕಾರ್ಯಾದೇಶ, ಬಿಲ್‌ಗಳು, ಪಾವತಿ ವಿವರಗಳು ಹಾಗೂ ಸಭೆಗಳ ನಡಾವಳಿಗಳ ಪರಿಶೀಲನೆ ಮಹತ್ವ ಪಡೆದುಕೊಂಡಿದೆ.

# ವಾಯುಪಡೆ ವೈಮಾನಿಕ ತಂತ್ರಜ್ಞರ ನಿರ್ಗಮನ ಪಥ ಸಂಚಲನ

**ಬೆಂಗಳೂರು, ಸೆ.5:** ಬೆಂಗಳೂರಿನ ಜಾಲಹಳ್ಳಿಯಲ್ಲಿರುವ ವಾಯುಪಡೆ ತಾಂತ್ರಿಕ ಕಾಲೇಜಿನಲ್ಲಿಂದು ವೈಮಾನಿಕ ತಂತ್ರಜ್ಞರ ನಿರ್ಗಮನ ಪಥ ಸಂಚಲನ ನಡೆಯಿತು. ವಿವಿಧ ವಿಭಾಗಗಳಲ್ಲಿ ಪದವಿ ಪೂರ್ಣ ಗೊಳಿಸಿದ ತಂತ್ರಜ್ಞರು



ಪಥ ಸಂಚಲನದಲ್ಲಿ ಭಾಗಿಯಾದರು. ಈ ವೇಳೆ ವಾಯುಪಡೆಯ ನಿರ್ವಹಣಾ ಕಮಾಂಡ್‌ನ ಅಧಿಕಾರಿ ಏರ್ ಮಾರ್ಷಲ್ ಯಾಳ್ಳ ಉಮೇಶ್, ಹಿರಿಯ ಅಧಿಕಾರಿಗಳು, ಪೋಷಕರು, ಕುಟುಂಬ ಸದಸ್ಯರು ಉಪಸ್ಥಿತರಿದ್ದರು. ಇದೇ ಸಂದರ್ಭದಲ್ಲಿ ಏರ್ ಮಾರ್ಷಲ್ ಯಾಲ್ಲ ಉಮೇಶ್ ಉನ್ನತ ಶ್ರೇಣಿಯಲ್ಲಿ ಉತ್ತೀರ್ಣರಾದವರಿಗೆ ಪದವಿ ಪ್ರದಾನ ಮಾಡಿದರು. ಬಳಿಕ ಮಾತನಾಡಿದ ಅವರು, ನಾಯಕತ್ವ ಎನ್ನುವುದು ಕೇವಲ ರಾಂಕ್ ಮೇಲೆ ಅವಲಂಬಿತವಾಗಿಲ್ಲ. ಬದಲಿಗೆ, ಅದು ನಂಬಿಕೆ ಹಾಗೂ ವಿಶ್ವಾಸಾರ್ಹತೆಯ ತಳಹದಿಯಲ್ಲಿ ರೂಪಿಸಲ್ಪಡುತ್ತದೆ. ಇಂದು ಧರಿಸಿರುವ ವಾಯು ಪಡೆಯ ಸಮವಸ್ತ್ರ ಒಂದು ನಂಬಿಕೆಯ ಪ್ರತೀಕವಾಗಿದೆ. ಈ ಕ್ಷೇತ್ರದಲ್ಲಿ ಸೇವೆ ಸಲ್ಲಿಸಲು ಕಲಿಕೆ, ಅನ್ವೇಷಣೆ, ಅಳವಡಿಕೆ ಹಾಗೂ ವೃತ್ತಿಯನ್ನು ಗೌರವಿಸುವುದೇ ಯಶಸ್ಸಿನ ಮೂಲಮಂತ್ರವಾಗಿದೆ. ಇಲ್ಲಿ ವೃತ್ತಿಪರ ಬೆಳವಣಿಗೆಗೆ ಹೆಚ್ಚಿನ ಅವಕಾಶಗಳಿವೆ ಎಂದು ತಿಳಿಸಿದರು. ಬಳಿಕ ನಡೆದ ವಿವಿಧ ಸಾಹಸ ಪ್ರದರ್ಶನಗಳು ಗಮನ ಸೆಳೆದವು.

# ಜನರ ಅಹವಾಲು ಆಲಿಸಿ ಪರಿಹಾರ ಒದಗಿಸುವ ಪ್ರಜಾಸೇವಾ ಅಭಿಯಾನಕ್ಕೆ ಚಾಲನೆ



**ವಿಜಯನಗರ, ಸೆ.5:** ಜನರ ಸಮಸ್ಯೆಗಳನ್ನು ನೇರವಾಗಿ ಆಲಿಸಿ, ಸಾಧ್ಯವಾದರೆ ಸ್ಥಳದಲ್ಲೇ ಪರಿಹಾರ ನೀಡುವ ಅಥವಾ ನಿಗದಿತ ಕಾಲಮಿತಿಯೊಳಗೆ ಸಮಸ್ಯೆ ಬಗೆಹರಿಸುವ ಉದ್ದೇಶದ ಪ್ರಜಾಸೇವಾ ಅಭಿಯಾನಕ್ಕೆ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ವಿಜಯನಗರ ಜಿಲ್ಲೆಯ ಕೂಡ್ಲಿಗಿ ಹೋಬಳಿಯಲ್ಲಿ ಶನಿವಾರ ಚಾಲನೆ ನೀಡಿದರು. ಜನರ ಅಹವಾಲುಗಳನ್ನು ನೇರವಾಗಿ ಆಲಿಸಿ, ಸಂಬಂಧಪಟ್ಟ ಇಲಾಖೆಗಳ ಮೂಲಕ ಪರಿಹಾರ ಒದಗಿಸುವ ಸಮಗ್ರ ವ್ಯವಸ್ಥೆಯೇ ಪ್ರಜಾಸೇವಾ ಅಭಿಯಾನ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಆಡಳಿತವನ್ನು ಜನರ ಮನೆ ಬಾಗಿಲಿಗೆ ಕೊಂಡೊಯ್ಯುವ ಉದ್ದೇಶದಿಂದ ಪ್ರಜಾಸೇವಾ ಇಲಾಖೆ ರಚಿಸಲಾಗಿದ್ದು, ಅದರ ಮುಂದುವರಿದ ಭಾಗವಾಗಿ ಈ ಅಭಿಯಾನವನ್ನು ಆರಂಭಿಸಲಾಗಿದೆ.

**ಪ್ರತಿ ಶನಿವಾರ ಜನರೊಂದಿಗೆ ಸಭೆ:** ರಾಜ್ಯದಾದ್ಯಂತ ಪ್ರತಿ ಶನಿವಾರ ತಾಲೂಕು ಹಾಗೂ ಹೋಬಳಿ ಮಟ್ಟದಲ್ಲಿ ಸರದಿ ಆಧಾರದ ಮೇಲೆ ಪ್ರಜಾಸೇವಾ ಅಭಿಯಾನ ಸಭೆಗಳನ್ನು ನಡೆಸಲಾಗುತ್ತದೆ.ಪ್ರತಿ ತಿಂಗಳ ಮೊದಲ ಮತ್ತು ಮೂರನೇ ಶನಿವಾರ ತಾಲೂಕು ಕೇಂದ್ರಗಳಲ್ಲಿ ಸಭೆ ನಡೆಯಲಿದ್ದು, ಜಿಲ್ಲಾ ಉಸ್ತುವಾರಿ ಸಚಿವರು ಸಭೆಯ ಅಧ್ಯಕ್ಷತೆ ವಹಿಸಲಿದ್ದಾರೆ.ಎರಡನೇ ಮತ್ತು ನಾಲ್ಕನೇ ಶನಿವಾರ ತಾಲೂಕು ಅಥವಾ ಹೋಬಳಿ ಮಟ್ಟದಲ್ಲಿ ಸಭೆ ನಡೆಯಲಿದ್ದು, ಸ್ಥಳೀಯ ಶಾಸಕರು ಅಧ್ಯಕ್ಷತೆ ವಹಿಸಲಿ ದ್ದಾರೆ ಎಂದು ಸರ್ಕಾರ ಈ ಹಿಂದೆ ತಿಳಿಸಿತ್ತು.

**15 ದಿನ ಮೊದಲೇ ಜನರಿಗೆ ಮಾಹಿತಿ:** ಸಭೆಯ ಕುರಿತು ಜನರಿಗೆ ಕನಿಷ್ಠ 15 ದಿನಗಳ ಮುಂಚಿತವಾಗಿ ಮಾಹಿತಿ ನೀಡಲಾಗುತ್ತದೆ. ಮನೆ ಮನೆಗೆ ಕರಪತ್ರಗಳನ್ನು ವಿತರಿಸುವ ಮೂಲಕ ಸಭೆಯ ದಿನಾಂಕ, ಸಮಯ ಹಾಗೂ ಸ್ಥಳದ ಬಗ್ಗೆ ತಿಳಿಸಲಾಗುತ್ತದೆ. ಇದರ ಜೊತೆಗೆ ತಾಲೂಕು ಅಥವಾ ಹೋಬಳಿ ವ್ಯಾಪ್ತಿಯ ನಿವಾಸಿಗಳಿಗೆ ಐಆ ಆಧಾರಿತ ಕಾಲ್ ಸೆಂಟರ್‌ನಿಂದ ಕರೆ ಮಾಡಿ ಸಭೆಯ ದಿನಾಂಕ, ಸಮಯ, ಸ್ಥಳ ಹಾಗೂ ಸಭೆಯ ಅಧ್ಯಕ್ಷತೆ ವಹಿಸುವ ಚುನಾಯಿತ ಪ್ರತಿನಿಧಿಯ ವಿವರಗಳನ್ನು ತಿಳಿಸಲಾಗುತ್ತದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

**ಸರ್ಕಾರಿ ಕಚೇರಿಗಳಿಗೆ ಅಲೆದಾಡುವ ಅಗತ್ಯವಿಲ್ಲ:** ಕರ್ನಾಟಕ ಸರ್ಕಾರದ ವಿವಿಧ ಇಲಾಖೆಗಳು ಒದಗಿಸುವ ಸೇವೆಗಳು ಮತ್ತು ಯೋಜನೆಗಳಿಗೆ ಸಂಬಂಧಿಸಿದ ಸಮಸ್ಯೆಗಳಿಗೆ ಪರಿಹಾರ ಪಡೆಯಲು ಜನರು ಕಚೇರಿಯಿಂದ ಕಚೇರಿಗೆ ಅಲೆದಾಡುವುದನ್ನು ತಪ್ಪಿಸುವ ಉದ್ದೇಶದಿಂದ 'ಪ್ರಜಾಸೇವಾ ಇಲಾಖೆ' ಅಡಿಯಲ್ಲಿ ಸಮಗ್ರ ಸಾರ್ವಜನಿಕ ಕುಂದುಕೊರತೆ ಪರಿಹಾರ ವ್ಯವಸ್ಥೆ (IPGRS) ಅಭಿವೃದ್ಧಿಪಡಿಸಲಾಗಿದೆ.

ಇದು ಸಾರ್ವಜನಿಕರ ದೂರುಗಳನ್ನು ಪರಿಹರಿಸಲು ರೂಪಿಸಿರುವ ಬಹುಮುಖ, ದತ್ತಾಂಶ ಆಧಾರಿತ ಹಾಗೂ ಕಾಗದ ರಹಿತ ಸಾಫ್ಟ್‌ವೇರ್ ವ್ಯವಸ್ಥೆ ಎಂದು ಸರ್ಕಾರ ತಿಳಿಸಿದೆ. ಜನರು ತಮ್ಮ ಸಮಸ್ಯೆ ಹಾಗೂ ದೂರುಗಳನ್ನು 1902 ಸಹಾಯವಾಣಿಗೆ ಕರೆ ಮಾಡುವ ಮೂಲಕ ಅಥವಾ ipgrs.karnataka.gov.in ಮೂಲಕ ದಾಖಲಿಸಬಹುದು ಎಂದು ಅಧಿಕಾರಿಗಳು ತಿಳಿಸಿದ್ದಾರೆ.

# ತುಂಗಭದ್ರಾ ಕಾಲುವೆ ಅಕ್ರಮ ಪೈಪ್‌ಲೈನ್ ತೆರವು

**ರಾಯಚೂರು, ಸೆ. 5:** ತಾಲ್ಲೂಕಿನ ಸಿದ್ದಿಕೇರಿ ಗ್ರಾಮದಿಂದ ದಾಸನಾಳ ಗ್ರಾಮದವರೆಗೆ ತುಂಗಭದ್ರಾ ಎಡದಂಡೆ ಕಾಲುವೆಗೆ ಅಕ್ರಮವಾಗಿ ಅಳವಡಿಕೆ ಮಾಡಿದ ಪಂಪ್‌ಸೆಟ್ ಪೈಪ್‌ಗಳ ತೆರವು ಕಾರ್ಯಾಚರಣೆ ಕಾಡಾ ಎಂಜಿನಿಯರ್‌ಗಳ ತಂಡದಿಂದ ಜರುಗಿತು.



ತುಂಗಭದ್ರಾ ಎಡದಂಡೆ 17ನೇ ವಿತರಣಾ ಕಾಲುವೆಯಿಂದ 20ನೇ ವಿತರಣಾ ಕಾಲುವೆಯವರೆಗೆ ಅಕ್ರಮವಾಗಿ ಪಂಪ್‌ಸೆಟ್ ಅಳವಡಿಕೆ ಮಾಡಿಕೊಂಡು ರೈತರು ನೀರು ಬಳಸಿಕೊಳ್ಳುತ್ತಿದ್ದ ಬಗ್ಗೆ ನೀರಾವರಿ ಇಲಾಖೆ ಅಧಿಕಾರಿಗಳಿಗೆ ದೂರುಗಳು ಬಂದಿದ್ದವು. ಇದರಿಂದಾಗಿ ರಾಯಚೂರು ಭಾಗದ ರೈತರು ಸಹ ಕುಡಿಯುವ ನೀರು ಸಮರ್ಪಕವಾಗಿ ಪೂರೈಕೆಯಾಗುತ್ತಿಲ್ಲ ಎಂದು ಸಂಬಂಧಪಟ್ಟ ಇಲಾಖೆಗೆ ಮಾಹಿತಿ ನೀಡಿದ್ದರು.

ಇದರನ್ವಯ ಜೆಸ್ಕಾಂ, ಪೊಲೀಸ್, ಜಲಸಂಪನ್ಮೂಲ ಇಲಾಖೆ ಅಧಿಕಾರಿಗಳ ತಂಡ ತಾಲ್ಲೂಕಿನ ದಾಸನಾಳ–ಆರ್ಹಾಳದ ವರೆಗೆ ಜೆಸಿಬಿ ಮೂಲಕ ಎಲ್ಲ ಪೈಪ್‌ಗಳನ್ನು ಹೊರತೆಗೆಯುವ ಕೆಲಸ ಮಾಡಿ, ಕಾಲುವೆಯ ಮೇಲ್ಭಾಗದ ಮಣ್ಣಿನಲ್ಲಿ ಹಾಕಿದ್ದ 20ಕ್ಕೂ ಹೆಚ್ಚು ಅಕ್ರಮ ಪಂಪ್‌ಸೆಟ್‌ಗಳು ತೆರವುಗೊಳಿಸಿ, ಸಲಕರಣೆಗಳನ್ನು ವಶಕ್ಕೆ ಪಡೆದು ವಿದ್ಯುತ್ ಸಂಪರ್ಕ ಕಡಿತಗೊಳಿಸಿದರು.

ಭತ್ತದ ಗದ್ದೆಯಲ್ಲಿ ಪೈಪ್‌ಲೈನ್ ಪತ್ತೆಹಚ್ಚಲು ಮುಂದಾದಾಗ ಕೆಲ ರೈತರು ಅಡ್ಡಿಪಡಿಸಿ, ದೂರು ನೀಡಿದ ಮಾಹಿತಿ ಹಕ್ಕುದಾರ ಬಿ.ರಾಜಕುಮಾರ ಅವರೊಂದಿಗೆ ವಾಗ್ವಾದ ನಡೆಸಿದರು. ಈ ವೇಳೆ ಬೃಹತ್ ಪ್ರಮಾಣದ ಪಂಪ್‌ಸೆಟ್‌ಗಳನ್ನು ವಶಕ್ಕೆ ಪಡೆಯಲಿಲ್ಲ.

ಈ ವೇಳೆ ಕಾಡಾ ಅಧೀಕ್ಷಕ ಎಂಜಿನಿಯರ್ ಎಸ್.ಬಿ.ಮಲ್ಲಿಗೆವಾಡಾ ಮಾತನಾಡಿ, ತುಂಗಭದ್ರಾ ಎಡದಂಡೆ ಕಾಲುವೆಯಿಂದ ಆಕ್ರಮವಾಗಿ ಪಂಪ್‌ಸೆಟ್ ಅಳವಡಿಸಿಕೊಂಡು ಕೆರೆಗಳು ತುಂಬಿಸಿಕೊಳ್ಳುತ್ತಿರುವುದು ಕಂಡುಬಂದಿದೆ. ತಪ್ಪಿತಸ್ಥರ ವಿರುದ್ಧ ಪ್ರಕರಣ ದಾಖಲಿಸುವ ಕೆಲಸ ಮಾಡಲಾಗುತ್ತದೆ ಎಂದು ತಿಳಿಸಿದರು.

ತೆರವು ಕಾರ್ಯಾಚರಣೆಯ ಸಂದರ್ಭದಲ್ಲಿ ಜಲಸಂಪನ್ಮೂಲ ಇಲಾಖೆ ಅಗಳಕೇರಾ ವಿಭಾಗದ ಎಇಇ ಅಮರೇಶ, ಜೆಇಇ ಅಮರನಾಥ, ಜೆಸ್ಕಾಂ ಜೆಇ ಪ್ರದೀಪ, ಎಎಸ್‌ಐ ಮಂಜುನಾಥ ಹುಲ್ಲೂರು ಸೇರಿ ಗ್ಯಾಂಗ್‌ಮನ್‌ಗಳು ಹಾಜರಿದ್ದರು.

**ಮಳೆನೀರು ಹರಿಯುವಿಕೆಗೆ ಎಸ್ಕೇಪ್ ವ್ಯವಸ್ಥೆ:** ತಾಲ್ಲೂಕಿನ ರಾಂಪುರ, ಮಲ್ಲಾಪುರ ಗ್ರಾಮದ ಬೆಟ್ಟಗಳಿಂದ ಮಳೆಗಾಲದಲ್ಲಿ ಹೆಚ್ಚಾಗಿ ನೀರು ಹರಿದುಬಂದು ತುಂಗಭದ್ರಾ ಎಡದಂಡೆ ಕಾಲುವೆಗೆ ಸೇರಲಿದ್ದು, ಕಾಲುವೆ ಒಡೆಯುವ ಅಪಾಯ ತಪ್ಪಿಸಲು ರಾಂಪುರದ ಬಳಿ ಎಸ್ಕೇಪ್ ವ್ಯವಸ್ಥೆ ಮಾಡಲಾಗಿದೆ ಎಂದು ಕಾಡಾ ಅಧೀಕ್ಷಕ ಎಂಜಿನಿಯರ್ ಎಸ್.ಬಿ.ಮಲ್ಲಿಗೆವಾಡ ತಿಳಿಸಿದರು.

ಈ ಕುರಿತು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಯಚೂರು ಭಾಗಕ್ಕೆ ನೀರು ಹರಿಸುವ ಉದ್ದೇಶದಿಂದ ತುಂಗಭದ್ರಾ ಎಡದಂಡೆ ಕಾಲುವೆಗೆ 4100 ಕ್ಯುಸೆಕ್ ನೀರು ಬಿಟ್ಟಿದ್ದು, ರಾಂಪುರ ಬಳಿ ಅಕ್ವಡೆಕ್ಟ್ ಬಳಿ ಹೆಚ್ಚಿನ ಪ್ರಮಾಣ ನೀರು ಹರಿಯುತ್ತಿದೆ ಎಂದರು.

ಸದ್ಯ ಮಳೆಗಾಲ ಇಲ್ಲ. ನೀರಿನ ಪ್ರಮಾಣ ಹೆಚ್ಚಾಗಿದ್ದರಿಂದ ರಾಂಪುರದ ಅಕ್ವಡೆಕ್ಟ್ ಪ್ರದೇಶದಲ್ಲಿ ಭಾರಿ ಪ್ರಮಾಣದ ನೀರು ಸೋರಿಕೆ ಆಗುತ್ತಿರುವ ಕಾರಣ ಮೇಲ್ಮಟ್ಟದ ಕಾಲುವೆ ಧಕ್ಕೆಯಾಗುವ ಬಗ್ಗೆ ಇಲಾಖೆ ಅಧಿಕಾರಿಗಳಿಗೆ ದೂರು ನೀಡಿದ್ದಾರೆ ಎಂದು ತಿಳಿಸಿದರು.

2008ರಲ್ಲಿ ಇದೇ ಪ್ರದೇಶದಲ್ಲಿ ನೀರಿನ ಸೋರಿಕೆಯಿಂದ ಕಾಲುವೆ ಒಡೆದಿದ್ದು, 1500ಕ್ಕೂ ಹೆಚ್ಚು ಎಕರೆ ಭತ್ತದ ಗದ್ದೆ ಹಾಳಾಗಿತ್ತು. ಮಲ್ಲಾಪುರದಲ್ಲಿ ನೀರು ಹರಿಯುವಿಕೆ ಸಮತೋಲನ ಕಾಪಾಡಲು ಅನಿವಾರ್ಯವಾಗಿದ್ದರೂ ರಾಂಪುರ ಮಾತ್ರ ಆತಂಕ ಸೃಷ್ಟಿಸಿತ್ತು. ವಿಡಿಯೊ ವೈರಲ್ ಆಗುತ್ತಿದ್ದಂತೆ ಎಚ್ಚೆತ್ತುಕೊಂಡ ಕಾಡಾ ಅಧಿಕಾರಿಗಳು ನೀರಿನ ಪ್ರಮಾಣ ತಗ್ಗಿಸಿದ್ದಾರೆ ಎಂದು ವಿವರಿಸಿದರು.

# ಭಕ್ತರಿಂದ ಹಾರಕೂಡ ಚನ್ನವೀರ ಶ್ರೀಗಳ 1037ನೇ ತುಲಾಭಾರ



**ಬಸವಕಲ್ಯಾಣ, ಸೆ. 5:** ತಾಲ್ಲೂಕಿನ ಹಾರಕೂಡದಲ್ಲಿ ಶ್ರೀ ಚನ್ನವೀರ ಶಿವಾಚಾರ್ಯರ 1037ನೇ ತುಲಾಭಾರ ಕಾರ್ಯಕ್ರಮವು ಭಕ್ತಿಭಾವದಿಂದ ಅದ್ದೂರಿಯಾಗಿ ಜರುಗಿತು.

ರಾಜ ಕುಮಾರ ಲಕ್ಷ್ಮಣರಾವ ದೇಗಾಂವ ಪರಿ ವಾರದವರು ತುಲಾಭಾರ ಸೇವೆಗೈದರು. ಸ್ವಾಮೀಜಿ ಅವರನ್ನು ಸ್ವಾಗತಿಸಿ, ಪುಷ್ಪಗಳಿಂದ ಅಲಂಕೃತ ತಕ್ಕಡಿಯಲ್ಲಿ ಕೂಡಿಸಿ ನಾಣ್ಯಗಳಿಂದ ತೂಗಲಾಯಿತು. ಸನ್ಮಾನಗೈದು ಅವರ ಮೇಲೆ ಹೂವುಗಳನ್ನು ಸುರಿಯಲಾಯಿತು. ಚನ್ನವೀರ ಶಿವಾಚಾರ್ಯ ಮಹಾರಾಜ ಕೀ ಜೈ ಜಯಘೋಷ ಕೂಗಲಾಯಿತು. ಹಿರಿಯರಾದ ಲಕ್ಷ್ಮಣರಾವ ದೇಗಾಂವ ದಂಪತಿಯನ್ನು ಸನ್ಮಾನಿಸಿ ಗೌರವಿಸಲಾಯಿತು.

ತಾಲ್ಲೂಕು ಪಂಚಾಯಿತಿ ಮಾಜಿ ಅಧ್ಯಕ್ಷ ಮೇಘರಾಜ ನಾಗರಾಳೆ, ರಾಜಕುಮಾರ ದೇಗಾಂವ, ಮಹಾದೇವ ದೇಗಾಂವ ಮಾತನಾಡಿದರು. ಕಾರ್ತಿಕ ಸ್ವಾಮಿ ಯಲ್ಲದಗುಂಡಿ, ಚನ್ನಬಸಪ್ಪ ಮೀನಹಾಳ, ಶರಣಪ್ಪ ಜಮಾದಾರ ಸಂಗೀತ ಪ್ರಸ್ತುತಪಡಿಸಿದರು.




**ಉಡುಪಿಯಲ್ಲಿ ಶನಿವಾರ ಶ್ರೀ ಕೃಷ್ಣಜನ್ಮಾಷ್ಟಮಿಯ ಅಂಗವಾಗಿ ನಡೆದ "ವಿಟ್ಲಪಿಂಡಿ" ಉತ್ಸವ, ಚಿನ್ನದರಥ ಮೆರವಣಿಗೆ, ಮೊಸರು ಕುಡಿಕೆ (ಮಡಿಕೆ ಒಡೆಯುವುದು), ಹುಲಿವೇಷ (ಹುಲಿ ನೃತ್ಯ) ಭಕ್ತರ ಮನ ಸೆಳೆಯಿತು.**

# ಪ್ರಜಾಸೇವಾ ಅಭಿಯಾನದ ಮೊದಲ ದಿನವೇ ಮುಖ್ಯಮಂತ್ರಿಗೆ ದೂರು–ದುಮ್ಮಾನಗಳ ಸರಮಾಲೆ

**ಕೂಡ್ಲಿಗಿ, ಸೆ.5:** ರಾಜ್ಯಮಟ್ಟದ ಪ್ರಜಾಸೇವಾ ಅಭಿಯಾನದ ಅಂಗವಾಗಿ ಶನಿವಾರ ನಡೆದ ಅಹವಾಲು ಸ್ವೀಕಾರ ಕಾರ್ಯಕ್ರಮದಲ್ಲಿ ವಿವಿಧ ಗ್ರಾಮಗಳಿಂದ ಆಗಮಿಸಿದ ಸಾರ್ವಜನಿಕರು ತಮ್ಮ ಸಮಸ್ಯೆಗಳನ್ನು ಮುಖ್ಯಮಂತ್ರಿ ಮತ್ತು ಅಧಿಕಾರಿಗಳ ಮುಂದೆ ತೋಡಿಕೊಂಡರು.

ವರ್ಷ ಗಳಿಂದ ಕಚೇರಿಗಳಿಗೆ ಅಲೆದರೂ ಪರಿಹಾರ ದೊರೆಯದ ಹಲವು ಸಮಸ್ಯೆಗಳನ್ನು ಗಮನಕ್ಕೆ ತಂದರು.

ವಿಶೇಷ ಚೇತನ ಅಭ್ಯರ್ಥಿ ಬಸವರಾಜಪ್ಪ ಅವರು ದೈನಂದಿನ ಚಟುವಟಿಕೆಗಾಗಿ ವ್ಹೀಲ್‌ಚೇರ್ ಒದಗಿಸುವಂತೆ ಅಹವಾಲು ಸಲ್ಲಿಸಿದರು.

ಖಾನಾಹೊಸಹಳ್ಳಿ ಗ್ರಾಮ ಪಂಚಾಯಿತಿಯಲ್ಲಿ ಜವಾನರಾಗಿ ಸುದೀರ್ಘ ಸೇವೆ ಸಲ್ಲಿಸಿ ನಿವೃತ್ತಿಯಾಗಿ 18 ತಿಂಗಳು ಕಳೆದರೂ ಈ ಹಿಂದೆ ಬಾಕಿ ಇರುವ ವೇತನ ಪಾವತಿಯಾಗಿಲ್ಲ ಎಂದು ಲಕ್ಷ್ಮಣ ಎಂಬುವರು ಅಳಲು ತೋಡಿಕೊಂಡರು. ಈ ಕುರಿತು ಸಂಬಂಧಪಟ್ಟ ಅಧಿಕಾರಿಗಳ ಬಳಿ ಹಲವು ಬಾರಿ ಮನವಿ ಮಾಡಿದರೂ ಸರಿಯಾಗಿ ಸ್ಪಂದಿಸುತ್ತಿಲ್ಲ ಎಂದರು.

# ಗಡಿಪಾರು ಬೆದರಿಕೆ ಹಾಕಿ, ಲಂಚ: ಪೇದೆಗಳು ಲೋಕಾಯುಕ್ತ ಬಲೆಗೆ

**ಕಲಬುರಗಿ, ಸೆ.5:** ಹಣ ನೀಡದಿದ್ದರೆ ಗಡಿಪಾರು ಮಾಡುತ್ತೇನೆಂದು ಬೆದರಿಕೆ ಹಾಕಿ ಹಣ ಸುಲಿಗೆ ಮಾಡುತ್ತಿದ್ದ ಪೊಲೀಸ್ ಪೇದೆಗಳಿಬ್ಬರು ಲೋಕಾಯುಕ್ತ ಬಲೆಗೆ ಬಿದ್ದಿದ್ದಾರೆ.

ನಿಮ್ಮ ಮಗ ಕಳ್ಳತನ, ದರೋಡೆ ಮಾಡುತ್ತಿದ್ದಾನೆ ಎಂಬುದಾಗಿ ಜತೆಗೆ ಅವರನ್ನು ಗಡಿಪಾರು ಮಾಡಲಾಗುತ್ತಿದೆ ಎಂದು ಮನೆಗಳಿಗೆ ಹೋಗಿ ಬೆದರಿಕೆ ಹಾಕಿ, ರಾತ್ರಿ ತನಕ ಕೆಲವರನ್ನು ಅಕ್ರಮವಾಗಿ ಠಾಣೆಯಲ್ಲಿಟ್ಟುಕೊಂಡು ಒಂದು ಲಕ್ಷ ರೂ. ಹಣದ ಬೇಡಿಕೆ ಇಟ್ಟು ಅದರಲ್ಲಿ ಮೊದಲು 50 ಸಾವಿರ ರೂ ಪಡೆದಿದ್ದಲ್ಲದೆ, ಅನಂತರ 20 ಸಾವಿರ ರೂ ಪಡೆಯುವಾಗ ಲೋಕಾಯುಕ್ತ ಪೊಲೀಸರು ದಾಳಿ ನಡೆಸಿದ್ದು, ಲೋಕಾ ಬಲೆಯಲ್ಲಿ ರೆಡ್‌ಗ್ಯಾಂಡ್ ಆಗಿ ಸಿಲುಕಿದ್ದಾರೆ.

ಕಲಬುರಗಿ ನಗರದ ಬ್ರಹ್ಮಪುರ ಠಾಣೆಯ ಪೇದೆಗಳಾದ ಪರಶುರಾಮ ಹಾಗೂ ವಿರೇಶ ಎಂಬಿಬ್ಬರು ಈ ಲಂಚ ಪ್ರಕರಣದಲ್ಲಿ ಹಣ ಪಡೆಯುವಾಗ ಸಿಕ್ಕು ಬಿದ್ದ ಆರಕ್ಷಕರು. ಪೇದೆಗಳಿಬ್ಬರು ಬಾಪು ನಗರದಲ್ಲಿರುವ ಕನ್ನರಾಜು ಪಾಟೀಲ್ ಅವರ ಮನೆಗೆ ಹೋಗಿ ನಿಮ್ಮ ಮಗ ಕಾರ್ತಿಕ ಕಳ್ಳತನ, ದರೋಡೆ ಮಾಡುತ್ತಿದ್ದಾನೆ ಎಂದು ಬೆದರಿಸಿದ್ದಲ್ಲದೇ, ಮಗನನ್ನು ಹಿಡಿದುಕೊಂಡು ಬಂದು ರಾತ್ರಿ ತನಕ ಗಡಿಪಾರು ಮಾಡುತ್ತೇವೆ ಎಂದು ಹೇಳಿ ರಾತ್ರಿ ಇಟ್ಟುಕೊಂಡು ಭಯಪಡಿಸುತ್ತಿದ್ದರು. ಲೋಕಾಯುಕ್ತ ಎಸ್ಪಿ ಸಿದ್ದರಾಜು ಸಿ. ಪೊಲೀಸ್ ಮಾರ್ಗದರ್ಶನದಲ್ಲಿ ದಾಳಿ ನಡೆಸಲಾಗಿದೆ.



ಪೋಲಿಸರ ಲಂಚಾವತಾರ: ಕಳೆದ ಕೆಲವು ತಿಂಗಳ ಹಿಂದೆ ಸ್ಟೇಷನ್ ಬಜಾರ ಪೊಲೀಸ್ ಠಾಣೆಯಲ್ಲಿ ಪೋಕ್ಸೋ ಪ್ರಕರಣ ಸಂಬಂಧ ಚಿಂದಿ ಆಯುವವರಿಂದ ಲಂಚ ಪಡೆದು ಸಿಕ್ಕು ಬಿದ್ದಿದ್ದಲ್ಲದೇ ಮೂರು ದಿನಗಳ ಹಿಂದೆ ಜೇವರ್ಗಿ ಠಾಣೆಯ ಪೇದೆ ಮರಳು ಲೂಟಿಕೋರರಿಂದ ರಾಜಾರೋಷವಾಗಿ ಲಂಚ ಪಡೆಯುತ್ತಿರುವುದು, ಬಹು ಮುಖ್ಯವಾಗಿ ಎಸಿಪಿಯೊಬ್ಬರ ಮೇಲೂ ಲಂಚದ ಆರೋಪ ಕೇಳಿ ಬಂದಿತ್ತು. ಲೋಕಾಯುಕ್ತರು ದಾಳಿ ನಡೆಸಿ ವಿಚಾರಣೆ ಸಹ ನಡೆಸಿದ್ದರು. ಆದರೆ ಪ್ರಕರಣ ದಾಖಲಾಗಲಿಲ್ಲ. ಪೊಲೀಸರ ಲಂಚಾವತಾರ ಹಾಗೂ ಕರ್ತವ್ಯಲೋಪ ಕುರಿತಾಗಿ ದಿನಾಲು ಹಲವಾರು ಪ್ರಕರಣಗಳು ಕೇಳಿ ಬರುತ್ತಿವೆ. ಆದರೆ ಕಡಿವಾಣ ಹಾಕುವುದು ಈಗ ಮುಂದಿರುವ ದೊಡ್ಡ ಸವಾಲಾಗಿದೆ.

**ಶ್ವಾನಗಳ ಅಟ್ಯಾಕ್, ಗಂಭೀರ ಗಾಯ**

ಮನೆ ಬಳಿ ಆಟವಾಡುತ್ತಿದ್ದಾಗ ಬೀದಿ ನಾಯಿಗಳ ದಾಳಿಗೊಳಗಾಗಿ ನಾಲ್ಕು ವರ್ಷದ ಬಾಲಕಿಯೊಬ್ಬಳು ಗಂಭೀರ ಗಾಯಗೊಂಡ ಘಟನ ಜಿಲ್ಲೆಯ ಸೇಡಂ ತಾಲೂಕಿನ ಮೀನಹಬಲ್ ಗ್ರಾಮದಲ್ಲಿ ನಡೆದಿದೆ. ಗಾಯಗೊಂಡ ಬಾಲಕಿಯನ್ನು ಸಾನ್ವಿ ಎಂದು ಗುರುತಿಸಲಾಗಿದೆ. ಬಾಲಕಿಯ ಮುಖದಲ್ಲಿ ಆಳವಾದ ಗಾಯಗಳಾಗಿವೆ. ತುಟಿ ಮತ್ತು ಕೆನ್ನೆಗೆ ಗಂಭೀರ ಗಾಯಗಳಾಗಿವೆ.

ಶ್ವಾನಗಳ ದಾಳಿಯಿಂದ ಗಾಯಗೊಂಡ ಬಾಲಕಿಯನ್ನು ಸೇಡಂನ ಸರ್ಕಾರಿ ಆಸ್ಪತ್ರೆಗೆ ಕರೆದೊಯ್ಯಲಾಯಿತು. ಅಲ್ಲಿ ಆಕೆಗೆ ಚಿಕಿತ್ಸೆ ನೀಡಲಾಗಿದ್ದು, ಗಾಯಗಳಿಗೆ ಹೊಲಿಗೆ ಹಾಕಲಾಯಿತು. ಈ ಘಟನೆಯು ಗ್ರಾಮದಲ್ಲಿ ಬೀದಿ ನಾಯಿಗಳ ಹಾವಳಿ ಹೆಚ್ಚುತ್ತಿರುವ ಬಗ್ಗೆ ನಿವಾಸಿಗಳಲ್ಲಿ ಕಳವಳವನ್ನು ಹೆಚ್ಚಿಸಿದೆ. ಬೀದಿ ನಾಯಿಗಳ ಸಂಖ್ಯೆಯನ್ನು ನಿಯಂತ್ರಿಸಲು ಮತ್ತು ಇದೇ ರೀತಿಯ ದಾಳಿಗಳನ್ನು ತಡೆಯಲು ಅಧಿಕಾರಿಗಳು ತಕ್ಷಣ ಕ್ರಮ ಕೈಗೊಳ್ಳಬೇಕೆಂದು ಸ್ಥಳೀಯರು ಒತ್ತಾಯಿಸಿದ್ದಾರೆ.

ಈ ವರ್ಷದ ಆರಂಭದಲ್ಲಿ ರಾಜ್ಯದಲ್ಲಿ ಇದೇ ರೀತಿಯ ಬೀದಿ ನಾಯಿ ದಾಳಿ ನಡೆದಿರುವ ಘಟನೆ ಬಗ್ಗೆ ವರದಿಯಾಗಿದ್ದು, ನಾಲ್ಕು ವರ್ಷದ ಬಾಲಕನೊಬ್ಬ ತನ್ನ ಮನೆಯ ಬಳಿ ಆಟವಾಡುತ್ತಿದ್ದಾಗ ಕ್ರೂರವಾಗಿ ದಾಳಿಗೊಳಗಾಗಿದ್ದ.

# ಸಾಕ್ಷ್ಯಾಧಾರ ಕೊರತೆ-20 ಆರೋಪಿಗಳು ದೋಷಮುಕ್ತ

**ಕಲಬುರಗಿ, ಸೆ. 5:** ರಾಜ್ಯದಲ್ಲಿ ಸಂಚಲನ ಮೂಡಿಸಿದ್ದ ಕೆಪಿಎಸ್ಸಿ (ಕರ್ನಾಟಕ ಲೋಕಸೇವಾ ಆಯೋಗ) ಮೂಲಕ ನೌಕರಿ ಕೊಡಿಸುವುದಾಗಿ ಆಮಿಷವೊಡ್ಡಿ ಹಣ ವಂಚಿಸಿದ ಹಾಗೂ ಪರೀಕ್ಷಾ ಅಕ್ರಮ ಎಸಗಿದ ಆರೋಪ ಹೊತ್ತಿದ್ದ 20 ಆರೋಪಿಗಳನ್ನು ಕಲಬುರಗಿಯ 5ನೇ ಹೆಚ್ಚುವರಿ ಸಿವಿಲ್ ಮತ್ತು ಜೆಎಂಎಫ್ಸಿ ನ್ಯಾಯಾಲಯವು ಸಾಕ್ಷ್ಯಾಧಾರಗಳ ಕೊರತೆಯ ಹಿನ್ನೆಲೆಯಲ್ಲಿ ಖುಲಾಸೆಗೊಳಿಸಿ ತೀರ್ಪು ನೀಡಿದೆ.

ಫೆಬ್ರವರಿ 25, 2018ರಂದು ಕೆಪಿಎಸ್ಸಿ ವತಿಯಿಂದ ಪ್ರಥಮ ದರ್ಜೆ ಸಹಾಯ ಮತ್ತು ದ್ವಿತೀಯ ದರ್ಜೆ ಸಹಾಯಕರ ಹುದ್ದೆಗಳ ಭರ್ತಿಗಾಗಿ ಸಿಇಟಿ ಪರೀಕ್ಷೆಯನ್ನು ನಡೆಸಲಾಗಿತ್ತು. ಈ ಪರೀಕ್ಷೆಯಲ್ಲಿ ಅಭ್ಯರ್ಥಿಗಳಿಗೆ ಸಹಾಯ ಮಾಡುವುದಾಗಿ ನಂಬಿಸಿ ತಲಾ ಅಭ್ಯರ್ಥಿಯಿಂದ 13 ಲಕ್ಷ ರೂಪಾಯಿಗಳ ವಹಿವಾಟು ನಡೆಸಲಾಗಿದೆ ಎಂಬ ಗಂಭೀರ ಆರೋಪವಿತ್ತು.

ಪ್ರಶ್ನೆ ಪತ್ರಿಕೆಗಳನ್ನು ಪರೀಕ್ಷಾ ಕೇಂದ್ರದಿಂದ ಹೊರತಂದು ವಿವಿಧ ಲಾಡ್ಜ್‌ಗಳಲ್ಲಿ ಕೂತು ಮೈಕ್ರೋಫೋನ್ ಹಾಗೂ ಎಸ್‌ಎಂಎಸ್ ಮೂಲಕ ಅಭ್ಯರ್ಥಿಗಳಿಗೆ ಉತ್ತರಗಳನ್ನು ರವಾನಿಸಲಾಗುತ್ತಿತ್ತು ಎಂಬುದು ತನಿಖಾಧಿಕಾರಿಗಳ ವಾದವಾಗಿತ್ತು.

ಈ ಪರೀಕ್ಷಾ ಅಕ್ರಮದ ಹಿನ್ನೆಲೆಯಲ್ಲಿ ವಿವಿಧ ಪೊಲೀಸ್ ಠಾಣೆಗಳಲ್ಲಿ ಪ್ರಕರಣಗಳು ದಾಖಲಾಗಿದ್ದು, ಪೊಲೀಸರು ಒಟ್ಟು 20 ಜನ ಆರೋಪಿಗಳನ್ನು ಬಂಧಿಸಿ ನ್ಯಾಯಾಲಯಕ್ಕೆ ದೋಷಾರೋಪಪಟ್ಟಿ ಸಲ್ಲಿಸಿದ್ದರು.

ಆದರೆ, ವಿಚಾರಣೆ ವೇಳೆ ಪ್ರಾಸಿಕ್ಯೂಷನ್ ಕಡೆಯಿಂದ ಆರೋಪಗಳನ್ನು ಸಾಬೀತುಪಡಿಸಲು ಅಗತ್ಯವಿರುವ ಸೂಕ್ತ ಹಾಗೂ ಬಲವಾದ ಸಾಕ್ಷ್ಯಾಧಾರಗಳನ್ನು ಒದಗಿಸಲು ವಿಫಲವಾಯಿತು.

ಪ್ರಕರಣದ ವಾದ–ಪ್ರತಿವಾದಗಳನ್ನು ಆಲಿಸಿದ ನ್ಯಾಯಾಧೀಶರಾದ ಕಮಲಕುಮಾರ ಶಿರೋಳಕರ್ ಅವರು, ಲಭ್ಯವಿರುವ ದಾಖಲೆಗಳು ಮತ್ತು ಸಾಕ್ಷ್ಯಗಳ ಕೊರತೆಯನ್ನು ಪರಿಗಣಿಸಿ ಒಟ್ಟು 20 ಆರೋಪಿಗಳನ್ನು ದೋಷ 'ಮುಕ್ತಗೊಳಿಸಿ ಆದೇಶ ಹೊರಡಿಸಿದ್ದಾರೆ.

# ಬಸ್ ಕೊರತೆಯಿಂದ ವಿದ್ಯಾರ್ಥಿಗಳ ಪರದಾಟ, ಅಪಾಯಕಾರಿ ಪ್ರಯಾಣ



**ಬೀದರ, ಸೆ. 5:** ಜಿಲ್ಲೆಯ ಔರಾದ್ ತಾಲ್ಲೂಕಿನ ವಿವಿಧ ಮಾರ್ಗ ಗಳಲ್ಲಿ ಸಾರಿಗೆ ಸಂಸ್ಥೆಯ ಬಸ್‌ಗಳ ಕೊರತೆಯಿಂದ ಪ್ರಯಾಣಿಕರು, ವಿದ್ಯಾರ್ಥಿಗಳು ತೀವ್ರ ತೊಂದರೆ ಅನುಭವಿಸುತ್ತಿದ್ದಾರೆ. ಬಸ್‌ಗಳ ಸಂಖ್ಯೆ ಕಡಿಮೆ ಆಗಿರುವುದರಿಂದ ಬೆಳಿಗ್ಗೆ ಹಾಗೂ ಸಂಜೆ ವೇಳೆಯಲ್ಲಿ ಬಸ್‌ಗಳು ತುಂಬಿ ತುಳುಕುತ್ತಿದ್ದು, ವಿದ್ಯಾರ್ಥಿಗಳು ಬಾಗಿಲಲ್ಲಿ ಜೋತುಬಿದ್ದು ಅಪಾಯಕಾರಿ ರೀತಿಯಲ್ಲಿ ಪ್ರಯಾಣಿಸುವಂತಾಗಿದೆ.

ವಿಶೇಷವಾಗಿ ಬೀದರ್–ಔರಾದ್ ಮಾರ್ಗದಲ್ಲಿ ಬೆಳಗ್ಗೆ ಶಾಲಾ–ಕಾಲೇಜುಗಳಿಗೆ ತೆರಳುವ ಹಾಗೂ ಸಂಜೆ ಮನೆಗೆ ಮರಳುವ ವೇಳೆಯಲ್ಲಿ ಪ್ರಯಾಣಿಕರ ಸಂಖ್ಯೆ ಹೆಚ್ಚಾಗಿರುತ್ತದೆ.

> **ಸಂತಪುರ ವ್ಯಾಪ್ತಿಯ ಗ್ರಾವಗಳಿಗೆ ಸಮರ್ಪಕ ಬಸ್ ಸೌಲಭ್ಯವಿಲ್ಲದೆ ವಿದ್ಯಾರ್ಥಿಗಳಿಗೆ ತೊಂದರೆಯಾಗುತ್ತಿದೆ. ಪಾಲಕರು ತಮ್ಮ ಹೆಣ್ಣುಮಕ್ಕಳನ್ನು ಶಾಲೆ–ಕಾಲೇಜಿಗೆ ಕಳುಹಿಸಲು ಹಿಂದೇಟು ಹಾಕುತ್ತಿದ್ದಾರೆ.**
> **– ಧನರಾಜ ಮುಸ್ತಾಪುರ, ದಸಂಸ ಜಿಲ್ಲಾ ಸಂಚಾಲಕ**

ಬಸ್‌ನೊಳಗೆ ಕಾಲಿಡಲೂ ಜಾಗವಿಲ್ಲದ ಪರಿಸ್ಥಿತಿಯಿದೆ. ಇದರಿಂದಾಗಿ ವಿದ್ಯಾರ್ಥಿಗಳು ಬಾಗಿಲಿಗೆ ಜೋತುಬಿದ್ದು ಪ್ರಯಾಣಿಸುತ್ತಿದ್ದಾರೆ. ಅಪಾಯಕಾರಿ ಪ್ರಯಾಣದ ಫೋಟೊವೊಂದು ಸಾಮಾಜಿಕ ಜಾಲತಾಣದಲ್ಲಿ ಹರಿದಾಡುತ್ತಿದ್ದು, ಸಾರಿಗೆ ಸಂಸ್ಥೆಯ ನಿರ್ಲಕ್ಷ್ಯದ ವಿರುದ್ಧ ಸಾರ್ವಜನಿಕರಿಂದ ಆಕ್ರೋಶ ವ್ಯಕ್ತವಾಗಿದೆ.

ಸಂತಪುರ ದೊಡ್ಡ ಹೋಬಳಿ ಕೇಂದ್ರವಾಗಿದ್ದು, ಸುತ್ತಲಿನ ಹತ್ತಾರು ಗ್ರಾಮಗಳಿಂದ ನೂರಾರು ವಿದ್ಯಾರ್ಥಿಗಳು ಪ್ರತಿದಿನ ಶಾಲಾ–ಕಾಲೇಜುಗಳಿಗೆ ಇಲ್ಲಿಗೆ ಬರುತ್ತಾರೆ. ಆದರೆ ವಿದ್ಯಾರ್ಥಿಗಳ ಸಂಖ್ಯೆಗೆ ಅನುಗುಣವಾಗಿ ಬಸ್‌ಗಳ ವ್ಯವಸ್ಥೆ ಇಲ್ಲದಿರುವುದು ಸಮಸ್ಯೆಗೆ ಕಾರಣವಾಗಿದೆ ಎಂಬ ದೂರುಗಳಿವೆ.

ವಿದ್ಯಾರ್ಥಿಗಳು ಬಸ್ ಬಾಗಿಲಲ್ಲಿ ಜೋತುಬಿದ್ದು ಪ್ರಯಾಣಿಸುವುದನ್ನು ನೋಡಿದ್ದೇನೆ. ಅಧಿಕಾರಿಗಳ ಗಮನಕ್ಕೂ ತಂದಿದ್ದರೂ ಪ್ರಯೋಜನವಾಗಿಲ್ಲ. ವಿದ್ಯಾರ್ಥಿಗಳ ಸುರಕ್ಷತೆಯ ಬಗ್ಗೆ ಸಾರಿಗೆ ಸಂಸ್ಥೆ ಗಂಭೀರವಾಗಿ ಗಮನಹರಿಸಬೇಕು ಎಂದು ಸಾಮಾಜಿಕ ಕಾರ್ಯಕರ್ತ ರಾಜು ಶೆಂಬೆಳ್ಳಿ ಆಕ್ರೋಶ ವ್ಯಕ್ತಪಡಿಸಿದ್ದಾರೆ.

# ಆರ್ಥಿಕ ಪ್ರಗತಿಗೆ ಟೆಕ್ಸ್‌ಟೈಲ್ ಪಾರ್ಕ್ ಉತ್ತೇಜನ: ಶರಣಬಸಪ್ಪ ಪಪ್ಪಾ ಅಭಿಮತ

**ಕಲಬುರಗಿ, ಸೆ. 5:** ಪಿಎಂ ಮಿತ್ರ ಯೋಜನೆಯಡಿ ಕಲಬುರಗಿಯಲ್ಲಿ ಮೆಗಾ ಟೆಕ್ಸ್‌ಟೈಲ್ ಪಾರ್ಕ್ ನಿರ್ಮಾಣಗೊಳ್ಳುತ್ತಿದ್ದು, ನೇರ ಮತ್ತು ಪರೋಕ್ಷವಾಗಿ ಲಕ್ಷಕ್ಕೂ ಹೆಚ್ಚು ಉದ್ಯೋಗ ಸೃಷ್ಟಿಯಾಗಲಿವೆ. ಅರ್ಥ ಕ್ರಾಂತಿಗೂ ಸಹಕಾರಿಯಾಗಲಿದೆ ಎಂದು ಕಲ್ಯಾಣ ಕರ್ನಾಟಕ ವಾಣಿಜ್ಯೋದ್ಯಮ ಸಂಸ್ಥೆ (ಕೆಕೆಸಿಸಿಐ) ಅಧ್ಯಕ್ಷ ಶರಣಬಸಪ್ಪ ಪಪ್ಪಾ ಹೇಳಿದರು.



**ಕಲಬುರಗಿಯಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ ಹಾಗೂ ಕೈಮಗ್ಗ ಮತ್ತು ಜವಳಿ ಇಲಾಖೆ ಉತ್ತರ ವಲಯ ಸಹಯೋಗದಡಿ ಜವಳಿ ವಲಯದ ರಫ್ತು ಉದ್ದಿಮೆದಾರರಿಗಾಗಿ ಆಯೋಜಿಸಿದ್ದ ರಫ್ತು ಪ್ರೋತ್ಸಾಹ ಕಾರ್ಯಾಗಾರವನ್ನು ಕಲ್ಯಾಣ ಕರ್ನಾಟಕ ವಾಣಿಜ್ಯೋದ್ಯಮ ಸಂಘದ ಅಧ್ಯಕ್ಷ ಶರಣಬಸಪ್ಪ ಪಪ್ಪಾ ಉದ್ಘಾಟಿಸಿದರು. ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕ ಅಬ್ದುಲ್ ಜೀಂ, ಕೆಜಿಟಿಟಿಐ ನಿರ್ದೇಶಕ ರಾಜೇಶ ಬಾವಗಿ ಮುಂತಾದವರಿದ್ದರು.**

ನಗರದ ಕೆಜಿಟಿಟಿಐ ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ ಹಾಗೂ ಕೈಮಗ್ಗ ಮತ್ತು ಜವಳಿ ಇಲಾಖೆ ಉತ್ತರ ವಲಯ ಸಹಯೋಗದಡಿ ಜವಳಿ ವಲಯದ ಸಂಭಾವ್ಯ ರಫ್ತು ಉದ್ದಿಮೆದಾರರಿಗಾಗಿ ಆಯೋಜಿಸಿದ್ದ ರಫ್ತು ಪ್ರೋತ್ಸಾಹ ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿದ ಅವರು, ಯೋಜನೆಗೆ ಸರ್ಕಾರ 1000 ಎಕರೆ ಜಮೀನು ಹಾಗೂ ಕೆಕೆಆರ್‌ಡಿಬಿ 200 ಕೋಟಿ ಅನುದಾನ ನೀಡಿದೆ ಎಂದರು.

ಈ ಭಾಗದಲ್ಲಿ ಜವಳಿ ಮತ್ತು ಕೃಷಿ ಉತ್ಪನ್ನಗಳ ರಫ್ತು ಜಾಗೃತಿ ಕಡಿಮೆ ಇದೆ. ತೊಗರಿ ಬೇಳೆಗೆ ಜಿಐ ಟ್ಯಾಗ್ ಸಿಕ್ಕಿದ್ದರೂ ನೇರವಾಗಿ ರಫ್ತಾಗುತ್ತಿಲ್ಲ. ಆದರೆ ಗುಜರಾತ್, ಮಹಾರಾಷ್ಟ್ರ ಉದ್ಯಮಿಗಳು ಖರೀದಿಸಿ ವಿದೇಶಗಳಿಗೆ ಕಳುಹಿಸುತ್ತಿದ್ದಾರೆ. ತೊಗರಿ ಬೇಳೆ, ಜವಳಿ ಉತ್ಪನ್ನಗಳನ್ನು ಹೊರದೇಶಗಳಿಗೆ ನೇರವಾಗಿ ರಫ್ತು ಮಾಡಲು ಸ್ಥಳಿಯರು ಮುಂದೆ ಬರಬೇಕು. ಜವಳಿ ಇಲಾಖೆ ಮತ್ತು ಸರ್ಕಾರದ ಸೌಲಭ್ಯ ಬಳಸಿಕೊಂಡು ರಫ್ತುದಾರರಾಗುವ ಮೂಲಕ ಕಲಬುರಗಿಯನ್ನು ಕೈಗಾರಿಕಾ ಹಬ್ ಆಗಿ ಪರಿವರ್ತಿಸಲು ಕೈಜೋಡಿಸಬೇಕು ಎಂದು ಮನವಿ ಮಾಡಿದರು.

ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕ ಅಬ್ದುಲ್ ಅಜೀಂ ಮಾತನಾಡಿ, ಜಿಲ್ಲೆಯಿಂದ ಈಗಾಗಲೇ ಸಿಮೆಂಟ್, ಬೇಳೆ ಧಾನ್ಯ ಮತ್ತು ಬೆಂಟೋನೈಟ್ ಉತ್ಪನ್ನಗಳು ರಫ್ತಾಗುತ್ತಿವೆ. ಅವುಗಳನ್ನು ನೇರವಾಗಿ ಜಾಗತಿಕ ಮಾರುಕಟ್ಟೆಗೆ ತಲುಪಿಸುವ ನಿಟ್ಟಿನಲ್ಲಿ ಅಗತ್ಯ ಮಾರ್ಗದರ್ಶನ ನೀಡಲಾಗುತ್ತಿದೆ. ಜಿಲ್ಲಾಧಿಕಾರಿಗಳು ಕೈಗಾರಿಕಾ ಪ್ರದೇಶಗಳಿಗೆ ಭೇಟಿ ನೀಡಿ ಪರಿಶೀಲಿಸಿದ್ದು, ಮೆಗಾ ಜವಳಿ ಪಾರ್ಕ್‌ಗೆ ಅಗತ್ಯ ಸೌಕರ್ಯಗಳ ಅಭಿವೃದ್ಧಿಗೆ ಸೂಕ್ತ ಕ್ರಮ ಕೈಗೊಳ್ಳುತ್ತಿದ್ದಾರೆ ಎಂದು ತಿಳಿಸಿದರು.

ಕೆಜಿಟಿಟಿಐ ನಿರ್ದೇಶಕ ರಾಜೇಶ ಬಾವಗಿ ಮಾತನಾಡಿ, ಕೃಷಿ ಕ್ಷೇತ್ರದಲ್ಲಿ ಕಾರ್ಯನಿರ್ವಹಿಸುತ್ತಿರುವ ನವೋದ್ಯಮಗಳಿಗೆ ಆರಂಭಿಕ ಹಂತದಲ್ಲಿ ಮೂಲಧನ ಹಾಗೂ ತಾಂತ್ರಿಕ ಜ್ಞಾನದ ಕೊರತೆ ಇರುತ್ತದೆ. ಹೀಗಾಗಿ ಅವರಿಗೆ ಪೂರಕ ಮಾಗದರ್ಶನದ ಅಗತ್ಯವಿದೆ ಎಂದರು.

ಬೆಂಗಳೂರಿನ ರಫ್ತು ಪರಿಣತೆ ನಾಗವೇಣಿ ಉಪನ್ಯಾಸ ನೀಡಿ, ರಫ್ತು ಮಾಡಲು ಇಂಗ್ಲಿಷ್ ಬರದಿದ್ದರೂ ನಡೆಯುತ್ತದೆ ಎಂದು ಹೇಳಿದರು. ಮ್ಯಾನೇಜರ್ ಜಾಫರ್ ಅನ್ಸಾರಿ, ಕೆಕೆಸಿಸಿಐ ಅನುದೀಪ್ ದಂಡೋತಿ ಇತರರಿದ್ದರು. ಕಲಬುರಗಿ ಉತ್ತರ ವಲಯದ ಕೈಮಗ್ಗ ಮತ್ತು ಜವಳಿ ಇಲಾಖೆ ಜಂಟಿ ನಿರ್ದೇಶಕ ಬಿ.ವಿಠ್ಠಲರಾಜು ಪ್ರಾಸ್ತಾವಿಕ ಮಾತನಾಡಿದರು. ಉಪ ನಿರ್ದೇಶಕ ರಾವೇಂದ್ರ ಹೊಸಮನಿ ಸ್ವಾಗತಿಸಿದರು. ಸಹಾಯಕ ನಿರ್ದೇಶಕ ಮಲ್ಲಿಕಾರ್ಜುನ ನಿರೂಪಣೆ ಮಾಡಿದರು.

ರಫ್ತು ವ್ಯವಹಾರ ಕ್ಷೇತ್ರದಲ್ಲಿ ಹೇರಳ ಅವಕಾಶರೇಷ್ಮೆ ಮತ್ತು ಜವಳಿ ಕ್ಷೇತ್ರದಲ್ಲಿ ರಫ್ತು ಮಾಡಲು ಸಾಕಷ್ಟು ಅವಕಾಶಗಳಿವೆ. ರಫ್ತು ವ್ಯವಹಾರ ಆರಂಭಿಸುವವರಿಗೆ ಅಗತ್ಯ ಮಾರ್ಗದರ್ಶನ ಮತ್ತು ಉದ್ಯಮಿಗಳಿಗೆ ಹಂತ ಹಂತವಾಗಿ ಸರ್ಕಾರ ಸೌಲಭ್ಯ ನೀಡಲಿದೆ ಎಂದು ಬೆಂಗಳೂರಿನ ಕೇಂದ್ರ ರೇಷ್ಮೆ ಮಂಡಳಿ ವಿಜ್ಞಾನಿ ಡಾ.ಕುಮಾರೇಶನ್ ಹೇಳಿದರು.

ಭಾರತವು 28 ದೇಶಗಳ ಜತೆ ಮುಕ್ತ ವ್ಯಾಪಾರ ಒಪ್ಪಂದ ಮಾಡಿಕೊಂಡಿದೆ. ವಿದೇಶಕ್ಕೆ ಕಳುಹಿಸುವ ಸರಕಿನ ಗುಣಮಟ್ಟ ಮತ್ತು ಲೇಬಲಿಂಗ್ ನಿಯಮ ಕಟ್ಟುನಿಟ್ಟಾಗಿ ಪಾಲಿಸಬೇಕು. ಇಲ್ಲವಾದಲ್ಲಿ ಸರಕು ತಿರಸತಗೊಂಡು ನಷ್ಟ ಅನುಭವಿಸಬೇಕಾಗುತ್ತದೆ. ಜಗತ್ತಿಗೆ ರೇಷ್ಮೆ ರಫ್ತು ಮಾಡುವಲ್ಲಿ ಚೀನಾ ಶೇ.50, ಭಾರತ ಶೇ.45 ಪಾಲಿದೆ ಎಂದು ತಿಳಿಸಿದರು.

> **ರಫ್ತಿಗೆ ಜವಳಿ ಉದ್ಯಮಿ, ಸಣ್ಣ ಕೈಗಾರಿಕೆಗಳಿಗೆ ಸರ್ಕಾರ ಸಹಕಾರ ನೀಡುತ್ತಿದೆ. ವಿಶ್ವೇಶ್ವರಯ್ಯ ಟ್ರೇಡ್ ಪ್ರೊಮೋಷನ್ ಕೌನ್ಸಿಲ್ ಮತ್ತು ಜವಳಿ ಇಲಾಖೆ ಸಹಯೋಗದಡಿ ಉದ್ಯಮಿಗಳ ಕುಂದುಕೊರತೆ ಆಲಿಸಿ ಪರಿಹರಿಸಲು ಶ್ರಮಿಸಲಾಗುತ್ತಿದೆ. ರಫ್ತು ವ್ಯಾಪಾರ ಮಾಹಿತಿ ನೀಡಲು ಆರು ದಿನದ ವಿಶೇಷ ರಫ್ತು ನಿರ್ವಹಣೆ ತರಬೇತಿ ಆಯೋಜಿಸಲಾಗುವುದು. ಜಿಲ್ಲಾ ಕೈಗಾರಿಕಾ ಕೇಂದ್ರದಲ್ಲಿ ಸಹಾಯ ಮತ್ತು ಮಾಹಿತಿ ಕೇಂದ್ರ ಆರಂಭಿಸಲಾಗಿದೆ.**
> **– ಅಬ್ದುಲ್ ಅಜೀಂ, ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕ.**

# ಪ್ರಿಯಾಂಕ್ ಖರ್ಗೆ ಮಧ್ಯರಾತ್ರಿ ಸಿಐಡಿ ಕಚೇರಿಗೆ ಹೋಗಿದ್ದೇಕೆ? ಎರಡನೇ ವಿಕೆಟ್ ಪತನದತ್ತ ಕೈ ಸರ್ಕಾರ: ವಿಜಯೇಂದ್ರ ಸುಳಿವು

**ಸಿಂಧನೂರ, ಸೆ. 5:** ಸಚಿವ ಪ್ರಿಯಾಂಕ್ ಖರ್ಗೆ ರಾತ್ರೋ ರಾತ್ರಿ ಸಿಐಡಿ ಕಚೇರಿಗೆ ಓಡಿದ್ದೇಕೆ? ಕೆಪಿಎಸ್‌ಸಿ ಎಇಇ ನೇಮಕಾತಿ ಹಗರಣದಲ್ಲಿ ಸಚಿವ ಪ್ರಿಯಾಂಕ್ ಖರ್ಗೆ ಅವರ ನೇರ ಕೈವಾಡವಿದೆ ಎಂದು ವಿಜಯೇಂದ್ರ ನೇರ ಆರೋಪಿಸಿದರು. ಈ ಹಗರಣದಲ್ಲಿ ತಾವು ಸಿಕ್ಕಿಬೀಳುವ ಭೀತಿಯಿಂದ ಸಚಿವರು ರಾತ್ರೋರಾತ್ರಿ ಸಿಐಡಿ ಕಚೇರಿಗೆ ಭೇಟಿ ನೀಡುತ್ತಿದ್ದಾರೆ. ಹಗರಣದಲ್ಲಿ ಶಾಮೀಲಾಗದಿದ್ದರೆ ಕತ್ತಲೆಯಲ್ಲಿ ಅಧಿಕಾರಿಗಳನ್ನು ಭೇಟಿ ಮಾಡುವ ಅಗತ್ಯವೇನಿತ್ತು ಎಂದು ವಿಜಯೇಂದ್ರ ಪ್ರಶ್ನಿಸಿದ್ದಾರೆ. ಅಷ್ಟೇ ಅಲ್ಲದೆ, ತಮ್ಮನ್ನು ತಾವು ರಕ್ಷಿಸಿಕೊಳ್ಳಲು ಸಚಿವರು ಹರಸಾಹಸ ಪಡುತ್ತಿದ್ದಾರೆ ಎಂದು ಟೀಕಿಸಿದರು.

ರಾಜ್ಯ ರಾಜಕಾರಣದಲ್ಲಿ ಈಗ ಪಾದಯಾತ್ರೆಯ ಅಬ್ಬರ ಜೋರಾಗಿದ್ದು, ಸಿಂಧನೂರು ದಾಟಿ ಕೊಪ್ಪಳದ ಕಡೆ ಧಾವಿಸುತ್ತಿದೆ. ಅಪಾರ ಜನಬೆಂಬಲದೊಂದಿಗೆ ಎಲ್ಲೆಡೆ ಸಂಭ್ರಮದಿಂದ ಜನರು ಪಾದಯಾತ್ರೆಯಲ್ಲಿ ಪಾಲ್ಗೊಳ್ಳುತ್ತಿದ್ದಾರೆ. ಕಾಂಗ್ರೆಸ್ ಸರ್ಕಾರದ ವಿರುದ್ಧ ಬಿಜೆಪಿ ತನ್ನ ಹೋರಾಟವನ್ನು ತೀವ್ರಗೊಳಿಸಿದೆ. ಲಿಂಗಸುಗೂರಿನಿಂದ ಆರಂಭವಾಗಿರುವ 170 ಕಿಲೋ ಮೀಟರ್ ಉದ್ದದ ಬಳ್ಳಾರಿ ಚಲೋ ಪಾದಯಾತ್ರೆಯ ನೇತೃತ್ವ ವಹಿಸಿರುವ ಬಿಜೆಪಿ ರಾಜ್ಯಾಧ್ಯಕ್ಷ ಬಿ. ವೈ.ವಿಜಯೇಂದ್ರ, ಸಚಿವ ಪ್ರಿಯಾಂಕ್ ಖರ್ಗೆ ವಿರುದ್ಧ ಗಂಭೀರ ಸ್ವರೂಪದ ಆರೋಪಗಳನ್ನು ಮಾಡುವ ಮೂಲಕ ರಾಜಕೀಯ ವಲಯದಲ್ಲಿ ಸಂಚಲನ ಮೂಡಿಸಿದ್ದಾರೆ.

**ನಾಗೇಂದ್ರ ಮೊದಲ ವಿಕೆಟ್, ಖರ್ಗೆ ಎರಡನೇ ವಿಕೆಟ್:** ಕಾಂಗ್ರೆಸ್ ಸರ್ಕಾರದ ಭ್ರಷ್ಟಾಚಾರದ ಸರಣಿಯಲ್ಲಿ ಈಗಾಗಲೇ ನಾಗೇಂದ್ರ ಅವರ ವಿಕೆಟ್ ಪತನವಾಗಿದೆ. ಇದೀಗ ಎರಡನೇ ವಿಕೆಟ್ ಪ್ರಿಯಾಂಕ್ ಖರ್ಗೆ ಅವರದ್ದೇ ಆಗಿರಲಿದೆ. ಕೆಪಿಎಸ್ ಸಿ ಅಕ್ರಮದ ಕಳಂಕ ಹೊತ್ತಿರುವ ಸಚಿವರ ತಲೆದಂಡ ನಿಶ್ಚಿತ. ಪಾದಯಾತ್ರೆಯ ಬಿಸಿ ತಾಳಲಾರದೆ ಸರ್ಕಾರ ತತ್ತರಿಸುತ್ತಿದೆ ಎಂದು ವಿಜಯೇಂದ್ರ ಗುಡುಗಿದ್ದಾರೆ. ಸಚಿವರ ರಾಜೀನಾಮೆ ಪಡೆಯುವವರೆಗೂ ನಮ್ಮ ಹೋರಾಟ ನಿಲ್ಲದು ಎಂಬ ಎಚ್ಚರಿಕೆಯನ್ನು ನೀಡಿದರು.

**ದಪ್ಪ ಚರ್ಮದ ಸರ್ಕಾರ:** ಜನರ ಸಂಕಷ್ಟದ ಮುಂದೆ ನಮಗೆ ಬಿಸಿಲು ಲೆಕ್ಕಕ್ಕಿಲ್ಲ. ಈ ದಪ್ಪ ಚರ್ಮದ ಸರ್ಕಾರಕ್ಕೆ ನಮ್ಮ ಹೋರಾಟದ ಬಿಸಿ ಈಗಾಗಲೇ ತಟ್ಟಿದೆ. ಅದರ ಮೊದಲ ಫಲಿತಾಂಶವೇ ಸಚಿವ ನಾಗೇಂದ್ರ ಅವರ ರಾಜೀನಾಮೆ. ಎರಡನೇ ಜಯವಾಗಿ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಉತ್ತರ ಕರ್ನಾಟಕದ ಬರ ಅಧ್ಯಯನಕ್ಕೆ ಮುಂದಾಗಿದ್ದಾರೆ. ನಮ್ಮ ಹೋರಾಟಕ್ಕೆ ಹೆದರಿ ಕಾಂಗ್ರೆಸ್ ನಾಯಕರು ಬಳ್ಳಾರಿಯಲ್ಲಿ ಸುದ್ದಿಗೋಷ್ಠಿ ನಡೆಸುವ ಮೂಲಕ ತಮ್ಮ ಭಯವನ್ನು ಹೊರಹಾಕುತ್ತಿದ್ದಾರೆ ಎಂದು ವ್ಯಂಗ್ಯವಾಡಿದರು.




**2028ಕ್ಕೆ ಕರ್ನಾಟಕದಲ್ಲಿ ಎನ್‌ಡಿಎ:** ಕಲ್ಯಾಣ ಕರ್ನಾಟಕ ಭಾಗದಲ್ಲಿ ಈ ಬಾರಿ ಬಿಜೆಪಿ ಮತ್ತು ಎನ್ ಡಿಎ ಮೈತ್ರಿಕೂಟ ಅತಿ ಹೆಚ್ಚು ಸ್ಥಾನಗಳನ್ನು ಗೆಲ್ಲಲಿದೆ. ಕಾಂಗ್ರೆಸ್ ನಾಯಕರ ಭ್ರಷ್ಟಾಚಾರದಿಂದ ಜನರು ಬೇಸತ್ತಿದ್ದಾರೆ. 2028ರ ವಿಧಾನಸಭಾ ಚುನಾವಣೆಯಲ್ಲಿ ರಾಜ್ಯದಲ್ಲಿ ಎನ್ ಡಿಎ ಸರ್ಕಾರ ಅಧಿಕಾರಕ್ಕೆ ಬರುವುದು ಸೂರ್ಯ-ಚಂದ್ರರಷ್ಟೇ ಸತ್ಯ. ಸರ್ಕಾರಕ್ಕೆ ತಾಕತ್ತಿದ್ದರೆ ವಿಶೇಷ ಅಧಿವೇಶನ ಕರೆಯಲಿ, ಅಲ್ಲಿಯೂ ನಾವು ಸರ್ಕಾರದ ಭ್ರಷ್ಟಾಚಾರವನ್ನು ಬಯಲಿಗೆಳೆಯುತ್ತೇವೆ ಎಂದು ವಿಜಯೇಂದ್ರ ಸವಾಲು ಹಾಕಿದರು.

ಬಳ್ಳಾರಿ ಚಲೋ ಪಾದಯಾತ್ರೆಯು ದಿನದಿಂದ ದಿನಕ್ಕೆ ಕಳೆಗಟ್ಟುತ್ತಿದ್ದು, ಸಚಿವ ಪ್ರಿಯಾಂಕ್ ಖರ್ಗೆ ವಿರುದ್ಧದ ವಿಜಯೇಂದ್ರ ಅವರ ಸ್ಫೋಟಕ ಆರೋಪಗಳು ರಾಜ್ಯ ರಾಜಕಾರಣದಲ್ಲಿ ಹೊಸ ಸಂಚಲನ ಮೂಡಿಸಿವೆ. ಸಚಿವರ ಸಿಐಡಿ ಭೇಟಿಯ ರಹಸ್ಯವೇನು ಎಂಬುದು ಈಗ ಸಾರ್ವಜನಿಕ ವಲಯದಲ್ಲಿ ದೊಡ್ಡ ಚರ್ಚೆಗೆ ಕಾರಣವಾಗಿದೆ.



ಹುಬ್ಬಳ್ಳಿಯಲ್ಲಿ ಶನಿವಾರ ಕೃಷ್ಣಜನ್ಮಾಷ್ಟಮಿ ಅಂಗವಾಗಿ ನಡೆದ 'ಮಟ್ಕಿ ಫೋಡ್' (ದಹಿ ಹಂಡಿ) ಸ್ಪರ್ಧೆಯಲ್ಲಿ ಯುವಕರು ಉತ್ಸಾಹದಿಂದ ಪಾಲ್ಗೊಂಡರು.

## ಸುಂಕಣ್ಣ-ನಾಗರಾಜು ಅಣ್ಣ ತಮ್ಮಂದಿರಿಗೆ ಹೆಡ್ ಕಾನ್‌ಸ್ಟೆಬಲ್ ಆಗಿ ಪ್ರಮೋಷನ್-ಎಸ್ಪಿ ಜಗದೀಶ್



**ಬಳ್ಳಾರಿ ಸೆ 05.** ಆಂಧ್ರಪ್ರದೇಶದ ಅನಂತಪುರಂ ಜಿಲ್ಲೆಯ ಡಿ. ಹಿರೇ ಹಾಳ್ ಮಂಡಲದ ಪೊಲೀಸ್ ಠಾಣೆಯಲ್ಲಿ ಕಾನ್‌ಸ್ಟೆಬಲ್‌ಗಳಾಗಿ ಸೇವೆ ಸಲ್ಲಿಸುತ್ತಿರುವ ಸುಂಕಣ್ಣ ಮತ್ತು ನಾಗರಾಜು ಅಣ್ಣ ತಮ್ಮಂದಿರಿಗೆ ಹೆಡ್ ಕಾನ್‌ಸ್ಟೆಬಲ್ ಹುದ್ದೆಗೆ ಬಡ್ತಿ ನೀಡಲಾಗಿದೆ. ಅನಂತಪುರ ಜಿಲ್ಲಾ ಎಸ್‌ಪಿ ಜಗದೀಶ್ ಅವರು ಬಡ್ತಿಯನ್ನು ಘೋಷಿಸಿದ್ದಾರೆ. ಒಂದೇ ದಿನ ಇಬ್ಬರು ಇಬ್ಬರು ಅಣ್ಣ ತಮ್ಮಂದಿರಿಗೆ ಕಾನ್‌ಸ್ಟೆಬಲ್‌ಗಳಿಗೆ ಬಡ್ತಿ ದೊರೆತಿದ್ದಕ್ಕೆ ಪೊಲೀಸ್ ಠಾಣೆಯ ಸಿಬ್ಬಂದಿ, ಗ್ರಾಮಸ್ಥರು, ಹಿತೈಷಿಗಳು ಸಂತೋಷವನ್ನು ವ್ಯಕ್ತಪಡಿಸಿದ್ದಾರೆ.

ಪೊಲೀಸ್ ಇಲಾಖೆಯಲ್ಲಿ ಕರ್ತವ್ಯ ನಿರ್ವಹಣೆಯಲ್ಲಿ ತೋರಿದ ಪ್ರತಿಭೆ ಮತ್ತು ಸೇವೆಯನ್ನು ಪರಿಗಣಿಸಿ ಬಡ್ತಿ ನೀಡಲಾಗಿದೆ ಎಂದು ಎಸ್ಪಿ ಅವರು ಹೇಳಿದ್ದಾರೆ.

ಈ ಸಂದರ್ಭದಲ್ಲಿ, ಡಿ. ಹಿರೇಹಾಳ್ ಎಸ್‌ಐ ಗುರುಪ್ರಸಾದ್ ರೆಡ್ಡಿ ಬಡ್ತಿ ಪಡೆದ ಸುಂಕಣ್ಣ ಮತ್ತು ನಾಗರಾಜು ಅವರಿಗೆ ಹಾರ ಹಾಕಿ ಅಭಿನಂದಿಸಿ ಈಗಲಿಂದ ನಿಮ್ಮ ಜವಾಬ್ದಾರಿ ಹೆಚ್ಚಾಗಲಿದೆ, ಜನರಿಗೆ ಸೇವೆ ಕಲ್ಪಿಸುವಲ್ಲಿ ಯಶಸ್ವಿಯಾಗಿ ನಡೆದುಕೊಂಡು ಇನ್ನು ಉನ್ನತಮಟ್ಟದ ಪ್ರಮೋಷನ್ ಪಡೆಯಬೇಕೆಂದು ಕಿವಿಮಾತನ್ನು ಹೇಳಿ ಶುಭ ಹಾರೈಸಿದರು.

## 4 ತಿಂಗಳಿಂದ ಮುಚ್ಚಲಾಗಿದ್ದ ಮತ್ತಿಗೋಡು ಆನೆ ಶಿಬಿರ ಸಾರ್ವಜನಿಕ ವೀಕ್ಷಣೆಗೆ ಮುಕ್ತ

**ಮಡಿಕೇರಿ, ಸೆ.5:** ಪ್ರವಾಸಿಗರಿಗೆ ಅರಣ್ಯ ಇಲಾಖೆಯು ಸಿಹಿ ಸುದ್ದಿ ನೀಡಿದೆ. ಸುರಕ್ಷತಾ ಕಾರಣಗಳಿಗಾಗಿ ಕಳೆದ ನಾಲ್ಕು ತಿಂಗಳಿನಿಂದ ಮುಚ್ಚಲಾಗಿದ್ದ ಕೊಡಗಿನ ಪ್ರಸಿದ್ಧ ಹಾರಂಗಿ ಮತ್ತು ಮೈಸೂರು ಗಡಿಯ ಬಳಿಯಿರುವ ಮತ್ತಿಗೋಡು ಆನೆ ಶಿಬಿರಗಳನ್ನು ಶನಿವಾರದಂದು ಸಾರ್ವಜನಿಕರ ವೀಕ್ಷಣೆಗೆ ಮುಕ್ತಗೊಳಿಸಲಾಗಿದೆ.



ಪ್ರವಾಸಿಗರ ನೆಚ್ಚಿನ ತಾಣವಾದ ದುಬಾರೆ ಆನೆ ಶಿಬಿರವು ಇನ್ನು ಕೆಲವು ದಿನಗಳ ಕಾಲ ಮುಚ್ಚಿರಲಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಮೇ ತಿಂಗಳಲ್ಲಿ ಕೊಡಗಿನ ದುಬಾರೆ ಆನೆ ಶಿಬಿರದಲ್ಲಿ ನಡೆದ ದುರಂತದಲ್ಲಿ ಪ್ರವಾಸಿಗರೊಬ್ಬರು ಹಾಗೂ ಸಾಕಿದ್ದ ಆನೆಯೊಂದು ಮೃತಪಟ್ಟಿದ್ದವು. ಘಟನೆಯ ಬಳಿಕ ರಾಜ್ಯದ ಎಲ್ಲ ಆನೆ ಶಿಬಿರಗಳಲ್ಲಿನ ಪ್ರವಾಸಿಗರ ಚಟುವಟಿಕೆಗಳನ್ನು ಅರಣ್ಯ ಇಲಾಖೆ ಸ್ಥಗಿತಗೊಳಿಸಿ, ಸುರಕ್ಷತಾ ಕ್ರಮಗಳ ಕುರಿತು ಪರಿಶೀಲನೆ ನಡೆಸಿತ್ತು.

ರಾಜ್ಯ ಸರ್ಕಾರ ಜಾರಿಗೆ ತಂದಿರುವ ಎಸ್‌ಒಪಿ ಅನ್ವಯ ಶಿಬಿರಗಳನ್ನು ಪುನರಾರಂಭಿಸಲಾಗಿದೆ. ಕುಶಾಲನಗರ ವಲಯ ಅರಣ್ಯಾಧಿಕಾರಿ ಆರ್. ರಕ್ಷಿತ್ ಮಾತನಾಡಿ, ಪ್ರವಾಸಿಗರಿಗೆ ಸಾಕಿದ ಆನೆಗಳನ್ನು ಮುಟ್ಟಲು ಅಥವಾ ಅವುಗಳ ಸಮೀಪಕ್ಕೆ ತೆರಳಲು ಇನ್ನು ಮುಂದೆ ಅವಕಾಶ ಇರುವುದಿಲ್ಲ ಎಂದು ತಿಳಿಸಿದ್ದಾರೆ. ಪ್ರವಾಸಿಗರ ಭೇಟಿಯ ಸಮಯದಲ್ಲಿ ಪ್ರತಿಯೊಂದು ಆನೆಯೂ ತನ್ನ ಮಾವುತನ ಮೇಲ್ವಿಚಾರಣೆ ಯಲ್ಲಿರಲಿದೆ. ಆನೆಗಳ ಆವರಣದೊಳಗೆ ಅರಣ್ಯ ಇಲಾಖೆ ಸಿಬ್ಬಂದಿ, ಮಾವುತರು ಹಾಗೂ ಅಧಿಕೃತ ಸಿಬ್ಬಂದಿಗೆ ಮಾತ್ರ ಪ್ರವೇಶ ನೀಡಲಾಗುತ್ತದೆ ಎಂದು ಹೇಳಿದ್ದಾರೆ. ಆನೆಗಳ ಆವರಣದ ಸುತ್ತ ರೈಲ್ವೆ ಮಾದರಿಯ ತಡೆಗೋಡೆಗಳನ್ನು ನಿರ್ಮಿಸಲಾಗಿದೆ. ಅರಣ್ಯ ಸಿಬ್ಬಂದಿಯೂ ಈ ತಡೆ ಗೋಡೆಗಳನ್ನು ದಾಟುವಂತಿಲ್ಲ. ಪ್ರವಾಸಿಗರು ಆನೆಗಳಿಂದ ಸುರಕ್ಷಿತ ಅಂತರ ಕಾಯ್ದುಕೊಳ್ಳಲು 10 ಮೀಟರ್ ದೂರದಲ್ಲಿ ನಿರ್ಮಿಸಿರುವ ಮತ್ತೊಂದು ಹಸಿರು ಬಣ್ಣದ ತಡೆಗೋಡೆಯ ಹಿಂದೆಯೇ ಇರಬೇಕು.

## ಇಂಚಲ ಗ್ರಾಮದಲ್ಲಿ ಗಡಿಗೆಯಲ್ಲಿ 14 ಗಂಗರ ಕಾಲದ ಚಿನ್ನದ ನಾಣ್ಯಗಳು ಪತ್ತೆ

**ಬೆಳಗಾವಿ, ಸೆ.5:** ಜಿಲ್ಲೆಯ ಸವದತ್ತಿ ತಾಲೂಕಿನ ಇಂಚಲ ಗ್ರಾಮದಲ್ಲಿ ಕೆಲಸ ಮಾಡುತ್ತಿದ್ದ ಕೂಲಿಕಾರ್ಮಿಕರಿಗೆ ಗಡಿಗೆಯೊಳಗೆ 14 ಚಿನ್ನದ ನಾಣ್ಯಗಳು ಪತ್ತೆಯಾಗಿವೆ.



ಬಿಸಿಎಂ ಹಾಸ್ಟೆಲ್ ಸಮೀಪ ಕೆಲಸ ಮಾಡುವ ವೇಳೆ ನಾಣ್ಯಗಳು ಸಿಕ್ಕಿದ್ದು, 54.8 ಗ್ರಾಂ ತೂಕ ಹೊಂದಿರುವ ಇವುಗಳ ಮೌಲ್ಯ 8.27 ಲಕ್ಷ ಎಂದು ಅಂದಾಜಿಸಲಾಗಿದೆ. ನಾಣ್ಯಗಳು ಪತ್ತೆಯಾದ ಕೂಡಲೇ ಕೂಲಿ ಕಾರ್ಮಿಕರು ಅವುಗಳನ್ನು ಅಧಿಕಾರಿಗಳಿಗೆ ಒಪ್ಪಿಸಿ ಪ್ರಾಮಾಣಿಕತೆ ಮೆರೆದಿದ್ದಾರೆ. ಪಿಡಿಒ ಹಾಗೂ ತಾಲೂಕು ಪಂಚಾಯಿತಿ ಸಿಬ್ಬಂದಿ ಸಮ್ಮುಖದಲ್ಲಿ ಸವದತ್ತಿ ತಹಶೀಲ್ದಾರ್ ಮಲ್ಲಿಕಾರ್ಜುನ ಹೆಗ್ಗಣ್ಣವರ ಅವರಿಗೆ ನಾಣ್ಯಗಳನ್ನು ಹಸ್ತಾಂತರಿಸಲಾಗಿದೆ. ಬಳಿಕ ತಹಶೀಲ್ದಾರ್ ಅವರು ಎಲ್ಲ ನಾಣ್ಯಗಳನ್ನು ಖಜಾನೆಗೆ ಒಪ್ಪಿಸಿದ್ದಾರೆ.

ಪತ್ತೆಯಾದ ನಾಣ್ಯಗಳ ಮೇಲೆ ಆನೆಯ ಚಿತ್ರ ಇರುವುದಾಗಿ ತಿಳಿದುಬಂದಿದೆ. ತಲಕಾಡಿನ ಗಂಗರ ರಾಜಲಾಂಛನ ಆನೆಯಾಗಿದ್ದ ಹಿನ್ನೆಲೆಯಲ್ಲಿ, ಈ ನಾಣ್ಯಗಳು ಗಂಗರ ಕಾಲಕ್ಕೆ ಸಂಬಂಧಿಸಿರಬಹುದೇ ಎಂಬ ಕುತೂಹಲ ಮೂಡಿದೆ. ನಾಣ್ಯಗಳು ಕ್ರಿ.ಶ. 10ರಿಂದ 15ನೇ ಶತಮಾನದ ಅವಧಿಗೆ ಸೇರಿದವು ಎಂಬ ಅನುಮಾನ ವ್ಯಕ್ತವಾಗಿದೆ.

ಆದರೆ ನಾಣ್ಯಗಳ ನಿಖರ ಕಾಲಘಟ್ಟ ಹಾಗೂ ಐತಿಹಾಸಿಕ ಹಿನ್ನೆಲೆಯನ್ನು ಖಚಿತಪಡಿಸಲು ಹೆಚ್ಚಿನ ಪರಿಶೀಲನೆ ಅಗತ್ಯವಿದೆ. ಲಕ್ಷಾಂತರ ರೂಪಾಯಿ ಮೌಲ್ಯದ ಚಿನ್ನದ ನಾಣ್ಯಗಳು ಸಿಕ್ಕರೂ ಅವುಗಳನ್ನು ಅಧಿಕಾರಿಗಳಿಗೆ ಒಪ್ಪಿಸಿದ ಕೂಲಿ ಕಾರ್ಮಿಕರ ಪ್ರಾಮಾಣಿಕತೆಗೆ ಸವದತ್ತಿ ತಾಲೂಕು ಆಡಳಿತ ಮೆಚ್ಚುಗೆ ವ್ಯಕ್ತಪಡಿಸಿದೆ. ನಾಣ್ಯಗಳ ಐತಿಹಾಸಿಕ ಮಹತ್ವ, ಮೂಲ ಮತ್ತು ನಿಖರವಾದ ಅವಧಿಯ ಮೌಲ್ಯಮಾಪನಕ್ಕಾಗಿ ಅಧಿಕಾರಿಗಳು ಕಾಯುತ್ತಿದ್ದಾರೆ. ಅವುಗಳ ಗೋಚರತೆಯ ಆಧಾರದ ಮೇಲೆ, ನಾಣ್ಯಗಳು 800 ರಿಂದ 1,000 ವರ್ಷಗಳಷ್ಟು ಹಳೆಯದಾಗಿವೆ ಎಂದು ತಾತ್ಕಾಲಿಕವಾಗಿ ಶಂಕಿಸಲಾಗಿದೆ. ಪುರಾತತ್ವ ಇಲಾಖೆಯ ಪರೀಕ್ಷೆಯ ನಂತರವೇ ನಾಣ್ಯಗಳ ನಿಜವಾದ ಅವಧಿ, ಐತಿಹಾಸಿಕ ಮಹತ್ವ ಮತ್ತು ಅಧಿಕೃತ ಮೌಲ್ಯವನ್ನು ಸ್ಥಾಪಿಸಬಹುದು ಎಂದು ತಿಳಿದು ಬಂದಿದೆ.

## ಹಿಂದುಳಿದವರ ವಿದ್ಯಾರ್ಥಿ ನಿಲಯದಲ್ಲಿ ಶುದ್ಧ ಕುಡಿಯುವ ನೀರು ವ್ಯವಸ್ಥೆ ಇಲ್ಲ.!!

**ಬಳ್ಳಾರಿ, ಸೆ.05.** ದಿವಂಗತ ದೇವರಾಜ ಅರಸು ಹಿಂದುಳಿದ ವರ್ಗಗಳ ಮೆಟ್ರಿಕ್ ನಂತರದ ಬಾಲಕರ ವಿದ್ಯಾರ್ಥಿ ನಿಲಯದಲ್ಲಿ ಶುದ್ಧ ಕುಡಿಯುವ ನೀರು ಹಾಗೂ ಶೌಚಾಲಯದ ಮೂಲಭೂತ ಸೌಲಭ್ಯಗಳ ಕೊರತೆ. ಬಳ್ಳಾರಿ ನಗರದ ತಾಳುರು ರಸ್ತೆಯ ಯನ್ನಾ ರಾಮಾಮೂರ್ತಿ ನಗರದಲ್ಲಿರುವ ದಿವಂಗತ ದೇವರಾಜ ಅರಸು ಹಿಂದುಳಿದ ವರ್ಗಗಳ ಮೆಟ್ರಿಕ್ ನಂತರದ ವಿದ್ಯಾರ್ಥಿನಿಯರ ವಸತಿ ನಿಲಯದಲ್ಲಿ ಹಲವಾರು ವರ್ಷಗಳಿಂದ ಪಾಲಿಕೆಯ ನೀರು ಸೌಲಭ್ಯ ಇಲ್ಲದೆ ವಿದ್ಯಾರ್ಥಿಗಳು ಪರದಾಡುವಂತಾಗಿದೆ.



ದಿವಂಗತ ದೇವರಾಜ ಅರಸು ಹಿಂದುಳಿದ ವರ್ಗಗಳ ಮೆಟ್ರಿಕ್ ನಂತರದ ಬಾಲಕರ ವಿದ್ಯಾರ್ಥಿನಿಲಯದಲ್ಲಿ ವಾಸಿಸುತ್ತಿರುವ ವಿದ್ಯಾರ್ಥಿಗಳಿಗೆ ಅಗತ್ಯವಾದ ಮೂಲಭೂತ ಸೌಲಭ್ಯಗಳು ಸಮರ್ಪಕವಾಗಿ ದೊರೆಯುತ್ತಿಲ್ಲ.

ವಿಶೇಷವಾಗಿ, ವಿದ್ಯಾರ್ಥಿನಿಲಯದಲ್ಲಿ ಶುದ್ಧ ಕುಡಿಯುವ ನೀರಿನ ವ್ಯವಸ್ಥೆ ಇಲ್ಲದಿರುವುದು ಅತ್ಯಂತ ಗಂಭೀರ ಸಮಸ್ಯೆಯಾಗಿದೆ.

ಪ್ರಸ್ತುತ ವಿದ್ಯಾರ್ಥಿನಿಲಯದಲ್ಲಿ ಬೋರ್‌ವೆಲ್‌ನ ಉಪ್ಪಿನಾಂಶ ಹೊಂದಿರುವ ನೀರನ್ನು ಬಳಸಲಾಗುತ್ತಿದ್ದು, ಅದನ್ನೇ ಫಿಲ್ಟರ್ ಮೂಲಕ ಶುದ್ಧೀಕರಿಸಿ ಕುಡಿಯಲು ನೀಡಲಾಗುತ್ತಿದೆ. ಇಂತಹ ನೀರನ್ನು ನಿರಂತರವಾಗಿ ಸೇವಿಸುವುದರಿಂದ ವಿದ್ಯಾರ್ಥಿಗಳ ಆರೋಗ್ಯದ ಮೇಲೆ ದುಷ್ಪರಿಣಾಮ ಉಂಟಾಗುವ ಸಾಧ್ಯತೆ ಇದೆ.

ಆದ್ದರಿಂದ ವಿದ್ಯಾರ್ಥಿಗಳ ಆರೋಗ್ಯ ಮತ್ತು ಸುರಕ್ಷತೆಯ ದೃಷ್ಟಿಯಿಂದ ಶುದ್ಧೀಕರಿಸಿದ, ಕುಡಿಯಲು ಯೋಗ್ಯವಾದ ನೀರಿನ ಶಾಶ್ವತ ವ್ಯವಸ್ಥೆಯನ್ನು ತಕ್ಷಣ ಕಲ್ಪಿಸುವುದು ಅತ್ಯವಶ್ಯಕವಾಗಿದೆ.


ಅದೇ ರೀತಿ, ವಿದ್ಯಾರ್ಥಿ ನಿಲಯದಲ್ಲಿರುವ ಶೌಚಾಲಯಗಳ ಕೊಠಡಿಗಳು ದುರಸ್ತಿಗೆ ಒಳಗಾಗಿದ್ದು, ಅವುಗಳ ನಿರ್ವಹಣೆ ಹಾಗೂ ಸ್ವಚ್ಛತೆ ಸಮರ್ಪಕವಾಗಿಲ್ಲ. ವಿದ್ಯಾರ್ಥಿಗಳು ಪ್ರತಿದಿನ ಬಳಸುವ ಶೌಚಾಲಯಗಳ ಸ್ಥಿತಿ ಹದಗೆಟ್ಟಿರುವುದರಿಂದ ಆರೋಗ್ಯಕರ ಹಾಗೂ ಗೌರವಯುತ ವಾತಾವರಣಕ್ಕೆ ಧಕ್ಕೆಯಾಗುತ್ತಿದೆ.

## ಮಕ್ಕಳ ಭವಿಷ್ಯ ರೂಪಿಸುವಲ್ಲಿ ಶಿಕ್ಷಕರ ಪಾತ್ರ ಮಹತ್ವದ್ದು: ಉಪೇಂದ್ರ

**ಬಳ್ಳಾರಿ, ಸೆ.05:** ನಗರದ 23ನೇ ವಾರ್ಡ್‌ನ ಮಹಾನಂದಿ ಕೊಟ್ಟಂ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಶಿಕ್ಷಕರ ದಿನಾಚರಣೆಯನ್ನು ಸಂಭ್ರಮದಿಂದ ಆಚರಿಸಲಾಯಿತು.

ಕಾರ್ಯಕ್ರಮಕ್ಕೆ ಸರ್ವಪಲ್ಲಿ ರಾಧಾಕೃಷ್ಣನ್ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡುವ ಮೂಲಕ ಶಾಲೆಯ ಮುಖ್ಯ ಶಿಕ್ಷಕಿ ಸಿದ್ದಲಿಂಗಮ್ಮ ಎಲ್. ಚಾಲನೆ ನೀಡಿದರು.ಬಳಿಕ 6ನೇ ತರಗತಿಯ ರಾಜೇಶ್ವರಿ ಪ್ರಾರ್ಥನಾ ಗೀತೆಯನ್ನು ಹಾಡಿದರು.

ಮುಖ್ಯ ಶಿಕ್ಷಕಿ ಸಿದ್ದಲಿಂಗಮ್ಮ ಎಲ್. ಮಾತನಾಡಿ, 'ಶಿಕ್ಷಕರ ವೃತ್ತಿ ಅತ್ಯಂತ ಪವಿತ್ರವಾದದ್ದು. ಮಕ್ಕಳ ಪ್ರತಿಭೆಯನ್ನು ಗುರುತಿಸಿ, ಅವರಿಗೆ ಉತ್ತಮ ಶಿಕ್ಷಣ ಮತ್ತು ಮಾರ್ಗದರ್ಶನ ನೀಡುವ ಮೂಲಕ ಸಮಾಜಕ್ಕೆ ಉತ್ತಮ ಪ್ರಜೆಗಳನ್ನು ರೂಪಿಸುವ ಜವಾಬ್ದಾರಿ ಶಿಕ್ಷಕರ ಮೇಲಿದೆ. ಸರ್ವಪಲ್ಲಿ ರಾಧಾಕೃಷ್ಣನ್ ಅವರ ಆದರ್ಶಗಳನ್ನು ಎಲ್ಲರೂ ಪಾಲಿಸಬೇಕು' ಎಂದು ಹೇಳಿದರು.



ಈ ಸಂದರ್ಭದಲ್ಲಿ ಮಾತನಾಡಿದ ಎಸ್.ಡಿ.ಎಂ.ಸಿ ಅಧ್ಯಕ್ಷ ಉಪೇಂದ್ರ, ?ಶಿಕ್ಷಕರು ಮಕ್ಕಳಿಗೆ ವಿದ್ಯೆ ಕಲಿಸುವುದರ ಜೊತೆಗೆ ಉತ್ತಮ ಸಂಸ್ಕಾರ, ಶಿಸ್ತು ಹಾಗೂ ಜೀವನ ಮೌಲ್ಯಗಳನ್ನು ಬೆಳೆಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತಾರೆ.

ವಿದ್ಯಾರ್ಥಿಗಳ ಭವಿಷ್ಯವನ್ನು ಉತ್ತಮವಾಗಿ ರೂಪಿಸುವಲ್ಲಿ ಶಿಕ್ಷಕರ ಸೇವೆ ಅತ್ಯಂತ ಮಹತ್ವದ್ದಾಗಿದೆ. ಶಿಕ್ಷಕರನ್ನು ಗೌರವಿಸುವುದು ಪ್ರತಿಯೊಬ್ಬರ ಕರ್ತವ್ಯವಾಗಿದೆ ಎಂದರು.

ಸಹ ಶಿಕ್ಷಕಿ ಪ್ರಮೀಳಾಬಾಯಿ. ಎಂ. ಮಾತನಾಡಿ, 'ಶಿಕ್ಷಕರು ಸಮಾಜದ ಭವಿಷ್ಯವನ್ನು ರೂಪಿಸುವ ಪ್ರಮುಖ ವ್ಯಕ್ತಿಗಳಾಗಿದ್ದಾರೆ. ವಿದ್ಯಾರ್ಥಿಗಳಿಗೆ ಪಠ್ಯ ಜ್ಞಾನದ ಜೊತೆಗೆ ಉತ್ತಮ ನಡತೆ, ಮಾನವೀಯ ಮೌಲ್ಯಗಳು ಹಾಗೂ ದೇಶಾಭಿಮಾನ ವನ್ನು ಬೆಳೆಸುವ ಜವಾಬ್ದಾರಿ ಶಿಕ್ಷಕರ ಮೇಲಿದೆ. ಪ್ರತಿಯೊಬ್ಬ ವಿದ್ಯಾರ್ಥಿಯಲ್ಲಿರುವ ಪ್ರತಿಭೆಯನ್ನು ಗುರುತಿಸಿ ಪ್ರೋತ್ಸಾಹಿಸುವ ಮೂಲಕ ಅವರನ್ನು ಉತ್ತಮ ನಾಗರಿಕರನ್ನಾಗಿ ರೂಪಿಸಬೇಕು ಎಂದು ಹೇಳಿದರು.

## ಮಾದರಿ ಅಂಗನವಾಡಿ ಕೇಂದ್ರದಲ್ಲಿ ಅವಧಿ ಮೀರಿದ ಆಹಾರ ಪತ್ತೆ: ಶಿಸ್ತುಕ್ರಮಕ್ಕೆ ಜಿಲ್ಲಾಧಿಕಾರಿ ಸೂಚನೆ

**ಬಳ್ಳಾರಿ, ಸೆ. 05:** ನಗರದ ಮಾದರಿ ಅಂಗನವಾಡಿ ಕೇಂದ್ರದಲ್ಲಿ ಶನಿವಾರ ನಡೆದ ಸರ್ಕಾರದ ಪ್ರಜಾ ಸೇವೆ ಕಾರ್ಯಕ್ರಮದ ಉದ್ಘಾಟನಾ ಸಂದರ್ಭದಲ್ಲಿ ಜಿಲ್ಲಾಧಿಕಾರಿಗಳು ಅಂಗನವಾಡಿ ಕೇಂದ್ರವನ್ನು ಪರಿಶೀಲಿಸಿದರು. ಮಕ್ಕಳಿಗೆ ವಿತರಿಸುವ ಆಹಾರ ಪದಾರ್ಥಗಳ ಗುಣಮಟ್ಟ ಮತ್ತು ಸುರಕ್ಷತೆಯಲ್ಲಿ ಯಾವುದೇ ರೀತಿಯ ನಿರ್ಲಕ್ಷ್ಯ ತೋರಬಾರದು ಎಂದು ಜಿಲ್ಲಾಧಿಕಾರಿಗಳು ಅಧಿಕಾರಿಗಳಿಗೆ ಸೂಚಿಸಿದರು. ಕರ್ತವ್ಯದಲ್ಲಿ ನಿರ್ಲಕ್ಷ್ಯ ತೋರಿದ ಸಂಬಂಧಪಟ್ಟ ಸಿಬ್ಬಂದಿ ಹಾಗೂ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳುವಂತೆ ಅವರು ಆದೇಶಿಸಿದರು.



ಅಂಗನವಾಡಿ ಕೇಂದ್ರಗಳಲ್ಲಿ ಮಕ್ಕಳಿಗೆ ಪೌಷ್ಠಿಕ ಹಾಗೂ ಗುಣಮಟ್ಟದ ಆಹಾರ ಒದಗಿಸುವುದು ಅತ್ಯಂತ ಮಹತ್ವದ್ದಾಗಿದ್ದು, ಆಹಾರ ಪದಾರ್ಥಗಳ ಸಂಗ್ರಹಣೆ, ಗುಣಮಟ್ಟ ಹಾಗೂ ಅವಧಿಯನ್ನು ನಿಯಮಿತವಾಗಿ ಪರಿಶೀಲಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು. ನಿರ್ಲಕ್ಷ್ಯಕ್ಕೆ ಹೊಣೆಗಾರರಾದ ಅಧಿಕಾರಿಗಳ ವಿರುದ್ಧ ಅಮಾನತು ಸೇರಿದಂತೆ ಸೂಕ್ತ ಕ್ರಮ ಕೈಗೊಳ್ಳುವಂತೆ ಸೂಚಿಸಿರುವುದಾಗಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕ ರಾಮಕೃಷ್ಣನ್ ತಿಳಿಸಿದ್ದಾರೆ.

## ಬಯಸಿದ ಫಲ ನೀಡುವ ಕಲ್ಪವೃಕ್ಷ: ರಂಭಾಪುರಿ ಜಗದ್ಗುರು

**ಶ್ರೀ ರಂಭಾಪುರಿ ಪೀಠ(ಬಾಳೆಹೊನ್ನೂರು)ಃ:ಸೆ4:**ಭಾರತೀಯ ಸಂಸ್ಕೃತಿಯಲ್ಲಿ ತೆಂಗಿನ ಮರವನ್ನು ಕಲ್ಪವೃಕ್ಷ ಎಂದು ಗೌರವದಿಂದ ಕರೆಯುತ್ತಾರೆ. ತೆಂಗು ಮನುಷ್ಯ ಜೀವನಕ್ಕೆ ಬೇಕಾದ ಅಹಾರ ನೀರು ಎಣ್ಣೆ ಮನೆ ನಿರ್ಮಾಣದ ಸಾಮಗ್ರಿ ಸೇರಿದಂತೆ ಅನೇಕ ರೀತಿಯಲ್ಲಿ ನೆರವಾಗುವ ಮರವಾಗಿದೆ. ಕಲ್ಪವೃಕ್ಷ ಬಯಸಿದ ಫಲವನ್ನು ನೀಡುವ ವೃಕ್ಷವೆಂದು ಪುರಾಣಗಳಲ್ಲಿ ವರ್ಣಿಸಲ್ಪಟ್ಟಿದೆ ಎಂದು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.




ಕಲ್ಪವೃಕ್ಷಕ್ಕೆ ನಮನ ಮಾಡುವುದು ಎಂದರೆ ಕೇವಲ ಒಂದು ಮರಕ್ಕೆ ನಮಸ್ಕರಿಸುವುದಲ್ಲ. ನಮ್ಮನ್ನು ಪೋಷಿಸುವ ಪ್ರಕೃತಿಗೆ ಕೃತಜ್ಞತೆ ಸಲ್ಲಿಸುವುದೆಂದು ಅರ್ಥ. ಮರವನ್ನು ದೇವರೆಂದು ಪೂಜಿಸಿದ ಭಾರತೀಯ ಪರಂಪರೆ ನಮ್ಮದು. ಮರವನ್ನು ಕಡಿಯದೇ ಬೆಳೆಸುವ ಜವಾಬ್ದಾರಿಯನ್ನು ನಮಗೆ ಕಲಿಸಿದೆ. ಕಲ್ಪವೃಕ್ಷ ನಮಗೆ ಕಲಿಸಿದ ಸಂದೇಶ ಏನೆಂದರೆ ನಾವು ಪ್ರಕೃತಿಗೆ ಏನು ಕೊಡುತ್ತೇವೆಯೋ ಅದಕ್ಕಿಂತ ಎರಡು ಪಟ್ಟು ಪ್ರಕೃತಿ ನಮಗೆ ಮರಳಿ ನೀಡುತ್ತದೆ. ವೃಕ್ಷ ಪೂಜಿಸುವ ಸಂಸ್ಕೃತಿ ನಮ್ಮದು ವೃಕ್ಷ ಉಳಿಸುವ ಜವಾಬ್ದಾರಿ ನಮ್ಮದಾಗಿದೆ. ಒಂದು ಮರ ನಮಗೆ ನೆರಳು ಆಹಾರ ನೀಡುತ್ತದೆ. ಜನ ಜೀವನದಲ್ಲಿ ಅತಿ ಹೆಚ್ಚು ಉಪಯೋಗವನ್ನು ನೀಡುವ ತೆಂಗಿನ ಮರ ಎಂಬುದನ್ನು ಮರೆಯಬಾರದು. ತೆಂಗಿನ ಮರದ ಯಾವ ಭಾಗವೂ ವ್ಯರ್ಥವಲ್ಲ. ಹಿಂದೂ ಧಾರ್ಮಿಕ ಆಚರಣೆಯಲ್ಲಿ ಪೂಜೆ, ಹೋಮ, ಯಜ್ಞ ಹಾಗೂ ದೇವರ ಪೂಜೆಗೆ ತೆಂಗಿನಕಾಯಿ ಅರ್ಪಿಸುವ ಸಂಪ್ರದಾಯವಿದೆ ಇಂದಿನ ಸಂದರ್ಭದಲ್ಲಿ ಕಲ್ಪವೃಕ್ಷ ನಮನ ಕೇವಲ ಸಾಂಪ್ರದಾಯಕ ಕಾರ್ಯಕ್ರಮವಾಗದೇ ವೃಕ್ಷ ಸಂರಕ್ಷಣೆಯ ಸಂಕಲ್ಪವಾಗಬೇಕು ಎಂದರು.

ಮೇಲ್ಪಾಲ್ ಸರ್ಕಾರಿ ಪ್ರೌಢ ಶಾಲೆಯ ಶಿಕ್ಷಕ ಕೆ.ಎಂ.ರಾಘವೇಂದ್ರ ಉಪನ್ಯಾಸ ನೀಡಿ ಮಾತನಾಡಿ ತೆಂಗು ನಮ್ಮ ಬದುಕಿನಲ್ಲಿ ಹಾಸು ಹೊಕ್ಕಾದ ವಸ್ತುವಾಗಿದೆ. ತೆಂಗಿನ ಮೌಲ್ಯವನ್ನು ಜಗತ್ತಿಗೆ ತಿಳಿಸಿದ್ದು ಭಾರತೀಯ ಪರಂಪರೆಯಾಗಿದೆ. ಕಲ್ಪವೃಕ್ಷ ನಮ್ಮ ಬದುಕಿನ ಮೌಲ್ಯವನ್ನು ತಿಳಿಸಿಕೊಡುವ ವೃಕ್ಷವಾಗಿದೆ. ತೆಂಗು ರೈತರ ಜೀವನಾಡಿಯಾಗಿದ್ದು, ಭಾರತದಲ್ಲಿ ಶೇ.31ರಷ್ಟು ತೆಂಗು ಬೆಳೆಯುತ್ತಿದ್ದು, ಸುಮಾರು 3 ಕೋಟಿ ಜನರು ತೆಂಗಿನಿಂದ ತಮ್ಮ ಜೀವನ ಕಟ್ಟಿಕೊಂಡಿದ್ದಾರೆ. ತೆಂಗು ಇಂದು ಕೃಷಿ, ಉದ್ಯಮವಾಗಿ ಹೊರ ಹೊಮ್ಮಿದ್ದು, ಯುವಕರಿಗೆ ಉದ್ಯೋಗ, ಮಹಿಳೆಯರಿಗೆ ಸ್ವಾವಲಂಬನೆ, ಆರ್ಥಿಕ ಸಬಲೀಕರಣ ನೀಡಿದೆ.

ಹಲವರು ಇದನ್ನು ತಮ್ಮ ಪ್ರಮುಖ ಉದ್ಯೋಗವನ್ನಾಗಿಸಿಕೊಂಡಿದ್ದಾರೆ. ತೆಂಗಿನ ಮರದ ಬೆಳವಣಿಗೆ ನಮ್ಮ ಜೀವನದ ಮಾರ್ಗವನ್ನು ತೋರಿಸಲಿದ್ದು, ತೆಂಗಿನಂತೆ ನಾವು ಆಳವಾಗಿ ಬೇರೂರಿದರೆ ಜೀವನದಲ್ಲಿ ನಾವು ಸಹ ತೆಂಗಿನ ಹಾಗೆ ಎತ್ತರಕ್ಕೆ ಬೆಳೆಯಬಹುದಾಗಿದೆ ಎಂದರು.

ತೆಂಗು ದಿನಾಚರಣೆ ಅಂಗವಾಗಿ ಶ್ರೀ ರುದ್ರಮುನೀಶ್ವರ ವಸತಿ ಪ್ರೌಢಶಾಲೆ ವಿದ್ಯಾರ್ಥಿಗಳಿಗೆ ಆಯೋಜಿಸಿದ್ದ ನನ್ನ ಕನಸಿನ ತೆಂಗಿನ ತೋಟ ಚಿತ್ರಕಲಾ ಸ್ಪರ್ಧೆಯಲ್ಲಿ ಎಂ. ಎಸ್.ಶಶಾಂಕ್ (ಪ್ರ), ಕೆ.ಎಸ್.ಧನುಶ್ (ದ್ವಿ), ಭಾರ್ಗವ ಚಂದ್ರ (ತೃ),

## ಬೀದರ್‌ನಲ್ಲಿ ಕೃಷ್ಣ ಜನ್ಮಾಷ್ಟಮಿಯ ಸಂಭ್ರಮ, ಶಾಲೆಗಳಲ್ಲಿ ಕೃಷ್ಣ-ರಾಧೆಯರಾಗಿ ಕಂಗೊಳಿಸಿದ ಚಿಣ್ಣರು

**ಬೀದರ್, ಸೆ. 5:** ನಗರದ ವಿವಿಧ ಶಾಲೆಗಳಲ್ಲಿ ಸಂಭ್ರಮದಿಂದ ಕೃಷ್ಣ ಜನ್ಮಾಷ್ಟಮಿ ಆಚರಿಸಲಾಯಿತು. ಚಿಣ್ಣರು ಕೃಷ್ಣ-ರಾಧೆ ಪೋಷಾಕು ಧರಿಸಿ ಕಂಗೊಳಿಸಿದರು. ವಿವಿಧೆಡೆ ನಡೆದ ಜನ್ಮಾಷ್ಟಮಿ ಸಂಸ್ಕಾರ ಇಂಟರ್ ನ್ಯಾಷನಲ್ ಸ್ಕೂಲ್: ನಗರದ ಗುಂಪಾ ಶಾಖೆಯಲ್ಲಿ ಅದ್ದೂರಿಯಾಗಿ ಕಾರ್ಯಕ್ರಮ ಆಚರಿಸಲಾಯಿತು. ಮುಖ್ಯಶಿಕ್ಷಕಿ ಸಂಧ್ಯಾ ಕುಲಕರ್ಣಿ, ಶಿಕ್ಷಕಿಯರಾದ ಆರತಿ ಗಜರೆ, ಪ್ರೀತಿ ಸಾಕ್ರೆ, ದೇವಿಕಾ ಹಲಸೂರೆ ಉಪಸ್ಥಿತರಿದ್ದರು.

ಗೋವಿಗೆ ಪೂಜೆ, ದಹಿ ಹಂಡಿ: ನಗರದ ಕೆಪಿ ವಿದ್ಯಾಸಂಸ್ಥೆಯಲ್ಲಿ ಸಂಸ್ಥೆಯ ಅಧ್ಯಕ್ಷ ಬಾಬು ವಾಲಿ ಅವರು ಗೋಮಾತೆಗೆ ಪೂಜೆ ಮಾಡಿ ನೈವೇದ್ಯ ಉಣಿಸಿದರು. ಶ್ರೀಕೃಷ್ಣನು ಕೇವಲ ದೇವರಾಗಿ ಮಾತ್ರವಲ್ಲ, ಜ್ಞಾನ, ಧೈರ್ಯ, ಪ್ರೀತಿ ಮತ್ತು ನೀತಿಯ ಪ್ರತೀಕವಾಗಿ ನಮ್ಮೆಲ್ಲರಿಗೂ ಆದರ್ಶ ಎಂದರು.

ವಿದ್ಯಾರ್ಥಿನಿಯರು ದಹಿಹಂಡಿ ಒಡೆದು ಗಮನ ಸೆಳೆದರು. ಆಂಗ್ಲ ಮಾಧ್ಯಮ ಶಾಲೆಯ ಮುಖ್ಯಶಿಕ್ಷಕಿ ಮಹಾಲಕ್ಷ್ಮಿ, ಕನ್ಯಕಾ ಪರಮೇಶ್ವರಿ ಪ್ರೌಢ ಶಾಲೆಯ ಮುಖ್ಯ ಶಿಕ್ಷಕ ಜಟ್ಟೆಪ್ಪ ಪೂಜಾರಿ, ಸಹ ಶಿಕ್ಷಕ ನಾಮದೇವ್ ಶರ್ಮಾ, ಸಂಸ್ಥೆಯ ಉಪಾಧ್ಯಕ್ಷ ಮಲ್ಲಯ್ಯ ಸ್ವಾಮಿ, ವಿಜಯಕುಮಾರ್ ಪಾಟೀಲ್ ಯರನಳ್ಳಿ, ಚನ್ನಬಸವೇಶ್ವರ ಪತ್ತಿನ ಸಹಕಾರ ಬ್ಯಾಂಕಿನ ಅಧ್ಯಕ್ಷ ಜೈರಾಜ ಖಂಡ್ರೆ ಉಪಸ್ಥಿತರಿದ್ದರು.

ಸರಸ್ವತಿ ಶಿಶುಮಂದಿರ ಮತ್ತು ಹಿರಿಯ ಪ್ರಾಥಮಿಕ ಶಾಲೆ: ಕಾರ್ಯಕ್ರಮದಲ್ಲಿ ಚಿಲ್ಲರ್ಗಿ ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ಶ್ರೀನಿವಾಸ ರೆಡ್ಡಿ ಮಾತನಾಡಿ, ಕೃಷ್ಣನ ಲೀಲೆ ಮತ್ತು ಮಹಿಮೆ ಅಪಾರವಾದುದು. ಪ್ರತಿಯೊಬ್ಬರೂ ಭಗವದ್ಗೀತೆಯನ್ನು ಓದಬೇಕು. ನಮ್ಮ ಪರಂಪರೆ ಸಂಸ್ಕೃತಿಯನ್ನು ಮುಂದಿನ ಪೀಳಿಗೆಗೆ ಹೇಳಿಕೊಡಬೇಕು ಎಂದರು.

ಶಾಲೆ ಆಡಳಿತ ಮಂಡಳಿಯ ಸದಸ್ಯ ಬಲಭೀಮರಾವ ಕಚರೆ ಜನವಾಡ, ಕೃಷ್ಣ ಅರ್ಜುನನಿಗೆ ಭಗವದ್ಗೀತೆಯನ್ನು ಯುದ್ಧಭೂಮಿಯಲ್ಲಿ ಬೋಧಿಸಿದ ಪ್ರಸಂಗ ವಿವರಿಸಿದರು. ಪ್ರೌಢಶಾಲೆ ಮುಖ್ಯಶಿಕ್ಷಕಿ ಪ್ರತಿಭಾ ಚಾಮಾ, ಹಿರಿಯ ಪ್ರಾಥಮಿಕ




ಶಾಲೆಯ ಮುಖ್ಯಶಿಕ್ಷಕಿ ಊರ್ಮಿಳಾ ಬಕ್ಷಿ ಉಪಸ್ಥಿತರಿದ್ದರು.

ದಿವ್ಯಾ ಸುನಿಲ ಸ್ವಾಗತಿಸಿದರು. ಶ್ವೇತಾ ಮಚಕುರಿ ಭಕ್ತಿಗೀತೆ ಹಾಡಿದರು. ವೈಷ್ಣವಿ ಸುನೀಲ ಶ್ಲೋಕ ಹೇಳಿದರು. ಸೋನಿಯಾ ವೀರೇಶ ವಂದಿಸಿದರು. ಶ್ರೀದೇವಿ ಗುರುಬಸಪ್ಪ ನಿರೂಪಿಸಿದರು. 90 ಮಕ್ಕಳು ರಾಧಾ-ಕೃಷ್ಣನ ವೇಷಧಾರಿ ಯಾಗಿ ಪಾಲ್ಗೊಂಡಿದ್ದರು.

ಬೀದರ್‌ನ ಜನಸೇವಾ ಶಾಲೆಯಲ್ಲಿ ನಡೆದ ಕೃಷ್ಣ ಜನ್ಮಾಷ್ಟಮಿ ಕಾರ್ಯಕ್ರಮದಲ್ಲಿ ಕೃಷ್ಣ-ರಾಧೆ ವೇಷಧಾರಿ ಮಕ್ಕಳು ಹೆಜ್ಜೆ ಹಾಕಿದರು

ಕೃಷ್ಣ-ರಾಧೆ ವೇಷಧಾರಿ ಮಕ್ಕಳ ಮೆರವಣಿಗೆ: ಇಲ್ಲಿನ ಪ್ರತಾಪ್ ನಗರದ ಜನಸೇವಾ ಶಿಶು ಮಂದಿರ, ಹಿರಿಯ ಪ್ರಾಥಮಿಕ ಹಾಗೂ ಪ್ರೌಢಶಾಲೆಯಲ್ಲಿ ಕೃಷ್ಣ ಜನ್ಮಾಷ್ಟಮಿಯನ್ನು ಶುಕ್ರವಾರ ಶ್ರದ್ಧೆ, ಭಕ್ತಿಯಿಂದ ಆಚರಿಸಲಾಯಿತು.

# ಪ್ರಜಾಸೇವೆಗೆ ಕೂಡ್ಲಿಗಿಯಲ್ಲಿ ಸಿಎಂ ಡಿ.ಕೆ.ಶಿ. ಚಾಲನೆ- 31 ಜಿಲ್ಲೆಗಳಲ್ಲಿ ಅಭಿಯಾನ

**ಪಕ್ಷ, ಜಾತಿ, ಧರ್ಮದ ಭೇದವಿಲ್ಲದೆ ಜನಸೇವೆಯೇ ಧ್ಯೇಯ**
**ನನ್ನನ್ನು ನಾಡಿನ ದೊರೆ ಎನ್ನಬೇಡಿ, "ಪ್ರಜಾಸೇವಕ" ಎನ್ನಿ**
**ದೊರೆಗಳ ಕಾಲ ಹೋಗಿ, ಪ್ರಜಾಪ್ರಭುತ್ವ ಬಂದಿದೆ**
**ಟೀಕೆಗಳು ಸಾಯುತ್ತವೆ, ನಮ್ಮ ಕೆಲಸಗಳು ಉಳಿಯುತ್ತವೆ**
**ಕಾನೂನು ಹೋರಾಟಕ್ಕೆ ವಕೀಲರ ಸೇವೆ ಅವಕಾಶವನ್ನೂ ಬಳಸಿಕೊಳ್ಳಿ**
**ಕೂಡ್ಲಿಗಿಯಲ್ಲಿ ನಡೆದ ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿ ನುಡಿಮುತ್ತುಗಳಿವು**




ಪ್ರಜಾಸೇವಾ ಅಭಿಯಾನದ ಉದ್ಘಾಟನೆಗಾಗಿ ಕೂಡ್ಲಿಗಿಯಲ್ಲಿ ಸಜ್ಜುಗೊಂಡಿದ್ದ ವರ್ಣರಂಜಿತ ವೇದಿಕೆ




ಉದ್ಘಾಟನಾ ಭಾಷಣ ಮಾಡಿದ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್





ವೇದಿಕೆ ಮೇಲೆ ನೆರೆದಿದ್ದ ವಿವಿಧ ಗಣ್ಯರು ಕಾರ್ಯಕ್ರಮಕ್ಕೆ ಉದ್ಘಾಟನೆ ಸಂದರ್ಭ ಸಂತಸ ವ್ಯಕ್ತಪಡಿಸಿದರು.




ಕಾರ್ಯಕ್ರಮ ಆಯೋಜಿಸಿದ್ದ ಸ್ಥಳದಲ್ಲಿ ಮಾರಾಟ ಮಳಿಗೆಗಳನ್ನು ವೀಕ್ಷಿಸಿದ ಮುಖ್ಯಮಂತ್ರಿ



ಶಾಲಾ ಮಕ್ಕಳ ಕುಂದುಕೊರತೆಗಳನ್ನು ಆಲಿಸಿದ ಮುಖ್ಯಮಂತ್ರಿ

## ವಿವಿಧ ಜಿಲ್ಲೆಗಳಲ್ಲಿ ಆಯೋಜಿಸಲಾಗಿದ್ದ ಪ್ರಜಾಸೇವಾ ಕಾರ್ಯಕ್ರಮಗಳ ಮುನ್ನೋಟ



ಪ್ರಜಾಸೇವಾ ಕಾರ್ಯಕ್ರಮ ಹಾಸನ – ಸಚಿವ ಶಿವಲಿಂಗೇಗೌಡ ಉಪಸ್ಥಿತಿ



ಮಂಗಳೂರಿನಲ್ಲಿ ಪ್ರಜಾಸೇವಾ ಕಾರ್ಯಕ್ರಮ: ಸಚಿವ ಯು.ಟಿ.ಖಾದರ್ ಭಾಗಿ



ಪ್ರಜಾಸೇವಾ ಕಾರ್ಯಕ್ರಮ ಮೈಸೂರಿನ ಹುಣಸೂರು – ಯತೀಂದ್ರ ಸಿದ್ದರಾಮಯ್ಯ ನೇತೃತ್ವ



ಧಾರವಾಡದ ಕಲಘಟಗಿಯಲ್ಲಿ ಪ್ರಜಾಸೇವಾ ಕಾರ್ಯಕ್ರಮ – ಸಚಿವ ಸಂತೋಷ ಲಾಡ್



ಹಾವೇರಿ ಜಿಲ್ಲೆಯ ಹಾನಗಲ್‌ನಲ್ಲಿ ಪ್ರಜಾಸೇವಾ ಕಾರ್ಯಕ್ರಮ – ಸಚಿವ ರುದ್ರಪ್ಪ ಲಮಾಣಿ



ರಾಯಚೂರಿನ ಮಾನ್ವಿಯಲ್ಲಿ ಪ್ರಜಾಸೇವೆ – ಸಚಿವ ಅಜಯ್ ಸಿಂಗ್

## ಜನರ ಬಳಿಗೆ ಸರ್ಕಾರವನ್ನು ಕೊಂಡೊಯ್ಯುವುದೇ ಪ್ರಜಾಸೇವಾ ಇಲಾಖೆ ಉದ್ದೇಶ: ಡಾ. ಪರಂ



**ಸೂರಿಲ್ಲದವರಿಗೆ ಸೂರು ಒದಗಿಸಬೇಕು ಎಂಬುದು ನನ್ನ ಆಶಯ, ಇದಕ್ಕಾಗಿ ರಾಜ್ಯಾದ್ಯಂತ 15 ಲಕ್ಷಕ್ಕೂ ಹೆಚ್ಚು ನಿವೇಶನ ನೀಡಲಾಗುವುದು ಎಂದು ಉಪಮುಖ್ಯಮಂತ್ರಿ ಡಾ. ಜಿ.ಪರಮೇಶ್ವರ ತಿಳಿಸಿದರು.**

ತುಮಕೂರು/ಬೆಂಗಳೂರು, ಸೆ.5: ಜನರು ತಮ್ಮ ಸಮಸ್ಯೆಗಳನ್ನು ಹೊತ್ತು ತಾಲ್ಲೂಕು, ಜಿಲ್ಲಾ ಮಟ್ಟದ ಅಧಿಕಾರಿಗಳ ಕಚೇರಿಗಳಿಗೆ ಅಲೆದಾಡಿಸುವುದನ್ನು ತಪ್ಪಿಸಬೇಕು ಎಂಬ ಉದ್ದೇಶದಿಂದ ಸರ್ಕಾರವೇ ಜನರ ಬಳಿ ಹೋಗಿ ಅವರ ಸಮಸ್ಯೆಗಳನ್ನು ಆಲಿಸಿ, ಪರಿಹರಿಸುವ ನಿಟ್ಟಿನಲ್ಲಿ ಕೆಲಸ ಮಾಡುವ ಸಲುವಾಗಿ ಪ್ರಜಾಸೇವಾ ಇಲಾಖೆಗೆ ಚಾಲನೆ ನೀಡಲಾಗಿದೆ ಎಂದು ಉಪಮುಖ್ಯಮಂತ್ರಿ ಡಾ. ಜಿ.ಪರಮೇಶ್ವರ ಹೇಳಿದರು.

ಅವರು ಶನಿವಾರ ಪ್ರಜಾಸೇವಾ ಇಲಾಖೆ ಹಾಗೂ ತುಮಕೂರು ಜಿಲ್ಲಾಡಳಿತದ ವತಿಯಿಂದ ಗುಬ್ಬಿ ಪಟ್ಟಣದಲ್ಲಿ ಆಯೋಜಿಸಲಾಗಿದ್ದ ಅಭಿಯಾನ ಜನಸಭೆ ಕಾರ್ಯಕ್ರಮ ಉದ್ಘಾಟಿಸಿ ನಾಗರಿಕರ ಕುಂದು ಕೊರತೆ ಆಲಿಸಿದರು.

## ಇದು ಆಳುವ ಸರ್ಕಾರವಲ್ಲ, ಆಲಿಸುವ ಸರ್ಕಾರ: ಪ್ರಿಯಾಂಕ್ ಖರ್ಗೆ



**ಕಲಬುರಗಿ, ಸೆ.5:** ಜನರ ಅಹವಾಲುಗಳನ್ನು ಆಲಿಸಿ, ಅವರ ಸಮಸ್ಯೆಗಳಿಗೆ ಮನೆಬಾಗಿಲಿನಲ್ಲಿಯೇ ಪರಿಹಾರ ಒದಗಿಸುವ ಉದ್ದೇಶದಿಂದ ನಮ್ಮ ಸರ್ಕಾರ ಪ್ರಜಾಸೇವೆ' ಅಭಿಯಾನವನ್ನು ಆರಂಭಿಸಿದೆ.

ಕಲಬುರಗಿ ಜಿಲ್ಲೆಯ ಕಮಲಾಪುರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಆವರಣದಲ್ಲಿ 'ಪ್ರಜಾಸೇವೆ' ಅಭಿಯಾನಕ್ಕೆ ಚಾಲನೆ ನೀಡಿದೆ. ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಪ್ರಜೆಗಳೇ ಪ್ರಭುಗಳು, ಅವರ ಸೇವೆಯೇ ನಮ್ಮ ಮೊದಲ ಆದ್ಯತೆ. ನಿಮ್ಮ ಸೇವೆ ಮಾಡಲು ನಿಮ್ಮ ಬಾಗಿಲಿಗೆ ಬಂದಿದ್ದೇವೆ.

ಹಿಂದೆ 'ಜನಸ್ಪಂದನ'ದ ಮೂಲಕ ಸಾರ್ವಜನಿಕರ ಅಹವಾಲುಗಳನ್ನು ಆಲಿಸಲಾಗುತ್ತಿತ್ತು. ಇದೀಗ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ನೇತೃತ್ವದಲ್ಲಿ, ಜನರ ಅಹವಾಲುಗಳಿಗೆ ಕಾಲಮಿತಿಯಲ್ಲಿ ಪರಿಹಾರ ಖಾತ್ರಿಪಡಿಸಲು 'ಪ್ರಜಾ ಸೇವೆ' ಎಂಬ ಪ್ರತ್ಯೇಕ ಇಲಾಖೆಯನ್ನು ರಚಿಸಲಾಗಿದೆ.

ಜನಸಾಮಾನ್ಯರ ಮನೆಬಾಗಿಲಿಗೆ ಆಡಳಿತವನ್ನು ಕೊಂಡೊಯ್ದು, ಅವರ ದುಃಖ–ದುಮ್ಮಾನ, ನೋವು–ನಲಿವುಗಳಿಗೆ ಕಾನೂನಿನ ಚೌಕಟ್ಟಿನೊಳಗೆ ಸ್ಥಳದಲ್ಲಿಯೇ ಸೂಕ್ತ ಪರಿಹಾರ ಒದಗಿಸುವ ಜನಸ್ನೇಹಿ ಆಡಳಿತಕ್ಕೆ ಹೊಸ ಆಂದೋಲನವನ್ನು ಕಾಂಗ್ರೆಸ್ ಸರ್ಕಾರ ಆರಂಭಿಸಿದೆ.

ಪ್ರತಿಯೊಂದು ಅರ್ಜಿಗೂ ಸ್ವೀಕೃತಿ ಸಂಖ್ಯೆ ನೀಡಿ, ಕಾಲಮಿತಿಯಲ್ಲಿ ವಿಲೇವಾರಿ ಮಾಡಲಾಗುವುದು. ಇನ್ನು ಮುಂದೆ ಪ್ರತಿ ತಿಂಗಳ ಮೊದಲ ಮತ್ತು ಮೂರನೇ ಶನಿವಾರ ತಾಲೂಕು ಮಟ್ಟದಲ್ಲಿ ಸಾರ್ವಜನಿಕರ ಅಹವಾಲುಗಳನ್ನು ಸ್ವೀಕರಿಸುವ ಮಹತ್ವದ ದಿನವಾಗಿರಲಿದೆ. ಪ್ರಜೆಗಳ ಕಣ್ಣೀರು ಒರೆಸುವುದೇ ಪ್ರಜಾಪ್ರಭುತ್ವ ಸರ್ಕಾರದ ಮೂಲ ಆಶಯ.

ಕಲಬುರಗಿ ಜಿಲ್ಲೆಯಲ್ಲಿ ಅನ್ನ, ಅಕ್ಷರ, ಆರೋಗ್ಯ ಮತ್ತು ಆವಿಷ್ಕಾರ ಯೋಜನೆಗಳನ್ನು ಜಾರಿಗೊಳಿಸಲಾಗಿದೆ. ಕಳೆದ ವರ್ಷ ರಾಷ್ಟ್ರದಲ್ಲೇ ದಾಖಲೆ ಪ್ರಮಾಣದಲ್ಲಿ 653 ಕೋಟಿ ಬೆಳೆ ಪರಿಹಾರವನ್ನು ಜಿಲ್ಲೆಯ ರೈತರಿಗೆ ನೀಡಲಾಗಿದೆ. ಈ ವರ್ಷವೂ 4.50 ಲಕ್ಷ ರೈತರು ಬೆಳೆ ವಿಮೆಗೆ ನೋಂದಾಯಿಸಿಕೊಂಡಿದ್ದು, ಪ್ರಾಮಾಣಿಕವಾಗಿ ಪರಿಹಾರ ಒದಗಿಸಲಾಗುವುದು.



ಕೇಂದ್ರದ NDRF ಮಾರ್ಗಸೂಚಿಗಳಿಂದ ಬರಪೀಡಿತ ಪ್ರದೇಶ ಘೋಷಣೆಗೆ ಇರುವ ನಿರ್ಬಂಧಗಳನ್ನು ಸಡಿಲಗೊಳಿಸಬೇಕು ಎಂಬುದು ನಮ್ಮ ಬಹುದಿನಗಳ ಬೇಡಿಕೆ. ಉದ್ಯಮಿಗಳಿಗೆ ನೀಡುವ ಸಾಲಮನ್ನಾ ಸೌಲಭ್ಯವನ್ನು ಕೇಂದ್ರ ಸರ್ಕಾರವು ರೈತರಿಗೂ ವಿಸ್ತರಿಸ ಬೇಕು ಎಂದು ಒತ್ತಾಯಿಸಿದೆ.

ಸರ್ಕಾರ ಜನರ ಬಳಿಗೆ ಬರಬೇಕು, ಜನರ ಸಮಸ್ಯೆಗಳಿಗೆ ಸ್ಪಂದಿಸಬೇಕು. ಇದೇ ಪ್ರಜಾಸೇವೆಯ ಆಶಯ.